

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಮೇ 13 ಶನಿವಾರ 2023

ಸಂಪುಟ: 44 | ಸಂಚಿಕೆ: 27 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಇಂದು ರಾಜ್ಯ ವಿಧಾನಸಭೆ ಚುನಾವಣೆಯ ಕ್ಲೈಮ್ಯಾಕ್ಸ್

ಮಧ್ಯಾಹ್ನದ ವೇಳೆಗೆ ಪೂರ್ಣ ಫಲಿತಾಂಶ

ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ

ರಾಜ್ಯಾದ್ಯಂತ 2615 ಅಭ್ಯರ್ಥಿಗಳ ಭವಿಷ್ಯ ನಿರ್ಧಾರ



ಬೆಂಗಳೂರು, ಮೇ 12(ಕೆಎಂಶಿ)–ಸ್ಪಷ್ಟ ಬಹುಮತವೋ ಇಲ್ಲವೇ ಅತಂತ್ರ ವಿಧಾನಸಭೆಯೋ ಎಂಬ ಕುತೂಹಲಕ್ಕೆ ಶನಿವಾರ ತೆರೆ ಬೀಳಲಿದೆ. ಇಡೀ ದೇಶದ ಗಮನ ಸೆಳೆದಿರುವ ಹಾಗೂ ತೀವ್ರ ಕುತೂಹಲ ಕೆರಳಿಸಿರುವ ಕರ್ನಾಟಕದ 16ನೇ ವಿಧಾನಸಭೆ ಚುನಾವಣೆಗೆ ಮತದಾರರು ನೀಡಿರುವ ಜನಾದೇಶ ಇಂದು ಪ್ರಕಟವಾಗಲಿದೆ.

ಮೇ 10 ರಂದು ರಾಜ್ಯದ 224 ವಿಧಾನ ಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯ ಮತ ಎಣಿಕೆ ಶನಿವಾರ ಬೆಳಗ್ಗೆ 8 ಗಂಟೆಯಿಂದ ಆರಂಭಗೊಳ್ಳಲಿದ್ದು, ಮಧ್ಯಾಹ್ನದ ವೇಳೆಗೆ ರಾಜಕೀಯ ಪಕ್ಷಗಳ ಹಣೇಬರ ಹೊರಬೀಳಲಿದೆ. ಮಹಾನಗರ ಪಾಲಿಕೆ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಏಕ ಕಾಲ ಕಾಲಕ್ಕೆ ಮತ ಎಣಿಕೆ ಆರಂಭಗೊಳ್ಳಲಿದ್ದು, ಮಧ್ಯಾಹ್ನದ ವೇಳೆಗೆ ಚುನಾವಣಾ ಕಣದಲ್ಲಿರುವ 2615 ಅಭ್ಯರ್ಥಿಗಳ ಭವಿಷ್ಯ ಬಹಿರಂಗಗೊಳ್ಳಲಿದೆ. ಮತದಾರರು ಬರೆದಿರುವ ಭವಿಷ್ಯವನ್ನು ಚುನಾವಣಾ ಸಮೀಕ್ಷೆಗಳು ತಮ್ಮ ಇಚ್ಛಾಶಕ್ತಿಯಂತೆ ಬಹಿರಂಗಗೊಳಿಸಿರುವುದು ಸಾರ್ವಜನಿಕ ಹಾಗೂ ರಾಜಕೀಯವಾಗಿ ಭಾರೀ ಗೊಂದಲವನ್ನುಂಟು ಮಾಡಿದೆ.

ಇದರ ಆಧಾರದ ಮೇಲೆ ರಾಜಕೀಯ ಪಕ್ಷಗಳು ಅಧಿಕಾರದ ಚುಕ್ಕಾಣಿ ಹಿಡಿಯಲು ಕಾತರಿಸುತ್ತಿದ್ದು, ತಮ್ಮ ಮುಖಂಡರು ಗರಿಗರಿ ಬಟ್ಟೆ ಧರಿಸುವ ಕನಸು ಕಂಡಿದ್ದಾರೆ.

ಸಮೀಕ್ಷೆಗಳ ವರದಿ ಆಧಾರದ ಮೇಲೆ ಈಗಾಗಲೇ ಏಕ ಪಕ್ಷಕ್ಕೆ ಅಧಿಕಾರ ದೊರೆಯಲಿದೆ ಎಂದು ಕಾಂಗ್ರೆಸ್ ಸಿದ್ಧತೆ ಮಾಡಿಕೊಂಡಿದೆ. ಸ್ವಲ್ಪ ಅನುಮಾನದಲ್ಲಿರುವ ಬಿಜೆಪಿ, ಜೆಡಿಎಸ್ ಜೊತೆಗೂಡಿ ಸರ್ಕಾರ ರಚಿಸುವ ಕಸರತ್ತು ನಡೆಸಿದೆ. ಮುಖ್ಯಮಂತ್ರಿ ಗಾದಿಗೆ ಪೈಪೋಟಿ ನಡೆಸಿರುವ ಹಾಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿಗಳಾದ ಹೆಚ್.ಡಿ.ಕುಮಾರಸ್ವಾಮಿ, ಸಿದ್ದರಾಮಯ್ಯ ಅವರು ಮತ್ತೆ ಆ ಸ್ಥಾನದ ಕನಸು ಕಾಣುತ್ತಿದ್ದಾರೆ. ಇದರ ಜೊತೆಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಅಧ್ಯಕ್ಷ ಡಾ.ಜಿ.ಪರಮೇಶ್ವರ್, ಹಾಲಿ ಸಚಿವರಾದ ವಿ.ಸೋಮಣ್ಣ ಹಾಗೂ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರು ಅವಕಾಶ ದೊರೆಯುವ ನಿರೀಕ್ಷೆಯಲ್ಲಿದ್ದಾರೆ. ಇವರ ಜತೆಗೆ ಘಟಾನುಘಟಿಗಳಾದ ಜಗದೀಶ್ ಶೆಟ್ಟರ್, ವಿ.ಮುನಿಯಪ್ಪ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ 2615 ಅಭ್ಯರ್ಥಿಗಳು ಮತದಾರರು ನೀಡಿರುವ ತೀರ್ಪಿಗೆ ಕಾದಿದ್ದಾರೆ.

ಶನಿವಾರ ಮಧ್ಯಾಹ್ನದೊಳಗೆ ಫಲಿತಾಂಶ ನೀಡಲು ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದ್ದು, ವಿಧಾನ ಸಭಾ ಕ್ಷೇತ್ರದ ಮತದಾನದ ಸಂಖ್ಯೆಗೆ ಅನುಗುಣವಾಗಿ ಮತ ಎಣಿಕಾ ಟೇಬಲ್‌ಗಳನ್ನು ಅಳವಡಿಸಿದೆ. ಇದರ ಉಸ್ತುವಾರಿ ಹೊಣೆಯನ್ನು ಪಾಲಿಕೆಯಲ್ಲಿ ಆಯುಕ್ತರಿಗೆ, ಜಿಲ್ಲೆಗಳಲ್ಲಿ ಚುನಾವಣಾ ಅಧಿಕಾರಿಗಳಾಗಿರುವ ಜಿಲ್ಲಾಧಿಕಾರಿಗಳಿಗೆ ವಹಿಸಲಾಗಿದೆ. ಮತ ಎಣಿಕೆಯ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಮತ ಎಣಿಕಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಹೇರಲಾಗಿದೆ. ಅಲ್ಲದೇ ಪ್ರತಿ ಕೇಂದ್ರಕ್ಕೂ ಐಪಿಎಸ್ ದರ್ಜೆಯ ಅಧಿಕಾರಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಮತ ಎಣಿಕೆಯ ಮೇಲೆ ನಿಗಾ ಇಡಲು ಆಯೋಗದ ವೀಕ್ಷಕರನ್ನು ●6ನೇ ಪುಟಕ್ಕೆ



"ರಾಜ್ಯದಲ್ಲಿ ಒಂದು ಪಕ್ಷ ಮಾತ್ರ ಅಧಿಕಾರಕ್ಕೆ ಬರಲಿದ್ದು, ಸಮ್ಮಿಶ್ರ ಸರ್ಕಾರ ಅಧಿಕಾರ ಮಾಡಲ್ಲ. ಜೊತೆಗೆ ಎರಡ್ಮೂರು ತಲೆಗಳು ಉರುಳುತ್ತವೆ. ಅಲ್ಲದೆ ಸಿದ್ದರಾಮಯ್ಯನವರು ಸಿಎಂ ಆಗುತ್ತಾರೆ.

–ಕೋಡಿಮಠದ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ (ಎರಡು ತಿಂಗಳ ಹಿಂದೆ ಹೇಳಿದ್ದ ಭವಿಷ್ಯ)

ಗೆಲ್ಲಬಹುದಾದ ಪಕ್ಷೇತರ ಅಭ್ಯರ್ಥಿಗಳಿಗೆ ಗಾಳ; ಕಾಂಗ್ರೆಸ್, ಬಿಜೆಪಿ ಪೈಪೋಟಿ

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣೆಯ ಮತ ಎಣಿಕೆ ಮತ್ತು ಫಲಿತಾಂಶ ಘೋಷಣೆಗೆ ವೇದಿಕೆ ಸಿದ್ಧಗೊಂಡಿದ್ದು, ಚುನಾವಣೆಯಲ್ಲಿ ಪಕ್ಷೇತರವಾಗಿ ಸ್ಪರ್ಧಿಸಿದ್ದ ಗೆಲ್ಲಬಹುದಾದ ಅಭ್ಯರ್ಥಿಗಳತ್ತ ರಾಷ್ಟ್ರೀಯ ಪಕ್ಷಗಳು ಗಮನ ಹರಿಸುತ್ತಿವೆ. ಮೂಲಗಳ ಪ್ರಕಾರ, ಕಾಂಗ್ರೆಸ್ ಈಗಾಗಲೇ ಧಾರವಾಡ ಜಿಲ್ಲೆಯ ಕುಂದಗೋಳ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಎಸ್.ಐ. ಚಿಕ್ಕನಗೌಡರನ್ನು ಸಂಪರ್ಕಿಸಿದೆ. ಈ ಕ್ಷೇತ್ರದಲ್ಲಿ ಚಿಕ್ಕನಗೌಡರ್ ಹಾಗೂ ಬಿಜೆಪಿ ಅಭ್ಯರ್ಥಿ ಎಂ.ಆರ್.ಪಾಟೀಲ್ ನಡುವೆ ನೇರ ಸ್ಪರ್ಧೆ ಏರ್ಪಟ್ಟಿದೆ. ಚಿಕ್ಕನಗೌಡರ ಗೆಲುವಿನ ಸಾಧ್ಯತೆಯ ವರದಿಗಳ ಮೇರೆಗೆ ಕಾಂಗ್ರೆಸ್ ಪಕ್ಷದೊಂದಿಗೆ ಕೈಜೋಡಿಸುವಂತೆ ಈಗಾಗಲೇ ಅವರಿಗೆ ಆಹ್ವಾನ ನೀಡಿದೆ. ಚಿಕ್ಕನಗೌಡರು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರ ಅನುಯಾಯಿಯಾಗಿದ್ದು, ಅವರ ಮೂಲ ಪಕ್ಷ ಬಿಜೆಪಿಯೂ ಅವರನ್ನು ಸಂಪರ್ಕಿಸುತ್ತಿದೆ ಎಂದು ಮೂಲಗಳು ತಿಳಿಸಿವೆ.

ಬಿಜೆಪಿ ಟಿಕೆಟ್ ನಿರಾಕರಿಸಿದ ಹಿನ್ನೆಲೆಯಲ್ಲಿ ಚಿಕ್ಕನಗೌಡರು ಸ್ವತಂತ್ರವಾಗಿ ಸ್ಪರ್ಧಿಸಿದ್ದರು. ಬಳ್ಳಾರಿ ಜಿಲ್ಲೆಯ ಹರಪನಹಳ್ಳಿ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಲತಾ ಮಲ್ಲಿಕಾರ್ಜುನ್ ಅವರನ್ನು ಕೂಡ ರಾಷ್ಟ್ರೀಯ ಪಕ್ಷಗಳು ಸಂಪರ್ಕಿಸುತ್ತಿವೆ.

ದಿವಂಗತ ಹಿರಿಯ ಕಾಂಗ್ರೆಸ್ ನಾಯಕ ಎಂ.ಪಿ. ಪ್ರಕಾಶ್ ಅವರ ಪುತ್ರಿಯಾದ ಲತಾ ಮಲ್ಲಿಕಾರ್ಜುನ್ ಅವರಿಗೆ ಕಾಂಗ್ರೆಸ್ ಟಿಕೆಟ್ ನಿರಾಕರಿಸಿತ್ತು. ಅವರಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವೈಯಕ್ತಿಕ ಕರೆ ಮಾಡಿ ಮಾತನಾಡಿದ್ದಾರೆ ಎಂದು ಮೂಲಗಳು ವಿವರಿಸುತ್ತವೆ. ಕಾಂಗ್ರೆಸ್ ನಾಯಕರು ಕೂಡಾ ಈಗಾಗಲೇ ಅವರ ●6ನೇ ಪುಟಕ್ಕೆ

ಮೈಸೂರು, ಚಾ.ನಗರ, ಮಂಡ್ಯ, ಕೊಡಗು, ಹಾಸನ ಜಿಲ್ಲೆಯ ಅಭ್ಯರ್ಥಿಗಳ

ಭವಿಷ್ಯ ಇಂದೇ ನಿರ್ಧಾರ

● ಮೈಸೂರಿನ ಮಹಾರಾಣಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಕೇಂದ್ರದಲ್ಲಿ ಸರ್ವ ಸಿದ್ಧತೆ, ಮತ ಎಣಿಕೆಗೆ ಭಾರೀ ಭದ್ರತೆ ● ಇಂದು ಬೆಳಗ್ಗೆ 6 ರಿಂದ ಸಂಜೆ 6 ಗಂಟೆವರೆಗೆ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ




ಮೈಸೂರಿನ ಮತ ಎಣಿಕೆ ಕೇಂದ್ರದಲ್ಲಿ ಚುನಾವಣಾ ಅಧಿಕಾರಿ ಡಾ.ರಾಜೇಂದ್ರ ಸಿಬ್ಬಂದಿಗಳಿಗೆ ಸಲಹೆಗಳನ್ನು ನೀಡುತ್ತಿರುವುದು.

ಮೈಸೂರು, ಮೇ 12(ಆರ್‌ಕೆ)– ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಗಳ ವ್ಯಾಪ್ತಿಯ ವಿಧಾನ ಸಭಾ ಕ್ಷೇತ್ರಗಳಿಗೆ ಮೇ 10ರಂದು ನಡೆದ ಚುನಾವಣಾ ಮತ ಎಣಿಕೆ ನಾಳೆ(ಮೇ 13) ನಡೆಯಲಿದೆ. ಮೈಸೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಮೈಸೂರು ನಗರದ ವಾಲ್ಮೀಕಿ ರಸ್ತೆಯಲ್ಲಿರುವ ಮಹಾ ರಾಣಿ ಸರ್ಕಾರಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ನಡೆಯಲಿದೆ.

ಮೈಸೂರು ನಗರದ ವಿಧಾನ ಸಭಾ ಕ್ಷೇತ್ರಗಳೂ ಸೇರಿದಂತೆ ಜಿಲ್ಲೆಯ ಎಲ್ಲಾ 11 ಕ್ಷೇತ್ರಗಳ ಚುನಾವಣಾ ಮತ ಎಣಿಕೆಗೆ ಜಿಲ್ಲಾಡಳಿತ ಸರ್ವ ರೀತಿಯಲ್ಲಿ ಸಿದ್ಧತೆ ಮಾಡಿಕೊಂಡಿದೆ. ಶನಿವಾರ ಬೆಳಗ್ಗೆ 8 ಗಂಟೆಗೆ ಮತ ಎಣಿಕೆ ಕಾರ್ಯ ಆರಂಭವಾಗಲಿದ್ದು, ಮಧ್ಯಾಹ್ನದ ವೇಳೆಗೆ ಪೂರ್ಣ ಪ್ರಮಾಣದ ಫಲಿತಾಂಶ ಹೊರಬೀಳುವ ಸಾಧ್ಯತೆ ಇದೆ. ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಮಧ್ಯಾಹ್ನ ಸುದ್ದಿಗೋಷ್ಠಿಯಲ್ಲಿ ಮತ ಎಣಿಕೆಗೆ ಮಾಡಿರುವ ಸಿದ್ಧತೆ ಕುರಿತಂತೆ ಮಾಹಿತಿ ನೀಡಿದ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ, ಶನಿವಾರ ಬೆಳಗ್ಗೆ 8 ಗಂಟೆಗೆ ಚುನಾವಣಾ ವೀಕ್ಷಕರು, ಅಭ್ಯರ್ಥಿಗಳು, ಅಭ್ಯರ್ಥಿಗಳ ಏಜೆಂಟರುಗಳ ಸಮ್ಮುಖದಲ್ಲಿ ಸ್ಟ್ರಾಂಗ್ ರೂಂ ತೆರೆದು ಇವಿಎಂಗಳನ್ನು ಮತ ಎಣಿಕಾ ಸಭಾಂಗಣಕ್ಕೆ ಸ್ಥಳಾಂತರಿಸಲಾಗುವುದು ಎಂದರು. ಮೇ 10 ರಂದು ಮತದಾನ ●8ನೇ ಪುಟಕ್ಕೆ

ರಾಜ್ಯದ ಜನತೆಗೆ ವಿದ್ಯುತ್ ಶಾಕ್: ಯೂನಿಟ್‌ಗೆ 70 ಪೈಸೆ ಹೆಚ್ಚಳ



ಬೆಂಗಳೂರು: ರಾಜ್ಯದಲ್ಲಿ ವಿಧಾನ ಸಭಾ ಚುನಾವಣಾ ಫಲಿತಾಂಶ ಬರುವ ಮುನ್ನವೇ ರಾಜ್ಯ ಸರ್ಕಾರದಿಂದ ಪ್ರತಿ ಯೂನಿಟ್‌ಗೆ 70 ಪೈಸೆ ವಿದ್ಯುತ್ ದರವನ್ನು ಹೆಚ್ಚಳ ಮಾಡಲಾಗಿದೆ.

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ)ವು ಸಲ್ಲಿಸಿದ್ದ ಬೆಲೆ ಹೆಚ್ಚಳ ಪ್ರಸ್ತಾವನೆಗೆ ಒಪ್ಪಿಗೆ ಲಭಿಸಿದ್ದು, ಪ್ರತಿ ಯೂನಿಟ್‌ಗೆ ಶೇ.16.83 ವಿದ್ಯುತ್ ದರ ಹೆಚ್ಚಳ ಮಾಡಿ ಆದೇಶ ಹೊರಡಿಸಲಾಗಿದೆ. ರಾಜ್ಯದಲ್ಲಿ ಏಪ್ರಿಲ್ 1 ರಿಂದ ಪೂರ್ವಾನ್ವಯ ಆಗುವಂತೆ ಪ್ರತಿ ಯೂನಿಟ್‌ಗೆ 1.46 ರೂ. ಹೆಚ್ಚಳ ಮಾಡುವಂತೆ ಎಲ್ಲ ಎಸ್ಕಾಂಗಳು ಬೇಡಿಕೆ ಸಲ್ಲಿಸಿದ್ದವು. ಆದರೆ, ಈಗ ಕೇವಲ 70 ಪೈಸೆಯನ್ನು ಹೆಚ್ಚಳ ಮಾಡಿ ಆದೇಶ ಹೊರಡಿಸಲಾಗಿದೆ. ಈ ಹೊಸ ದರ ಜಾರಿಯಾದ ಬೆನ್ನಲ್ಲೇ ವಿದ್ಯುತ್ ಗ್ರಾಹಕರ ಪ್ರತಿ ತಿಂಗಳ ●6ನೇ ಪುಟಕ್ಕೆ

ಸಿಎಂ ಬೊಮ್ಮಾಯಿ ಮನೆ ಬಳಿಯೇ ಟ್ರಾನ್ಸ್‌ಫಾರ್ಮರ್ ಸ್ಫೋಟ

ವಿದ್ಯುತ್ ದರ ಏರಿಕೆ ಶಾಪವೆಂದ ನೆಟ್ಟಿಗರು




ಹುಬ್ಬಳ್ಳಿ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಹುಬ್ಬಳ್ಳಿ ನಿವಾಸದ ಬಳಿಯೇ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸ್ಫೋಟಗೊಂಡು ಹೊತ್ತಿ ಉರಿದಿದೆ. ಇನ್ನು ಈ ಘಟನೆಯನ್ನು ಕಂಡ ಜನರು ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಿಂದ ಕೆಳಗಿಳಿಯುವ ಮೊದಲು ವಿದ್ಯುತ್ ದರ ಏರಿಕೆ ಮಾಡಿರುವುದಕ್ಕೆ ಜನರ ಶಾಪದಿಂದಲೇ ಸಿಎಂ ಮನೆ ಬಳಿಯ ಟ್ರಾನ್ಸ್‌ಫಾರ್ಮರ್ ಸಿಡಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹುಬ್ಬಳ್ಳಿ ನಗರದ ವಿಶ್ವೇಶ್ವರನಗರದಲ್ಲಿರುವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಮನೆಯ ಸಮೀಪವಿರುವ ವಿದ್ಯುತ್ ಪರಿವರ್ತಕ ಹೊತ್ತಿ ಉರಿದಿದೆ. ಶಾರ್ಟ್ ಸರ್ಕ್ಯೂಟ್‌ನಿಂದ ಟ್ರಾನ್ಸ್‌ಫಾರ್ಮರ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಇನ್ನು ಟ್ರಾನ್ಸ್‌ಫಾರ್ಮರ್ ಸ್ಫೋಟದಿಂದ ●6ನೇ ಪುಟಕ್ಕೆ

ಮತ ಎಣಿಕೆ ಕೇಂದ್ರದ ಸುತ್ತ ವಾಹನ ಸಂಚಾರ ನಿರ್ಬಂಧ

ಮೈಸೂರು, ಮೇ 12(ಆರ್‌ಕೆ)– ವಿಧಾನಸಭಾ ಚುನಾವಣಾ ಮತ ಎಣಿಕೆ ಹಿನ್ನೆಲೆಯಲ್ಲಿ ಮುಂಜಾನೆ 5ರಿಂದ ಸಂಜೆ 5 ಗಂಟೆವರೆಗೆ ಮೈಸೂರಿನ ವಾಲ್ಮೀಕಿ ರಸ್ತೆಯ ಮಹಾರಾಣಿ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸುತ್ತಲಿನ ರಸ್ತೆಗಳಲ್ಲಿ ಎಲ್ಲಾ ಮಾದರಿಯ ಸಾರ್ವಜನಿಕ ರಸ್ತೆಗಳಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. ಹುಣಸೂರು ರಸ್ತೆಯ ಜಿಲ್ಲಾಧಿಕಾರಿ ಕಚೇರಿ ಬಳಿ ಆರ್ಚ್ ಗೇಟ್ ಜಂಕ್ಷನ್‌ನಿಂದ ಸೆಂಟ್ ಜೋಸೆಫ್ ಕಾಲೇಜು ಜಂಕ್ಷನ್‌ವರೆಗೆ, ಕೆಆರ್‌ಎಸ್ ರಸ್ತೆಯ ವಾಲ್ಮೀಕಿ ರಸ್ತೆ ಜಂಕ್ಷನ್‌ನಿಂದ ಹುಣಸೂರು ರಸ್ತೆವರೆಗೆ ಹಾಗೂ ಆದಿ ಪಂಪ ರಸ್ತೆಯ ಮಾತೃ ಮಂಡಳಿ ಸರ್ಕಲ್‌ನಿಂದ ವಾಲ್ಮೀಕಿ ●8ನೇ ಪುಟಕ್ಕೆ



ಅಭ್ಯರ್ಥಿಗಳ ಪರ ಬೆಟ್ಟಿಂಗ್ ಭರಾಟೆ



ಎಡಿಜಿಪಿ ಅಲೋಕ್‌ಕುಮಾರ್ ಅವರ ಟ್ವೀಟ್

ಭೂಮಿ, ಟ್ರಾಕ್ಟರ್, ದ್ವಿಚಕ್ರ ವಾಹನ, ಕುರಿ, ಕೋಳಿ ಬಾಜಿ

● ಬಹಿರಂಗವಾಗಿಯೇ ಕೈಯ್ಯಲ್ಲಿ ದುಡ್ಡು, ಪತ್ರ ಹಿಡಿದು ಸವಾಲು
● ಕೆಲವೆಡೆ ಹಣ ವಶಪಡಿಸಿಕೊಂಡ ಪೊಲೀಸರು ● ಯಾವ ಸ್ಥಿತಿಗೆ ಬಂತು ರಾಜ್ಯದ ಜೂಜು–ಮೋಜು; ಕಾನೂನು ಸುವ್ಯವಸ್ಥೆ ಅಣಕ

ಮೈಸೂರು, ಮೇ 12–ರಾಜ್ಯ ವಿಧಾನಸಭಾ ಚುನಾವಣಾ ಫಲಿತಾಂಶಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಮೇ 10ರಂದು ಮತದಾನ ಮುಗಿಯುತ್ತಿದ್ದಂತೆಯೇ ಹಲವು ಕ್ಷೇತ್ರಗಳಲ್ಲಿ ಬೆಟ್ಟಿಂಗ್ ಭರಾಟೆ ಜೋರಾಗಿತ್ತು. ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಯ ಬೆಂಬಲಿಗರು ನಗದು ಮಾತ್ರವಲ್ಲದೇ, ಜಮೀನು, ಟ್ರ್ಯಾಕ್ಟರ್, ದ್ವಿಚಕ್ರ ವಾಹನ, ಕುರಿ, ಕೋಳಿ ಮುಂತಾದವುಗಳನ್ನು ಪಣಕ್ಕಿಟ್ಟಿದ್ದಾರೆ. ಕೆಲವು ಹುಂಬರು ತಾವು ಬೆಟ್ಟಿಂಗ್ ಕಟ್ಟುವುದನ್ನು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ.

ಬೆಟ್ಟಿಂಗ್ ಕಾನೂನುಬಾಹಿರ ಜೂಜಾಟವಾಗಿದ್ದು, ಬೆಟ್ಟಿಂಗ್‌ಕೋರರ ವಿರುದ್ಧ ಪೊಲೀಸರು ಕ್ರಮಕ್ಕೆ ಮುಂದಾಗಿದ್ದಾರೆ. ಹೆಚ್.ಡಿ.ಕೋಟೆಯಲ್ಲಿ 5 ಲಕ್ಷ ರೂ. ಹಾಗೂ ಬೆಟ್ಟಿಂಗ್ ಸಂಬಂಧ ಒಪ್ಪಂದ ಮಾಡಿಕೊಳ್ಳಲಾದ ಬಾಂಡ್ ಪೇಪರ್ ವಶಪಡಿಸಿಕೊಂಡು ನಾಲ್ವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಅದೇ ರೀತಿ ಗುಂಡ್ಲುಪೇಟೆಯಲ್ಲಿ ನಗರಸಭಾ ಸದಸ್ಯನೋರ್ವನ ಮನೆಯಲ್ಲಿ 1.20 ಲಕ್ಷ ರೂ. ವಶಪಡಿಸಿಕೊಂಡಿದ್ದು, ಇಬ್ಬರ ವಿರುದ್ಧ ಪ್ರತ್ಯೇಕವಾಗಿ ದೂರು ದಾಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಾಂಡ್ ಪೇಪರ್‌ನಲ್ಲಿ ಒಪ್ಪಂದ: ಚುನಾವಣಾ ಬೆಟ್ಟಿಂಗ್ ಅನ್ನು ಬಾಂಡ್ ಪೇಪರ್‌ನಲ್ಲಿ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂಬುದನ್ನು ಕಾನೂನು ಸುವ್ಯವಸ್ಥೆಯ ಎಡಿಜಿಪಿ ಅಲೋಕ್‌ಕುಮಾರ್ ಅವರು ತಮ್ಮ ಟ್ವೀಟ್‌ನಲ್ಲಿ ತಿಳಿಸಿದ್ದಾರೆ. ಬಾಂಡ್ ಪೇಪರ್ ಮತ್ತು ವಶಪಡಿಸಿಕೊಳ್ಳಲಾದ 5 ಲಕ್ಷ ರೂ.ಗಳ ಫೋಟೋವನ್ನು ಟ್ವೀಟ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ಎಷ್ಟು ದಿಟ್ಟತನ, ಚುನಾವಣಾ ಬೆಟ್ಟಿಂಗ್ ಅನ್ನು ಬಾಂಡ್ ●8ನೇ ಪುಟಕ್ಕೆ

ಶಿಷ್ಯರ್ಣಿ ಪ್ರೌಢಶಾಲೆಗೆ ಶೇ.100 ಫಲಿತಾಂಶ



ವರ್ಷ ಆರ್. (ಶೇ.94.88) | ಅಕ್ಷತ ಎಂ.ಎ. (ಶೇ.90) | ಪಿ.ಸಾನಿಕ (ಶೇ.88) | ಹರ್ಷಿತ್ ಪಟೇಲ್ (ಶೇ.84.64)

ಮೈಸೂರು, ಮೇ 12–ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಬ್ಬಾಳು 1ನೇ ಹಂತದಲ್ಲಿರುವ ಶಿಷ್ಯರ್ಣಿ ಪ್ರೌಢಶಾಲೆಗೆ ಶೇ.100 ಫಲಿತಾಂಶ ಬಂದಿದೆ. ಆರ್. ವರ್ಷ–ಪ್ರಥಮ, ಎಂ.ಎ.ಅಕ್ಷತ–ದ್ವಿತೀಯ ಮತ್ತು ಪಿ.ಸಾನಿಕ ತೃತೀಯ ಸ್ಥಾನ ಪಡೆದಿದ್ದಾರೆ. 3 ವಿದ್ಯಾರ್ಥಿಗಳು ಶೇ.90, 5 ವಿದ್ಯಾರ್ಥಿಗಳು ಶೇ.80, 14 ವಿದ್ಯಾರ್ಥಿಗಳು ಶೇ.70 ಮತ್ತು 7 ವಿದ್ಯಾರ್ಥಿಗಳು ಶೇ.60ಕ್ಕಿಂತ ಹೆಚ್ಚು ಅಂಕ ಗಳಿಸಿದ್ದಾರೆ.

ಜೆಎಸ್‌ಎಸ್ ಪ್ರೌಢಶಾಲೆಗೆ ಉತ್ತಮ ಫಲಿತಾಂಶ



ಮೈಸೂರು, ಮೇ 12–ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೈಸೂರು ತಾಲೂಕು ದೇವಲಾಪುರದ ಜೆಎಸ್‌ಎಸ್ ಪ್ರೌಢಶಾಲೆಗೆ ಶೇ.97.5 ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾಗಿದ್ದ 40 ವಿದ್ಯಾರ್ಥಿಗಳಲ್ಲಿ 39 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಸಿಬಿಎಸ್‌ಇ: ಜೆ.ಪಿ.ನಗರ ಪಬ್ಲಿಕ್ ಶಾಲೆಗೆ ಶೇ.100 ಫಲಿತಾಂಶ



ತಾಡೇಪಲ್ಲಿ ಮೃದುಲ್ಲಾ (ಶೇ.92.83) | ವಿ.ರಿಧಿ (ಶೇ.94.67) | ಪಿ.ಸುಹಾಸ್ (ಶೇ.94.67) | ಕವನ್ ಎಸ್.ಆರಾಧ್ಯ (ಶೇ. 94.33)

ಮೈಸೂರು, ಮೇ 12– ಜೆ.ಪಿ.ನಗರ ಜೆಎಸ್‌ಎಸ್ ಪಬ್ಲಿಕ್ ಶಾಲೆ 2022–23ನೇ ಸಾಲಿನ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಶೇ. 100 ಫಲಿತಾಂಶ ಪಡೆದಿದೆ. ಪರೀಕ್ಷೆಗೆ ಹಾಜರಾದ 79 ವಿದ್ಯಾರ್ಥಿಗಳಲ್ಲಿ 57 ವಿದ್ಯಾರ್ಥಿಗಳು ಅತ್ಯುತ್ತಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು, 9 ವಿದ್ಯಾರ್ಥಿಗಳು ಶೇ. 90 ಕ್ಕಿಂತ ಹೆಚ್ಚು ಅಂಕ ಪಡೆದಿದ್ದಾರೆ.

ರಾಮಕೃಷ್ಣ ವಿದ್ಯಾಕೇಂದ್ರಕ್ಕೆ ಶೇ.100 ಫಲಿತಾಂಶ



ಆರ್.ಅಮೂಲ್ಯ (ಶೇ.95.52) | ಎಂ.ಮಾನಸ (ಶೇ.95.04) | ಎಸ್.ಎಂ.ಮನೋಜ್ (ಶೇ.94.4) | ಆರ್.ಸಿದ್ದೇಶ್ (ಶೇ.92)

ಮೈಸೂರು, ಮೇ 12–ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಮಕೃಷ್ಣ ನಗರದ ರಾಮಕೃಷ್ಣ ವಿದ್ಯಾಕೇಂದ್ರಕ್ಕೆ ಶೇ.100 ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾಗಿದ್ದ ಎಲ್ಲಾ ವಿದ್ಯಾರ್ಥಿಗಳೂ ಉತ್ತೀರ್ಣರಾಗಿದ್ದಾರೆ. ಆರ್.ಅಮೂಲ್ಯ 597 ಅಂಕಗಳೊಂದಿಗೆ ಶಾಲೆಗೆ ಮೊದಲಿಗರಾಗಿದ್ದು, ಕನ್ನಡದಲ್ಲಿ 125, ಇಂಗ್ಲೀಷ್‌ನಲ್ಲಿ 99 ಅಂಕ ಗಳಿಸಿದ್ದಾರೆ. ಮಾನಸ ಎಂ. ಇಂಗ್ಲೀಷ್‌ನಲ್ಲಿ 100, ವಿಜ್ಞಾನದಲ್ಲಿ 99 ಅಂಕಗಳನ್ನು ಗಳಿಸಿ ದ್ವಿತೀಯ ಸ್ಥಾನ ಪಡೆದಿದ್ದಾಳೆ. ಬಿ. ಸಂಜನಾ ಸಂಸ್ಕೃತದಲ್ಲಿ 125 ಗಳಿಸಿದ್ದಾಳೆ. ಎಸ್.ಎಂ. ಮನೋಜ್ 590 ಅಂಕಗಳನ್ನು ಗಳಿಸಿ ತೃತೀಯ ಸ್ಥಾನ ಪಡೆದುಕೊಂಡಿದ್ದಾನೆ.

ನಟರಾಜ ಪಬ್ಲಿಕ್ ಶಾಲೆಗೆ ಶೇ.100ರಷ್ಟು ಫಲಿತಾಂಶ



ಸತ್ಯಂ ಪ್ರಕಾಶ್ ಬರ್ರೈ 83.4% | ಹುಸ್ನ 83.2% | ಎಂ.ಆರ್.ಮೊದಕ ಪ್ರಿಯಾ 83% | ಪಕ್ಷ ವಿ.ಜೈನ್ 79.4%

ಮೈಸೂರು, ಮೇ 12–ಈ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶ್ರೀ ನಟರಾಜ ಪಬ್ಲಿಕ್ ಶಾಲೆಗೆ ಶೇ.100ರಷ್ಟು ಫಲಿತಾಂಶ ಲಭಿಸಿದೆ. ಸತ್ಯಂ ಪ್ರಕಾಶ್ ಬರ್ರೈ (83.4%), ಹುಸ್ನ (83.2%), ಮೊದಕ ಪ್ರಿಯಾ ಎಮ್ ಆರ್(83%), ಪಕ್ಷ ವಿ ಜೈನ್ (79.4%), ರೂಪಶ್ರೀ ಹೆಚ್.ಎಸ್.(76.4%), ಅಂಕಿತ ಕುವರ್(75%). ಅನುಷ ಚೌಧರಿ ಆರ್ (70.8%), ಸೃಷ್ಟಿ ಎಂ (70.4%), ಗಾನವಿ ಎಂ.(70%), ಕೀರ್ತಿ ಪ್ರಿಯ ಎಸ್ (70%)

ಸುತ್ತೂರು ಜೆಎಸ್‌ಎಸ್ ಶಾಲೆಗೆ ಶೇ.98 ಫಲಿತಾಂಶ




ಶಿವರಾಜ್ ಎಸ್.ಹಿರೇಮಠ್ (612) | ಪೂರ್ವಶ್ರೀ ಟಿ.ಎಂ. (609) | ಪಿಂಕು (596) | ಮೇಘನಾ (582)

ಮೈಸೂರು, ಮೇ 12– ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಒಟ್ಟು 432 ವಿದ್ಯಾರ್ಥಿಗಳು ಹಾಜರಾಗಿದ್ದು, 423 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.98 ರಷ್ಟು ಫಲಿತಾಂಶ ಲಭಿಸಿದೆ. 96 ವಿದ್ಯಾರ್ಥಿಗಳು 500ಕ್ಕೂ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ.

ಅತ್ಯುನ್ನತ ದರ್ಜೆಯಲ್ಲಿ 44, ಪ್ರಥಮ ದರ್ಜೆಯಲ್ಲಿ 311, ದ್ವಿತೀಯ ದರ್ಜೆಯಲ್ಲಿ 63 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಆಂಗ್ಲ ಮಾಧ್ಯಮದಲ್ಲಿ ಶಿವರಾಜ್ ಎಸ್. ಹಿರೇಮಠ್ 625 ಕ್ಕೆ 612 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮರಾದರೆ, ಪೂರ್ವಶ್ರೀ ಟಿ.ಎಂ. 609 ಅಂಕಗಳನ್ನು ಗಳಿಸಿ ದ್ವಿತೀಯ ಸ್ಥಾನ, ಪಿಂಕು 596 ಅಂಕಗಳನ್ನು ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ. ಆಂಗ್ಲ ಮಾಧ್ಯಮದಲ್ಲಿ ಶಾಲೆಗೆ ಶೇ. 98.26 ರಷ್ಟು ಫಲಿತಾಂಶ ಲಭಿಸಿದೆ. ಕನ್ನಡ ಮಾಧ್ಯಮದಲ್ಲಿ ಮೇಘನಾ 582 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಕನ್ನಡ ಮಾಧ್ಯಮದಲ್ಲಿ ಶೇ. 97.68 ರಷ್ಟು ಫಲಿತಾಂಶ ಲಭಿಸಿದೆ. ಜಾರ್ಖಂಡ್ ವಿದ್ಯಾರ್ಥಿನಿಯಾದ ಖುಷ್ಬು ಕುಮಾರಿ ಕನ್ನಡ ಭಾಷೆಯಲ್ಲಿ 107 ಅಂಕ ಗಳಿಸಿದರೆ, ಅಮಿತ್‌ಕುಮಾರ್ ಮೆಹತೋ 102 ಅಂಕಗಳನ್ನು ಗಳಿಸಿದ್ದಾರೆ. ಪ್ರಥಮ ಭಾಷೆ ಕನ್ನಡದಲ್ಲಿ 9 ವಿದ್ಯಾರ್ಥಿಗಳು 125 ಕ್ಕೆ 125 ಪೂರ್ಣಾಂಕಗಳನ್ನು ಗಳಿಸಿದ್ದಾರೆ. ತೃತೀಯ ಭಾಷೆ ಹಿಂದಿ 5, ತೃತೀಯ ಭಾಷೆ ಸಂಸ್ಕೃತದಲ್ಲಿ 2, ವಿಜ್ಞಾನ ಹಾಗೂ ಸಮಾಜ ವಿಜ್ಞಾನದಲ್ಲಿ ತಲಾ ಒಬ್ಬರು 100ಕ್ಕೆ 100 ಅಂಕಗಳನ್ನು ಗಳಿಸಿ, ಸಾಧನೆಗೈದಿದ್ದಾರೆ.

ಎಂ.ಎಂ.ಸಿರಿಗೆ 598 ಅಂಕ



ಮೈಸೂರು, ಮೇ 12– ಈ ಸಾಲಿನ ಹತ್ತನೇ ತರಗತಿ ಪರೀಕ್ಷೆಯಲ್ಲಿ ನಂಜನಗೂಡಿನ ಕಾರ್ಮಲ್ ಇಂಗ್ಲೀಷ್ ಶಾಲೆಯ ವಿದ್ಯಾರ್ಥಿನಿ ಎಂ.ಎಂ.ಸಿರಿ 598(ಶೇ.95.68) ಅಂಕ ಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಕನ್ನಡದಲ್ಲಿ 125ಕ್ಕೆ 122, ಹಿಂದಿಯಲ್ಲಿ 100ಕ್ಕೆ 100, ಇಂಗ್ಲೀಷ್ ಭಾಷೆಯಲ್ಲಿ 98,ಗಣಿತದಲ್ಲಿ 89,ವಿಜ್ಞಾನದಲ್ಲಿ 92 ಮತ್ತು ಸಮಾಜ ವಿಜ್ಞಾನದಲ್ಲಿ 97 ಅಂಕಗಳಿಸಿದ್ದಾರೆ. ಈಕೆ ಕೆಂಪೇಗೌಡ ಬಡಾವಣೆಯ ಎಂ.ಎ.ಮಂಜುನಾಥ್ ಮತ್ತು ಲೇಖಕಿ ಕವಯಿತ್ರಿ ಎಸ್.ಎಲ್.ವರಲಕ್ಷ್ಮಿ ಅವರ ಪುತ್ರಿ.

ನಳಂದ ಪ್ರೌಢಶಾಲೆಗೆ ಉತ್ತಮ ಫಲಿತಾಂಶ

ಮೈಸೂರು, ಮೇ 12–ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಳಂದ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಗೆ ಶೇ.100 ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾಗಿದ್ದ 45 ವಿದ್ಯಾರ್ಥಿಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅತ್ಯುನ್ನತ ಶ್ರೇಣಿ –6, ಪ್ರಥಮ ದರ್ಜೆ–27, ದ್ವಿತೀಯ ದರ್ಜೆ–9 ಮತ್ತು ತೃತೀಯ ದರ್ಜೆ–3 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಮದನ್ ಆರ್. (ಶೇ. 96.96), ಅನುಶ್ರೀ ಕೆ.ಎಸ್. (ಶೇ. 95.84), ಕವಿತ ಪಟೇಲ್ (ಶೇ. 95.68), ಕಿರಣ್ ಆರ್. (ಶೇ. 88.8), ಲೇಖನ ವಿ. (ಶೇ. 86.56), ಜಯಂತ್ ವಿ. (ಶೇ. 85.92) ಅಂಕಗಳನ್ನು ಪಡೆದಿದ್ದಾರೆ.

ಸಂಕಷ್ಟದಲ್ಲಿ ಪಕ್ಷಕ್ಕಾಗಿ ದುಡಿದಿದ್ದೇನೆ; ಸಹಕರಿಸಿ ಅಂತ ಕೇಳ್ತೀನಿ...

ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆ

ಬೆಂಗಳೂರು, ಮೇ 12(ಕೆಎಂಶಿ)– ಸಂಕಷ್ಟದಲ್ಲಿ ಪಕ್ಷವನ್ನು ಮುನ್ನಡೆಸಿದ್ದೇನೆ. ವಿಧಾನಸಭಾ ಚುನಾವಣೆಯಲ್ಲಿ ಅಧಿಕಾರಕ್ಕೆ ಬಂದರೆ, ಎಲ್ಲರೂ ನನಗೆ ಸಹಕಾರ ನೀಡುತ್ತಾರೆ ಎಂದು ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಯಾಗಿರುವ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಿನೇಶ್ ಗುಂಡೂರಾವ್ ಅವರು ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ ಅಧಿಕಾರ ವಹಿಸಿಕೊಂಡು ಇಡೀ ರಾಜ್ಯಾದ್ಯಂತ ಸಂಚರಿಸಿ ಪಕ್ಷ ಸಂಘಟನೆ ಮಾಡಿದ್ದೇನೆ. ಭ್ರಷ್ಟ ಬಿಜೆಪಿ ಆಡಳಿತದ ಹುಳುಕುಗಳನ್ನು ಎಳೆ ಎಳೆಯಾಗಿ ಬಿಡಿಸಿಟ್ಟು, ಪಕ್ಷದತ್ತ ಮತದಾರರು ಮುಖ ಮಾಡುವಂತೆ ಮಾಡಿದ್ದೇನೆ. ಪಕ್ಷಕ್ಕೆ ಏನು ಮಾಡಬೇಕೋ ಅದನ್ನು ಮಾಡಿದ್ದೇನೆ. ಶ್ರಮ ಹಾಕಿ ದುಡಿದಿದ್ದೇನೆ. ಈಗ ಬೇರೆ ಯಾವ ಸಂದರ್ಭವೂ ಉದ್ಭವವಾಗುವುದಿಲ್ಲ. ಎಲ್ಲರೂ ನನಗೆ ಸಹಕಾರ ಕೊಟ್ಟು, ಆಶೀರ್ವಾದ ಮಾಡುತ್ತಾರೆಂಬ ವಿಶ್ವಾಸ ವ್ಯಕ್ತಪಡಿಸಿದರು. ಎಕ್ಸಿಟ್ ಪೋಲ್ ಬಗ್ಗೆ ನಂಬಿಕೆ ಇಲ್ಲ. ನನ್ನ ಪ್ರಕಾರ 141 ಸ್ಥಾನ ಗೆಲ್ಲುತ್ತೇವೆ. ನಮ್ಮ ಸಮೀಕ್ಷೆಯಲ್ಲಿ ಎಕ್ಸಿಟ್ ಪೋಲ್ ಸಮೀಕ್ಷೆಗಿಂತ ಹೆಚ್ಚು ಮಾದರಿಗಳಿಂದ ಸಂಗ್ರಹ ಮಾಡಲಾಗಿದೆ. ಕಾಂಗ್ರೆಸ್ ಪರವಾಗಿ ದೊಡ್ಡ ಅಲೆ ಇದೆ. ಎಕ್ಸಿಟ್ ಪೋಲ್ ಸಮೀಕ್ಷೆಗಿಂತ ಕಾಂಗ್ರೆಸ್ ಹೆಚ್ಚಿನ ಸ್ಥಾನ ಪಡೆಯಲಿದೆಯೇ ಹೊರತು ಕಡಿಮೆ ಆಗಲು



ಸಾಧ್ಯವಿಲ್ಲ ಎಂದರು. ಎಕ್ಸಿಟ್ ಪೋಲ್‌ನಲ್ಲಿ ನಮ್ಮ ಪರ ವಿಶ್ವಾಸ ತೋರಿದ್ದು, ಅದಕ್ಕೆ ಅಭಿನಂದನೆ ಸಲ್ಲಿಸುತ್ತೇನೆ. ಆದರೆ ಕಾಂಗ್ರೆಸ್ ಪಕ್ಷಕ್ಕೆ ನಿಚ್ಚಳ ಬಹುಮತ ಬರಲಿದೆ ಎಂಬುದು ನಮ್ಮದೂ ನಂಬಿಕೆ. ನಾನು ಸ್ಥಳೀಯವಾಗಿ ಓಡಾಟ ಮಾಡಿದ್ದೇನೆ. ಬಿಜೆಪಿ ಪ್ರತಿಯೊಂದು ಕ್ಷೇತ್ರದಲ್ಲಿ ಎಷ್ಟೇ ದುಡ್ಡು ಸುರಿಸಿರಬಹುದು, ಎಷ್ಟೇ ದೊಡ್ಡ ನಾಯಕರು ಬಂದು ಪ್ರಚಾರ ಮಾಡಿರಬಹುದು. ಆದರೆ, ಮತ ಎಂಬುದು ಬುಲೆಟ್‌ಗಿಂತ ಶಕ್ತಿಶಾಲಿಯಾಗಿದೆ.

ಈ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಡಲು ಹೇಗೆ ಜನ ಬ್ರಿಟೀಷರ ಗುಂಡಿಗೆ ಹೆದರಲಿಲ್ಲವೋ, ಅದೇ ರೀತಿ ಜನ ಡಬಲ್ ಇಂಜಿನ್ ಸರ್ಕಾರದ ದುರಾಡಳಿತ, ಸಾಂವಿಧಾನಿಕ ಸಂಸ್ಥೆಗಳ ದುರುಪಯೋಗದ ವಿರುದ್ಧ ತೀರ್ಪು ನೀಡಿದ್ದಾರೆ. ಅತಂತ್ರ ವಿಧಾನ ಸಭೆ ನಿರ್ಮಾಣವಾಗಬಹುದು ಎಂಬ ಕಾರಣಕ್ಕೆ ತೆರೆಮರೆಯಲ್ಲಿ ಪ್ರಯತ್ನ ನಡೆಯುತ್ತಿದ್ದು, ಕುಮಾರಸ್ವಾಮಿ ಅವರು ಸಿಂಗಾಪುರಕ್ಕೆ ಹೋಗುವ ಮುನ್ನ ನಾನು ಮೈತ್ರಿಗೆ ಸಿದ್ಧ ಎಂಬ ಹೇಳಿಕೆ ಬಗ್ಗೆ ಕೇಳಿದಾಗ, ಯಾವ ತೆರೆಮರೆ ಪ್ರಯತ್ನವೂ ಇಲ್ಲ. ಇಷ್ಟು ದಿನ ಅವರು ತಮಗೆ ಬಹುಮತ ಬರಲಿದೆ ಎಂದು ಹೇಳುತ್ತಿದ್ದರು. ಅವರು ಯಾರ ಜತೆ ಮೈತ್ರಿ ಮಾಡಿಕೊಳ್ಳಲು ಸಿದ್ಧವೋ ಗೊತ್ತಿಲ್ಲ ಎಂದು ತಿಳಿಸಿದರು. ಕುಮಾರಸ್ವಾಮಿ ಅವರು ಚುನಾವಣೆಗೂ ಮುನ್ನ ಬಹುಮತ ಬಾರದಿದ್ದರೆ ಪಕ್ಷ ವಿಸರ್ಜನೆ ಮಾಡುತ್ತೇವೆ ಎಂದು ಹೇಳುತ್ತಿದ್ದರು ಎಂದು ಕೇಳಿದಾಗ, ಕುಮಾರಣ್ಣ ಅವರು ಯಾವ ಲೆಕ್ಕಾಚಾರದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ನಾವಂತೂ ಆರೋಗ್ಯ ಉತ್ತಮವಾಗಿ ಇರುವವರೆಗೂ ನಿವೃತ್ತಿ ಪಡೆಯುವುದಿಲ್ಲ. ದಳದ ಕಾರ್ಯಕರ್ತರು ಸಮಯ ವ್ಯರ್ಥ ಮಾಡದೆ ನಮ್ಮ ಜತೆ ಸೇರಿಕೊಳ್ಳಲಿ ಎಂದು ಹೇಳಿದ್ದೇನೆ. ಇಂದು ಅದನ್ನೆ ಹೇಳುತ್ತೇನೆ ಎಂದು ತಿಳಿಸಿದರು.

ಮಾವಿನಹಳ್ಳಿ ಸಿದ್ದೇಗೌಡರಿಂದ ಸುಳ್ಳು ಆರೋಪ; ಅವರಿಗೆ ಕಾಂಗ್ರೆಸ್ ಸಂಸ್ಕೃತಿಯೇ ಗೊತ್ತಿಲ್ಲ

ಮೈಸೂರು, ಮೇ 12(ಎಂಟಿವೈ)– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡರ ಗೆಲುವಿಗೆ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರು ಪ್ರಾಮಾಣಿಕವಾಗಿ ಕೆಲಸ ಮಾಡಿದ್ದರೂ, ಪಕ್ಷದ ಶಿಸ್ತು ಉಲ್ಲಂಘಿಸಿ ಪಕ್ಷದ ಅಭ್ಯರ್ಥಿ ಸುಳ್ಳು ಆರೋಪ ಮಾಡಿದ್ದಾರೆ ಎಂದು ಜಿಪಂ ಮಾಜಿ ಅಧ್ಯಕ್ಷ ಕೆ.ಮರೀಗೌಡ ತಿರುಗೇಟು ನೀಡಿದ್ದಾರೆ.

ಮೈಸೂರು ತಾಲೂಕಿನ ಇಲವಾಲ ಹೋಬಳಿಯ ಕಾಮನಕೊಪ್ಪಲಿನಲ್ಲಿ ಪಕ್ಷದ ಮುಖಂಡರೊಬ್ಬರ ನಿವಾಸದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ, ಕೆಲವು ಮೂಲ ಕಾಂಗ್ರೆಸ್ ನಾಯಕರ ಬಗ್ಗೆ ಮಾಡಿರುವ ಆರೋಪ ನಿರಾಧಾರ. ಪಕ್ಷದ ಸದಸ್ಯರೇ ಅಲ್ಲದಿದ್ದರೂ ಸಿದ್ದೇಗೌಡರ ಪರ



ವಾಗಿ ನಾವು ನಿಷ್ಠೆಯಿಂದ ಕೆಲಸ ಮಾಡಿದ್ದೇವೆ. ನನ್ನ ಹಾಗೂ ನಮ್ಮ ಕಾರ್ಯಕರ್ತರ ವಿರುದ್ಧ ಸಿದ್ದೇಗೌಡ ವಿನಾಕಾರಣ ಆರೋಪ ಮಾಡಿದ್ದಾರೆ. ಅವರು ಮಾಡಿರುವ ಆರೋಪದಲ್ಲಿ ಯಾವುದೇ ರೀತಿಯ ಹುರುಳಿಲ್ಲ ಎಂದು ಹರಿಹಾಯ್ದಿದ್ದಾರೆ.

ಸಿದ್ದೇಗೌಡರಿಗೆ ಕಾಂಗ್ರೆಸ್ ಪಕ್ಷದ ಸಂಸ್ಕೃತಿಯೇ ಗೊತ್ತಿಲ್ಲ. ನಾವು ಈಗಲೂ ಸಿದ್ದೇಗೌಡರು ಗೆಲ್ಲುತ್ತಾರೆ ಎಂಬ ಭರವಸೆಯಲ್ಲಿದ್ದೇವೆ. ನಮ್ಮ ನಾಯಕರಾದ ಸಿದ್ದರಾಮಯ್ಯನವರ ಮಾತಿನಂತೆ ಎಲ್ಲರೂ ಒಗ್ಗಟ್ಟಿನಿಂದ 40 ದಿನಗಳ ಕಾಲ ಕೆಲಸ ಮಾಡಿದ್ದೇವೆ. ಕೊನೆಯ 4 ದಿನ ಅಭ್ಯರ್ಥಿ ಕಾಣೆಯಾಗಿದ್ದಾರೆ ಎಂದು ಕಾರ್ಯಕರ್ತರು ಕಸಿವಿಸಿಗೊಂಡಿದ್ದರು. ಇವರು ಏಕೆ ಹೀಗೆ ಮಾಡಿದರೋ ಗೊತ್ತಿಲ್ಲ. ಚುನಾವಣೆ ಎದುರಿಸಲು ಹಣದ ಕೊರತೆಯಾಗಿದ್ದರೆ ಜನರ ಬಳಿಯೇ ಸತ್ಯ ಹೇಳಬೇಕಿತ್ತು. ಅದನ್ನು ಬಿಟ್ಟು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಮೇಲೆ ದೂರುತ್ತಿರುವುದು ತಪ್ಪು ಎಂದರು. ಗುರುವಾರ ಸುದ್ದಿಗೋಷ್ಠಿಯಲ್ಲಿ ಉಪ್ಪು ಮುಟ್ಟಿ ಪ್ರಮಾಣ ಮಾಡಿದ್ದ ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ ಅವರು, 'ಮೂಲ ಕಾಂಗ್ರೆಸ್ಸಿನ ಕೆಲವರು ನನ್ನ ವಿರುದ್ಧ ಅಪಪ್ರಚಾರ ಮಾಡಿದ್ದು, ನಾನು ಯಾರೊಂದಿಗೂ ಡೀಲ್ ಆಗಿಲ್ಲ. ನಾನು ಬೇರೆ ಪಕ್ಷದವರೊಂದಿಗೆ ಶಾಮೀಲಾಗಿಲ್ಲ. ಕ್ಷೇತ್ರದಲ್ಲಿ ಏನಾದರೂ ಗೊಂದಲ ಆಗಿದ್ದರೆ ಅದಕ್ಕೆ ಕಾರಣ ಮರೀಗೌಡ' ಎಂದು ನೇರವಾಗಿ ಆರೋಪಿಸಿದ್ದರು.

ಬಿಜೆಪಿಯೇ ಮತ್ತೆ ಅಧಿಕಾರಕ್ಕೆ ಬರಲಿದೆ

- ●ಮುಖ್ಯಮಂತ್ರಿ ಬೊಮ್ಮಾಯಿ ವಿಶ್ವಾಸ
- ●ವರಿಷ್ಠರಿಗೆ ಪೂರ್ಣ ಮಾಹಿತಿ ರವಾನೆ



ಬೆಂಗಳೂರು, ಮೇ 12(ಕೆಎಂಶಿ)– ಕರ್ನಾಟಕದಲ್ಲಿ ನಮ್ಮ ಪಕ್ಷವೇ ಮತ್ತೆ ಅಧಿಕಾರಕ್ಕೆ ಬರಲಿದೆ ಎಂಬ ಅಂಕಿ–ಅಂಶಗಳ ಮಾಹಿತಿಯನ್ನು ವರಿಷ್ಠರ ಗಮನಕ್ಕೆ ತಂದಿದ್ದೇನೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾನ ಪೂರ್ಣಗೊಂಡ ಬಳಿಕ ರಾಜ್ಯಾದ್ಯಂತ ಮಾಹಿತಿ ಸಂಗ್ರಹಿಸಿ ಇಂದು ಬೆಳಿಗ್ಗೆ ವರಿಷ್ಠರನ್ನು ಸಂಪರ್ಕಿಸಿ ವರದಿ ನೀಡಿದ್ದೇನೆ. ಅವರು ಕೂಡ ಪಕ್ಷವೇ ಅಧಿಕಾರಕ್ಕೆ ಬರುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ವರಿಷ್ಠರಿಗೆ ವರದಿ ನೀಡಿ ನಂತರ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಮತದಾನದ ನಂತರದ ಪರಿಸ್ಥಿತಿಯನ್ನು ಮತ್ತು ಪಕ್ಷಕ್ಕೆ ಇರುವ ವಾತಾವರಣವನ್ನು ತಿಳಿಸಿದ್ದೇನೆ. ಅಷ್ಟೇ ಅಲ್ಲ, ಮುಂದಿನ ಪ್ರಕ್ರಿಯೆಗಳ ಬಗ್ಗೆ ಚರ್ಚೆ ಮಾಡಿದ್ದೇವೆ ಎಂದರು.

ಕಾಂಗ್ರೆಸ್‌ನವರಿಗೆ ಬಹುಮತ ಬರಲ್ಲ. ಹಾಗಾಗಿ ಬೇರೆ ಪಕ್ಷದವರ ಜತೆ ಮಾತನಾಡುವ ಪ್ರಯತ್ನ ಮಾಡುತ್ತಿದ್ದಾರೆ. ಅವರ ಶಾಸಕರ ಮೇಲೆ ಅವರಿಗೆ ನಂಬಿಕೆ ಇಲ್ಲ ಎಂದು ಆರೋಪಿಸಿದರು.


ನಾನು ಮೊದಲಿಂದಲೂ ಒಂದೇ ಮಾತು ಹೇಳುತ್ತಾ ಬಂದಿದ್ದೇನೆ. ಬಹುಮತದ ಗಡಿ ದಾಟುತ್ತೇವೆ. ಮ್ಯಾಜಿಕ್ ನಂಬರ್ ತಲುಪುತ್ತೇವೆ. ಎಲ್ಲಾ ಕ್ಷೇತ್ರ ಬೂತ್‌ಗಳಿಂದ ಗ್ರೌಂಡ್ ಮಾಹಿತಿ ತರಿಸಿದ್ದೇವೆ ಎಂದರು. ಈಗ ನಮ್ಮ ಮುಂದೆ ಮೈತ್ರಿಯ ಪ್ರಶ್ನೆ ಇಲ್ಲ. ನಾವು ಬಹುಮತ ದಾಟುತ್ತೇವೆ. ಕಾಂಗ್ರೆಸ್‌ನವರು ಏನೇ ಸಭೆ ಮಾಡಲಿ. ಅವರಿಗೆ ಸಭೆ ಮಾಡುವ ಹಕ್ಕಿದೆ. ಎಲ್ಲಾ ಪಕ್ಷಗಳೂ ಸಭೆ ಮಾಡುತ್ತಾರೆ ಎಂದು ತಿಳಿಸಿದರು.

ಗರಿಗೆದರಿದ ರಾಜಕೀಯ ಚಟುವಟಿಕೆ; ಬಿಎಸ್‌ವೈ ನಿವಾಸಕ್ಕೆ ಬಿಜೆಪಿ ನಾಯಕರು ದೌಡು

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣೆಗೆ ಮತದಾನ ಪೂರ್ಣಗೊಂಡಿದ್ದು, ಇದರ ಬೆನ್ನಲ್ಲೇ ಚುನಾವಣೋತ್ತರ ಸಮೀಕ್ಷೆಗಳು ಹೊರಬಿದ್ದಿವೆ. 11 ಸಮೀಕ್ಷೆಗಳ ಪೈಕಿ 8 ಸಮೀಕ್ಷೆಗಳು ಕಾಂಗ್ರೆಸ್ ಪರ ಹಾಗೂ 3 ಸಮೀಕ್ಷೆಗಳು ಬಿಜೆಪಿ ಪರ ಭವಿಷ್ಯ ನುಡಿದಿವೆ. ಅಂತಿಮವಾಗಿ ಶನಿವಾರ ಫಲಿತಾಂಶ ಹೊರಬೀಳಲಿದ್ದು, ಈ ವೇಳೆ ಯಾವ ಪಕ್ಷ 113 ಸಂಖ್ಯೆಯನ್ನು ದಾಟಲಿದೆ ಎಂಬ ಕುತೂಹಲ ಹೆಚ್ಚಾಗಿದೆ,

ಚುನಾವಣಾ ಫಲಿತಾಂಶ ನಾಳೆ ಪ್ರಕಟಗೊಳ್ಳಲಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಒಂದೆಡೆ ಖರ್ಗೆ ನಿವಾಸದಲ್ಲಿ ಕೈ ನಾಯಕರು ಸಭೆ ನಡೆಸುತ್ತಿದ್ದರೆ, ಮತ್ತೊಂದೆಡೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನಿವಾಸದಲ್ಲಿ ಬಿಜೆಪಿ ನಾಯಕರು ಸಭೆ ನಡೆಸುತ್ತಿದ್ದಾರೆ. ಯಡಿಯೂರಪ್ಪ ಅವರ ಕಾವೇರಿ ನಿವಾಸಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ಮುರುಗೇಶ ನಿರಾಣಿ, ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್ ಅವರು ಭೇಟಿ ನೀಡಿದ್ದು, ರಾಜ್ಯ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸುತ್ತಿದ್ದಾರೆಂದು ತಿಳಿದುಬಂದಿದೆ.

ಸಭೆಗೂ ಮುನ್ನ ಆರ್‌ಟಿ ನಗರದ ತಮ್ಮ ನಿವಾಸದ ಮುಂದೆ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಬೊಮ್ಮಾಯಿಯವರು, ಚುನಾವಣೆಗೆ ಮುಂಚೆ, ನಂತರ ಯಾವುದೇ ಇರಲಿ.



ಸಮೀಕ್ಷೆಗಳು ಏನೇ ಹೇಳಿರಲಿ. ನನ್ನದು ಆಗಲೂ ಈಗಲೂ ಒಂದೇ ಮಾತು. ಅದು, ಬಿಜೆಪಿಗೆ ಸ್ಪಷ್ಟ ಬಹುಮತ ಸಿಗಲಿದೆ. ಗ್ರೌಂಡ್ ರಿಪೋರ್ಟ್ ಕೂಡ ಅದೇ ಹೇಳುತ್ತದೆ ಎಂದು ಹೇಳಿದರು.

ವಸ್ತುಸ್ಥಿತಿ ವರದಿಯನ್ನು ವರಿಷ್ಠರಿಗೆ ಸಲ್ಲಿಸಿದ್ದೇನೆ. ಬಿಜೆಪಿ ಗಳಿಸಲಿರುವ ನಂಬರ್‌ಗಳ ಬಗ್ಗೆ ಹಿರಿಯ ನಾಯಕರು ಹೇಳಿದ್ದೇ ನನ್ನ ನಂಬರ್. ಇಬ್ಬರದೂ ಬೇರೆ ನಂಬರ್‌ಗಳಿಲ್ಲ ಎಂದು ತಿಳಿಸಿದರು.

ಕಾಂಗ್ರೆಸ್‌ನವರಿಗೆ ಬಹುಮತ ಬರುವುದಿಲ್ಲ. ಹೀಗಾಗಿ ಬೇರೆ ಪಕ್ಷದವರ ಜತೆ ಮಾತನಾಡಲು ಪ್ರಯತ್ನಿಸುತ್ತಿದ್ದಾರೆ. ಅವರ ಪಕ್ಷದ ಶಾಸಕರ ಮೇಲೆ ಅವರಿಗೆ ನಂಬಿಕೆ ಇಲ್ಲ ಎಂದಾಯಿತು ಎಂದು ಹೇಳಿದರು. ಈ ಬಾರಿ ಮೈತ್ರಿ ಪರಿಸ್ಥಿತಿ ಎದುರಾಗುವುದಿಲ್ಲ. ನಮ್ಮ ಮುಂದೆ ಆ ಪ್ರಶ್ನೆಗಳಿಲ್ಲ. ನಾವು ಬಹುಮತ ಪಡೆಯುವುದು ಖಚಿತ. ಕಾಂಗ್ರೆಸ್ ಸಭೆ ಏನೇ ಆಗಲೀ, ನಾವು ಆ ಬಗ್ಗೆ ಚಿಂತಿಸುವುದಿಲ್ಲ. ಅವರಿಗೆ ಸಭೆ ಮಾಡುವ ಹಕ್ಕಿದೆ, ಮಾಡುತ್ತಾರೆ. ಎಲ್ಲಾ ಪಕ್ಷಗಳೂ 'ಸಭೆ' ಮಾಡುತ್ತೇವೆ. ಇದರಲ್ಲಿ ಹೊಸದೇನೂ ಇಲ್ಲ ಎಂದರು.

ಎನ್.ರವಿಕುಮಾರ್ ಮಾತನಾಡಿ, ನಾವು ಏನೇ ಹೇಳಿದರೂ ನಾಳೆ ಪ್ರಕಟವಾಗಲಿರುವ ಫಲಿತಾಂಶದಲ್ಲಿ ವಾಸ್ತವ ಗೊತ್ತಾಗಲಿದೆ. ನಾವು 105–120ರವರೆಗೆ ತಲುಪುತ್ತೇವೆ. ನನ್ನ ಪ್ರಕಾರ ಕಲ್ಯಾಣ ಕರ್ನಾಟಕದಲ್ಲಿ 15ಕ್ಕಿಂತ ಕಡಿಮೆ ಬರುವುದಿಲ್ಲ. ಬೆಂಗಳೂರಿನಲ್ಲಿ ಕೂಡ 15ಕ್ಕಿಂತ ಹೆಚ್ಚು ಸ್ಥಾನ ಗಳಿಸುತ್ತೇವೆ. ಕರಾವಳಿಯಲ್ಲಿ ಅತಿ ಹೆಚ್ಚು ಸ್ಥಾನ ಗೆಲ್ಲುತ್ತೇವೆ. ಒಟ್ಟಾರೆ ರಾಜ್ಯದ ವಿಚಾರ ತೆಗೆದುಕೊಂಡರೆ 105ಕ್ಕಿಂತ ಹೆಚ್ಚು ಗೆಲುವು ನಿಶ್ಚಿತ. ಕಾಂಗ್ರೆಸ್ ಏನೇ ಹೇಳಬಹುದು, ಬಿಜೆಪಿ ಸ್ಪಷ್ಟ ಬಹುಮತ ಪಡೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

CBSE 10ನೇ ತರಗತಿ ಫಲಿತಾಂಶ ಪ್ರಕಟ: ಶೇ.93.12ರಷ್ಟು ವಿದ್ಯಾರ್ಥಿಗಳು ತೇರ್ಗಡೆ

ನವದೆಹಲಿ: ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್ (CBSE) ಶುಕ್ರವಾರ 10 ನೇ ತರಗತಿಯ ಪರೀಕ್ಷಾ ಫಲಿತಾಂಶಗಳನ್ನು ಪ್ರಕಟಿಸಿದ್ದು, ಇದರಲ್ಲಿ ಶೇಕಡಾ 93.12 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಶೇಕಡಾ 94.25 ಫಲಿತಾಂಶದೊಂದಿಗೆ ಬಾಲಕಿಯರು ಮತ್ತೊಮ್ಮೆ ಮೇಲುಗೈ ಸಾಧಿಸಿದ್ದು, ಬಾಲಕರು ಶೇಕಡಾ 92.27ರಷ್ಟು ಮಂದಿ ತೇರ್ಗಡೆ ಹೊಂದಿದ್ದಾರೆ. 10 ನೇ ತರಗತಿ ಪರೀಕ್ಷೆಯಲ್ಲಿ ಸುಮಾರು ಶೇಕಡಾ 90ರಷ್ಟು ತೃತೀಯಲಿಂಗ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಈ ವರ್ಷ ದೇಶಾದ್ಯಂತ 21,65,805 ವಿದ್ಯಾರ್ಥಿಗಳು CBSE 10ನೇ ತರಗತಿ ಬೋರ್ಡ್ ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ 20,16,779 ಮಂದಿ ಉತ್ತೀರ್ಣರಾಗಿದ್ದಾರೆ. 1,95,799 ವಿದ್ಯಾರ್ಥಿಗಳು ಶೇ 90ಕ್ಕಿಂತ ಹೆಚ್ಚು ಅಂಕ ಗಳಿಸಿದ್ದಾರೆ ಎಂದು ಸಿಬಿಎಸ್‌ಇ ತಿಳಿಸಿದೆ. ಒಟ್ಟು ಶೇಕಡಾ 2ರಷ್ಟು ವಿದ್ಯಾರ್ಥಿಗಳು (44,297) ಶೇಕಡಾ 95 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ.

ಅಃಖಇ ಪ್ರಕಾರ, ತಿರುವನಂತಪುರಂ ಪ್ರದೇಶವು 99.91 ಶೇಕಡಾ ಉತ್ತೀರ್ಣತೆಯೊಂದಿಗೆ ದೇಶದಲ್ಲಿ ಮೊದಲ ಸ್ಥಾನದಲ್ಲಿದ್ದರೆ, ಬೆಂಗಳೂರು 99.18 ಶೇಕಡಾದೊಂದಿಗೆ ಎರಡನೇ ಸ್ಥಾನದಲ್ಲಿದೆ. 99.14ರಷ್ಟು ಉತ್ತೀರ್ಣರಾಗುವ ಮೂಲಕ ಚೆನ್ನೈ ವಿಭಾಗ ಮೂರನೇ ಸ್ಥಾನದಲ್ಲಿದೆ.

ಈ ವರ್ಷ 'ವಿಶೇಷ ಅಗತ್ಯವುಳ್ಳ ಮಕ್ಕಳು' ವಿಭಾಗದಲ್ಲಿ 278 ವಿದ್ಯಾರ್ಥಿಗಳು ಶೇಕಡಾ 90 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದರೆ, ಈ ವಿಭಾಗದ 58 ವಿದ್ಯಾರ್ಥಿಗಳು ಶೇಕಡಾ 95 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ. ಅಲ್ಲದೆ, ಒಟ್ಟು 1,34,774 ವಿದ್ಯಾರ್ಥಿಗಳು ಕಂಪಾರ್ಟ್‌ಮೆಂಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ಅಃಖಇ 10ನೇ ತರಗತಿ ಫಲಿತಾಂಶ ನೋಡಲು cbse.gov.in ಮತ್ತು cbse.nic.in ನಲ್ಲಿ ಪರಿಶೀಲಿಸಬಹುದು.


ಫಲಿತಾಂಶಗಳನ್ನು ಪರಿಶೀಲಿಸಲು cbseresults.nic.in, results.cbse.nic.in, digilocker.gov.in ಮತ್ತು results.gov.in. ವೆಬ್‌ಸೈಟ್‌ಗಳನ್ನು ನೋಡಬಹುದು. ಫಲಿತಾಂಶಗಳನ್ನು ಮೊಬೈಲ್ ಅಪ್ಲಿಕೇಷನ್– ಡಿಜಿಲಾಕರ್ ಮತ್ತು ಉಮಾಂಗ್‌ನಲ್ಲಿ ಕೂಡ ನೋಡಬಹುದು. ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ಪ್ರಧಾನ ಮಂತ್ರಿ ಮೋದಿ ಶುಭಾಶಯ ತಿಳಿಸಿ ಅವರ ಮುಂದಿನ ಪಯಣ ಯಶಸ್ವಿಯಾಗಿರಲಿ ಎಂದು ಹೇಳಿದ್ದಾರೆ.

ಸಿಬಿಎಸ್‌ಇ 12ನೇ ತರಗತಿಯ ಫಲಿತಾಂಶ ಪ್ರಕಟ: ಶೇ.87.33ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ



ನವದೆಹಲಿ: ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್(CBSE) 12ನೇ ತರಗತಿಯ ವಾರ್ಷಿಕ ಪರೀಕ್ಷೆಯ ಫಲಿತಾಂಶವನ್ನು ಶುಕ್ರವಾರ ಪ್ರಕಟಿಸಿದ್ದು, ಎಂದಿನಂತೆ ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ. ಒಟ್ಟು ಶೇ.87.33 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ತಿರುವನಂತಪುರ ಶೇ.99.91 ಫಲಿತಾಂಶದೊಂದಿಗೆ ಅಗ್ರಸ್ಥಾನದಲ್ಲಿದೆ. ಈ ಬಾರಿ ಶೇ. 90.68ರಷ್ಟು ಬಾಲಕಿಯರು ಉತ್ತೀರ್ಣರಾಗಿದ್ದು, ಹುಡುಗರಿಗಿಂತ ಶೇ.6.01ರಷ್ಟು ಮುಂದಿದ್ದಾರೆ. ಅನಾರೋಗ್ಯಕರ ಸ್ಪರ್ಧೆಯನ್ನು ತಪ್ಪಿಸಲು CBSE ತನ್ನ ವಿದ್ಯಾರ್ಥಿಗಳಿಗೆ ಮೊದಲ, ಎರಡನೇ ಮತ್ತು ಮೂರನೇ ಸ್ಥಾನಗಳನ್ನು ನೀಡುವುದಿಲ್ಲ. ಫೆ.15ರಿಂದ ಏ.5, 2023 ರವರೆಗೆ ನಡೆದ ಸಿಬಿಎಸ್‌ಇ 12ನೇ ತರಗತಿ ಪರೀಕ್ಷೆಗೆ ಸುಮಾರು 39 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದರು. ಸಿಬಿಎಸ್‌ಇ ಫಲಿತಾಂಶವನ್ನು cbseresults.nic.in ಅಧಿಕೃತ ವೆಬ್‌ಸೈಟ್‌ನಲ್ಲಿ ನೋಡಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.5.2023 ಶನಿವಾರ, ಮಳೆ ನಕ್ಷತ್ರ: ಕೃತ್ತಿಕ, 11.05.2023 ರಿಂದ 24.05.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ಅಷ್ಟಮಿ, ನಕ್ಷತ್ರ: ಧನಿಷ್ಠ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ನೈಸರ್ಗಿಕ ಸಾವಯವ ರೈತರ ಸಂತೆ :** ಸ್ಥಳ: 18ನೇ ಮುಖ್ಯ ರಸ್ತೆ, 8ನೇ ಅಡ್ಡ ರಸ್ತೆ, ಕಾಮಾಕ್ಷಿ ಆಸ್ಪತ್ರೆ ರಸ್ತೆ, ಹ್ಯಾಪಿಮನ್ ಪಾರ್ಕ್ ಪಕ್ಕ, ಕುವೆಂಪುನಗರ, ಬೆಳಗ್ಗೆ 10.30 ರಿಂದ.

■ **ಮೈಸೂರು ಆರ್ಟ್ ಗ್ಯಾಲರಿ :** ಸಾಧಕರೊಂದಿಗೆ ಸಂವಾದ, ತಿಂಗಳ ಸಾಧಕರು ದಿವ್ಯಜ್ಯೋತಿ ಚಾರಿಟೆಬಲ್ ಟ್ರಸ್ಟ್ ಸ್ಥಾಪಕ ಎಂ.ಎ. ಶಿವಪ್ರಕಾಶ್, ಮುಖ್ಯ ಅತಿಥಿಗಳು : ಜೆಎಸ್‌ಎಸ್ ಲಾ ಕಾಲೇಜು ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಎಂ.ಎಸ್. ವೇಣುಗೋಪಾಲ್, ಅಧ್ಯಕ್ಷತೆ : ಮೈಸೂರು ಆರ್ಟ್ ಗ್ಯಾಲರಿ ಸ್ಥಾಪಕ ಅಧ್ಯಕ್ಷ ಎಲ್. ಶಿವಲಿಂಗಪ್ಪ, ವಿಶೇಷ ಆಹ್ವಾನಿತರು : ಶ್ರೀಮತಿ ಎನ್. ಸತ್ಯಶೀಲ, ಓ.ಎಲ್. ವಿಜಯ, ಮೇಘನ ಶರತ್, ಅಮೃತ ಗಣೇಶ್, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11ಕ್ಕೆ.

■ **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ:** ರತ್ನ ಮಾನಸ ಹಿರಿಯ ವಿದ್ಯಾರ್ಥಿನಿಯರ ಸಂಘದ ವಾರ್ಷಿಕ ಮಹಾಸಭೆ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 11 ಗಂಟೆಗೆ

■ **ಮೈಸೂರು ರೈಲ್ವೆ ಪೆನ್ಷನರ್ಸ್ ವೆಲ್‌ಫೇರ್ ಅಸೋಸಿಯೇಷನ್ :** ಮಾಸಿಕ ಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಪಾರ್ಥಸಾರಥಿ, ಸ್ಥಳ: ಅಸೋಸಿಯೇಷನ್ ಆವರಣ, ಬೆಳಗ್ಗೆ 11.30ಕ್ಕೆ.

■ **ಸುರಭಿ ಗಾನಕಲಾಮಂದಿರ ಚಾರಿಟೆಬಲ್ ಟ್ರಸ್ಟ್ :** ಸಂಗೀತಾಮೃತ ವರ್ಷಿಣಿ ರಾಗಾಧಾರಿತ–ಮನೋಧರ್ಮ ಸಂಗೀತ ಶಿಬಿರ, ಸ್ಥಳ: ಸುರಭಿ ಗಾನಕಲಾಮಂದಿರ, ಗೋಕುಲಂ 3ನೇ ಹಂತ, ಸಂಜೆ 4.30ಕ್ಕೆ.

■ **ಸುರುಚಿ ರಂಗ ಮನೆ :** ಕಥೆ ಕೇಳೋಣ ಬನ್ನಿ, ಕಾರ್ಯಕ್ರಮ–775, ಕಥೆ ಹೇಳುವವರು : ನಿವೃತ್ತ ಮುಖ್ಯೋಪಾಧ್ಯಾಯಿನಿ ಮತ್ತು ಸಮಾಜ ಸೇವಕರಾದ ಶ್ರೀಮತಿ ಎಲ್. ನರಸು, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ.

■ **ಶ್ರೀ ರಾಘವೇಂದ್ರಸ್ವಾಮಿ ಸಮಿತಿ :** ಪಂಡಿತ್ ನರಸಿಂಹಾಚಾರ್ಯ ಘೋಟೆ ಅವರಿಂದ ಭಗವದ್ಗೀತೆ 8ನೇ ಅಧ್ಯಾಯದ ಪ್ರವಚನ, ಸ್ಥಳ: ಶ್ರೀ ರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮುಕ್ತಿದಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ

■ **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ಶ್ರೀ ಭಗವದ್ಗೀತಾ ಅಭಿಯಾನ, ಪಂಡಿತ್ ನರಸಿಂಹಾಚಾರ್ಯ ಘೋಟೆ ಅವರಿಂದ ಭಗವದ್ಗೀತೆ 8ನೇ ಅಧ್ಯಾಯದ ಪ್ರವಚನ, ಸ್ಥಳ: ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಸಂಜೆ 6.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಿಎಫ್‌ಟಿಆರ್‌ಐ ಸಿರಿಧಾನ್ಯದ ಸಿರಿ–ಪ್ರಾಯೋಜಿತ ಕಾರ್ಯಕ್ರಮ, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ–ಡಾ. ಮೈಸೂರ್ ಉಮೇಶ್, 7.15 ಭಾವಗೀತೆಗಳು, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಬಾನುಲಿ ಸರಣಿ – ರಾಜಮಾತೆ ಶ್ರೀಮತಿ ಪ್ರಮೋದಾ ದೇವಿ ಒಡೆಯರ್ ಅವರೊಂದಿಗೆ ಸಂವಾದ, ನಡೆಸಿಕೊಡುತ್ತಾರೆ–ದಿವಾಕರ ಹೆಗಡೆ, 9.00 ಕಾಫಿ ತಿಂಡಿ, 10.00 ಹೆಚ್.ಕೆ. ನರಸಿಂಹ ಮೂರ್ತಿ ಮತ್ತು ಹೆಚ್.ಎನ್. ಭಾಸ್ಕರ್–ಯುಗಳ ವಯೋಲಿನ್ ವಾದನ

ಮಧ್ಯಾಹ್ನ: 12.30 ದೇವರನಾಮ– ಅಜಿತ್ ಕಡ್ ಕಡೆ, ಎ.ಆರ್. ರಾಗಿಣಿ, 12.45 ಜನಪದ ಸಂಗೀತ – ಸಂಸಾರ ನಾಕೆ ನಾಟಕದ ಹಾಡುಗಳು, 1.00 ರಂಗಗೀತೆ–ರಾಜಪ್ಪ, 1.20 ಭಾವಗೀತೆ, 2.40 ಚಲನ ಚಿತ್ರ ಧ್ವನಿವಾಹಿನಿ– ಭಕ್ತ ಕುಂಬಾರ, 3.30 ಮಕ್ಕಳ ಮಂಟಪ–ಪ್ರತಿಭಾ ಪಲ್ಲವ– ಓದುವ ಹಾಗೂ ಗೋಳದಲ್ಲಿ ದೇಶಗಳನ್ನು ಗುರುತಿಸುವ ಬಾಲಕೃಷ್ಣನ ಪರಿಚಯ, ಪ್ರಸ್ತುತಿ– ಎಂ.ಎಸ್.ಭಾರತಿ, 4.00 ನಾಟಕ, 4.30 ನೆನಪಿನಂಗಳ–ಮಾಧ್ಯಮಗಳ ಕ್ರಿಯಾಶೀಲತೆ, ಸತ್ಯವೆಷ್ಟು, ಮಿಥ್ಯವೆಷ್ಟು? ಚರ್ಚೆ ಭಾಗವಹಿಸುವವರು ಡಾ.ಸಿ.ಕೆ.ಎನ್. ರಾಜಾ, ರಾಜಶೇಖರ ಕೋಟಿ, ಹೆಚ್.ಎಲ್.ಕೇಶವಮೂರ್ತಿ. ನಡೆಸಿಕೊಡುವವರು ನಿರಂಜನ ವಾನಳ್ಳಿ, 6.50 ಕೃಷಿರಂಗ–ತೋರಣ ಹೂರಣ, ಪ್ರಸ್ತುತಿ–ಜಿ. ಶಾಂತಕುಮಾರ್, 8.00 ಯುವವಾಣಿ, 9.15 ಸೈಬರ್ ಕ್ರೈಮ್ ಎಂಬ ಹೊಸ ಸಮಸ್ಯೆ, ಮಾತನಾಡುತ್ತಾರೆ ಡಾ. ರಾಮಕೃಷ್ಣ ಹೆಗಡೆ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ವಿದುಷಿ ಮಂಜರಿ ಅಲೆಗಾಂವಕರ್ – ಗಾಯನ

ಕಾಡಂದಿಗಾಗಿ ಹಾಕಿದ್ದ ಬಲೆಗೆ ಬಿದ್ದು ನರಳಿದ ಚಿರತೆ

● 8 ಗಂಟೆ ಬಳಿಕ ಚಿರತೆ ರಕ್ಷಿಸಿದ ಅರಣ್ಯ ಸಿಬ್ಬಂದಿ ● 3 ವರ್ಷದ ಗಂಡು ಚಿರತೆ ರಕ್ಷಿಸಿ ಅರಣ್ಯದಲ್ಲಿ ಬಿಡುಗಡೆ





ತುರ್ತು ಕಾರ್ಯಾಚರಣೆ ಮೂಲಕ ರಕ್ಷಣೆ

ಚಿರತೆ ಬಲೆಗೆ ಸಿಲುಕಿ ನರಳಾಡುತ್ತಿದ್ದ ವಿಷಯವನ್ನು ಗ್ರಾಮಸ್ಥರು ತಿಳಿಸಿದ ಕೂಡಲೇ ಅರಣ್ಯ ಸಿಬ್ಬಂದಿಗಳ ತಂಡ ಕ್ಷಿಪ್ರ ಕಾರ್ಯಾಚರಣೆ ನಡೆಸಿ ಚಿರತೆಯನ್ನು ರಕ್ಷಿಸಿದ್ದಾರೆ. ಗ್ರಾಮಸ್ಥರು ಬಲೆ ಹಾಕುವವರ ಬಗ್ಗೆ, ವನ್ಯಪ್ರಾಣಿಗಳನ್ನು ಬೇಟೆಯಾಡುವವರ ವಿರುದ್ಧ ಅರಣ್ಯ ಇಲಾಖೆಗೆ ಮಾಹಿತಿ ನೀಡಬೇಕು. ಮಾಹಿತಿ ನೀಡುವವರ ಗುರುತನ್ನು ಗೌಪ್ಯವಾಗಿರಿಸಲಾಗುತ್ತದೆ. ವನ್ಯಜೀವಿಗಳ ಬೇಟೆ ಈಗಲೇ ತಡೆಗಟ್ಟದಿದ್ದರೆ ಮುಂದಿನ ಪೀಳಿಗೆಗೆ ಕೆಲವು ಪ್ರಾಣಿಗಳು ನಶಿಸುತ್ತವೆ. ಈ ಹಿನ್ನೆಲೆಯಲ್ಲಿ ಎಲ್ಲರೂ ಅರಣ್ಯ ಇಲಾಖೆಗೆ ಸಹಕರಿಸಬೇಕು.

- ಕೃತಿಕಾ ಆಲನಹಳ್ಳಿ, ವೈಲ್ಡ್‌ಲೈಫ್ ವಾರ್ಡನ್

ಮೈಸೂರು, ಮೇ 12(ಎಂಟಿವೈ)– ಕಾಡಂದಿ ಬೇಟೆಗಾಗಿ ಹಾಕಿದ್ದ ಬಲೆಗೆ ಸಿಲುಕಿ ನರಳಾಡುತ್ತಿದ್ದ ಗಂಡು ಚಿರತೆಯೊಂದನ್ನು ಅರಣ್ಯ ಸಿಬ್ಬಂದಿಗಳ ತಂಡ 8 ಗಂಟೆ ಬಳಿಕ ರಕ್ಷಿಸಿ, ಉಪಚರಿಸಿ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಿದ್ದಾರೆ.

ಹೆಚ್.ಡಿ.ಕೋಟೆ ತಾಲೂಕಿನ ಹಂಪಾಪುರ ಹೋಬಳಿ ಆಲನಹಳ್ಳಿ ಗ್ರಾಮದಲ್ಲಿ ವಾಳವೊಂದರಲ್ಲಿ ಕಾಲು ಹಾದಿಯಲ್ಲಿ ಕಳೆದ ರಾತ್ರಿ ಯಾರೋ ದುಷ್ಕರ್ಮಿಗಳು ಕಾಡು ಹಂದಿಯನ್ನು ಬೇಟೆಯಾಡಲು ಬಲೆ ಅಳವಡಿಸಿದ್ದಾರೆ. ಮಳೆ ಬೀಳುತ್ತಿದ್ದ ಹಿನ್ನೆಲೆಯಲ್ಲಿ ಕಾಡಂದಿ ಬೇಟೆಯಾಡಿದರೆ ಯಾರಿಗೂ ತಿಳಿಯುವುದಿಲ್ಲ ಎಂದು ಬಲೆ ಹಾಕಿದ್ದಾರೆ. ಪ್ರಾಣಿಗಳು ಓಡಾಡುವ ಜಾಡಿನಲ್ಲಿ ಬಲೆ ಇರುವುದನ್ನು ಅರಿಯದ 3 ವರ್ಷದ ಗಂಡು ಚಿರತೆ ಬಲೆಗೆ ಸಿಲುಕಿದೆ.

ಗಾಬರಿಯಾದ ಚಿರತೆ ಬಿಡಿಸಿಕೊಳ್ಳಲು ಒದ್ದಾಡಿದೆ. ಇದರಿಂದ ಅದರ ಮೈಗೆ ಬಲೆ ಸುತ್ತಿಕೊಂಡಿದೆ. ಇದರಿಂದ ಮತ್ತಷ್ಟು ಗಲಿಬಿಲಿಯಾದ ಚಿರತೆಗೆ ಬಲೆಯ ದಾರವೆಲ್ಲಾ ಮೈಗೆ ಸುತ್ತಿಕೊಂಡಿದ್ದರಿಂದ ಏನೂ ಮಾಡಲಾಗದೆ ಒದ್ದಾಡತೊಡಗಿದೆ. ಬೆಳಗ್ಗೆ ಬಲೆ ಹಾಕಿರುವವರು ಚಿರತೆ ಬಲೆಗೆ ಸಿಲುಕಿರುವುದನ್ನು ನೋಡಿ ಗಾಬರಿಯಾಗಿ ಸ್ಥಳದಿಂದ ಕಾಲ್ಕಿತ್ತಿದ್ದಾರೆ. ಬೆಳಗ್ಗೆ 10 ಗಂಟೆಯ ನಂತರ ಜಾನುವಾರು ಮೇಯಿಸಲು ಹೋದ ಗ್ರಾಮಸ್ಥರಿಗೆ ಚಿರತೆ ನರಳಾಟ ಕೇಳಿಸಿದೆ. ಕಿರುಚಾಟ ಕೇಳಿ ಬಂದ ಸ್ಥಳಕ್ಕೆ ಹೋಗಿ ನೋಡಿದಾಗ ಚಿರತೆ ಬಲೆಗೆ ಸಿಲುಕಿ ನರಳಾಡುತ್ತಿದ್ದ ದೃಶ್ಯ ಕಂಡು ಬಂದಿದೆ. ಮುಂಜಾನೆಯಿಂದಲೇ ಬಲೆಗೆ ಸಿಲುಕಿ ಒದ್ದಾಡುತ್ತಿದ್ದ ಚಿರತೆ ನಿತ್ರಾಣಗೊಂಡಿರುವುದನ್ನು ಗಮನಿಸಿದ್ದಾರೆ. ಜೀವಂತ ಇದ್ದ ಚಿರತೆಯನ್ನು ಕಂಡು ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ.

ವಿಷಯ ತಿಳಿದು ಅರವಳಿಕೆ ತಜ್ಞರೊಂದಿಗೆ ಅರಣ್ಯ ಸಿಬ್ಬಂದಿಗಳ ತಂಡ ಮಧ್ಯಾಹ್ನ 2 ಗಂಟೆಗೆ ಆಗಮಿಸಿತು. ಬಲೆಯಲ್ಲಿ ಸಿಲುಕಿ ನರಳಾಡುತ್ತಿದ್ದ ಚಿರತೆಗೆ ಅರವಳಿಕೆ ಮದ್ದು ನೀಡಿ, ಪ್ರಜ್ಞೆ ತಪ್ಪಿಸಲಾಯಿತು. ಬಳಿಕ ಬಲೆಯಿಂದ ಬಿಡಿಸಿ, ಅದನ್ನು ಬೋನ್‌ನಲ್ಲಿರಿಸಲಾಯಿತು. ನಂತರ ಅದಕ್ಕೆ ಪ್ರಾಥಮಿಕ ಚಿಕಿತ್ಸೆ ನೀಡಿ ಉಪಚರಿಸಲಾಯಿತು. ನಂತರ ಬೋನ್ ಅನ್ನು ಗೂಡ್ಸ್ ವಾಹನದಲ್ಲಿ ಕೊಂಡೊಯ್ಯಲಾಯಿತು.

ಚಿರತೆಗೆ ಗಾಯ: ಬೋನ್‌ನಲ್ಲಿದ್ದ ಚಿರತೆಯನ್ನು ಸಾಗಿಸಲು ಅರಣ್ಯ ಇಲಾಖೆ ತಂದಿದ್ದ ಗೂಡ್ಸ್ ವಾಹನವನ್ನು ಹಳ್ಳದಿಂದ ಕೂಡಿದ್ದ ರಸ್ತೆಯಲ್ಲಿ ವೇಗವಾಗಿ ಚಾಲನೆ ಮಾಡಿಕೊಂಡು ಬಂದಿದ್ದರಿಂದ ಚಿರತೆಗೆ ಸಣ್ಣಪುಟ್ಟ ಗಾಯಗಳಾಗಿವೆ. ಗ್ರಾಮಸ್ಥರು ಚಿರತೆ ಪ್ರಾಣ ಉಳಿಸುವ ನಿಟ್ಟಿನಲ್ಲಿ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರು. ಆದರೂ, ಸ್ಥಳದಿಂದ ಚಿರತೆಯನ್ನು ಸಾಗಿಸಲು ಅರಣ್ಯ ಇಲಾಖೆ ಸಿಬ್ಬಂದಿಗಳು ಮಾಡಿದ ಆತುರಕ್ಕೆ ಮೊದಲೇ ನಿತ್ರಾಣಗೊಂಡಿದ್ದ ಚಿರತೆ ಮತ್ತಷ್ಟು ಅಘಾತಕೊಳ್ಳಗಾಗುವಂತೆ ಮಾಡಿದ್ದಾರೆ. ಬೋನ್‌ನಲ್ಲಿ ಮಲಗಿಸಿದ್ದ ಚಿರತೆ ಅತ್ತಿಂದಿತ್ತ ಹೊರಳಾಡಿ, ಬೋನ್ ಕಂಬಿಗೆ ತಲೆ ಬಡಿದು ಗಾಯವಾಗಿದೆ ಎಂದು ಗ್ರಾಮಸ್ಥರು ವಿಷಾದಿಸಿದರು. ಅರಣ್ಯ ಸಿಬ್ಬಂದಿಗಳ ವಿರುದ್ಧ ತೀವ್ರ ಅಸಮಾದಾನ ವ್ಯಕ್ತಪಡಿಸಿದ್ದಾರೆ.

ಸ್ಥಳಕ್ಕೆ ಡಿಸಿಎಫ್ ಬಸವರಾಜು, ವೈಲ್ಡ್ ಲೈಫ್ ವಾರ್ಡನ್ ಕೃತಿಕಾ ಆಲನಹಳ್ಳಿ ಹಾಗೂ ಇನ್ನಿತರರು ಆಗಮಿಸಿದ್ದರು.



ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹಾಗೂ ಶಾಸಕ ಜಿ.ಟಿ.ದೇವೇಗೌಡರು ಶುಕ್ರವಾರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರನ್ನು ಬೆಂಗಳೂರಿನ ಪದ್ಮನಾಭನಗರದ ಅವರ ನಿವಾಸದಲ್ಲಿ ಭೇಟಿ ಮಾಡಿ, ರಾಜ್ಯ ರಾಜಕಾರಣದ ಬೆಳವಣಿಗೆಗಳ ಬಗ್ಗೆ ಚರ್ಚೆ ನಡೆಸಿದರು.

ನಿರೀಕ್ಷಿತ ಫಲ ನೀಡದ ಪ್ರೋತ್ಸಾಹಕ ವಿಧಾನಗಳು

ಸುಧಾರಣೆ ಆಗದ ಮತದಾನ ಪ್ರಮಾಣ

ಮೈಸೂರು, ಮೇ 12(ಎಸ್‌ಬಿಡಿ)– ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಇನ್ನಿಲ್ಲದ ಜಾಗೃತಿ ಕಾರ್ಯಕ್ರಮ ನಡೆಸಿದರೂ ಮೈಸೂರು ನಗರ ವ್ಯಾಪ್ತಿಯ ಮೂರು ಕ್ಷೇತ್ರಗಳ ಮತದಾನ ಪ್ರಮಾಣ ನಿರೀಕ್ಷಿತ ಸುಧಾರಣೆ ಸಾಧ್ಯವಾಗಿಲ್ಲ.

ಜಿಲ್ಲೆಯಲ್ಲೇ ಕೃಷ್ಣರಾಜ ವಿಧಾನಸಭಾ ಕ್ಷೇತ್ರದಲ್ಲಿ ಅತೀ ಕಡಿಮೆ ಮತದಾನ ನಡೆದಿದೆ. ಈ ಬಾರಿ 59.55ರಷ್ಟು ಮತದಾನವಾಗಿದ್ದು ಕಳೆದ ಬಾರಿ(ಶೇ.58.86)ಗಿಂತ ಕೇವಲ ಶೇ.0.69ರಷ್ಟು ಹೆಚ್ಚಾಗಿದೆ. ಚಾಮರಾಜ ಕ್ಷೇತ್ರದಲ್ಲಿ ಈ ಬಾರಿ ಶೇ.61.05ರಷ್ಟು ಮತದಾನವಾಗಿದ್ದು ಕಳೆದ ಬಾರಿ(ಶೇ.59.18)ಗಿಂತ ಶೇ.1.87ರಷ್ಟು ಹೆಚ್ಚಾಗಿದೆ. ಇನ್ನು ನರಸಿಂಹರಾಜ ಕ್ಷೇತ್ರದಲ್ಲಿ ಕಳೆದ ಬಾರಿ(ಶೇ.61.43)ಗಿಂತ ಪ್ರಸಕ್ತ ಚುನಾವಣೆಯಲ್ಲಿ(ಶೇ.61.05) ಶೇ.2.18ರಷ್ಟು ಹೆಚ್ಚು ಮತದಾನವಾಗಿದೆ.

ಅನೇಕ ಚುನಾವಣೆಗಳಲ್ಲಿ ನಗರ ಪ್ರದೇಶದ ಮತದಾನ ಪ್ರಮಾಣ ಕಡಿಮೆಯಿರುವ ಹಿನ್ನೆಲೆಯಲ್ಲಿ ವಿಭಿನ್ನ ರೀತಿಯಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಮತದಾನದ ಮಹತ್ವ ಸಾರುವ ಹೋಲ್ಡಿಂಗ್ಸ್ ಅಳವಡಿಕೆ, ಚಿತ್ರಕಲಾ ಪ್ರದರ್ಶನ, ವಿಶೇಷ ಚೇತನರಿಂದ ತ್ರಿಚಕ್ರ ವಾಹನಗಳ ರ‍್ಯಾಲಿ, ವಿಂಟೇಜ್ ಕಾರುಗಳ ರ‍್ಯಾಲಿ, ಮಾನವ ಸರಪಳಿ ನಿರ್ಮಾಣ, ಬಣ್ಣದ ರಂಗೋಲಿ, ವಿವಿಧ ಜಾಥಾಗಳು, ಕೈಗಾರಿಕೆಗಳಲ್ಲಿ ಅರಿವು ಕಾರ್ಯಕ್ರಮ ನಡೆಸಲಾಗಿತ್ತು.

ಜಿಲ್ಲಾ ಸ್ವೀಪ್ ರಾಯಭಾರಿ ಜಾವಗಲ್ ಶ್ರೀನಾಥ್, ಯೋಗ ಸಾಧಕಿ ಖುಷಿ ನೇತೃತ್ವದಲ್ಲಿ ಜಾಗೃತಿ ಮೂಡಿಸಲಾಗಿತ್ತು. ಜಿಲ್ಲಾಧಿಕಾರಿ ಡಾ.ಕೆ.ರಾಜೇಂದ್ರ ಅವರು ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗಿಯಾಗುವಂತೆ ನಿರಂತರ ಮನವಿ ಮಾಡಿದ್ದರು. ಅಲ್ಲದೆ ಹಲವು ಮತಗಟ್ಟೆಗಳನ್ನು ವಿಶೇಷ ರೀತಿಯಲ್ಲಿ ಸಿಂಗರಿಸಲಾಗಿತ್ತು. ಕೆಲ ಮತಗಟ್ಟೆ ಸಿಬ್ಬಂದಿ ಸಾಂಪ್ರದಾಯಿಕ ಧಿರಿಸಿನೊಂದಿಗೆ ಕಾರ್ಯ ನಿರ್ವಹಿಸಿದರು. ಮತದಾರರ ಸೆಳೆಯಲು ಏನೆಲ್ಲಾ ಕ್ರಮ ವಹಿಸಿದರೂ ನಿರೀಕ್ಷಿತ ಸುಧಾರಣೆಯಾಗಿಲ್ಲ. ನಗರದ ವಿದ್ಯಾವಂತರಲ್ಲಿ ಮತದಾನದ ಹಕ್ಕು ಚಲಾಯಿಸಲು ಯಾಕಿಷ್ಟು ಅಸಡ್ಡೆ ಎನ್ನುವುದನ್ನು ಅರಿತು ಮುಂಬರುವ ಚುನಾವಣೆಗಳಲ್ಲಿ ಮತ್ತಷ್ಟು ಪರಿಣಾಮಕಾರಿ ಕ್ರಮ ವಹಿಸಬೇಕಷ್ಟೆ.

ಎಸ್‌ಎಸ್‌ಎಲ್‌ಸಿ: ಎಸ್. ಪ್ರಜ್ಞಾಗೆ 527 ಅಂಕ



ಮೈಸೂರು, ಮೇ 12– ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಯಲ್ಲಿ ಎಲೆತೋಟದ ಬಳಿಯಿರುವ ಸೇಂಟ್ ಮೇರಿಸ್ ಬಾಲಕಿಯರ ಶಾಲೆಯ ವಿದ್ಯಾರ್ಥಿನಿ ಎಸ್. ಪ್ರಜ್ಞಾ 527 ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಕನಕಗಿರಿ ನಿವಾಸಿ ಪ್ಲಂಬರ್ ಸುರೇಶ್ ಕುಮಾರ್.ಎಂ.ಎಸ್ (ಸರ್.ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ) ಮತ್ತು ಆಶಾರಾಣಿ ಅವರ ಪುತ್ರಿ.



ಮೈಸೂರಿನ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ತನ್ವೀರ್ ಸೇಠ್ ಅವರ ಗೆಲುವಿಗಾಗಿ ಅವರ ಬೆಂಬಲಿಗರು ಎಫ್‌ಟಿಎಸ್ ವೃತ್ತದ ಬಳಿಯ ಶ್ರೀ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನ ದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಶರತ್, ಸುಮಂತ್, ಮೋಹನ್, ಪ್ರಕಾಶ್ ಮತ್ತಿತರರಿದ್ದರು.

ರೋಟರಿ ಗಾಯತ್ರಿ ಪ್ರಶಸ್ತಿಗೆ ಎಸ್‌ಎಸ್‌ಎಲ್‌ಸಿ ಪಾಸಾದವರಿಂದ ಅರ್ಜಿ ಆಹ್ವಾನ

ಮೈಸೂರು, ಮೇ 12– ರೋಟರಿ ಮೈಸೂರು ವತಿಯಿಂದ ನೀಡಲಾಗುವ 'ರೋಟರಿ ಗಾಯತ್ರಿ ಪ್ರಶಸ್ತಿ'ಗೆ ಮೆಟ್ರಿಕ್ಯುಲೇಷನ್(10ನೇ ತರಗತಿ) ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿ ಪಡೆದಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೈಸೂರಿನ ಗಾಯತ್ರಿ ಚಿತ್ರಮಂದಿರದ ಮಾಲೀಕರಾಗಿದ್ದ ಲೇಟ್ ರಾಮಚಂದ್ರ ಹಾಗೂ ಕುಟುಂಬದವರು ಈ ಪ್ರಶಸ್ತಿಯ ಸಂಸ್ಥಾಪಕರಾಗಿದ್ದು, 2022–23ನೇ ಸಾಲಿನ ಮೆಟ್ರಿಕ್ಯುಲೇಷನ್ ಪರೀಕ್ಷೆಯಲ್ಲಿ 620 ಹಾಗೂ ಅದಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ, ಶಾಲೆಯ ಮುಖ್ಯಸ್ಥರು ದೃಢೀಕರಿಸಿದ ತಾತ್ಕಾಲಿಕ ಅಂಕಪಟ್ಟಿಯೊಂದಿಗೆ ಮೇ 20ರ ಸಂಜೆ 6 ಗಂಟೆಯೊಳಗೆ ಗೌರವಾನ್ವಿತ ಕಾರ್ಯದರ್ಶಿಗಳು, ರೋಟರಿ ಮೈಸೂರು, ರೋಟರಿ ಕೇಂದ್ರ, ಜೆಎಲ್‌ಬಿ ರಸ್ತೆ, ಮೈಸೂರು–570004, ಈ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು. ಮೇ 25ರಂದು ಸಂಜೆ 6.30ಕ್ಕೆ ಕೆಆರ್‌ಎಸ್ ರಸ್ತೆಯ ರೋಟರಿ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಹೆಚ್ಚಿನ ಮಾಹಿತಿಗೆ ದೂ.ಸಂ.0821–4247823 ಸಂಪರ್ಕಿಸಬಹುದು ಎಂದು ರೋಟರಿ ಮೈಸೂರು ಅಧ್ಯಕ್ಷ ಕೆ.ಸುಬ್ರಮಣ್ಯರಾವ್ ತಿಳಿಸಿದ್ದಾರೆ.

ಈಗ ನೀರು ಕಾಯಿಸಿ, ಆರಿಸಿ ಬಳಸುವುದು ಅವಶ್ಯ

ಮೈಸೂರು, ಮೇ 12(ಎಸ್‌ಬಿಡಿ)– ಮಳೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ನೀರನ್ನು ಬಿಸಿಮಾಡಿ ಆರಿಸಿದ ಬಳಿಕ ಸೇವಿಸುವಂತೆ ಮೈಸೂರು ನಗರ ಪಾಲಿಕೆ ಸೂಚನೆ ನೀಡಿದೆ. ಕೆಲ ದಿನಗಳಿಂದ ಎಲ್ಲೆಡೆ ಮಳೆಯಾಗಿದೆ. ಅಲ್ಲದೆ ಜೂನ್ ತಿಂಗಳಿಂದ ಮುಂಗಾರು ಪ್ರಾರಂಭವಾಗುತ್ತಿದೆ. ಈ ಸಂದರ್ಭದಲ್ಲಿ ನೀರಿನ ರಾಸಾಯನಿಕ, ಸೂಕ್ಷ್ಮಾಣು ಅಂಶಗಳಲ್ಲಿ ವ್ಯತ್ಯಯ ಉಂಟಾಗುವುದು ಸಹಜ. ಪಾಲಿಕೆಯಿಂದ ನೀರನ್ನು ಶುದ್ಧೀಕರಿಸಿ ಸರಬರಾಜು ಮಾಡಲಾಗುತ್ತಿದೆಯಾದರೂ ಸಾರ್ವಜನಿಕರು ಮುಂಜಾಗ್ರತೆ ವಹಿಸುವುದು ಒಳ್ಳೆಯದು.

ಪೂರೈಕೆಯಾಗುವ ನೀರನ್ನು ಹಾಗೆಯೇ ಸೇವಿಸದೆ ಕುದಿಸಿ, ಆರಿಸಿದ ನಂತರ ಬಳಸಬೇಕು. ಆರೋಗ್ಯ ದೃಷ್ಟಿಯಿಂದ ಎಲ್ಲರೂ ಈ ಕ್ರಮ ಅನುಸರಿಸಬೇಕು ಎಂದು ಪಾಲಿಕೆಯ ನೀರು ಸರಬರಾಜು ಮತ್ತು ಒಳಚರಂಡಿ ಪಶ್ಚಿಮ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊರೊನಾ ವೇಳೆ ವೈದ್ಯರು ನರ್ಸ್‌ಗಳ ಸೇವೆ ಅನನ್ಯ

ಹಿರಿಯ ವೈದ್ಯ ಡಾ.ಆರ್.ರಾಜೇಂದ್ರ ಪ್ರಸಾದ್



ಮೈಸೂರು, ಮೇ 12(ಎಸ್‌ಪಿಎನ್)– ವಿಶ್ವಾದ್ಯಂತ ಕೊರೊನಾ ಸಾಂಕ್ರಾಮಿಕ ರೋಗವನ್ನು ಕೊನೆಗಾಣಿಸುವ ನಿರ್ಣಾಯಕ ಹೋರಾಟದಲ್ಲಿ ವೈದ್ಯರು ಮತ್ತು ನರ್ಸ್‌ಗಳ ಸೇವೆ ಪ್ರಮುಖ ಪಾತ್ರ ವಹಿಸಿತ್ತು ಎಂದು ಹಿರಿಯ ವೈದ್ಯ ಡಾ.ಆರ್.ರಾಜೇಂದ್ರಪ್ರಸಾದ್ ತಿಳಿಸಿದರು.

ಮೈಸೂರು ರಾಮಕೃಷ್ಣನಗರ 'ಇ ಮತ್ತು ಎಫ್' ಬ್ಲಾಕ್‌ನಲ್ಲಿರುವ ಸುಯೋಗ್ ಆಸ್ಪತ್ರೆ ಆವರಣದಲ್ಲಿ ಸುಯೋಗ್ ಕಾಲೇಜ್ ಆಫ್ ನರ್ಸಿಂಗ್ ವತಿಯಿಂದ ಆಯೋಜಿಸಿದ್ದ 'ವಿಶ್ವ ನರ್ಸಿಂಗ್ ದಿನಾಚರಣೆ' ಯನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ರೋಗಿಯೊಬ್ಬರು ಆಸ್ಪತ್ರೆಗೆ ಸೇರಿದಾಗ ಅಲ್ಲಿ ವೈದ್ಯರು ಚಿಕಿತ್ಸೆ ಕೊಡುತ್ತಾರೆ. ಆದರೆ, ರೋಗಿಗಳು ಗುಣಮುಖವಾಗುವಲ್ಲಿ ನರ್ಸ್‌ಗಳ ಸೇವೆಯೂ ಮುಖ್ಯವಾಗಿರುತ್ತದೆ. ಅಲ್ಲದೆ, ರೋಗಿ ಮತ್ತು ವೈದ್ಯರ ನಡುವಿನ ಕೊಂಡಿಯಾಗಿ ನರ್ಸ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೊರೊನಾ ಸಂದರ್ಭದಲ್ಲಿ ರೋಗಿಯ ಪ್ರಾಣ ಉಳಿಸಲು ತಮ್ಮ ಜೀವದ ಹಂಗು ತೊರೆದು ಹೋರಾಟ ನಡೆಸಿದ್ದಾರೆ ಎಂದು ತಿಳಿಸಿದರು.

ಫ್ಲಾರೆನ್ಸ್ ನೈಟಿಂಗೇಲ್ ಅವರು 1820ರ ಮೇ 12ರ ಇಟಲಿಯ ಫ್ಲಾರೆನ್ಸ್‌ನಲ್ಲಿ ಜನಿಸಿದರು. ಆರೋಗ್ಯದ ಕ್ಷೇತ್ರ ಸುಧಾರಣೆಗೆ ಅವರ ಸೇವೆ ಅನನ್ಯ ಇವರನ್ನು ಆಧುನಿಕ ಶುಶ್ರೂಷೆಯ ಸಂಸ್ಥಾಪಕಿ ಎಂದು ಕರೆಯಲಾಗುತ್ತಿದೆ. ಇದರ ಹೊರತಾಗಿಯೂ ನೈಟಿಂಗೇಲ್ ಅವರನ್ನು ಸಮಾಜ ಸುಧಾರಕಿ ಹಾಗೂ ಸಂಖ್ಯಾಶಾಸ್ತ್ರಜ್ಞರು ಎಂದು ಸಮಾಜದಲ್ಲಿ ಗುರುತಿಸಿಕೊಂಡಿದ್ದಾರೆ ಎಂದು ತಿಳಿಸಿದರು.

1853ರಿಂದ 1856ರ ಅವಧಿಯಲ್ಲಿ ಜರುಗಿದ ಯುದ್ಧದ ವೇಳೆ ಗಾಯಗೊಂಡಿದ್ದ ಸಾವಿರಾರು ಬ್ರಿಟಿಷ್ ಸೈನಿಕರನ್ನು ಶುಶ್ರೂಷೆ ಮಾಡಿ, ಬದುಕಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಅಲ್ಲದೆ, 150ಕ್ಕೂ ಹೆಚ್ಚು ಪುಸ್ತಕಗಳು ಮತ್ತು ಆರೋಗ್ಯ ಕ್ಷೇತ್ರದ ಸಮಸ್ಯೆಗಳ ಕುರಿತು ವರದಿಗಳನ್ನು ಬರೆದಿದ್ದಾರೆ. ಇವರನ್ನು 'ಲೇಡಿ ವಿತ್ ದಿ ಲ್ಯಾಂಪ್' ಎಂದೂ ಕರೆಯಲಾಗುತ್ತದೆ ಎಂದರು.

ಫ್ಲಾರೆನ್ಸ್ ನೈಟಿಂಗೇಲ್ ಅವರ ಸೇವೆ ಕುರಿತು ಹೇಳುವುದಾದರೆ, 1860ರಲ್ಲಿ ಲಂಡನ್ನಿನಲ್ಲಿ ಫ್ಲಾರೆನ್ಸ್ ನೈಟಿಂಗೇಲ್ ಸೆಂಟ್ ಥಾಮಸ್ ಹೆಸರಿನ ಆಸ್ಪತ್ರೆಯೊಂದನ್ನು ತೆರೆದು ನೂರಾರು ಮಹಿಳೆಯರಿಗೆ ಕೆಲಸ ನೀಡಿದ್ದರು. ಈ ಮೂಲಕ ವೃತ್ತಿಪರ ಶುಶ್ರೂಷೆಗೆ ಅಡಿಪಾಯ ಹಾಕಿ, ನರ್ಸಿಂಗ್ ಕ್ಷೇತ್ರದಲ್ಲಿ ಆಧುನಿಕತೆ ಸ್ಪರ್ಶ ನೀಡಿದ ಕೀರ್ತಿ ಫ್ಲಾರೆನ್ಸ್ ನೈಟಿಂಗೇಲ್ ಅವರಿಗೆ ಸಲ್ಲುತ್ತದೆ. ಅಲ್ಲದೆ, ಆರೋಗ್ಯ ಕ್ಷೇತ್ರದ ಇವರ ಸೇವೆಗಾಗಿ ಅನೇಕ ಪ್ರಶಸ್ತಿಗಳು ಸಂದಿವೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಹಿರಿಯ ಪತ್ರಕರ್ತ ಎಂ.ಆರ್. ಸತ್ಯನಾರಾಯಣ, ಸುಯೋಗ್ ಆಸ್ಪತ್ರೆಯ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ನಿರ್ದೇಶಕಿ ಡಾ.ಸೀಮಾ ಯೋಗಣ್ಣ ಸಿಇಓ ಡಾ.ಎಂ.ವಿ.ಮಂಜುನಾಥ್, ನಿರ್ದೇಶಕ ಮೈಸೂರು ವಕೀಲರ ಸಂಘ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಉಮೇಶ್, ಸುಯೋಗ್ ಕಾಲೇಜ್ ಆಫ್ ನರ್ಸಿಂಗ್ ಪ್ರಾಂಶುಪಾಲ ಡಾ.ಯಶಿತಾ ರಾಜ್ ಉಪಸ್ಥಿತರಿದ್ದರು.

ಭಾರೀ ಮಳೆಗೆ ಮಲೆಮಹದೇಶ್ವರ ಬೃಹತ್ ಪ್ರತಿಮೆಯ ತಡೆಗೋಡೆ ಕುಸಿತ



ಚಾಮರಾಜನಗರ, ಮೇ 12–ಜಿಲ್ಲೆಯಾದ್ಯಂತ ಕಳೆದೆರಡು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ರಾಜ್ಯದ ಪ್ರಮುಖ ಯಾತ್ರಾಸ್ಥಳವಾದ ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟದ ದೀಪದಗಿರಿ ಒಡ್ಡುವಿನಲ್ಲಿ ನಿರ್ಮಿಸಿರುವ 108 ಅಡಿಯ ಮಲೆಮಹದೇಶ್ವರ ಪ್ರತಿಮೆಯ ಮುಂಭಾಗದ ತಡೆಗೋಡೆ ಕುಸಿದಿದೆ.

ಪ್ರತಿಮೆ ಸ್ಥಳದಲ್ಲಿ ಕಾಮಗಾರಿಗಳು ನಡೆಯುತ್ತಿರುವುದರಿಂದ ಭಕ್ತರ ಪ್ರವೇಶಕ್ಕೆ ನಿರ್ಬಂಧ ವಿಧಿಸಿರುವುದರಿಂದ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಇನ್ನೆರಡು ದಿನಗಳಲ್ಲಿ ತಡೆಗೋಡೆ ನಿರ್ಮಾಣ ಮಾಡಲಾಗುವುದು ಎಂದು ಪ್ರಾಧಿಕಾರ ತಿಳಿಸಿದೆ. ಚಾಮರಾಜನಗರ ಜಿಲ್ಲೆಯಲ್ಲಿ ಈಗಾಗಲೇ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದ್ದು, ಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಅಪಾರ ಬೆಳೆ ಹಾನಿಯಾಗಿದೆ ತಡರಾತ್ರಿ ಸುರಿದ ಅಕಾಲಿಕ ಮಳೆಯಲ್ಲಿ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದ ಕೆ.ಸಿದ್ದರಾಜು ಮನೆಗೆ ಸಿಡಿಲು ಬಡಿದು ಗೋಡೆ ಬಿರುಕು ಬಿಟ್ಟಿದೆ. ಪರಿಣಾಮ ಮನೆಯೊಳಗಿದ್ದ ಸಿದ್ದರಾಜು, ಪತ್ನಿ ಮಹೇಶ್ವರಿ ಹಾಗೂ ಮಕ್ಕಳಾದ ತರುಣ್, ಸಿದ್ದಾರ್ಥ್‌ಗೆ ಸಣ್ಣಪುಟ್ಟ ಗಾಯಗಳಾಗಿದೆ.

ಪಿ.ಜಿ. ಪಾಳ್ಯ ಗ್ರಾಪಂ ವ್ಯಾಪ್ತಿಯ ಮೈಸೂರಪ್ಪನ ದೊಡ್ಡಿ ಗ್ರಾಮದಲ್ಲಿ ಗುಡುಗು ಮಿಂಚು ಸಹಿತ ಭಾರಿ ಮಳೆಯಾಗಿದ್ದು, ನಾಲ್ಕು ವಿದ್ಯುತ್ ಕಂಬ ಮತ್ತು ಮರಗಳು ಬುಡ ಸಮೇತ ರಸ್ತೆಗುರುಳಿವೆ. ಹನೂರು ತಾಲೂಕಿನ ಮಲ್ಲಯನಪುರ ಗ್ರಾಮದಲ್ಲಿ ಸಿಡಿಲು ಬಡಿದು ಹಸುವೊಂದು ಮೃತಪಟ್ಟಿದೆ.

ನಕ್ಕರೆ ಅದೇ ಸ್ವರ್ಗ

ಮೇಷ್ಟು : ಮಕ್ಕಳೇ ಈ ದಿನದ ಪಾಠ ಶುರು ಮಾಡೋಣವಾ?
ಮಕ್ಕಳು : ಆಯ್ತು ಸರ್...
ಮೇಷ್ಟು : ಲೇ... ಗುಂಡ ಶಬ್ದ ಮಾಲಿನ್ಯಕ್ಕೆ ಏನು ಮಾಡಬೇಕು?
ಮಕ್ಕಳು : ಅದು, ಅದು... ಕಿವಿ ಮುಚ್ಚೇಕು ಸರ್...

ಮೈಸೂರು ಮಿತ್ರ
ಶನಿವಾರ, 13 ಮೇ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........
ನಿನ್ನ ಆಸೆ, ಇಚ್ಛೆಗಳನ್ನು ದಮನಗೊಳಿಸುವುದು ಪುಣ್ಯ. ನಿರಪರಾಧಿಗಳನ್ನು ಸತಾಯಿಸುವುದು ಮಹಾಪಾಪ. –ಭಗವಾನ್ ಮಹಾವೀರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮುಖ ನೋಡಿ ಮನಸ್ಸು ತಿಳಿದಂತೆ

ನಿಮ್ಮ ಪತ್ರಗಳು

ರಾಜ್ಯದಲ್ಲಿ ಬದಲಾವಣೆಯ ಪರ್ವ ಆರಂಭ

ಮಾನ್ಯರೆ,

ಚುನಾವಣೆ 2023 ಈಗಷ್ಟೇ ಮುಗಿದು ಮೇ 13ರ ಫಲಿತಾಂಶಕ್ಕಾಗಿ ಕಾಯಲಾಗುತ್ತಿದೆ. ಜನರಿಗೆ, ಪಕ್ಷದ ಕಾರ್ಯಕರ್ತರಿಗೆ ಮತ್ತು ಚುನಾವಣೆಯ ಕಣದಲ್ಲಿದ್ದ ಅಭ್ಯರ್ಥಿಗಳಿಗೆ ಒಂದು ಬಗೆಯ ತವಕ, ಕುತೂಹಲ ಶುರುವಾಗಿದೆ. ಫಲಿತಾಂಶ ಹೊರಬಿದ್ದು ಬೇಗನೇ ನೂತನ ಸರ್ಕಾರ ರಚನೆಯಾಗಿ ಅಭಿವೃದ್ಧಿ ಕಾರ್ಯಗಳಿಗೆ ಆದಷ್ಟು ಬೇಗ ಚಾಲನೆ ಸಿಗಲೆಂದು ಆಶಿಸೋಣ.

ಈಗಾಗಲೇ ಜನರಿಗೆ ಅಗತ್ಯವಾದ ವಸ್ತುಗಳ ಬೆಲೆ ಏರಿಕೆಯಿಂದ ಆದ ನೋವು, ಕನಿಷ್ಠ ಬೆಂಬಲ ಬೆಲೆ ಸಿಗದೇ ಪರದಾಡಿದ ರೈತಾಪಿ ವರ್ಗ, ಉದ್ಯೋಗ ಸೃಷ್ಟಿ ಆಗದೇ ಕೆಲಸ ಲಭಿಸದ ಯುವಜನರ ನಿರುದ್ಯೋಗದ ತೀವ್ರತೆ, ಪರೋಕ್ಷವಾಗಿ ನೋವುಂಡ ಮಹಿಳಾವರ್ಗ, ಮೀಸಲಾತಿ ಗೊಂದಲ, ಹೀಗೆ ಹತ್ತು ಹಲವು ಸಮಸ್ಯೆಗಳನ್ನು ಹೊತ್ತ ರಾಜ್ಯದ ಪ್ರಜ್ಞಾವಂತ ಜನರು ಈ ಬಾರಿ ಬದಲಾವಣೆ ಬಯಸಿರುವುದು ಸುಳ್ಳಲ್ಲ. ನೂತನ ಯೋಜನೆಗಳನ್ನು ಜನಪರವಾಗಿ ರೂಪಿಸಲು ಆಗದ, ಮನೆ ಬಳಕೆಯ ಸಿಲಿಂಡರ್ ಬೆಲೆ ಹೆಚ್ಚಾದಾಗ ಸಿಗುತ್ತಿದ್ದ ಒಂದಷ್ಟು ರಿಯಾಯಿತಿಯನ್ನು ಮೂಗಿಗೆ ತುಪ್ಪ ಸವರಿದಂತೆ ಸವರಿ ಆನಂತರ ನಿಲ್ಲಿಸಿದ್ದು, ಕನಿಷ್ಠ ಬೆಂಬಲ ಬೆಲೆ ನೀಡುವಲ್ಲಿ ವಿಳಂಬ ನಿಲುವು ಹೊಂದಿರುವ ಸರ್ಕಾರವನ್ನು ತೆಗೆದು ನೂತನ ಸರ್ಕಾರಕ್ಕಾಗಿ ಬದಲಾವಣೆ ಬಯಸಿದ್ದಾರೆ.

ಮುಂದೆ ಸರಳ ಬಹುಮತಕ್ಕೆ ಜನರ ಒಲವು ಹೆಚ್ಚೇ ಇದೆ ಎಂಬುದನ್ನು ನಾವೀಗಾಗಲೇ ಚುನಾವಣೆಯ ಸಂದರ್ಭದಲ್ಲಿ ನೋಡಿಯಾಗಿದೆ. ಮುಂದೆ ಬಂದಂತಹ ಸರ್ಕಾರ ಇವೆಲ್ಲಾ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಪರಿಹಾರ ನೀಡಬೇಕಾಗಿದೆ. ಜನರು ಇಟ್ಟಿರುವ ನಂಬಿಕೆಯನ್ನು ಹುಸಿಗೊಳಿಸದಂತೆ ನೋಡಿ ಕೊಳ್ಳಬೇಕಾಗಿದೆ. ರಾಜ್ಯದಲ್ಲಿ ಆರಂಭವಾಗಿರುವ ಬದಲಾವಣೆಯ ಪರ್ವ ಹೊಸದಾದ ಚೈತನ್ಯ ತಂದು ದೀನ ದಲಿತರ ಮತ್ತು ಶೋಷಿತ ಜನರ ದನಿಯಾಗುವ ಮೂಲಕ ಅಭಿವೃದ್ಧಿಯ ಕಡೆಗೆ ಸಾಗಲಿ ಎಂದು ಮನದುಂಬಿ ಆಶಿಸೋಣ.

–ಎ ಎಸ್ ಗೋವಿಂದೇಗೌಡ, ಅರೇನಹಳ್ಳಿ ಗ್ರಾಮ, ಪಿರಿಯಾಪಟ್ಟಣ ತಾ.

ಮತದಾರನ ಧೈರ್ಯ ಮೆಚ್ಚಲೇಬೇಕು...!



ಮಾನ್ಯರೆ,

ಮಂಡ್ಯ ಜಿಲ್ಲೆಯ, ಕೆ.ಆರ್. ಪೇಟೆ ತಾಲೂಕಿನ ಬೂಕನಕೆರೆ ಹೋಬಳಿಯ ಗಂಜಿಗೆರೆ ಗ್ರಾಮದ ಜನರು ತಮ್ಮ ಮನೆ ಮುಂದೆ ಅದೇ ಗ್ರಾಮದ ಬಿಜೆಪಿ ಕಾರ್ಯಕರ್ತರು ಮತ ಹಾಕಲು ಆಮಿಷ ಒಡ್ಡಿ, ಸೀರೆ ಮತ್ತು ಕೋಳಿಯನ್ನು ಇಟ್ಟಿದ್ದರು.

ಇದನ್ನು ಇಟ್ಟಿದ್ದವರ ಮನೆ ಮುಂದೆಯೇ ಎಸೆದು ತಮ್ಮ ಮತ ಮಾರಾಟಕ್ಕಿಲ್ಲವೆಂದು ತಮ್ಮ ಪ್ರಜ್ಞಾವಂತಿಕೆ ತೋರಿರುವುದನ್ನು ಮತ್ತು ಅವರ ಧೈರ್ಯವನ್ನು ಮೆಚ್ಚಲೇ ಬೇಕು. ಈ ರೀತಿಯ ಮತಕ್ಕಾಗಿ ಅಮಿಷ ಒಡ್ಡುವವರ ವಿರುದ್ಧ ಚುನಾವಣಾ ಆಯೋಗವೇ ಸ್ವಯಂ ಪ್ರೇರಿತ ದೂರು ದಾಖಲಿಸಿ ತನಿಖೆ ನಡೆಸಬೇಕು. ಅಲ್ಲದೆ ಇಂತಹ ಮತದಾರರನ್ನು ಚುನಾವಣಾ ಆಯೋಗವೇ ಅಭಿನಂದಿಸಬೇಕು. ಇದರಿಂದಾಗಿ ಮತದಾರರಿಗೆ ಧೈರ್ಯ ತುಂಬುವ ಕೆಲಸವಾಗುತ್ತದೆ. ಕೆ.ಆರ್. ಪೇಟೆ, ವಿಧಾನಸಭಾ ಕ್ಷೇತ್ರಾದ್ಯಂತ ಸುಮಾರು ನಾಲ್ಕು ಲಕ್ಷ ಸೀರೆಗಳನ್ನು ಹಂಚಿದ್ದಾರೆಂದು ಇಲ್ಲಿಯ ಮತದಾರರು ಆರೋಪಿಸಿದ್ದಾರೆ. ಈ ಬಗ್ಗೆಯು ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು.

–ಬೂಕನಕೆರೆ ವಿಜೇಂದ್ರ, ಮೈಸೂರು

ಮತದಾನೋತ್ತರ ಸಮೀಕ್ಷೆ: ಅಭ್ಯರ್ಥಿಗಳಲ್ಲಿ ತಳಮಳ

ಮಾನ್ಯರೆ.

ಕರ್ನಾಟಕ ವಿಧಾನಸಭೆ ಚುನಾವಣೆಯ ಮತದಾನ ಮುಗಿದಿದ್ದು, ಮತದಾರರ ಮನದಾಳದ ಫಲಿತಾಂಶ ಮಾತ್ರ ಇನ್ನೂ ನಿಗೂಢವಾಗಿದೆ.

ಎರಡು ತಿಂಗಳಿಂದ ಕ್ಷೇತ್ರ ಸುತ್ತುತ್ತಾ ಮತಯಾಚನೆಯಲ್ಲಿ ತೊಡಗಿದ್ದ ಅಭ್ಯರ್ಥಿಗಳು ಮತದಾನದ ನಂತರ ರಿಲ್ಯಾಕ್ಸ್ ಮೂಡಿನಲ್ಲಿ ಇದ್ದರೂ ಸಮೀಕ್ಷೆಗಳ ಲೆಕ್ಕಚಾರಗಳು ಅಭ್ಯರ್ಥಿಗಳಲ್ಲಿ ತಳಮಳ ಉಂಟು ಮಾಡಿದೆ ಎಂದರೆ ತಪ್ಪಾಗಲಾರದು. ಸಮೀಕ್ಷೆಗಳ ಲೆಕ್ಕಚಾರ ನಿರ್ಲಕ್ಷಿಸಲು ಸಾಧ್ಯವಿಲ್ಲ. ಹಾಗಂತ ಸಮೀಕ್ಷೆಗಳು ಫಲಿತಾಂಶವೇ ಅಂತಿಮವಲ್ಲ ಎನ್ನುವುದು ಸ್ಪಷ್ಟ ಕೂಡ.

ಮತದಾರರು ಹಾಗೂ ಪಕ್ಷಗಳ ಕಾರ್ಯಕರ್ತರಲ್ಲಿ ತಮ್ಮ ಅಭ್ಯರ್ಥಿಗಳ ಸೋಲು ಗೆಲುವಿನ ಲೆಕ್ಕಚಾರವು ನಡೆಯುತ್ತಿದೆ. ಮತಯಂತ್ರದೊಳಗೆ ಜನಾದೇಶ ಭದ್ರವಾಗಿದೆ. ಸಮೀಕ್ಷೆಯ ಪ್ರಕಾರ ಒಂದೆರಡು ಮಾಧ್ಯಮ ಗಳು ಒಂದು ಪಕ್ಷಕ್ಕೆ ಸ್ಪಷ್ಟ ಬಹುಮತ ಭವಿಷ್ಯ ನುಡಿದಿವೆ. ಒಟ್ಟಿನಲ್ಲಿ ಪೂರ್ಣಪ್ರಮಾಣದ ಫಲಿತಾಂಶ ಹೊರಬೀಳಲು ಕಾಯಬೇಕಾಕುತ್ತದೆ.

–ಪಿ ಸಿ ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು

ಜನರ ತಪ್ಪೋ..! ಜನಪ್ರತಿನಿಧಿಯ ತಪ್ಪೋ..!

ಮಾನ್ಯರೆ,

ಕರ್ನಾಟಕ ವಿಧಾನಸಭಾ ಚುನಾವಣೆ ಯಾವುದೇ ರೀತಿಯ ತೊಂದರೆ ಇಲ್ಲದೆ ಸರಾಗವಾಗಿ ಜರುಗಿತು. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರಜೆಗಳು ತಮ್ಮ ನಾಯಕನ ಆಯ್ಕೆಗಾಗಿ ಉತ್ತಮ ಸಮಾಜದ ನಿರ್ಮಾಣಕ್ಕಾಗಿ ಸಮರ್ಥನೆನಿಸಿದ ಜನಪ್ರತಿನಿಧಿಯ ಆಯ್ಕೆಗಾಗಿ ಮತ ಚಲಾಯಿಸಬೇಕು. ಮತ ಚಲಾಯಿಸುವುದು ಹಕ್ಕು ಮಾತ್ರವಲ್ಲದೆ ಜವಾಬ್ದಾರಿಯೂ ಕೂಡ ಹೌದು. ಮತದಾನದ ದಿನದಂದು ಬೆಳಗ್ಗಿನಿಂದಲೇ ಜನರು ಮತಗಟ್ಟೆಗಳತ್ತ ಧಾವಿಸಿ ತಮ್ಮ ಹಕ್ಕನ್ನು ಚಲಾಯಿಸಿದರು.

ಮತದಾನದ ಹಿಂದಿನ ದಿನ ಪ್ರಚಾರದ ಸಂದರ್ಭದಲ್ಲಿ ಹಣ ಹೆಂಡ ಹಂಚುವುದು ಇಲ್ಲಿಯವರೆಗೂ ನಡೆದು ಬಂದಿರುವ ಕೆಟ್ಟ ಪ್ರತೀತಿ. ಇದೇ ಕಾರಣಕ್ಕಾಗಿ ಇಲ್ಲಿಯವರೆಗೂ ರಾಜಕಾರಣಿಗಳನ್ನು ದೂಷಿಸಿಕೊಂಡೆ ಬಂದಿದ್ದೇವೆ. ಆದರೆ ಮತದಾರ ಪ್ರಾಮಾಣಿಕನಾಗಿದ್ದರೆ, ಅವನಿಗೆ ಯಾವುದೇ ರೀತಿಯ ಆಸೆ–ಆಮಿಷಗಳಿಲ್ಲದಿದ್ದರೆ ಅಭ್ಯರ್ಥಿಯು ಯಾರಿಗೆ ಆಮಿಷ ಒಡ್ಡಲು ಸಾಧ್ಯ! ಬಾಯಿ ತೆರೆದಿರುವ ತನಕ ಸುರಿಯುವವರು ಇರುತ್ತಾರೆಂಬ ಕಾರಣಕ್ಕೆ ಯಾವಾಗಲೂ ಬಾಯಿ ತೆರೆದಿಟ್ಟುಕೊಳ್ಳುವ ಮತದಾರನದು ತಪ್ಪು ಇದ್ದೇ ಇರುತ್ತದೆ. ಹೀಗೆ 'ನೋಟಿಲ್ಲದೆ ಓಟಿಲ್ಲ' ಎಂಬ ಧ್ಯೇಯದೊಂದಿಗೆ ತನ್ನ ಮತವನ್ನು ಮಾರಾಟ ಮಾಡಿಕೊಂಡಿರುವ ಮತದಾರನು ಉಳಿದ ಐದು ವರ್ಷಗಳ ರಾಜಕೀಯ ವ್ಯವಸ್ಥೆಯನ್ನು ಪ್ರಶ್ನಿಸುವ ಹಕ್ಕನ್ನು ಕಳೆದುಕೊಂಡಿದ್ದಾನೆ ಎಂದೇ ಅರ್ಥ. ಇನ್ನುಳಿದಂತೆ ಸಾಕಷ್ಟು ಜನರು ಮತ ಚಲಾಯಿಸದೆ ತಮ್ಮ ಮತದಾನದ ಹಕ್ಕನ್ನು ಬದಿಗೆ ತಳ್ಳಿದ್ದಾರೆ. ಒಟ್ಟಿನಲ್ಲಿ ಜನರೇ ಬದಲಾಗಬೇಕು. ಅಲ್ಲಿಯವರೆಗೂ ಜನಪ್ರತಿನಿಧಿಗಳನ್ನು ದೂರುವುದು ತಪ್ಪು.

–ಪ್ರದೀಪ್ ಸೋಗಳ್ಳಿ, ಮಾನಸಗಂಗೋತ್ರಿ, ಮೈಸೂರು.

ದಿಕ್ಕುದೆಸೆ



ಕಾರ್ಕಳ ಆನಂದ ಭಟ್
ಮೊ : 7676554198
ಕಾರ್ಕಳ – 574 104 ಉಡುಪಿ ಜಿಲ್ಲೆ

ಸಿಕ್ಕ–ಸಿಕ್ಕ ಅವಕಾಶಗಳಲ್ಲಿ ಭಾರತ ತೋರುತ್ತಿದೆ ತಾಕತ್ತು!

ಕೇಂದ್ರ ಗೃಹ ಸಚಿವ ಅಮಿತ್ ಷಾ ರವರು ಏಪ್ರಿಲ್ ಹತ್ತರಂದು ಅರುಣಾಚಲ ಪ್ರದೇಶಕ್ಕೆ ಎರಡು ದಿನಗಳ ಭೇಟಿ ನೀಡಿದ್ದರು. ಅಲ್ಲಿನ ಒಂದು ಕಾರ್ಯಕ್ರಮದಲ್ಲಿ 'ಷಾ' ರವರು 'ಭಾರತವು ತನ್ನ ಒಂದು ಸೂಜಿ ಮೊನೆಯಷ್ಟು ಭೂ ಪ್ರದೇಶದ ಮೇಲಿನ ಅತಿಕ್ರಮಣ ಸಹಿಸುವುದಿಲ್ಲವೆಂದು ಎಚ್ಚರಿಸಿದರು. ಇತ್ತೀಚಿನ ದಿನಗಳಲ್ಲಿ ಚೀನಾ ಗಡಿಯಲ್ಲಿ ನೀಡುತ್ತಿರುವ ಉಪಟಳದ ಹಿನ್ನೆಲೆಯಲ್ಲಿ ಈ ಹೇಳಿಕೆ ಗಮನಾರ್ಹವಾಗಿದೆ. ಗೃಹ ಸಚಿವರ ಅರುಣಾಚಲ ಪ್ರದೇಶ ಭೇಟಿಯು ಚೀನಿ ಸಾರ್ವಭೌಮತ್ವದ ಸ್ಪಷ್ಟ ಉಲ್ಲಂಘನೆಯಾಗಿದ್ದು, ಉಭಯ ದೇಶಗಳ ನಡುವಿನ ಶಾಂತಿಗೆ ಬೆದರಿಕೆಯಾಗಿದೆಯೆಂದು ಚೀನಾ ಹೇಳಿಕೆ ನೀಡಿತು. ಚೀನಿ ವಿದೇಶಾಂಗ ಸಚಿವಾಲಯದ ವಕ್ತಾರರು "ಅರುಣಾಚಲ ಪ್ರದೇಶವು ಚೀನಾದ ಭೂ ಭಾಗವಾಗಿದ್ದು, ಭಾರತದ ಅಧಿಕಾರಿಗಳ, ರಾಜಕಾರಣಿಗಳ ಭೇಟಿ ನಮ್ಮ ಸಾರ್ವಭೌಮತ್ವದ ಮೇಲೆ ನೇರ ಹಲ್ಲೆ" ಎಂದು ಆರೋಪಿಸಿದರು. ಇದಕ್ಕೆ ಪ್ರತಿಯಾಗಿ ಭಾರತೀಯ ವಿದೇಶ ಮಂತ್ರಾಲಯದ ವಕ್ತಾರ ಅರಿಂದಮ್ ಬಾಗ್ಚಿಯವರು ಅರುಣಾಚಲವು ಭಾರತದ ಅವಿಭಾಜ್ಯ ಅಂಗವಾಗಿತ್ತು. ಈಗಲೂ ಇದೆ ಹಾಗೂ ಮುಂದೆಯೂ ಇರುವುದು ಎಂದು ಖಡಕ್ ಪ್ರತ್ಯುತ್ತರ ನೀಡಿದ್ದರು.

> ಈ ವರ್ಷ ಮಾರ್ಚ್‌ನಲ್ಲಿ ಅಮೇರಿಕವು ಔಪಚಾರಿಕ ರೂಪದಲ್ಲಿ ಭಾರತ-ಚೀನಾ ನಡುವಿನ ಮೆಕ್ ಮೋಹನ್ ರೇಖೆಗೆ ಅಂತರರಾಷ್ಟ್ರೀಯ ಗಡಿ ಎಂದು ಮಾನ್ಯತೆ ನೀಡಿದೆ. ಇನ್ನೂ ಮಹತ್ತಪೂರ್ಣವೆಂದರೆ ಅಮೇರಿಕದ ಸೆನೆಟ್‌ನಲ್ಲಿ ಮಂಡನೆಯಾದ ಒಂದು ಪ್ರಸ್ತಾಪದಲ್ಲಿ ಚೀನಾದ ಆಕ್ರಮಣಕಾರಿ ಮನೋಭಾವದ ವಿರುದ್ಧ ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಅಂಗವೆಂದು ನಿರ್ಣಯಿಸಿದೆ. ಇನ್ನೂ ವಿಶೇಷವೆಂದರೆ ಈ ಪ್ರಸ್ತಾಪಕ್ಕೆ ಅಮೇರಿಕದ ಪ್ರಮುಖ ಪಕ್ಷಗಳಾದ ಡೆಮಾಕ್ರಾಟಿಕ್ ಹಾಗೂ ರಿಪಬ್ಲಿಕ್‌ಗಳು ಸಮರ್ಥನೆ ನೀಡಿವೆ. ಇದರೊಂದಿಗೆ ಪಶ್ಚಿಮ ದೇಶಗಳಿಂದ ಪಾಕಿಸ್ತಾನಕ್ಕೆ ಯಾವುದೇ ರೀತಿಯ ಬೆಂಬಲ ದೊರೆಯದಂತೆ ಮಾಡುವಲ್ಲಿ ಭಾರತ ಯಶಸ್ವಿಯಾಗಿದೆ.

ಈ ತೀಕ್ಷ್ಣ ಪ್ರತಿಕ್ರಿಯೆಯ ನಂತರ ಭಾರತವು ಚೀನಾ ಹಾಗೂ ಪಾಕಿಸ್ತಾನಕ್ಕೆ ಚುಚ್ಚುವಂತಹ ಎರಡು ಘೋಷಣೆಗಳನ್ನು ಮಾಡಿತು. ಏಪ್ರಿಲ್ 26–28ರವರೆಗೆ ಲಡ್ಡಾಕ್‌ನ ಲೇನಲ್ಲಿ ಯೂತ್–20 ಮತ್ತು ಮೇ 22–24ರವರೆಗೆ ಶ್ರೀನಗರದಲ್ಲಿ ಜಿ–20ರ ಸಂಬಂಧಿತ ಎರಡು ಸಮಾವೇಶಗಳಾಗಲಿವೆ ಎಂದು ತಿಳಿಸಿತು. ಯೂತ್–20ರ ಒಂದು ಕಾರ್ಯಕ್ರಮ ಅರುಣಾಚಲ ಪ್ರದೇಶದ ರಾಜಧಾನಿ ಇಟಾನಗರದಲ್ಲಿ ಮಾರ್ಚ್ 26ರಂದು ಸಂಪನ್ನಗೊಂಡಿತ್ತು.

ಜಮ್ಮು–ಕಾಶ್ಮೀರದಲ್ಲಿ 370ನೇ ವಿಧಿ ರದ್ದುಗೊಳಿಸಿದ ನಂತರ ಅತ್ಯಂತ ಮಹತ್ವವುಳ್ಳ ಅಂತರರಾಷ್ಟ್ರೀಯ ಕಾರ್ಯಕ್ರಮಗಳಾಗಿವೆ. ಚೀನಾ, ಪಾಕಿಸ್ತಾನಗಳು ಸಮಾವೇಶ ನಡೆಯುವ ಪ್ರದೇಶಗಳು ವಿವಾದಾತ್ಮಕ ಎಂಬ ಕಾರಣ ನೀಡಿ ವಿರೋಧಿಸಿವೆ.

ಜಿ–20 ದೇಶಗಳ ಮೌನ

ಜಿ–20ರ ಸದಸ್ಯ ದೇಶವಲ್ಲದ ಪಾಕಿಸ್ತಾನಕ್ಕೆ ವಿಶೇಷ ಆಹ್ವಾನಿತ ಅತಿಥಿಯಾಗಿ ಭಾಗವಹಿಸಲು ಭಾರತ ಅವಕಾಶ ನೀಡಿಲ್ಲ. ಚೀನಾ ಜಿ–20ರ ಸದಸ್ಯ ದೇಶವಾದರೂ ಇಟಾನಗರದಲ್ಲಿ ಮಾರ್ಚ್ 26ರಂದು ಜರುಗಿದ ಯೂತ್–20 ಸಮ್ಮೇಳನವನ್ನು ಬಹಿಷ್ಕರಿಸಿತು. ಲೇ ಕಾರ್ಯಕ್ರಮದಲ್ಲೂ ಭಾಗವಹಿಸಲಿಲ್ಲ. ಶ್ರೀನಗರದ ಸಮಾವೇಶಕ್ಕೂ ಪ್ರತಿನಿಧಿಗಳು ಬರುವ ಸಾಧ್ಯತೆ ಕ್ಷೀಣವಾಗಿದೆ. ಪ್ರಸ್ತುತ ಚೀನಾ ಹಾಗೂ ಪಾಕಿಸ್ತಾನಗಳು ಈ ಸಮ್ಮೇಳನಗಳಿಗೆ ಸಂಬಂಧಪಟ್ಟಂತೆ ಕಳೆದ ಕೆಲವು ತಿಂಗಳಿಂದ ಟೀಕೆ–ಟಿಪ್ಪಣಿ ಮಾಡುತ್ತಿವೆ. ಆದರೆ ಜಿ–20ರ ಸದಸ್ಯ ದೇಶಗಳು ಇದುವರೆಗೆ ಯಾವುದೇ ರೀತಿಯ ಪ್ರತಿಕ್ರಿಯೆ ನೀಡದ ಕಾರಣ ಪಾಕ್–ಚೀನ ಹತಾಶಗೊಂಡಿವೆ. ಇದು ಭಾರತದ ರಾಜ ತಾಂತ್ರಿಕ ವಿಜಯವೆಂದರೂ ಅತಿಶಯೋಕ್ತಿಯಲ್ಲ ಎನ್ನಬಹುದು.

ಜಿ–20ರ ಸದಸ್ಯ ದೇಶಗಳಲ್ಲಿ ಟರ್ಕಿ, ಸೌದಿ–ಅರೇಬಿಯಾ, ಇಂಡೋನೇಷ್ಯಾ (OIC)ಗಳು ಇಸ್ಲಾಮಿಕ್ ದೇಶಗಳ ಸಂಘಟನೆಯ ಸದಸ್ಯರಾಗಿವೆ. ಭಾರತ 370ನೇ ವಿಧಿ ರದ್ದುಗೊಳಿಸಿದಾಗ ಈ ದೇಶಗಳು ಆಕ್ಷೇಪ ವ್ಯಕ್ತಪಡಿಸಿದ್ದವು. ಕಳೆದ ಕೆಲವು ಸಮಯದಿಂದ ಪಾಕ್ ಹೇರುತ್ತಿರುವ ಒತ್ತಡಕ್ಕೆ ಪೂರಕವಾಗಿ ಈ ದೇಶಗಳು ಶ್ರೀನಗರ ಸಮ್ಮೇಳನ ಬಹಿಷ್ಕರಿಸುವ ಸಾಧ್ಯತೆಗಳ ಬಗ್ಗೆ ಇನ್ನೂ ಯಾವುದೇ ಸಂಕೇತಗಳನ್ನು ನೀಡಿಲ್ಲ.


ವಿದೇಶಾಂಗ ನೀತಿಯ ಪ್ರಾಮುಖ್ಯತೆ

ಜಿ–20ರ ಅನ್ವಯ ದೇಶದ 28 ರಾಜ್ಯಗಳಲ್ಲಿ ಸಮ್ಮೇಳನಗಳು ನಡೆಯಲಿವೆ. ಜಿ–20ರ ಅಧ್ಯಕ್ಷತೆ ವಹಿಸುವುದರೊಂದಿಗೆ ಭಾರತೀಯ ವಿದೇಶಾಂಗ ನೀತಿಯಲ್ಲಿ ಎರಡು ರೀತಿಯ ಭೂಮಿಕೆಗಳು ಕಾಣುತ್ತಿವೆ. ಒಂದನೇಯದಾಗಿ ವೈಶ್ವಿಕ ರಾಜಕಾರಣದಲ್ಲಿ ಹೆಚ್ಚುತ್ತಿರುವ ಭಿನ್ನಮತ ಹಾಗೂ ದ್ವೇಷ ನಿವಾರಿಸುವ ಮತ್ತು ಪ್ರಮುಖವಾಗಿ ಭಾರತದ ಸ್ವತಂತ್ರ ವಿದೇಶಾಂಗ ನೀತಿಯ ಬಗ್ಗೆ ಜಗತ್ತಿಗೆ ಮನವರಿಕೆ ಮಾಡುವುದು. ಭಾರತವು ಯಾವುದೇ ಬಣದ ಒತ್ತಡ, ರಾಜಕೀಯಕ್ಕೆ ಬಲಿಯಾಗುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸುವುದು. ಅರುಣಾಚಲ ಪ್ರದೇಶದ ಇಟಾ ನಗರದಲ್ಲಿ ಜಿ–20ರ ಸಮ್ಮೇಳನದ ಯಶಸ್ಸಿನಿಂದ ಕೆರಳಿದ ಚೀನಾವು ಅರುಣಾಚಲ ಪ್ರದೇಶದ ಹನ್ನೊಂದು ಗ್ರಾಮಗಳ ಹೆಸರುಗಳನ್ನು ಬದಲಾಯಿಸಿ ಭಾರತಕ್ಕೆ ಎಚ್ಚರಿಕೆ ನೀಡುವ ಯತ್ನ ನಡೆಸಿತು. ಚೀನಾದ ಈ ಉದ್ಧಟತನದ ನಂತರ ಭಾರತವು ಏಪ್ರಿಲ್ ಏಳರಂದು ಜಿ–20ರ ಕಾರ್ಯಕ್ರಮಗಳ ಪಟ್ಟಿ ಪರಿಷ್ಕರಿಸಿ ಲೇ ಮತ್ತು ಶ್ರೀನಗರಗಳಿಗೆ ಎರಡು ಸಮಾವೇಶ ನಿಗದಿಪಡಿಸಿತು. ಇಟಾ ನಗರದಲ್ಲಿ ಐವತ್ತು ದೇಶಗಳು ಭಾಗವಹಿಸಿದ್ದರೆ, ಶ್ರೀನಗರದಲ್ಲಿ ಎಂಭತ್ತು ದೇಶಗಳ ಪ್ರತಿನಿಧಿಗಳು ಭಾಗವಹಿಸುವ ಸಂಭಾವ್ಯತೆ ಇದೆ. ಈ ಮಧ್ಯೆ ಏಪ್ರಿಲ್ 26–28ರವರೆಗೆ ಲೇನಲ್ಲಿ ನಡೆದ ಯೂತ್–20 ಸಮಾವೇಶ ಭಾರೀ ಯಶಸ್ಸು ಕಂಡಿತು. ಸಮಾವೇಶದ ಸಮಾರೋಪ ಸಭೆಯಲ್ಲಿ ಮಾತನಾಡಿದ ಕೇಂದ್ರ ಯುವಜನ ವ್ಯವಹಾರಗಳ ಸಚಿವ ಅನುರಾಗ್ ಠಾಕೂರ್ ರವರು "ಲೇನಲ್ಲಿ ನಡೆದ ಯೂತ್–20 ಪೂರ್ವಭಾವಿ ಸಮ್ಮೇಳನವು ಭಯ ಮತ್ತು ಗೊಂದಲ ಹರಡಿದ ಶಕ್ತಿಗಳಿಗೆ ಸರಿಯಾದ ಉತ್ತರ ನೀಡಿದೆ" ಎಂದು ಯಾವುದೇ ದೇಶವನ್ನು ಹೆಸರಿಸದೇ ನುಡಿದರು. ಚೀನಾ ಈ ಸಮ್ಮೇಳನಕ್ಕೆ ತನ್ನ ಪ್ರತಿನಿಧಿಗಳನ್ನು ಕಳಿಸಿರಲಿಲ್ಲ. ಆದರೆ ಯಾವುದೇ ಪ್ರತಿಕ್ರಿಯೆಯನ್ನೂ ನೀಡಿಲ್ಲ. ಆದರೆ ಪಾಕ್ ಈ ಕಾರ್ಯಕ್ರಮವನ್ನು ಆಕ್ಷೇಪಿಸಿತು. ಈ ಪೂರ್ವಭಾವಿ ಶೃಂಗಕ್ಕೆ 30 ದೇಶಗಳ 103 ಯುವ ಪ್ರತಿನಿಧಿಗಳು ಭಾಗವಹಿಸುವ ಮೂಲಕ ಸಮಾವೇಶವನ್ನು ಯಶಸ್ವಿಗೊಳಿಸಿದ್ದಾರೆಂದು ಠಾಕೂರ್ ನುಡಿದರು. ಜಗತ್ತಿನ ಯುವ ಜನತೆಯ ಭವಿಷ್ಯ ಪ್ರಜಾಪ್ರಭುತ್ವ ಮತ್ತು ಸುಶಾಸನ ಮೊದಲಾದ ವಿಷಯಗಳ ಬಗ್ಗೆ ಜಿ–20ರ ಅಧ್ಯಕ್ಷತೆ ವಹಿಸಿರುವ ಭಾರತವು ಸೂಕ್ತ ಸಲಹೆ, ಉತ್ತರ, ಪರಿಹಾರ ನೀಡಲಿದೆ ಎಂಬ ಸಂದೇಶ ನೀಡಿದೆ ಎಂದು ಠಾಕೂರ್ ನುಡಿದರು.

ಯೂತ್–20ರ ಐದು ವಿಷಯಗಳು

ಮುಂದಿನ ಯುವ ಸಮಾವೇಶಗಳಲ್ಲಿ ಐದು ವಿಷಯಗಳ ಮೇಲೆ ಚರ್ಚೆ ನಡೆಯಲಿವೆ. ಮೊದಲನೆಯದಾಗಿ ಭವಿಷ್ಯದ ಕೆಲಸ, ಕೈಗಾರಿಕೆ, ನಾವಿನ್ಯತೆ ಮತ್ತು 21ನೇ ಶತಮಾನದ ಕೌಶಲ್ಯಗಳು, 2ನೆಯದಾಗಿ ಹವಾಮಾನ ಬದಲಾವಣೆ ಮತ್ತು ವಿಪತ್ತಿನ ಅಪಾಯ ತಗ್ಗಿಸುವಿಕೆ, ಸುಸ್ಥಿರ ಜೀವನ ಮಾರ್ಗ ರೂಪಿಸುವುದು, 3ನೆಯದಾಗಿ ಶಾಂತಿಸ್ಥಾಪನೆ ಮತ್ತು ಸಮನ್ವಯ ಯುದ್ಧವಿಲ್ಲದ ಯುಗಕ್ಕೆ ನಾಂದಿ ಹಾಡುವುದು. 4ನೆಯದಾಗಿ ಭವಿಷ್ಯದ ಹಂಚಿಕೆ, ಪ್ರಜಾತಂತ್ರ ವ್ಯವಸ್ಥೆ ಮತ್ತು ಆಡಳಿತದಲ್ಲಿ ಯುವ ಸಮೂಹ, ಕೊನೆದಾಗಿ ಆರೋಗ್ಯ, ಯೋಗಕ್ಷೇಮ ಮತ್ತು ಕ್ರೀಡೆಗಳು ಯುವ ಸಮೂಹಕ್ಕಾಗಿ ಕಾರ್ಯ ಸೂಚಿ. ಈ ವಿಷಯಗಳಿಗೆ ಸಂಬಂಧಿಸಿದಂತೆ ಯೂತ್–20ರ ಆಶ್ರಯದಲ್ಲಿ ನಾಳೆಗಾಗಿ ಉತ್ತಮ ಆಲೋಚನೆಗಳ ಬಗ್ಗೆ ದೇಶದ ಯುವ ಸಮೂಹವನ್ನು ಸಂಪರ್ಕಿಸಲು ದೇಶಾದ್ಯಂತ ವಿಚಾರಗೋಷ್ಠಿಗಳನ್ನು ಆಯೋಜಿಸಲಾಗುವುದು.

ಶ್ರೀನಗರದ ಜಿ–20 ಸಮಾವೇಶದ ಪರಿಣಾಮಗಳು



ಕಾಶ್ಮೀರದಲ್ಲಿ 370ನೇ ವಿಧಿ ರದ್ದಾದ ನಂತರ ಮಾತ್ರವಲ್ಲ, ಸ್ವಾತಂತ್ರ್ಯಾ ನಂತರ ಕಾಶ್ಮೀರದಲ್ಲಿ ನಡೆಯಲಿರುವ ಅತೀ ದೊಡ್ಡ ಅಂತರರಾಷ್ಟ್ರೀಯ ಸಮಾವೇಶವಾಗಿದೆ. ಈ ಸಮಾವೇಶ ಜಾಗತಿಕ ಮಟ್ಟದಲ್ಲಿ ಭಾರೀ ಪರಿಣಾಮ ಬೀರಲಿದೆ. ವಿಶ್ವಕ್ಕೆ ಬದಲಾದ ಕಾಶ್ಮೀರವನ್ನು ಪರಿಚಯಿಸುವ ಮೂಲಕ ಪಾಕಿಸ್ತಾನದ ಢೋಂಗಿತನವನ್ನು ಜಗತ್ತಿಗೆ ಸಾರಲಿದೆ. ಈ ಸಮ್ಮೇಳನ ಚೀನಾ ಹಾಗೂ ಪಾಕಿಸ್ತಾನಗಳ ಸುಳ್ಳು ಪ್ರಚಾರವನ್ನು ಬಹಿರಂಗಪಡಿಸಲಿದೆ.

ಶ್ರೀನಗರದ ಸಮ್ಮೇಳನವು ಜಮ್ಮು–ಕಾಶ್ಮೀರಕ್ಕೆ ಜಾಗತಿಕ ರಾಜಕೀಯ ಪಡಸಾಲೆಯಲ್ಲಿ ಪ್ರತಿಷ್ಠಿತ ಸ್ಥಾನ ನೀಡುವಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಇದರಲ್ಲಿ ಅಮೇರಿಕದ ವಿಶೇಷ ರಾಜದೂತ ರಾಬರ್ಟ್ ಬ್ಲ್ಯಾಕ್ ವ್ಹೀಲ್‌ರ ಶ್ರೀನಗರ ಹಾಗೂ ಸಿಯಾಚಿನ್ ಭೇಟಿ ಅತ್ಯಂತ ಮಹತ್ವಪೂರ್ಣವಾಗಿದೆ. 370ನೇ ವಿಧಿ ರದ್ಧತಿ ನಂತರ ಯುರೋಪಿಯನ್ ಒಕ್ಕೂಟದ 23 ಸಂಸದರ ಪ್ರತಿನಿಧಿ ಮಂಡಲ ಎರಡು ದಿನಗಳ ಕಾಶ್ಮೀರಕ್ಕೆ ಭೇಟಿ ನೀಡಿದ್ದರು. ಈ ಭೇಟಿ ದೇಶದೊಳಗೆ ಭಾರೀ ಚರ್ಚೆಗೆ ಆಸ್ಪದ ನೀಡಿತು. ಈ ತಿಂಗಳ 22 ರಿಂದ 24ರವರೆಗೆ ನಡೆಯಲಿರುವ ಜಿ–20ರ ಸಮ್ಮೇಳನವು ಅಧಿಕೃತ ಕಾರ್ಯಕ್ರಮವಾಗಿದ್ದು, ಪ್ರಥಮ ಬಾರಿ ಭಾರೀ ಪ್ರಮಾಣದಲ್ಲಿ ಆಯೋಜಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಈ ವರ್ಷ ಮಾರ್ಚ್‌ನಲ್ಲಿ ಅಮೇರಿಕವು ಔಪಚಾರಿಕ ರೂಪದಲ್ಲಿ ಭಾರತ–ಚೀನಾ ನಡುವಿನ ಮೆಕ್ ಮೋಹನ್ ರೇಖೆಗೆ ಅಂತರರಾಷ್ಟ್ರೀಯ ಗಡಿ ಎಂದು ಮಾನ್ಯತೆ ನೀಡಿದೆ. ಇನ್ನೂ ಮಹತ್ವಪೂರ್ಣವೆಂದರೆ ಅಮೇರಿಕದ ಸೆನೆಟ್‌ನಲ್ಲಿ ಮಂಡನೆಯಾದ ಒಂದು ಪ್ರಸ್ತಾಪದಲ್ಲಿ ಚೀನಾದ ಆಕ್ರಮಣಕಾರಿ ಮನೋಭಾವದ ವಿರುದ್ಧ ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಅಂಗವೆಂದು ನಿರ್ಣಯಿಸಿದೆ. ಇನ್ನೂ ವಿಶೇಷವೆಂದರೆ ಈ ಪ್ರಸ್ತಾಪಕ್ಕೆ ಅಮೇರಿಕದ ಪ್ರಮುಖ ಪಕ್ಷಗಳಾದ ಡೆಮಾಕ್ರಾಟಿಕ್ ಹಾಗೂ ರಿಪಬ್ಲಿಕ್‌ಗಳು ಸಮರ್ಥನೆ ನೀಡಿವೆ. ಇದರೊಂದಿಗೆ ಪಶ್ಚಿಮ ದೇಶಗಳಿಂದ ಪಾಕಿಸ್ತಾನಕ್ಕೆ ಯಾವುದೇ ರೀತಿಯ ಬೆಂಬಲ ದೊರೆಯದಂತೆ ಮಾಡುವಲ್ಲಿ ಭಾರತ ಯಶಸ್ವಿಯಾಗಿದೆ.

ಜಿ–20 ಸಮಾವೇಶಕ್ಕೆ ಸಾಂಸ್ಕೃತಿಕ ಮಹತ್ವದಷ್ಟೇ ರಾಜತಾಂತ್ರಿಕ, ಆರ್ಥಿಕ ಪ್ರಭಾವವು ಇದೆ. ಆದ್ದರಿಂದ ಜಿ–20 ಮುಂದಿನ ದಿನಗಳಲ್ಲಿ ಜಾಗತಿಕ ರಾಜಕಾರಣದಲ್ಲಿ ಭಾರತವನ್ನು ಪ್ರಭಾವಿ, ಶಕ್ತಿಶಾಲಿ ದೇಶವಾಗಿ ಮಾಡಲಿದೆ.

ಬಿಜೆಪಿ ಈಗಾಗಲೇ ಸೋಲೊಪ್ಪಿಕೊಂಡಿದೆ: ರಣದೀಪ್ ಸುರ್ಜೇವಾಲ

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಈಗಾಗಲೇ ಸೋಲೊಪ್ಪಿಕೊಂಡಿದೆ ಎಂದಿರುವ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲ, ನಾಳೆ ನಡೆಯಲಿರುವ ಮತ ಎಣಿಕೆಯಲ್ಲಿ ಪಕ್ಷ ಬಹುಮತ ಗಳಿಸಲಿದ್ದು, ಹೊಸ ಸರ್ಕಾರ ರಚಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೇವಾಲ, ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿದ ರಾಜ್ಯದ 6.5 ಕೋಟಿ ಜನರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ. ನಾಳೆಯವರೆಗೂ, ಫಲಿತಾಂಶ ಹೊರಬೀಳುವವರೆಗೆ ಕಾಯೋಣ. ಬಿಜೆಪಿ ಈಗಾಗಲೇ ಸೋಲೊಪ್ಪಿಕೊಂಡಿದೆ ಎಂದರು. 2018 ರಲ್ಲಿ ರಚನೆಯಾದ ಮೈತ್ರಿಯಂತೆಯೇ ಜೆಡಿಎಸ್ ಜೊತೆ ಸೇರಿ ಸರ್ಕಾರ ರಚಿಸುವಿರಾ ಎಂಬ ಪ್ರಶ್ನೆಗೆ ಉತ್ತರಿಸಿದ ಕಾಂಗ್ರೆಸ್ ನಾಯಕ, ಅವರು ಎಲ್ಲಿ ಬೇಕಾದರೂ ಹೋಗಲಿ. ಕಾಂಗ್ರೆಸ್ ಬಹುಮತದೊಂದಿಗೆ ಸರ್ಕಾರ ರಚಿಸುವ ವಿಶ್ವಾಸವಿದೆ ಎಂದರು. ಬಹುದಿನಗಳ ಪ್ರಚಾರದ ನಂತರ ಬಿಜೆಪಿ ಅಥವಾ ಕಾಂಗ್ರೆಸ್ ಸ್ಪಷ್ಟ ಬಹುಮತವನ್ನು ಪಡೆಯದ ಸನ್ನಿವೇಶದಲ್ಲಿ ರಾಜ್ಯದಲ್ಲಿ ಅತಂತ್ರ ವಿಧಾನಸಭೆಯ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ.

ಟ್ವಿಟರ್ ಸಿಇಒ ಸ್ಥಾನಕ್ಕೆ ಎಲೋನ್ ಮಸ್ಕ್ ರಾಜೀನಾಮೆ

ನ್ಯೂಯಾರ್ಕ್: ಟ್ವಿಟರ್ ಸಿಇಒ ಹುದ್ದೆಯಿಂದ ಎಲೋನ್ ಮಸ್ಕ್ ಶೀಘ್ರದಲ್ಲಿಯೇ ನಿರ್ಗಮಿಸಲಿದ್ದಾರೆ. ಕೆಲವು ವಾರಗಳ ನಂತರ ಟ್ವಿಟರ್ ಸಿಇಒ ಹುದ್ದೆ ತೊರೆಯಲು ಅವರು ತೀರ್ಮಾನಿಸಿದ್ದಾರೆ. ಈ ಬಗ್ಗೆ ಶುಕ್ರವಾರ ಟ್ವೀಟರ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಟ್ವೀಟರ್‌ಗೆ ಹೊಸ ಸಿಇಒ ಬರಲಿದ್ದು, ಇನ್ನೂ ಆರು ವಾರಗಳಲ್ಲಿ ಆಕೆ ಹುದ್ದೆ ಅಲಂಕರಿಸುವುದಾಗಿ ತಿಳಿಸಿದ್ದಾರೆ. ಅವರ ಹೆಸರನ್ನು ಬಹಿರಂಗಪಡಿಸಿಲ್ಲ ಆದರೆ, ಆರು ವಾರಗಳಲ್ಲಿ ಹೊಸ ಸಿಇಒ ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ಅವರು ಪ್ರಕಟಿಸಿದ್ದಾರೆ. ಇದರಿಂದಾಗಿ ಮಾಸ್ಕ್ ಕಾರ್ಯನಿರ್ವಾಹಕ ಮುಖ್ಯಸ್ಥ ಮತ್ತು ಸಿಟಿಒ ಆಗಿ ಅವರು ಪಾತ್ರ ನಿರ್ವಹಿಸಲಿದ್ದಾರೆ.

ಆರೋಗ್ಯ ಆಸ್ಪತ್ರೆಯಲ್ಲಿಲ್ಲ, ನಮ್ಮ ಅಡುಗೆ ಕೋಣೆಯಲ್ಲಿದೆ

ಪದ್ಮಶ್ರೀ ಡಾ.ಖಾದರ್ ವಲಿ ಕಿವಿಮಾತು



ಮೈಸೂರು, ಮೇ 12– ಆರೋಗ್ಯ ಆಸ್ಪತ್ರೆಯಲ್ಲಿಲ್ಲ, ನಮ್ಮ ಅಡುಗೆ ಕೋಣೆಯಲ್ಲಿದೆ ಎಂದು ಮೈಸೂರಿನ ಆಹಾರ ಮತ್ತು ಪೌಷ್ಟಿಕಾಂಶ ತಜ್ಞರಾದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಡಾ.ಖಾದರ್ ವಲಿ ತಿಳಿಸಿದರು.

ಶ್ರೀ ಸುತ್ತೂರು ಕ್ಷೇತ್ರದಲ್ಲಿ ಮೇ 3 ರಿಂದ 5 ರವರೆಗೆ ಫಾರ್ಮಸಿ ಮತ್ತು ಲೈಫ್ ಸೈನ್ಸ್ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಶಿಬಿರದಲ್ಲಿ 'ಜೀವನ ಕ್ರಮ ಮತ್ತು ಆರೋಗ್ಯ' ವಿಷಯ ಕುರಿತು ಮಾತನಾಡುತ್ತಾ, ಆಹಾರ ಕ್ರಮ ಸರಿಯಾಗಿದ್ದರೆ ಯಾವುದೇ ಔಷಧದ ಅಗತ್ಯವಿಲ್ಲ. ದೇಶಿ ಆಹಾರ ಸೇವನೆಯಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಅತಿಯಾದ ಸಂಸ್ಕರಣೆಯಿಂದ ಆಹಾರವು ವಿಷವಾಗುತ್ತಿದೆ. ನಮ್ಮ ಯಾವುದೇ ಔಷಧಗಳು ರೋಗವನ್ನು ಸಂಪೂರ್ಣವಾಗಿ ಗುಣಪಡಿಸುವುದಿಲ್ಲ. ಇಂದು ನಾವು ವಿಜ್ಞಾನ ತಂತ್ರಜ್ಞಾನದ ಹೆಸರಿನಲ್ಲಿ ಹೆಚ್ಚು ಔಷಧಿಗಳ ಸೇವನೆಗೆ ಒಳಗಾಗಿದ್ದೇವೆ. ಹಾಗಾಗಿ ಆರೋಗ್ಯಕ್ಕೆ ಪೂರಕವಾದ ಸಿರಿಧಾನ್ಯಗಳ ಸೇವನೆಯಿಂದ ನಮ್ಮ ಮೃದು ಅಂಗಗಳನ್ನು ಸಂರಕ್ಷಿಸಿಕೊಳ್ಳಬಹುದಾಗಿದೆ. ಅತಿಯಾದ ನೀರಿನ ಬಳಕೆಯಲ್ಲಿ ಬೆಳೆಯುವ ಆಹಾರ ಪದಾರ್ಥಗಳು ನಮ್ಮ ಆರೋಗ್ಯಕ್ಕೆ ಅಷ್ಟು ಉಪಯುಕ್ತವಲ್ಲ ಎಂದು ಅಭಿಪ್ರಾಯಪಟ್ಟರು.

ವಯೊಲಿನ್ ವಾದಕರಾದ ಡಾ. ಮೈಸೂರು ಎಂ. ಮಂಜುನಾಥ್ ಅವರು ಭಾರತೀಯ ಶಾಸ್ತ್ರೀಯ ಸಂಗೀತದ ಮೂಲತತ್ವ ವಿಷಯ ಕುರಿತು ಉಪನ್ಯಾಸ ನೀಡಿ, ಸಂಗೀತ ಒಂದು ಭಾವಾನುಭಾವ ಮಾಧ್ಯಮ ಹಾಗಾಗಿ ಸಂಗೀತ ಆಸ್ವಾದನೆ ಮಾಡುವುದಕ್ಕೆ ರಾಗ, ತಾಳ, ಶಾಸ್ತ್ರ ಜ್ಞಾನಗಳ ಅಗತ್ಯ ಇಲ್ಲ. ಇಡೀ ಪ್ರಕೃತಿಯಲ್ಲಿ ಸಂಗೀತ ಹರಡಿದೆ. ಪಕ್ಷಿಗಳ ಕಲರವದಿಂದ ಹಿಡಿದು, ತಾಯಿಯ ಜೋಗುಳದಲ್ಲಿಯೂ ಸಂಗೀತವಿದೆ. ಸಂಗೀತಕ್ಕೆ ಭಾಷೆಯ ಮಿತಿಯಿಲ್ಲ ಎಂದು ತಿಳಿಸಿದರು. ನಂತರ ಬೃಂದಾವನ ಸಾರಂಗ ರಾಗದಲ್ಲಿ ಆಲಾಪನೆ ಪ್ರಸ್ತುತ ಪಡಿಸಿದರು. ಕೊನೆಯಲ್ಲಿ ರಘುಪತಿ ರಾಘವ ರಾಜಾ ರಾಮ್ ಭಜನೆಯನ್ನು ನುಡಿಸಿದರು.

ಶಿಬಿರವು ಜಗದ್ಗುರು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯಿತು.

ಶಿಬಿರದಲ್ಲಿ ಊಟಿ ಮತ್ತು ಮೈಸೂರು ಫಾರ್ಮಸಿ ಕಾಲೇಜು ಹಾಗೂ ಲೈಫ್ ಸೈನ್ಸ್‌ನ 130 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ, ಯೋಗಾಭ್ಯಾಸ–ಧ್ಯಾನದ ವ್ಯವಸ್ಥೆ ಮಾಡಲಾಗಿತ್ತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಫಲಿತಾಂಶ ನಂತರವೇ ಮೈತ್ರಿ ಬಗ್ಗೆ ನಿರ್ಧಾರ: ಜೆಡಿಎಸ್ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ

ಬೆಂಗಳೂರು: ಕರ್ನಾಟಕ ಚುನಾವಣೆಯ ಫಲಿತಾಂಶ ಪ್ರಕಟವಾದ ಬಳಿಕ ವಷ್ಟೇ ಮೈತ್ರಿ ಬಗ್ಗೆ ನಿರ್ಧರಿಸುತ್ತೇವೆ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ಹೇಳಿದ್ದಾರೆ.



ಎಎನ್‌ಐ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿರುವ ಜೆಡಿಎಸ್ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ, ತನ್ವೀರ್ ಅಹಮದ್ ನಮ್ಮ ವಕ್ತಾರರೂ ಅಲ್ಲ, ನಮ್ಮ ಪಕ್ಷದ ಸದಸ್ಯರೂ ಅಲ್ಲ. ಅವರು ಏನೂ ಅಲ್ಲ, ಅವರು ಬಹಳ ಹಿಂದೆಯೇ ಪಕ್ಷ ತೊರೆದಿದ್ದಾರೆ. ಸಮ್ಮಿಶ್ರ ಸರ್ಕಾರದ ಬಗ್ಗೆ ನಾವು ಏನನ್ನೂ ನಿರ್ಧರಿಸಿಲ್ಲ, ಫಲಿತಾಂಶಕ್ಕಾಗಿ ಕಾಯುತ್ತೇವೆ. ಆ ಬಳಿಕವೇ ನಮ್ಮ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಹೇಳಿದ್ದಾರೆ.

ಸರ್ಕಾರ ರಚಿಸುವ ವಿಶ್ವಾಸವನ್ನು ಹೊರ ಹಾಕಿದ್ದಾರೆ. ರಾಷ್ಟ್ರೀಯ ಪಕ್ಷಗಳ ಬಳಿ ದುಡ್ಡು ಇದೆ, ನಮ್ಮ ಬಳಿ ಏನೂ ಇಲ್ಲ. ಹಣ ಇರುವುದರಿಂದ ಎರಡೂ ಪಕ್ಷಗಳು ಸರ್ವೆ ಮಾಡಿಸಿಕೊಂಡಿವೆ. ಜೆಡಿಎಸ್ ರಾಜ್ಯದಲ್ಲಿ ಕಿಂಗ್ ಮೇಕರ್ ಆಗಲಿದೆ. ಸರ್ಕಾರ ರಚಿಸುವ ವಿಶ್ವಾಸವನ್ನು ಹೊರ ಹಾಕಿದ್ದಾರೆ. ರಾಷ್ಟ್ರೀಯ ಪಕ್ಷಗಳ ಬಳಿ ದುಡ್ಡು ಇದೆ, ನಮ್ಮ ಬಳಿ ಏನೂ ಇಲ್ಲ.

ಹಣ ಇರುವುದರಿಂದ ಎರಡೂ ಪಕ್ಷಗಳು ಸರ್ವೆ ಮಾಡಿಸಿಕೊಂಡಿವೆ. ಜನರಲ್ಲಿ ಗೊಂದಲ ಮೂಡಿಸುವ ಕೆಲಸ ರಾಷ್ಟ್ರೀಯ ಪಕ್ಷಗಳು ಮಾಡಿವೆ. ಜೆಡಿಎಸ್ ಪಕ್ಷ ಯಾವುದಕ್ಕೂ ಹಿಗ್ಗುವುದಿಲ್ಲ, ಕುಗ್ಗುವುದೂ ಇಲ್ಲ. ರಾಜ್ಯದಲ್ಲಿ ಜೆಡಿಎಸ್ ಕಿಂಗ್ ಮೇಕರ್ ಆಗುತ್ತೆ. ಈ ಚುನಾವಣೆ ದುಡ್ಡಿನಲ್ಲಿ ನಡೆದಿದೆ. ನಮ್ಮ ಅಭ್ಯರ್ಥಿಗಳು ಯಾವುದೇ ಆಮಿಷಗಳಿಗೆ ಬಲಿಯಾಗಲ್ಲ ಎಂದರು.

ಮತ್ತೆ ಕರ್ನಾಟಕದಲ್ಲಿ ರೆಸಾರ್ಟ್ ರಾಜಕೀಯ?

ಗೆಲ್ಲುವ ಶಾಸಕರು, ಪಕ್ಷೇತರರನ್ನು ಹಿಡಿದಿಟ್ಟುಕೊಳ್ಳಲು ಕಾಂಗ್ರೆಸ್ ತಂತ್ರ

ಬೆಂಗಳೂರು: ಈ ಬಾರಿ ಕರ್ನಾಟಕದಲ್ಲಿ ಅತಂತ್ರ ಸ್ಥಿತಿ ನಿರ್ಮಾಣವಾಗಲಿದೆ ಎಂದು ಚುನಾವಣೋತ್ತರ ಸಮೀಕ್ಷೆಗಳು ಭವಿಷ್ಯ ನುಡಿದ ಬೆನ್ನಲ್ಲೇ ಮತ್ತೆ ರಾಜ್ಯದಲ್ಲಿ ರೆಸಾರ್ಟ್ ರಾಜಕೀಯ ಶುರುವಾಗುವ ಸಾಧ್ಯತೆಯಿದೆ.

ಈಗಾಗಲೇ ಚುನಾವಣೆಯಲ್ಲಿ ಗೆಲ್ಲುವ ಉತ್ಸಾಹದಲ್ಲಿ ಕಾಂಗ್ರೆಸ್ ಇದೆ. ಹೀಗಿದ್ದರೂ ದಾಖಲೆ ಪ್ರಮಾಣದಲ್ಲಿ ಮತದಾನ ನಡೆದಿರುವ ಕಾರಣ ಫಲಿತಾಂಶ ಏರುಪೇರಾಗುವ ಸಾಧ್ಯತೆಯಿದೆ. ಹೀಗಾಗಿ ಯಾವುದೇ ಕಾರಣಕ್ಕೂ ಬಿಜೆಪಿ ಸರ್ಕಾರ ರಚನೆ ಮಾಡದೇ ಇರಲು ಈಗಲೇ ಕಾಂಗ್ರೆಸ್ ಪಕ್ಷೇತರರಿಗೆ ಗಾಳ ಹಾಕಿದೆ.

ಪಕ್ಷೇತರರು ಅಲ್ಲದೇ ಆಪರೇಷನ್ ಕಮಲ ತಪ್ಪಿಸಲು ಅಭ್ಯರ್ಥಿಗಳ ಮೇಲೆ ಕಾಂಗ್ರೆಸ್ ನಿಗಾ ಇಟ್ಟಿದೆ. ಹೈದರಾಬಾದ್, ಬೆಂಗಳೂರಿಗೆ ಕೈ ಅಭ್ಯರ್ಥಿಗಳನ್ನು ಶಿಫ್ಟ್‌ಮಾಡಲು ಪ್ಲಾನ್ ಮಾಡಲಾಗಿದೆ. ಪ್ರತಿ ಜಿಲ್ಲೆಗೆ ಇಬ್ಬಿಬ್ಬರು ಉಸ್ತುವಾರಿಗಳನ್ನು ಕಾಂಗ್ರೆಸ್ ನೇಮಕ ಮಾಡಿದೆ.

ಎಲ್ಲಾ ಜಿಲ್ಲೆಗಳಲ್ಲಿ ಕಾಂಗ್ರೆಸ್‌ನ ಇಬ್ಬರು ಉಸ್ತುವಾರಿಗಳನ್ನು ನೇಮಿಸಿದ ಡಿಕೆ ಶಿವಕುಮಾರ್, ಪ್ರತಿ ಜಿಲ್ಲೆಯ ಕಾಂಗ್ರೆಸ್ ಶಾಸಕರನ್ನು ಶನಿವಾರ ರಾತ್ರಿ ಒಳಗೆ ಬೆಂಗಳೂರಿಗೆ ಕರೆತರುವ ಹೊಣೆಯನ್ನು ನೀಡಿದ್ದಾರೆ. ಇಷ್ಟೇ ಅಲ್ಲದೇ ಗೆದ್ದ ಪಕ್ಷೇತರ ಶಾಸಕರನ್ನು ಮನವೊಲಿಸಿ ಬೆಂಗಳೂರಿಗೆ ಕರೆತರಬೇಕು ಎಂದು ಸೂಚನೆ ನೀಡಲಾಗಿದೆ.

ಈಗಾಗಲೇ ಖರ್ಗೆ ನಿವಾಸದಲ್ಲಿ ಕಾಂಗ್ರೆಸ್ ಹೈವೋಲ್ಟೇಜ್ ಮೀಟಿಂಗ್ ಮಾಡಿದ್ದು ಖರ್ಗೆ, ಸುರ್ಜೇವಾಲಾ, ಡಿಕೆ ಸಹೋದರರು ಚರ್ಚೆ ನಡೆಸಿದ್ದಾರೆ. ಪುಲಕೇಶಿನಗರ ಅಖಂಡ ಶ್ರೀನಿವಾಸ ಮೂರ್ತಿ, ರಾಣೆಬೆನ್ನೂರಿನ ಆರ್.ಶಂಕರ್, ಹರಪನಹಳ್ಳಿ ಲತಾ ಮಲ್ಲಿಕಾರ್ಜುನ್ ಮೇಲೆ ಸಿದ್ದರಾಮಯ್ಯ ಟೀಂ, ತರಿಕೆರೆಯ ಗೋಪಿಕೃಷ್ಣ, ಗೌರಿ ಬಿದನೂರು ಪುಟ್ಟಸ್ವಾಮಿಗೌಡ ಮೇಲೆ ಡಿಕೆಶಿ ತಂಡ ನಿಗಾ ಇಟ್ಟಿದೆ.

ಇಂದು ವಾರ್ಷಿಕ ಮಹಾಸಭೆ

ಮೈಸೂರು, ಮೇ 12– ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯದ ರತ್ನ ಮಾನಸ ಹಿರಿಯ ವಿದ್ಯಾರ್ಥಿನಿಯರ ಸಂಘದ ವಾರ್ಷಿಕ ಮಹಾಸಭೆಯು ಮೇ 13 ರಂದು ಬೆಳಗ್ಗೆ 11 ಗಂಟೆಗೆ ಕಾಲೇಜು ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಪ್ ಈಗ್ಲೂ ಅವರದ್ದೇ, ಮುಂದಕ್ಕೆ ನಮ್ಮದು: ಡಿ.ಕೆ.ಸುರೇಶ್ ವ್ಯಂಗ್ಯ

ಬೆಂಗಳೂರು: ಕಪ್ ಈಗಲೂ ಅವರದ್ದೇ, ಮುಂದಕ್ಕೆ ನಮ್ಮದು ಎಂದು ಡಿ.ಕೆ ಸುರೇಶ್ ಹೇಳಿದ್ದಾರೆ.



ಕಪ್ ನಮ್ದೆ ಎಂಬ ಸಚಿವ ಆರ್. ಅಶೋಕ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿರುವ ಡಿಕೆ ಸುರೇಶ್, ಈ ರೀತಿಯಾಗಿ ವ್ಯಂಗ್ಯವಾಡಿದ್ದಾರೆ. ಅಲ್ಲದೇ ಎಲ್ಲವನ್ನೂ ಸುರ್ಜೇವಾಲ ಹೇಳುತ್ತಾರೆ ಎಂದು ತಿಳಿಸಿದರು.

ಅಶೋಕ್ ಹೇಳಿದ್ದೇನು: ಗುರುವಾರ ಬೆಂಗಳೂರಿನಲ್ಲಿ ಮಾತನಾಡಿದ್ದ ಸಚಿವ ಆರ್.ಅಶೋಕ್, ನಾವು ಮ್ಯಾಚ್ ಆಡೋದಕ್ಕೆ ಬಂದಿದ್ದೇವೆ, ಆಡಿ ಗೆಲ್ತೀವಿ. ಕಳೆದ ಬಾರಿ ಮೈತ್ರಿ ಸರ್ಕಾರ ಬಂತು. ನಂತರ ಅದು ಬಿದ್ದು ಹೋಯ್ತು. ಕಳೆದ 4 ವರ್ಷದಿಂದ ಸ್ಥಿರ ಸರ್ಕಾರ ಕೊಟ್ಟಿದ್ದು ಬಿಜೆಪಿ. ನಾವು ಯಾರ ಜೊತೆಗೂ ಹೊಂದಾಣಿಕೆ ಮಾಡಿಕೊಳ್ಳಲ್ಲ. ರಿಸಲ್ಟ್ ಬಂದ ಮೇಲೆ ಹೈಕಮಾಂಡ್ ನಾಯಕರ ಸೂಚನೆಯಂತೆ ನಡೆದುಕೊಳ್ತೇವೆ ಎಂದು ತಿಳಿಸಿದರು.

ಜೆಡಿಎಸ್ ಜೊತೆಗೆ ಹೊಂದಾಣಿಕೆಯ ಪ್ರಮೇಯ ಬರೋದೇ ಇಲ್ಲ. ರಿಸಲ್ಟ್ ಬಂದ ಮೇಲೆ ತಂತ್ರಗಾರಿಕೆ ಇದ್ದೇ ಇರುತ್ತದೆ. ನಮಗೆ ವಿಶ್ವಾಸ ಇದೆ. ನಾವೇ ಸರ್ಕಾರ ಮಾಡುತ್ತೇವೆ. ನಮ್ಮ ಕಾರ್ಯಕರ್ತರು, ಜನರ ಮೇಲೆ ನಂಬಿಕೆ ಇದೆ. ನಾವೇ ಸಿಂಗಲ್, ಲಾರ್ಜೆಸ್ಟ್ ಪಕ್ಷ ಆಗಿ ಗೆದ್ದು ಬಂದರೂ ಸರ್ಕಾರ ರಚಿಸುವ ನೈತಿಕತೆ ಬಿಜೆಪಿಗೆ ಇದೆ ಎಂದಿದ್ದರು.

ಮಂಡ್ಯ ಜಿಲ್ಲೆಯ ಏಳು ಕ್ಷೇತ್ರದ ಫಲಿತಾಂಶಕ್ಕೆ ಕ್ಷಣಗಣನೆ

89 ಅಭ್ಯರ್ಥಿಗಳ ಭವಿಷ್ಯ ಇಂದು ನಿರ್ಧಾರ

ಮಂಡ್ಯ, ಮೇ 12– ರಾಜ್ಯ ವಿಧಾನಸಭಾ ಚುನಾವಣೆಯ ಫಲಿತಾಂಶ ಮೇ 13 ರಂದು ಹೊರ ಬೀಳಲಿದ್ದು, ಅಂತೆಯೇ ಮಂಡ್ಯ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಫಲಿತಾಂಶಕ್ಕೂ ಕ್ಷಣಗಣನೆ ಆರಂಭವಾಗಿದ್ದು, ಈ ಜಿಲ್ಲೆಯ 89 ಅಭ್ಯರ್ಥಿಗಳ ಭವಿಷ್ಯ ಶನಿವಾರ ನಿರ್ಧಾರವಾಗಲಿದೆ.

ಮೇ 10ರಂದು ಮತದಾನ ಮುಗಿದ ನಂತರ ಗುರುವಾರ, ಶುಕ್ರವಾರ ಜಿಲ್ಲೆಯಾದ್ಯಂತ ಬೆಟ್ಟಿಂಗ್ ಅಬ್ಬರ ಜೋರಾಗಿತ್ತು ಅದರಲ್ಲೂ ಹೈವೋಲ್ಟೇಜ್ ಕ್ಷೇತ್ರವಾಗಿ ಪರಿಣಮಿಸಿರುವ ಮೇಲುಕೋಟೆ, ನಾಗಮಂಗಲ, ಶ್ರೀರಂಗಪಟ್ಟಣ ಹಾಗೂ ಮಂಡ್ಯದಲ್ಲಿ ಹಣದಿಂದ ಹಿಡಿದು, ಕುರಿ, ಕೋಳಿವರೆಗೂ ಬೆಟ್ಟಿಂಗ್ ಭರಾಟೆ ಬಲು ಜೋರಾಗಿದೆ.

ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 15 ಅಭ್ಯರ್ಥಿಗಳು ಕಣದಲ್ಲಿದ್ದು, ಈ ಪೈಕಿ ಜೆಡಿಎಸ್‌ನ ಬಿ.ಆರ್.ರಾಮಚಂದ್ರ, ಕಾಂಗ್ರೆಸ್‌ನ ಗಣಿಗ ರವಿಕುಮಾರ್, ಬಿಜೆಪಿಯ ಅಶೋಕ್ ಜಯರಾಂ ಹಾಗೂ ಜೆಡಿಎಸ್‌ನ ಬಂಡಾಯ ಅಭ್ಯರ್ಥಿ ಕೆ.ಎಸ್.ವಿಜಯಾನಂದ ಪ್ರಮುಖರಾಗಿದ್ದು, ರಾಮಚಂದ್ರ ಹಾಗೂ ಗಣಿಗ ರವಿಕುಮಾರ್ ನಡುವೆ ಗೆಲುವಿಗೆ ಪೈಪೋಟಿ ಇದೆ. ಫಲಿತಾಂಶಕ್ಕಾಗಿ ಇಡೀ ಕ್ಷೇತ್ರದ ಜನ ಕಾಯುತ್ತಿದ್ದಾರೆ.

ಮೇಲುಕೋಟೆಯಲ್ಲಿ ಒಟ್ಟು 11 ಅಭ್ಯರ್ಥಿಗಳು ಕಣದಲ್ಲಿದ್ದು, ಈ ಪೈಕಿ ಜೆಡಿಎಸ್‌ನ ಸಿ.ಎಸ್.ಪುಟ್ಟರಾಜು, ರೈತ ಸಂಘದ ದರ್ಶನ್ ಪುಟ್ಟಣ್ಣಯ್ಯ, ಬಿಜೆಪಿಯ ಇಂದ್ರೇಶ್ ಪ್ರಮುಖರು. ಆದರೆ ಪುಟ್ಟರಾಜು ಮತ್ತು ದರ್ಶನ್ ನಡುವೆ ಭಾರೀ ಕಾಳಗವೇ ನಡೆದಿದ್ದು, ಫಲಿತಾಂಶ ರೋಚಕತೆಯಿಂದ ಕೂಡಿದೆ.

ಮಳವಳ್ಳಿ ಮೀಸಲು ಕ್ಷೇತ್ರದಲ್ಲಿ ಒಟ್ಟು 14 ಮಂದಿ ಅಖಾಡದಲ್ಲಿದ್ದು, ಜೆಡಿಎಸ್‌ನ ಡಾ.ಕೆ.ಅನ್ನದಾನಿ, ಕಾಂಗ್ರೆಸ್‌ನ ಪಿ.ಎಂ. ನರೇಂದ್ರಸ್ವಾಮಿ, ಬಿಜೆಪಿಯ ಮುನಿರಾಜು ಹಾಗೂ ಬಿಎಸ್ಪಿಯ ಕೃಷ್ಣಮೂರ್ತಿ ಪ್ರಮುಖ ಹುರಿಯಾಳಾಗಿದ್ದು, ಅನ್ನದಾನಿ ಮತ್ತು ನರೇಂದ್ರಸ್ವಾಮಿ ನಡುವಿನ ನೇರಾ ನೇರಾ ಕದನದಲ್ಲಿ ಗೆಲುವಿನ ಮಾಲೆ ಯಾರಿಗೆ ಎಂಬುದೇ ಕುತೂಹಲದ ಸಂಗತಿಯಾಗಿದೆ.

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ 17 ಮಂದಿ ಅಖಾಡದಲ್ಲಿದ್ದು, ಜೆಡಿಎಸ್‌ನಿಂದ ರವೀಂದ್ರ ಶ್ರೀಕಂಠಯ್ಯ, ಕಾಂಗ್ರೆಸ್‌ನಿಂದ ಎ.ಬಿ. ರಮೇಶ್‌ಬಾಬು ಬಂಡಿ ಸಿದ್ದೇಗೌಡ, ಬಿಜೆಪಿ ಯಿಂದ ಇಂಡುವಾಳು ಸಚ್ಚಿದಾನಂದ ಹಾಗೂ ಜೆಡಿಎಸ್ ಬಂಡಾಯ ಅಭ್ಯರ್ಥಿ ತಗ್ಗಹಳ್ಳಿ ವೆಂಕಟೇಶ್ ಪ್ರಮುಖ ಹುರಿಯಾಳಾಗಿದ್ದಾರೆ.

ಹೈವೋಲ್ಟೇಜ್ ಕ್ಷೇತ್ರಗಳಲ್ಲೊಂದಾದ ನಾಗಮಂಗಲದಲ್ಲಿ ಒಟ್ಟು 14 ಮಂದಿ ಕಣದಲ್ಲಿದ್ದು, ಈ ಪೈಕಿ ಜೆಡಿಎಸ್‌ನ ಕೆ.ಸುರೇಶ್‌ಗೌಡ, ಕಾಂಗ್ರೆಸ್‌ನ ಎನ್.ಚಲುವರಾಯಸ್ವಾಮಿ, ಬಿಜೆಪಿಯ ಸುಧಾ ಶಿವರಾಮೇಗೌಡ ಹಾಗೂ ಬಿಜೆಪಿ ಬಂಡಾಯ ಅಭ್ಯರ್ಥಿ ಫೈಟರ್ ರವಿ (ಮಲ್ಲಿಕಾರ್ಜುನ) ಪ್ರಮುಖ ಅಭ್ಯರ್ಥಿಗಳಾಗಿದ್ದು, ಸುರೇಶ್‌ಗೌಡ ಹಾಗೂ ಚಲುವರಾಯಸ್ವಾಮಿ ನಡುವೆ ಜಿದ್ದಾಜಿದ್ದಿನ ಹಣಾಹಣಿ ನಡೆದಿದ್ದು, ವಿಜಯಮಾಲೆ ಯಾರಿಗೆ ಎಂಬ ಕುತೂಹಲ ನಾಗಮಂಗಲ ಜನಕ್ಕಿದೆ.

ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 10 ಮಂದಿ ಅಖಾಡದಲ್ಲಿದ್ದು, ಈ ಪೈಕಿ ಜೆಡಿಎಸ್‌ನ ಡಿ.ಸಿ.ತಮ್ಮಣ್ಣ, ಕಾಂಗ್ರೆಸ್‌ನ ಕದಲೂರು ಉದಯ್ ಹಾಗೂ ಬಿಜೆಪಿಯ ಎಸ್.ಪಿ.ಸ್ವಾಮಿ ಪ್ರಮುಖರಾಗಿದ್ದು, ಈ ಪೈಕಿ ತಮ್ಮಣ್ಣ, ಉದಯ್, ಸ್ವಾಮಿ ನಡುವೆ ತ್ರಿಕೋನ ಸ್ಪರ್ಧೆ ಇದೆ.

ಕೆ.ಆರ್.ಪೇಟೆ ಕ್ಷೇತ್ರದಲ್ಲಿ ಒಟ್ಟು 8 ಮಂದಿ ಕಣದಲ್ಲಿದ್ದು, ಈ ಪೈಕಿ ಜೆಡಿಎಸ್‌ನ ಹೆಚ್.ಟಿ.ಮಂಜು, ಕಾಂಗ್ರೆಸ್‌ನ ಬಿ.ಎಲ್. ದೇವರಾಜು ಹಾಗೂ ಬಿಜೆಪಿಯ ಕೆ.ಸಿ.ನಾರಾಯಣಗೌಡ ಪ್ರಮುಖ ಹುರಿಯಾಳಾಗಿದ್ದು, ಮಂಜು, ದೇವರಾಜು, ನಾರಾಯಣಗೌಡ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದ್ದು, ಕೆಆರ್.ಪೇಟೆಯ ಜನರ ಆಶೀರ್ವಾದ ಯಾರಿಗೆ ಇದೆ ಎಂಬುದು ಶನಿವಾರ ಮಧ್ಯಾಹ್ನದ ವೇಳೆಗೆ ತಿಳಿಯಲಿದೆ.

ಒಟ್ಟಾರೆ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಒಟ್ಟು 89 ಅಭ್ಯರ್ಥಿಗಳ ಹಣೆ ಬರಹ ಶನಿವಾರ ನಿರ್ಧಾರವಾಗಲಿದ್ದು, ಜಿಲ್ಲೆಯ ಅಭ್ಯರ್ಥಿಗಳು, ಪಕ್ಷಗಳ ಮುಖಂಡರು ಹಾಗೂ ಜನ ಫಲಿತಾಂಶಕ್ಕಾಗಿ ಕಾದು ಕುಳಿತಿದ್ದಾರೆ.

ಮತ ಎಣಿಕೆಗೆ ಸಕಲ ಸಿದ್ಧತೆ: ಡಿಸಿ ಗೋಪಾಲಕೃಷ್ಣ



ಮಂಡ್ಯ,ಮೇ.12– ಶನಿವಾರ ಮತ ಎಣಿಕೆಗೆ ಮಂಡ್ಯ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದ್ದು, ಯಾವುದೇ ಸಮಸ್ಯೆಯಾಗದ ರೀತಿಯಲ್ಲಿ ಮತ ಎಣಿಕೆ ನಡೆಸಿ, ಫಲಿತಾಂಶವನ್ನು ಆದಷ್ಟು ಬೇಗ ಜನರ ಮುಂದೆ ಇಡಲಿದ್ದೇವೆ ಎಂದು ಜಿಲ್ಲಾಧಿಕಾರಿ ಡಾ.ಹೆಚ್.ಎನ್. ಗೋಪಾಲಕೃಷ್ಣ ತಿಳಿಸಿದರು.

ಶನಿವಾರ ನಗರದ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈಗಾಗಲೇ ವಿದ್ಯುನ್ಮಾನ ಮತಯಂತ್ರಗಳನ್ನು ಬಿಗಿ ಪೊಲೀಸ್ ಭದ್ರತೆಯಲ್ಲಿ ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ ಕಟ್ಟಡದಲ್ಲಿ ಏರ್ಪಡಿಸಿರುವ ಭದ್ರತಾ ಕೊಠಡಿಯಲ್ಲಿ ವಿಧಾನಸಭಾ ಕ್ಷೇತ್ರವಾರು ತಲಾ ಎರಡು ಕೊಠಡಿಗಳಂತೆ ಒಟ್ಟು 14 ಕೊಠಡಿಗಳಲ್ಲಿ ಇರಿಸಲಾಗಿದೆ. ಮೊಹರಾದ ಭದ್ರತಾ ಕೊಠಡಿಯನ್ನು ಆರಕ್ಷಕ ಇಲಾಖೆಗೆ ಸುರಕ್ಷತೆಗಾಗಿ ಹಸ್ತಾಂತರಿಸಿದ್ದು, ಮೂರು ಹಂತದ ಭದ್ರತೆಯನ್ನು ಒದಗಿಸಲಾಗಿದೆ ಎಂದರು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರಂತೆ ಒಟ್ಟು 7 ಎಣಿಕೆ ವೀಕ್ಷಕರನ್ನು ನೇಮಿಸಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 2 ಕೊಠಡಿಗಳಲ್ಲಿ ಒಟ್ಟು 14 ಟೇಬಲ್‌ಗಳನ್ನು ಮತ ಎಣಿಕೆಗಾಗಿ ವ್ಯವಸ್ಥೆಗೊಳಿಸಲಾಗಿದೆ. ಎಣಿಕೆ ಕಾರ್ಯಕ್ಕೆ ಪ್ರತಿ ಟೇಬಲ್‌ಗೆ ತಲಾ ಒಬ್ಬ ಎಣಿಕೆ ಮೇಲ್ವಿಚಾರಕ, ಎಣಿಕೆ ಸಹಾಯಕ ಮತ್ತು ಮೈಕ್ರೋ ಅಬ್ಸರ್ವರ್‌ಗಳನ್ನು ಹಾಗೂ ಅಂಚೆ ಮತಪತ್ರಗಳ ಎಣಿಕೆಗಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 2 ಟೇಬಲ್‌ಗಳನ್ನು ವ್ಯವಸ್ಥೆಗೊಳಿಸಲಾಗಿದೆ ಎಂದು ಹೇಳಿದರು.

ಒಟ್ಟಾರೆ 120 ಅಧಿಕಾರಿ, ಎಣಿಕೆ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದ್ದು, ರ್‍ಯಾಡಮೈಜೇಷನ್ ಪ್ರಕ್ರಿಯೆ ಮುಖಾಂತರ ವಿಧಾನಸಭಾ ಕ್ಷೇತ್ರ ಹಾಗೂ ಟೇಬಲ್ ಸಂಖ್ಯೆಯನ್ನು ಹಂಚಿಕೆ ಮಾಡಲಾಗುವುದು, ಪ್ರತಿ ಟೇಬಲ್‌ಗೆ ಸಿಸಿ ಕ್ಯಾಮರಾ ಅಳವಡಿಸಲಾಗಿದೆ. ಮೇ 13ರ ಬೆಳಗ್ಗೆ 7.15 ಗಂಟೆಗೆ ಭದ್ರತಾ ಕೊಠಡಿಯನ್ನು ಎಣಿಕೆ ವೀಕ್ಷಕರ ಸಮಕ್ಷಮದಲ್ಲಿ ತೆರೆದು ಬೆಳಿಗ್ಗೆ 08.00 ಗಂಟೆಗೆ ಅಂಚೆ ಮತ ಎಣಿಕೆಯನ್ನು ಪ್ರಾರಂಭಿಸಲಾಗುವುದು. ಬೆಳಿಗ್ಗೆ 8.15 ಗಂಟೆಗೆ ವಿದ್ಯುನ್ಮಾನ ಮತಯಂತ್ರಗಳ ಮತ ಎಣಿಕೆ ಕಾರ್ಯ ಪಾರಂಭವಾಗುತ್ತದೆ ಎಂದರು.

ಎಣಿಕೆ ಕೇಂದ್ರದೊಳಗೆ ಮೊಬೈಲ್ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳು, ಸ್ಫೋಟಕ ಸಾಮಗ್ರಿಗಳನ್ನು ಕಡ್ಡಾಯವಾಗಿ ನಿಷೇಧಿಸಲಾಗಿದ್ದು, ಮತ ಎಣಿಕೆ ದಿನವಾದ ಮೇ 13 ರ ಬೆಳಿಗ್ಗೆ 6.00ಗಂಟೆಯಿಂದ ಮೇ 14 ರ ಬೆಳಿಗ್ಗೆ 10.00ಗಂಟೆಯವರೆಗೆ ಮಂಡ್ಯ ಜಿಲ್ಲೆಯಾದ್ಯಂತ ಮದ್ಯ ನಿಷೇಧಿಸಲಾಗಿದೆ ಎಂದು ವಿವರಿಸಿದರು.

ಭಾರತೀಯ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಮತ ಎಣಿಕೆ ನಂತರ ಎಣಿಕೆ ವೀಕ್ಷಕರ ಅಭ್ಯರ್ಥಿಗಳ/ಎಜೆಂಟರುಗಳ ಸಮಕ್ಷಮದಲ್ಲಿ ಲಾಟರಿ ಚೀಟಿ ಎತ್ತುವುದರ ಮೂಲಕ 5 ವಿವಿಪ್ಯಾಟ್‌ಗಳನ್ನು ಆಯ್ಕೆ ಮಾಡಿ ವಿವಿಪ್ಯಾಟ್‌ನಲ್ಲಿರುವ ಸ್ಲಿಪ್‌ಗಳನ್ನು ಇವಿಎಂ ಯಂತ್ರಗಳಲ್ಲಿ ಚಲಾವಣೆಯಾಗಿರುವ ಮತಗಳೊಂದಿಗೆ ತಾಳೆ ಮಾಡಲಾಗುವುದು ಎಂದರು.

ಶೇ.84.45ರಷ್ಟು ಮತದಾನ: ಜಿಲ್ಲೆಯಲ್ಲಿ ಮೇ.10 ರಂದು 7 ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯು ಶಾಂತಿಯುತವಾಗಿ ಮುಕ್ತಾಯವಾಗಿದ್ದು, ಜಿಲ್ಲೆಯಲ್ಲಿ ಶೇ.84.45ರಷ್ಟು ಮತದಾನವಾಗಿದೆ. ಜಿಲ್ಲೆಯಲ್ಲಿ ಒಟ್ಟು 15,33831 ಮತದಾರರಿದ್ದು, ಈ ಪೈಕಿ 7,59323 ಪುರುಷರು, 7,74363 ಮಹಿಳೆಯರು ಹಾಗೂ 145 ಇತರೆ ಮತದಾರರಿದ್ದಾರೆ. ಒಟ್ಟು 12,95319 ಮತದಾನವಾಗಿದೆ. ಈ ಪೈಕಿ 6,46227 ಪುರುಷರು ಹಾಗೂ 6,49049 ಮಹಿಳಾ ಮತ್ತು ಇತರೆ 43 ಮಂದಿ ಮತ ಚಲಾಯಿಸಿದ್ದಾರೆ ಎಂದು ತಿಳಿಸಿದರು.

ಮಳವಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 99,390 ಪುರುಷ 96,658 ಮಹಿಳೆ ಹಾಗೂ 5 ಇತರರು, ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ 89,083 ಪುರುಷ 92,541 ಮಹಿಳಾ ಹಾಗೂ 10 ಮಂದಿ ಇತರರು, ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ 90,864 ಪುರುಷ 91,273 ಮಹಿಳಾ ಹಾಗೂ 4 ಇತರರು, ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ 85, 755 ಪುರುಷ 87206 ಮಹಿಳಾ ಹಾಗೂ 15 ಇತರರು, ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ 91,075 ಪುರುಷ 92,838 ಮಹಿಳಾ ಹಾಗೂ 3 ಇತರರು, ನಾಗಮಂಗಲ ವಿಧಾನಸಭಾ ಕ್ಷೇತ್ರದಲ್ಲಿ 96,244, ಪುರುಷ 94,399 ಮಹಿಳಾ ಹಾಗೂ 5 ಇತತರು, ಕೆ.ಆರ್.ಪೇಟೆ ವಿಧಾನಸಭಾ ಕ್ಷೇತ್ರದ 93,816 ಪುರುಷ 94,134 ಹಾಗೂ 1 ಇತರರು ಮತ ಚಲಾಯಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಇನ್ನು ಜಿಲ್ಲೆಯಾದ್ಯಾಂತ 80 ವರ್ಷ ಮೇಲ್ಪಟ್ಟ, ಅಂಗವಿಕಲ, ಅಗತ್ಯ ಸೇವೆ ಒದಗಿಸುವ ಮತದಾರ ಮತ್ತು ಮತಗಟ್ಟೆ ಅಧಿಕಾರಿ/ಸಿಬ್ಬಂದಿಗಳು ಅಂಚೆ ಮತಪತ್ರದ ಮೂಲಕ ಒಟ್ಟು 10959 ಮಂದಿ ಮತ ಚಲಾಯಿಸಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಜಿ.ಪಂ. ಸಿಇಓ ಶೇಕ್ ತನ್ವೀರ್ ಆಸೀಫ್, ಎಸ್ಪಿ ಎನ್.ಯತೀಶ್, ಅಬಕಾರಿ ಆಯುಕ್ತೆ ಡಾ.ಮಹದೇವಿ ಬಾಯಿ, ವಾರ್ತಾಧಿಕಾರಿ ಎಸ್.ಹೆಚ್.ನಿರ್ಮಲ ಹಾಜರಿದ್ದರು.

ಕಾರು ಡಿಕ್ಕಿ: ಇಬ್ಬರು ಪಾದಚಾರಿಗಳ ಸಾವು

ಮಂಡ್ಯ, ಮೇ 12– ಕಾರು ಹೊಡೆದ ಪರಿಣಾಮ ಇಬ್ಬರು ಪಾದಚಾರಿಗಳು ಮೃತಪಟ್ಟ ಘಟನೆ ಹೊಸ ಬೂದನೂರು ಗ್ರಾಮದ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಸಂಜೆ 7.30ರಲ್ಲಿ ಸಂಭವಿಸಿದೆ

ಹೊಸ ಬೂದನೂರು ಗ್ರಾಮದ ಮೂಡೆ ಪುಟ್ಟಲಿಂಗಯ್ಯ ಎಂಬುವರ ಪುತ್ರ ಪ್ರದೀಪ (45) ಹಾಗೂ ಕೋಣೆ ಕೆಂಪಣ್ಣ ಎಂಬುವವರ ಪುತ್ರ ಸತೀಶ್ (40) ಅಪಘಾತದಲ್ಲಿ ಮೃತಪಟ್ಟವರು. ಇವರು ಇಂದು ಸಂಜೆ ಗದ್ದೆಯಿಂದ ಮನೆಗೆ ತೆರಳಲು ಹೈವೇ ದಾಟುತ್ತಿದ್ದಾಗ ಬೆಂಗಳೂರು ಕಡೆಯಿಂದ ಅತಿ ವೇಗದಲ್ಲಿ ಬಂದ ಕಾರು ಇವರಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಇದರಿಂದ ರೊಚ್ಚಿಗೆದ್ದ ಗ್ರಾಮಸ್ಥರು ಒಂದೂವರೆ ಗಂಟೆಗಳ ಕಾಲ ಹೆದ್ದಾರಿ ತಡೆ ನಡೆಸಿದರು.

ಸ್ಥಳಕ್ಕೆ ಆಗಮಿಸಿದ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದಪ್ಪ ಹಾಗೂ ಸಿಬ್ಬಂದಿ ಗ್ರಾಮಸ್ಥರ ಮನವೊಲಿಸಿ, ಹೆದ್ದಾರಿಯಲ್ಲಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಅಪಘಾತ ಮಾಡಿದ ಕಾರಿನ ಚಾಲಕ ಪೊಲೀಸರಿಗೆ ಶರಣಾಗಿದ್ದಾರೆ. ಈ ಸಂಬಂಧ ಮಂಡ್ಯ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕರ್ನಾಟಕ ಸಂಘ ನೂತನ ರಂಗಮಂದಿರಕ್ಕೆ ಶಿಲಾನ್ಯಾಸ



ಮಂಡ್ಯ, ಮೇ.12– ಆದಿಚುಂಚನಗಿರಿ ಕ್ಷೇತ್ರದ ಪೀಠಾಧ್ಯಕ್ಷ ಡಾ.ನಿರ್ಮಲಾನಂದ ಮಹಾಸ್ವಾಮೀಜಿಯವರು ಕರ್ನಾಟಕ ಸಂಘದ ಆವರಣದಲ್ಲಿ ಏರ್ಪಡಿಸಿದ್ದ ಸುಮಾರು 5 ಕೋಟಿ ವೆಚ್ಚದ ರಂಗಮಂದಿರ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಶ್ರೀಗಳು, ಕರ್ನಾಟಕ ಸಂಘ ಹಲವಾರು ವರ್ಷಗಳಿಂದ ಬೇರೆ ಬೇರೆ ರೀತಿಯ ಕಾರ್ಯಕ್ರಮಗಳ ಮೂಲಕ ವ್ಯಕ್ತಿಯ ಬದುಕನ್ನ ಸಾಂಸ್ಕೃತಿಕವಾಗಿ ಶೈಕ್ಷಣಿಕವಾಗಿ ಹಾಗೂ ಧಾರ್ಮಿಕವಾಗಿ ಬದುಕು ಕಟ್ಟುವ ಕೆಲಸವನ್ನ ಮಾಡುತ್ತಿದೆ. ಇದಕ್ಕೆ ಪೂರಕವಾಗಿ ಇನ್ನೊಂದು ಹೆಜ್ಜೆ ಮುಂದಿಟ್ಟು ರಂಗಮಂದಿರ ಕಟ್ಟುವ ಕೆಲಸಕ್ಕೆ ಮುಂದಾಗಿರುವುದು ಸಂತೋಷ ತಂದಿದೆ ಎಂದರು.

ಕರ್ನಾಟಕ ಸಂಘ ಹೊಸ ಆಯಾಮವನ್ನು ತಂದುಕೊಟ್ಟಿದೆ. ವರ್ಷಪೂರ್ತಿ ಕನ್ನಡ ಪರವಾದ ಕಾರ್ಯಕ್ರಮಗಳು ಮಾಡುತ್ತಿದೆ. ಜಯಪ್ರಕಾಶ್‌ಗೌಡ ಕರ್ನಾಟಕ ಸಂಘಕ್ಕೆ ಅಧ್ಯಕ್ಷರಾಗಿ ಅತ್ಯುತ್ತಮ ವಾದ ಕೆಲಸ ಮಾಡುತ್ತಿದ್ದಾರೆ. ಈ ಸಂಘ ಇನ್ನು ಮುಂದೆಯೂ ಸಹ ಸಾಂಸ್ಕೃತಿಕ ಸೌರಭ ತರುವಂಥ ಕೆಲಸ ಮಾಡಲಿ ಎಂದರು.

ವೇದಿಕೆಯಲ್ಲಿ ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶ್‌ಗೌಡ, ಶಾಸಕ ಎಂ.ಶ್ರೀನಿವಾಸ್, ವಿಧಾನ ಪರಿಷತ್ ಮಾಜಿ ಸದಸ್ಯರಾದ ಕೆ.ಟಿ.ಶ್ರೀಕಂಠೇಗೌಡ, ಬಿ.ರಾಮಕೃಷ್ಣ, ನಿವೃತ್ತ ಉಪನ್ಯಾಸಕರಾದ ಡಾ.ಎಚ್.ಎಸ್.ಮುದ್ದೇಗೌಡ, ಸಾಹಿತಿ ಡಾ.ರಾಗೌ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಜಯರಾಂ ರಾಯಪುರ, ನಿವೃತ್ತ ಅಧಿಕ್ಷಕ ಟಿ.ಎಂ.ರಾಜಕುಮಾರ್, ಕರ್ನಾಟಕ ಸಂಘದ ಎಂ.ಕೆ.ಹರೀಶ್, ಚಂದಗಾಲು ಲೋಕೇಶ್, ಹನಕೆರೆ ಹೆಚ್.ಬಿ.ನಾಗಪ್ಪ, ಹೆಚ್.ಡಿ. ಸೋಮಶೇಖರ್ ಮತ್ತಿತರರು ಇದ್ದರು.

ತಡೆಗೋಡೆಗೆ ಬೈಕ್ ಡಿಕ್ಕಿ: ಯುವಕ ಸಾವು

ಭಾರತೀನಗರ, ಮೇ 12– ರಸ್ತೆ ಬದಿಯಲ್ಲಿ ಅಪಘಾತಗಳನ್ನು ತಪ್ಪಿಸಲು ಹಾಕಲಾಗಿದ್ದ ಕಬ್ಬಿಣದ ತಡೆಗೋಡೆಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಯುವಕ ಸಾವನ್ನಪ್ಪಿರುವ ಘಟನೆ ಸಮೀಪದ ಮೆಳ್ಳಹಳ್ಳಿ ಬಳಿ ಜರುಗಿದೆ.

ಇಲ್ಲಿಗೆ ಸಮೀಪದ ಬಿದರಹೊಸಹಳ್ಳಿ ಗ್ರಾಮದ ಮಾಲೆ ಸಿದ್ದೇಗೌಡರ ಪುತ್ರ 32 ವರ್ಷದ ಸಿದ್ದೇಶ್ ಅಪಘಾತದಲ್ಲಿ ಸಾವಿಗೀಡಾದವನಾಗಿದ್ದು, ಈತ ಬೈಕ್‌ನಲ್ಲಿ ಭಾರತೀನಗರದಿಂದ ಬಿದರಹೊಸಹಳ್ಳಿ ಗ್ರಾಮಕ್ಕೆ ತೆರಳುವಾಗ ಮಳೆ ಜೋರಾಗಿ ಬಂದಿದ್ದು, ಮಳೆಯ ರಭಸಕ್ಕೆ ನಿಯಂತ್ರಣ ತಪ್ಪಿದ ಬೈಕ್ ರಸ್ತೆ ಬದಿಯಲ್ಲಿದ್ದ ಕಬ್ಬಿಣದ ತಡೆಗೋಡೆಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ತೀವ್ರ ಗಾಯಗೊಂಡ ಸಿದ್ದೇಶ್ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ. ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ

ವಿದ್ಯುತ್‌ಶಾಕ್: ಯೂನಿಟ್‌ಗೆ 70 ಪೈಸೆ ಹೆಚ್ಚಳ

ಬಿಲ್‌ನಲ್ಲಿ ಶೇ.8.31ರಷ್ಟು ಹಣ ಪಾವತಿ ಹೆಚ್ಚಾಗಲಿದೆ ಎಂದು ತಿಳಿದುಬಂದಿದೆ. ಇನ್ನು ಈ ದರ ಏಪ್ರಿಲ್ 1ರಿಂದಲೇ ಪೂರ್ವಾನ್ವಯವಾಗಲಿದೆ. 2023–24ನೋ ಸಾಲಿನ ವಿದ್ಯುಚ್ಛಕ್ತಿ ದರ ಪರಿಷ್ಕರಣೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (ಕ.ವಿ.ನಿ.ಆ)ವು ಆರ್ಥಿಕ ವರ್ಷ 2023–24ನೇ ಸಾಲಿಗೆ ಎಲ್ಲಾ ವಿತರಣಾ ಪರವಾನಿಗೆದಾರರ ವ್ಯಾಪ್ತಿಯ ಗ್ರಾಹಕರಿಗೆ ಅನ್ವಯವಾಗುವಂತೆ ವಿದ್ಯುಚ್ಛಕ್ತಿ ದರಗಳ ಪರಿಷ್ಕರಣೆಯಲ್ಲಿ ಅನುಮೋದಿಸಲಾಗಿದೆ.

ವಿದ್ಯುತ್ ಹೆಚ್ಚಳಕ್ಕೆ ಪ್ರಮುಖ ಕಾರಣಗಳು:

- 2021–22ರಲ್ಲಿ ಕೋವಿಡ್ ಕಾರಣದಿಂದಾಗಿ ದರ ಏರಿಕೆ ಮಾಡಲಾಗದ ಹಿನ್ನೆಲೆಯಲ್ಲಿ 1,720.11 ಕೋಟಿ ರೂ. ಆದಾಯ ನಷ್ಟವಾಗಿದೆ.
- ಕಲ್ಲಿದ್ದಲು ಹಾಗೂ ಅದರ ಸಾಗಾಣಿಕೆ ವೆಚ್ಚದ ಹೆಚ್ಚಳದಿಂದಾಗಿ, ಆರ್ಥಿಕ ವರ್ಷ 2022–23ರ ವಿದ್ಯುತ್ ಖರೀದಿ ವೆಚ್ಚಕ್ಕೆ ಹೋಲಿಸಿದರೆ, 2023– 24ರಲ್ಲಿ ವಿದ್ಯುತ್ ಖರೀದಿ ವೆಚ್ಚ (ಶೇಕಡಾ 13ರಷ್ಟು) ಹೆಚ್ಚಳವಾಗಿದೆ.
- ನೌಕರರ ವೇತನ ಮತ್ತು ಭತ್ಯೆ ಶೇಕಡಾ 20 ರಷ್ಟು ಪರಿಷ್ಕರಣೆ ಆಗಿದೆ.
- ಬಂಡವಾಳ ಹೂಡಿಕೆಯಲ್ಲಿ ಹೆಚ್ಚಳ ಮತ್ತು ಬ್ಯಾಂಕ್‌ಗಳ ಸಾಲದ ಮೇಲಿನ ಬಡ್ಡಿ ದರಗಳ ಹೆಚ್ಚಳದಿಂದಾಗಿ ಬಡ್ಡಿ ಮತ್ತು ಹಣಕಾಸು ಶುಲ್ಕಗಳಲ್ಲಿ ಶೇಕಡಾ 30 ರಷ್ಟು ಹೆಚ್ಚಳವಾಗಿದೆ.
- ವಿದ್ಯುತ್ ಸರಬರಾಜು ಕಂಪನಿ ಉಪಕರಣಗಳ ಸವಕಳಿ ಪ್ರಮಾಣದಲ್ಲಿ ಶೇ.15 ಹೆಚ್ಚಳವಾಗಿದೆ.
- ವಾರ್ಷಿಕ ಕಂದಾಯ ಅಗತ್ಯತೆ ಹೆಚ್ಚಳದಿಂದಾಗಿ, ಕಳೆದ ವರ್ಷ 2022–23ರಲ್ಲಿ ಪ್ರತಿ ಯೂನಿಟ್‌ಗೆ ಸರಾಸರಿ ರೂ.8.42 ವೆಚ್ಚವಿತ್ತು. ಇದು ಆರ್ಥಿಕ ವರ್ಷ 2023–24ಕ್ಕೆ ಪ್ರತಿ ಯೂನಿಟ್‌ಗೆ 9.12 ರೂ.ಗೆ ಹೆಚ್ಚಳವಾಗಿದೆ.
- ಆದಾಯ ಕೊರತೆ ಮೊತ್ತ 4,457.12 ಕೋಟಿ ರೂ.ಗಳನ್ನು ಸರಿದೂಗಿಸಲು, ಎಲ್ಲಾ ಎಲ್.ಟಿ ಮತ್ತು ಹೆಚ್.ಟಿ ಗ್ರಾಹಕರಿಗೆ ಪತಿ ಯೂನಿಟ್‌ಗೆ ಸರಾಸರಿ 70 ಪೈಸೆಯನ್ನು ದರ ಹೆಚ್ಚಳ ಮಾಡಲಾಗಿದೆ. ಇದರಿಂದಾಗಿ ಗ್ರಾಹಕರ ಬಿಲ್ಲುಗಳಲ್ಲಿ ಮಾಸಿಕ ಶೇಕಡಾ 8.31 ರಷ್ಟು ಹೆಚ್ಚಳವಾಗಿದೆ.

ಎಸ್ಕಾಂಗಳಿಂದ ಸಲ್ಲಿಸಲಾಗಿದ್ದ ಪ್ರಸ್ತಾವನೆ ಹೀಗಿದೆ: ಆರ್ಥಿಕ ವರ್ಷ 2023–24 ಕರ್ನಾಟಕ ವಿದ್ಯುತ್ ಸರಬರಾಜು ಕಂಪನಿಗಳು (ವಿ.ಸ.ಕಂ) ಒಟ್ಟು ಮೊತ್ತ 62,133.47 ಕೋಟಿ ರೂ. ವಾರ್ಷಿಕ ಕಂದಾಯ ಅಗತ್ಯತೆಯನ್ನು ಅನುಮೋದಿಸುವಂತೆ ಕೋರಿರುತ್ತವೆ. ಸದರಿ ಮೊತ್ತವು 8,951.20 ಕೋಟಿ ರೂ.ಗಳ ಕಂದಾಯದಲ್ಲಿನ ಕೊರತೆಯನ್ನು ಒಳಗೊಂಡಿರುತ್ತದೆ. ವಿದ್ಯುತ್‌ಸರಬರಾಜು ಕಂಪನಿಗಳು ಒಟ್ಟು, ಕಂದಾಯ ಕೊರತೆಯನ್ನು ಸರಿದೂಗಿಸಲು ಪ್ರತಿ ಯೂನಿಟ್‌ಗೆ ಸರಾಸರಿ 139 ಪೈಸೆಗಳನ್ನು, (ಪ್ರತಿ ಯೂನಿಟ್‌ಗೆ 120 ರಿಂದ 146 ಪ್ರಸಗಳವರೆಗೆ) ಹೆಚ್ಚಿಸುವಂತೆ ಕೋರಿರುತ್ತವೆ. ಸದರಿ ಕೊರತೆಯು ವಾರ್ಷಿಕ ಕಾರ್ಯನಿರ್ವಹಣೆ ಪುನರ್ಮನನ (APR)ದ ಅನುಸಾರ ಆರ್ಥಿಕ ವರ್ಷ 2021–22ರಲ್ಲಿ ಉಂಟಾಗಿರುವ ಕಂದಾಯದ ಕೊರತೆ ಮೊತ್ತ ರೂ. 2337.08 ಕೋಟಿಗಳನ್ನು ಒಳಗೊಂಡಿರುತ್ತದೆ. ಅಂದರೆ, ವಿ.ಸ.ಕಂ.ಗಳು ಶೇಕಡಾ 16.83 ರಷ್ಟು ದರ ಹೆಚ್ಚಳಕ್ಕೆ ಪ್ರಸ್ತಾವನೆ ಸಲ್ಲಿಸಿದ್ದವು.

ಆಯೋಗದ ಅನುಮೋದನೆ: ವಿದ್ಯುತ್ ಸರಬರಾಜು ಕಂಪನಿಗಳು ತಮ್ಮ ದರ ಪರಿಷ್ಕರಣೆ ಅರ್ಜಿಯಲ್ಲಿ ಒಟ್ಟು ಮೊತ್ತ 62,133.47 ಕೋಟಿ ರೂ.ಗಳಿಗೆ ಅನುಮೋದಿಸುವಂತೆ ಕೋರಿರುತ್ತವೆ. ಆಯೋಗವು, ಸದರಿ ಅರ್ಜಿಗಳ ಪರಿಶೀಲನೆಯ ನಂತರ ಒಟ್ಟು ವಾರ್ಷಿಕ ಕಂದಾಯ ಅಗತ್ಯತೆ ಮೊತ್ತ 58,109.95 ರೂ. ಕೋಟಿಗಳನ್ನು ಅನುಮೋದಿಸಿರುತ್ತದೆ.

ಆಯೋಗದ ಅನುಮೋದನೆ: ಸಿ) ವಿದ್ಯುತ್ ಸರಬರಾಜು ಕಂಪನಿಗಳು ತಮ್ಮ ದರ ಪರಿಷ್ಕರಣೆ ಅರ್ಜಿಯಲ್ಲಿ ಒಟ್ಟು ಮೊತ್ತ 62,133.47 ಕೋಟಿ ರೂ. ಗಳಿಗೆ ಅನುಮೋದಿಸುವಂತೆ ಕೋರಿರುತ್ತವೆ. ಆಯೋಗವು, ಸದರಿ ಅರ್ಜಿಗಳ ಪರಿಶೀಲನೆಯ ನಂತರ ಒಟ್ಟು ವಾರ್ಷಿಕ ಕಂದಾಯ ಅಗತ್ಯತೆ (ARR) ಮೊತ್ತ 58,109.95 ರೂ. ಕೋಟಿಗಳನ್ನು ಅನುಮೋದಿಸಿರುತ್ತದೆ. ಆರ್ಥಿಕ ವರ್ಷ 2023–24ಕ್ಕೆ ಆಯೋಗವು ನಿವ್ವಳ ಕಂದಾಯ ಕೊರತೆ 4,457.12 ಕೋಟಿ ರೂ.ಗಳನ್ನು ಅನುಮೋದಿಸಿರುತ್ತದೆ. ಸದರಿ ಮೊತ್ತವು ಆರ್ಥಿಕ ವರ್ಷ 2021–22ರ ವಾರ್ಷಿಕ ಕಾರ್ಯನಿರ್ವಹಣಾ ಪುನರ್ಮನನ (APR) (ಟ್ರೋಯಿಂಗ್ ಅಪ್) ಪ್ರಕಾರ ಕಂದಾಯಲ್ಲಿನ ಕೊರತೆ ಮೊತ್ತ 1,720.11 ಕೋಟಿ ರೂ.ಗಳನ್ನು ಒಳಗೊಂಡಿದೆ.

ಮೈಸೂರಲ್ಲಿ ಮತ ಎಣಿಕಾ ಕೇಂದ್ರಕ್ಕೆ 400 ಪೊಲೀಸರ ನಿಯೋಜಿಸಿ ಭಾರೀ ಭದ್ರತೆ

ಮೈಸೂರು, ಮೇ 12(ಆರ್‌ಕೆ)–ಮತ ಎಣಿಕೆ ನಡೆಯಲಿರುವ ಮೈಸೂರಿನ ಮಹಾರಾಣಿ ಮಹಿಳಾ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಕೇಂದ್ರಕ್ಕೆ 400 ಮಂದಿ ಪೊಲೀಸರನ್ನು ಭದ್ರತೆಗಾಗಿ ನಿಯೋಜಿಸಿ, ಭಾರೀ ಕಟ್ಟೆಚ್ಚರ ವಹಿಸಲಾಗಿದೆ.

ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ ಪ್ರಕ್ರಿಯೆ ಆರಂಭವಾಗಲಿದ್ದು, ಮುಂಜಾನೆ 5 ಗಂಟೆಯಿಂದಲೇ ಕಾಲೇಜು ಬಳಿ ಸಿಐಎಸ್‌ಎಫ್ ತುಕಡಿ, ಸಿಎಆರ್, ಕೆಎಸ್‌ಆರ್‌ಪಿ, ಮೌಂಟೆಡ್ ಪೊಲೀಸ್ ಹಾಗೂ ಸಿಟಿ ಸಿವಿಲ್ ಪೊಲೀಸರನ್ನು ಭದ್ರತೆಗಾಗಿ ನಿಯೋಜಿ ಸಲಾಗಿದ್ದು, ಕಾಲೇಜು ಸುತ್ತ 200 ಮೀ. ವ್ಯಾಪ್ತಿಯಲ್ಲಿ ಬ್ಯಾರಿಕೇಡ್ ಅಳವಡಿಸಿ ಸಾರ್ವಜನಿಕರು ಪ್ರವೇಶಿಸದಂತೆ ನಿರ್ಬಂಧ ವಿಧಿಸಲಾಗಿದೆ.

ಓರ್ವ ಡಿಸಿಪಿ, ಮೂವರು ಎಸಿಪಿಗಳು, 10 ಮಂದಿ ಇನ್ಸ್‌ಪೆಕ್ಟರ್, 25 ಮಂದಿ ಸಬ್ ಇನ್ಸ್‌ಪೆಕ್ಟರ್‌ಗಳು ಸೇರಿದಂತೆ 400 ಮಂದಿ ಪೊಲೀಸರನ್ನು ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಲಾಗಿದೆ. ಕೇಂದ್ರದ ಎಲ್ಲಾ ಮಹಡಿಯ ಮತ ಎಣಿಕೆ ಹಾಲ್, ಸ್ಟ್ರಾಂಗ್ ರೂಂ, ಚುನಾವಣಾ ವೀಕ್ಷಕರ ಕೊಠಡಿಗಳ ಬಳಿ ಶಸ್ತ್ರ ಸಜ್ಜಿತ ಪೊಲೀಸರು ಕರ್ತವ್ಯ ನಿರ್ವಹಿಸಲಿದ್ದು, ಮತ ಎಣಿಕಾ ಪ್ರಕ್ರಿಯೆ ಮೇಲೆ ನಿಗಾ ವಹಿಸಲಾಗುವುದು. ಕೇಂದ್ರದ ಆವರಣ, ಸುತ್ತಲಿನ ರಸ್ತೆ, ಜಂಕ್ಷನ್‌ಗಳಲ್ಲಿ ಹೆಚ್ಚುವರಿ ಪೊಲೀಸರನ್ನು ನಿಯೋಜಿಸಿ ನಿರ್ಬಂಧಿಸಿದ ರಸ್ತೆಗಳಲ್ಲಿ ಸಾರ್ವಜನಿಕರ ವಾಹನಗಳು ಸಂಚರಿಸದಂತೆ ನಿಯಂತ್ರಿಸಲಾಗುವುದು. ಅಳವಡಿಸಿರುವ ಸಿಸಿ ಕ್ಯಾಮರಾಗಳಿಂದ ಸೆರೆಯಾಗುವ ದೃಶ್ಯಾವಳಿಗಳನ್ನು ವೀಕ್ಷಿಸಿ ನಗರ ಪೊಲೀಸ್ ಆಯುಕ್ತರ ಕಚೇರಿ ಕಂಟ್ರೋಲ್ ರೂಂನಲ್ಲಿ ಪ್ರಕ್ರಿಯೆ ಮೇಲೆ ತೀವ್ರ ನಿಗಾ ವಹಿಸಿ ಅಹಿತಕರ ಘಟನೆ ನಡೆಯದಂತೆ ಕ್ರಮ ವಹಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ತಿಳಿಸಿದರು.

ಇಂದು ಮಧ್ಯರಾತ್ರಿವರೆಗೆ ಮದ್ಯ ಮಾರಾಟ ನಿಷಿದ್ಧ

ಮೈಸೂರು: ವಿಧಾನಸಭಾ ಚುನಾವಣೆ ಮತ ಎಣಿಕೆ ಹಿನ್ನೆಲೆಯಲ್ಲಿ ಇಂದು ಮಧ್ಯರಾತ್ರಿಯಿಂದ ನಾಳೆ (ಶನಿವಾರ) ಮಧ್ಯರಾತ್ರಿವರೆಗೆ ಮದ್ಯ ಮಾರಾಟ ನಿಷೇಧಿಸಲಾಗಿದೆ. ಕಾನೂನು–ಸುವ್ಯವಸ್ಥೆ ಕಾಯ್ದುಕೊಳ್ಳುವ ದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ.

ಗುಜರಾತ್ ಮಣಿಸಿದ ಮುಂಬೈ



ಮುಂಬೈ, ಮೇ 12(ಸಿಎನ್)–ಸೂರ್ಯ ಕುಮಾರ್ ಯಾದವ್ ಅಮೋಘ ಶತಕದ ನೆರವಿನಿಂದ ಗುಜರಾತ್ ವಿರುದ್ಧ ಮುಂಬೈ 27 ರನ್‌ಗಳ ಭರ್ಜರಿ ಗೆಲುವು ಸಾಧಿಸಿತು.

ಇಲ್ಲಿನ ವಾಂಖೆಡೆ ಕ್ರೀಡಾಂಗಣದಲ್ಲಿ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಮುಂಬೈ 5 ವಿಕೆಟ್ ನಷ್ಟಕ್ಕೆ 218 ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಇಶಾನ್‌ಕಿಶಾನ್ (31), ರೋಹಿತ್ ಶರ್ಮಾ(29), ಸೂರ್ಯಕುಮಾರ್‌ಯಾದವ್(103), ನೆಹಾಲ್ ವಧೇರಾ(15), ವಿಷ್ಣುವಿನೋದ್(30) ಟೀಮ್‌ಡೇವಿಡ್(5) ಗ್ರೀನ್(3) ರನ್‌ಗಳ ಕೊಡುಗೆ ನೀಡಿದರು. ಗುಜರಾತ್ ಪರ ರಶೀದ್‌ಖಾನ್ 4 ವಿಕೆಟ್ ಪಡೆದರೆ, ಮೋಹಿತ್‌ಶರ್ಮಾ 1 ವಿಕೆಟ್ ಪಡೆದರು.

218 ರನ್‌ಗಳ ಬೃಹತ್ ಮೊತ್ತ ಬೆನ್ನತ್ತಿದ ಗುಜರಾತ್ ಆರಂಭಿಕರಾದ ವೃದ್ಧಿಮಾನ್ ಸಾಹ(2), ಶುಭ್‌ಮನ್ ಗಿಲ್(6) ಬಹುಬೇಗನೆ ವಿಕೆಟ್ ಒಪ್ಪಿಸಿದರು. ಬಳಿಕ ಬಂದ ನಾಯಕ ಹಾರ್ದಿಕ್‌ಪಾಂಡ್ಯ (4)ರನ್‌ಗಳಿಗೆ ವಿಕೆಟ್ ಕೈಚೆಲ್ಲಿ ನಿರಾಸೆ ಮೂಡಿಸಿದರು. ವಿಜಯ್‌ಶಂಕರ್(21) ಹಾಗೂ ಡೇವಿಡ್ ಮಿಲ್ಲರ್(41) ನಿರೀಕ್ಷಿತ ಮಟ್ಟದಲ್ಲಿ ರನ್ ಗಳಿಸಲಿಲ್ಲ ಕೊನೆಗೆ ಇನ್ನಿಂಗ್ಸ್ ಮುಂದೆ ತೆಗೆದುಕೊಂಡು ಹೋಗುವಲ್ಲಿ ವಿಫಲರಾಗಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಅಭಿನವ್ (2) ಹಾಗೂ ರಾಹುಲ್ ತೇವಾಟಿಯಾ (14) ಬೇಗನೆ ವಿಕೆಟ್ ಕೈಚೆಲ್ಲಿದರು. ಬಳಿಕ ಜೊಡಿಯಾದ ಅಲ್ಜರಿ ಜೋಸೆಫ್(7) ಹಾಗೂ ರಶೀದ್‌ಖಾನ್ ಕೇವಲ 32 ಎಸೆತಗಳಲ್ಲಿ 3 ಬೌಂಡರಿ ಬರೋಬ್ಬರಿ 10 ಸಿಕ್ಸರ್ ಒಳಗೊಂಡ (79) ರನ್ ಸಿಡಿಸುವ ಮೂಲಕ ಮುಂಬೈ ಬೌಲರ್‌ಗಳನ್ನು ಮನಬಂದಂತೆ ದಂಡಿಸಿದರು. ಪಂದ್ಯ ಗೆಲ್ಲಿಸಿಕೊಡುವಲ್ಲಿ ವಿಫಲರಾದರೂ ಕೂಡ ರಶೀದ್ ಇನ್ನಿಂಗ್ಸ್ ದಾಖಲೆ ಬರೆಯಿತು. ಗುಜರಾತ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 191 ರನ್ ಗಳಿಸಲಷ್ಟೇ ಶಕ್ತವಾಗಿ, 27 ರನ್‌ಗಳಿಂದ ಮುಂಬೈಗೆ ಶರಣಾಯಿತು. ಮುಂಬೈ ಪರ ಆಕಾಶ್ ಮಧ್ವಲ್ 3 ವಿಕೆಟ್ ಪಡೆದರೆ, ಬೆಹ್ರೆನ್ಡಾರ್ಫ್ 1, ಕಾರ್ತಿಕೇಯ ಹಾಗೂ ಪಿಯುಷ್ ಚಾವ್ಲಾ ತಲಾ 2 ವಿಕೆಟ್ ಕುಳಿಸಿದರು. ಪಂದ್ಯಪುರುಷೋತ್ತಮ ಪ್ರಶಸ್ತಿಗೆ ಮುಂಬೈ ತಂಡದ ಸೂರ್ಯಕುಮಾರ್ ಯಾದವ್ ಭಾಜನರಾದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	12	8	4	0	16
ಸಿಎಸ್‌ಕೆ	12	7	4	1	15
ಮುಂಬೈ	12	7	5	0	14
ರಾಜಸ್ಥಾನ್	12	6	6	0	12
ಲಕ್ನೋ	11	5	5	1	11
ಆರ್‌ಸಿಬಿ	11	5	6	0	10
ಕೋಲ್ಕತ್ತಾ	12	5	7	0	10
ಪಂಜಾಬ್	11	5	6	0	10
ಎಸ್‌ಆರ್‌ಹೆಚ್	10	4	6	0	08
ಡೆಲ್ಲಿ	11	4	7	0	08

ದುಸ್ಥಿತಿಯಲ್ಲಿದ್ದ ಶಾಲೆ ದತ್ತು ಪಡೆದ ಶಿವರಾಜ್‌ಕುಮಾರ್ ದಂಪತಿ

ಬೆಂಗಳೂರು: ನಟ ಶಿವರಾಜ್ ಕುಮಾರ್ ಹಾಗೂ ಅವರ ಪತ್ನಿ ಗೀತಾ ಶಿವರಾಜ್ ಕುಮಾರ್ ತಮ್ಮನ್ನು ಕೆಲವು ಸಾಮಾಜಿಕ



ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಈಗಾಗಲೇ ಮೈಸೂರಿನಲ್ಲಿ ಶಕ್ತಿಧಾಮವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿರುವ ಶಿವರಾಜ್ ಕುಮಾರ್ ದಂಪತಿ ಇದೀಗ ಮತ್ತೊಂದು ಶಾಲೆಯನ್ನು ದತ್ತು ಪಡೆದಿದ್ದಾರೆ. ಮೂಲ ಸೌಕರ್ಯಗಳಿಲ್ಲದೆ ಬಸವಳಿದಿದ್ದ ಶಾಲೆಗೆ ಹೊಸ ಕಾಯಕಲ್ಪ ನೀಡಲು ದಂಪತಿ ಉತ್ಸುಕರಾಗಿದ್ದಾರೆ.

ಹೊಸಪೇಟೆಯ ಇಂಗಳಗಿ ಸಮೀಪದ ಅನ್ನಪೂರ್ಣೇಶ್ವರಿ ವಿದ್ಯಾಪೀಠ ವಸತಿಯುತ ಪ್ರೌಢಶಾಲೆಯನ್ನು ದತ್ತು ಪಡೆದಿದ್ದಾರೆ. ನಿನ್ನೆ ಶಾಲೆಗೆ ಭೇಟಿ ನೀಡಿದ್ದ ನಿರ್ಮಾಪಕಿ ಗೀತಾ ಶಿವರಾಜ್ ಕುಮಾರ್ ಅವರು, ಶಾಲೆಯ ಆಡಳಿತ ಮಂಡಳಿ, ಸಿಬ್ಬಂದಿಗಳೊಟ್ಟಿಗೆ ಮಾತುಕತೆ ನಡೆಸಿ ಶಾಲೆಯನ್ನು ದತ್ತು ಪಡೆಯುವ ನಿರ್ಣಯವನ್ನು ತಿಳಿಸಿದ್ದಾರೆ. ಜೋಗದ ದಿಂಬರ ರಾಜಭಾರತಿ ಸ್ವಾಮೀಜಿಯವರು 2012 ರಲ್ಲಿ ಸ್ಥಳೀಯ ಬಡಮಕ್ಕಳ ಅನುಕೂಲಕ್ಕಾಗಿ ಈ ಉಚಿತ ಶಾಲೆಯನ್ನು ಸ್ಥಾಪಿಸಿದ್ದರು. ಆದರೆ ಅನುದಾನಗಳ ಕೊರತೆಗಳಿಂದಾಗಿ ಶಾಲೆಯು ಮೂಲಸೌಕರ್ಯಗಳಿಲ್ಲದೆ ಬಡವಾಗಿತ್ತು. ಕೆಲ ತಿಂಗಳ ಹಿಂದೆ ಶಿವರಾಜ್‌ಕುಮಾರ್ ಹಾಗೂ ಗೀತಾ ಶಿವರಾಜ್ ಕುಮಾರ್ ಅವರು ವೇದ ಸಿನಿಮಾದ ಪ್ರಚಾರಕ್ಕೆ ಹೊಸಪೇಟೆಗೆ ತೆರಳಿದ್ದಾಗ ಈ ಶಾಲೆಯ ವಿಚಾರವನ್ನು ಅವರ ಗಮನಕ್ಕೆ ತರಲಾಗಿತ್ತು. ಶಾಲೆಯ ದುಸ್ಥಿತಿಯ ಬಗ್ಗೆ ಕೇಳಿ ಬೇಸರ ವ್ಯಕ್ತಪಡಿಸಿದ್ದ ಶಿವರಾಜ್ ಕುಮಾರ್ ದಂಪತಿ ಶಾಲೆಯನ್ನು ದತ್ತು ಪಡೆಯುವ ನಿರ್ಣಯ ತಳೆದಿದ್ದಾರೆ.

ಜ್ಞಾನವಾಪಿ ಮಸೀದಿಯೊಳಗಿರುವ ಶಿವಲಿಂಗದ ವೈಜ್ಞಾನಿಕ ಸಮೀಕ್ಷೆಗೆ ಹೈಕೋರ್ಟ್ ಆದೇಶ

ಪ್ರಯಾಗರಾಜ್: ವಾರಣಾಸಿಯ ಜ್ಞಾನವಾಪಿ ಮಸೀದಿಯೊಳಗೆ ಹಿಂದೂ ಅರ್ಜಿದಾರರು ಶಿವಲಿಂಗ ಎಂದು ಹೇಳುವ ರಚನೆಯ ವೈಜ್ಞಾನಿಕ ಸಮೀಕ್ಷೆಯನ್ನು ನಡೆಸುವಂತೆ ಅಲಹಾಬಾದ್ ಹೈಕೋರ್ಟ್ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಗೆ ನಿರ್ದೇಶನ ನೀಡಿದೆ. ವಾರಣಾಸಿ ಜಿಲ್ಲಾ ನ್ಯಾಯಾಲಯವು ಕಳೆದ ವರ್ಷ ಅಕ್ಟೋಬರ್‌ನಲ್ಲಿ ಸಮೀಕ್ಷೆಗಾಗಿ ಅರ್ಜಿದಾರರು ಸಲ್ಲಿಸಿದ್ದ ಮನವಿಯನ್ನು ನಿರಾಕರಿಸಿತ್ತು.ಇಂದಿನ ಆದೇಶದಲ್ಲಿ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ), ರಚನೆಯ ಸಮೀಕ್ಷೆಗೆ ವೈಜ್ಞಾನಿಕ ವಿಧಾನವನ್ನು ಬಳಸಬೇಕು ಮತ್ತು ಅದಕ್ಕೆ ಹಾನಿಯಾಗದಂತೆ ತಡೆಯಬೇಕು ಎಂದು ಹೈಕೋರ್ಟ್ ಹೇಳಿದೆ.

ಜ್ಞಾನವಾಪಿ ಮಸೀದಿಯ ಅಧಿಕಾರಿಗಳು ಈ ರಚನೆಯನ್ನು ಶಿವಲಿಂಗ ಅಥವಾ ಭಗವಾನ್ ಶಿವನ ಅವಶೇಷ ಎಂದು ನಿರಾಕರಿಸಿದ್ದಾರೆ. ಈ ರಚನೆಯು ವುಝು ಖಾನಾದಲ್ಲಿನ ಕಾರಂಜಿಯ ಒಂದು ಭಾಗವಾಗಿದೆ ಎಂದು ಅವರು ಹೇಳಿದರು. ನಮಾಜ್ ಮಾಡುವ ಮೊದಲು ಶುದ್ಧೀಕರಣವನ್ನು ಮಾಡುವ ಜಾಗಲೇ ವುಝು ಖಾನಾ. ಮಸೀದಿ ಸಂಕೀರ್ಣದೊಳಗಿನ ದೇಗುಲದಲ್ಲಿ ವರ್ಷಪೂರ್ತಿ ಪ್ರಾರ್ಥನೆ ಮಾಡಲು ಐದು ಹಿಂದೂ ಮಹಿಳೆಯರು ವಿನಂತಿಸಿದ ಮನವಿಗೆ ಪ್ರತಿಕ್ರಿಯೆಯಾಗಿ ಕಳೆದ ವರ್ಷದ ಆರಂಭದಲ್ಲಿ ಕೆಳ ನ್ಯಾಯಾಲಯದ ಆದೇಶದ ಮೇರೆಗೆ ಜ್ಞಾನವಾಪಿ ಮಸೀದಿ ಸಂಕೀರ್ಣದಲ್ಲಿ ನಡೆಸಿದ ವಿಡಿಯೊ ಸಮೀಕ್ಷೆಯಲ್ಲಿ ಈ ರಚನೆಯು ಕಂಡುಬಂದಿದೆ. ಐದು ಅರ್ಜಿದಾರರಲ್ಲಿ ನಾಲ್ವರು ಶಿವಲಿಂಗದ ವಯಸ್ಸು ಅರಿಯಲು ಕಾರ್ಬನ್ ಡೇಟಿಂಗ್ ಸೇರಿದಂತೆ ವೈಜ್ಞಾನಿಕ ತನಿಖೆಯನ್ನು ಕೋರಿದ್ದರು. ಹಿಂದೂ ದೇವತೆಗಳ ಪುರಾತನ ವಿಗ್ರಹಗಳು ಮಸೀದಿ ಯೊಳಗೆ ನೆಲೆಗೊಂಡಿವೆ ಎಂದು ಮಹಿಳೆಯರು ಹೇಳುತ್ತಾರೆ. ಮಸೀದಿಯ ಹೊರ ಗೋಡೆಯ ಮೇಲೆ ಹಿಂದೂ ದೇವರುಗಳ ವಿಗ್ರಹಗಳಿಗೆ ದೈನಂದಿನ ಪೂಜೆಯನ್ನು ಕೋರುವ ವಿನಂತಿಯ ನಿರ್ವಹಣೆಯನ್ನು ಮಸೀದಿ ಸಮಿತಿ ಪ್ರಶ್ನಿಸಿತ್ತು.

ಟ್ರಾನ್ಸ್‌ಫಾರ್ಮರ್ ಸ್ಫೋಟ

ಉಂಟಾದ ಶಬ್ದ ಹಾಗೂ ಬೆಂಕಿ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸ್ಥಳೀಯರಲ್ಲಿ ಕೆಲ ಕಾಲ ಆತಂಕದ ವಾತಾವರಣ ಉಂಟಾಗಿತ್ತು. ಸ್ಥಳೀಯ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಸಿಬ್ಬಂದಿ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕಾಗಮಿಸಿ ಬೆಂಕಿ ನಂದಿಸುವ ಕಾರ್ಯವನ್ನು ಮಾಡಿದ್ದಾರೆ.

ಸಿಎಂ ವಿರುದ್ಧ ಜನರಿಂದ ಆಕ್ರೋಶ: ಕಳೆದ ಮೂರ್ನಾಲ್ಕು ತಿಂಗಳ ಹಿಂದೆಯೇ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ ವಿದ್ಯುತ್ ಸರಬರಾಜು ದರ ಏರಿಕೆ ಮಾಡಲು ಎಸ್ಕಾಂಗಳಿಂದ ಪ್ರಸ್ತಾವನೆ ಸಲ್ಲಿಕೆ ಆಗಿತ್ತು. ಆದರೆ, ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಸರ್ಕಾರ ವಿದ್ಯುತ್ ದರ ಹೆಚ್ಚಳವನ್ನು ಮುಂದೂಡುತ್ತಾ ಬಂದಿತ್ತು. ಆದರೆ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಮ್ಮ ಕೊನೆಯ ದಿನಗಳ ಆಡಳಿತಾವಧಿಯಲ್ಲಿ ವಿದ್ಯುತ್ ದರವನ್ನು ಹೆಚ್ಚಳ ಮಾಡಿದ್ದಾರೆ. ಅದಕ್ಕಾಗಿಯೇ ಅವರ ಮನೆಯ ಬಳಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸ್ಫೋಟಗೊಂಡಿದೆ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್, ಬಿಜೆಪಿ ಪೈಪೋಟಿ

ಬಳಿ ತೆರಳಿ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ. 2018ರ ವಿಧಾನಸಭೆ ಚುನಾವಣೆಯಲ್ಲಿ ಒಬ್ಬ ಸ್ವತಂತ್ರ ಅಭ್ಯರ್ಥಿ ಗೆದ್ದಿದ್ದರು. 2013ರ ಚುನಾವಣೆಯಲ್ಲಿ ಒಂಬತ್ತು ಸ್ವತಂತ್ರ ಅಭ್ಯರ್ಥಿಗಳು ಚುನಾಯಿತರಾಗಿ ಶೇ.7.4ರಷ್ಟು ಮತ ಗಳಿಸಿದ್ದರು. 2008ರಲ್ಲಿ 6 ಸ್ವತಂತ್ರರು ಗೆದ್ದಿದ್ದರೆ 2004ರಲ್ಲಿ 17 ಸ್ವತಂತ್ರರು ಗೆದ್ದಿದ್ದರು. 1999ರ ಚುನಾವಣೆ ಯಲ್ಲಿ 19 ಸ್ವತಂತ್ರ ಅಭ್ಯರ್ಥಿಗಳು ರಾಜ್ಯ ವಿಧಾನಸಭೆಗೆ ಚುನಾಯಿತರಾಗಿದ್ದರು. ಈ ಬಾರಿ ಬಂಡಾಯ ಮತ್ತು ಟಿಕೆಟ್ ನಿರಾಕರಣೆಯಿಂದಾಗಿ ಸಂಭಾವ್ಯ ಅಭ್ಯರ್ಥಿಗಳು ಸ್ವತಂತ್ರ ವಾಗಿ ಸ್ಪರ್ಧಿಸಿದ್ದು ಗೆಲ್ಲುವ ಅವಕಾಶವನ್ನು ಹೊಂದಿದ್ದಾರೆ.

ಪೂರ್ಣ ಫಲಿತಾಂಶ

ನಿಯೋಜಿಸಲಾಗಿದೆ. ಬೆಂಗಳೂರಿನಲ್ಲಿ 4 ಸೇರಿದಂತೆ ರಾಜ್ಯದಲ್ಲಿ 34 ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ. ಈ ಬಾರಿ ರಾಜ್ಯದಲ್ಲಿ ದಾಖಲೆ ಪ್ರಮಾಣದ ಮತದಾನವಾಗಿದೆ. ಬಿಜೆಪಿ–224, ಕಾಂಗ್ರೆಸ್–223, ಜೆಡಿಎಸ್–207, ಬಿಎಸ್‌ಪಿ, ಸಿಪಿಐಎಂ, ಎಎಪಿ, ಸೇರಿದಂತೆ ವಿವಿಧ ನೋಂದಾಯಿತ ಪಕ್ಷಗಳು ಹಾಗೂ ಸ್ವತಂತ್ರ ಅಭ್ಯರ್ಥಿಗಳು ಸ್ಪರ್ಧಿಸಿದ್ದರು.

ಮೈಸೂರು ಮಿತ್ರ ಶನಿವಾರ 13 ಮೇ 2023

ಕೊಡಗು: ಇಂದು ಮತ ಎಣಿಕೆ

ಮಡಿಕೇರಿ, ವಿರಾಜಪೇಟೆ ಕ್ಷೇತ್ರದ ಅಭ್ಯರ್ಥಿಗಳ ಭವಿಷ್ಯ ನಿರ್ಧಾರ


ಮತ ಎಣಿಕೆ ನಡೆಯುವ ಮಡಿಕೇರಿಯ ಸಂತ ಜೋಸೆಫರ ಕಾನ್ವೆಂಟ್‌ಗೆ ಬಿಗಿ ಭದ್ರತೆ.

ಬಿಜೆಪಿ–ಕಾಂಗ್ರೆಸ್ ನೇರ ಹಣಾಹಣಿ


ಅಪ್ಪಚ್ಚು ರಂಜನ್ ಕೆ.ಜಿ. ಬೋಪಯ್ಯ ಮಂಥರ್ ಗೌಡ ಪೊನ್ನಣ್ಣ

ಕೊಡಗು ಜಿಲ್ಲೆಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಎರಡೂ ರಾಷ್ಟ್ರೀಯ ಪಕ್ಷಗಳ ನಡುವೆ ಹಿಂದೆಂದೂ ಕಂಡರಿಯದ ರೀತಿಯಲ್ಲಿ ನೇರಾ ಹಣಾಹಣಿ ಚುನಾವಣಾ ಸಂದರ್ಭ ಕಂಡು ಬಂದಿತ್ತು. ಬಿಜೆಪಿಯಿಂದ ಮಡಿಕೇರಿ ವಿಧಾನ ಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಹಾಲಿ ಶಾಸಕ ಎಂ.ಪಿ. ಅಪ್ಪಚ್ಚು ರಂಜನ್ ಹಾಗೂ ವಿರಾಜಪೇಟೆ ಕ್ಷೇತ್ರಕ್ಕೆ ಹಾಲಿ ಶಾಸಕ ಕೆ.ಜಿ. ಬೋಪಯ್ಯ ಸ್ಪರ್ಧಿಸಿದ್ದರು.

ಕಾಂಗ್ರೆಸ್‌ನಿಂದ ಮಡಿಕೇರಿ ಕ್ಷೇತ್ರದ ಅಭ್ಯರ್ಥಿಯಾಗಿ ಡಾ. ಮಂಥರ್ ಗೌಡ, ವಿರಾಜಪೇಟೆ ಕ್ಷೇತ್ರಕ್ಕೆ ಹೈ ಕೋರ್ಟ್ ವಕೀಲ ಎ.ಎಸ್.ಪೊನ್ನಣ್ಣ ಸ್ಪರ್ಧೆ ಎದುರಿಸಿದ್ದರು. ಹೀಗಾಗಿ ಮತದಾರರಿಗೆ ಯಾವ ಅಭ್ಯರ್ಥಿ ಜಯ ಗಳಿಸುತ್ತಾರೆ ಎಂಬ ಕುತೂಹಲವಿದ್ದು, ಮತ ಎಣಿಕೆ ಕಾರ್ಯದ ಬಳಿಕ ಮತದಾರರ ಆಶೀರ್ವಾದ ಯಾವ ಅಭ್ಯರ್ಥಿಯ ಪರ ಇತ್ತು ಎಂಬುದು ಬಹಿರಂಗವಾಗಲಿದೆ. ಇದರೊಂದಿಗೆ ಎರಡೂ ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದ ಒಟ್ಟು 24 ಅಭ್ಯರ್ಥಿಗಳ ರಾಜಕೀಯ ಭವಿಷ್ಯವೂ ಬಹಿರಂಗವಾಗಲಿದೆ.

ಮಡಿಕೇರಿ, ಮೇ 12– ಕೊಡಗು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯ ಮತ ಎಣಿಕೆ ಕಾರ್ಯ ನಾಳೆ (ಶನಿವಾರ) ನಡೆಯಲಿದ್ದು, ಇದಕ್ಕಾಗಿ ಜಿಲ್ಲಾ ಚುನಾವಣಾ ಆಯೋಗ ಅಗತ್ಯ ಸಿದ್ದತೆಗಳನ್ನು ಮಾಡಿಕೊಂಡಿದೆ. ನಗರದ ಸಂತ ಜೋಸೆಫರ ಕಾನ್ವೆಂಟ್‌ನಲ್ಲಿ ಬೆಳಗ್ಗೆ 8 ಗಂಟೆಯಿಂದ 2 ಕ್ಷೇತ್ರಗಳ ಮತ ಎಣಿಕೆ ಕಾರ್ಯ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಯ ವೇಳೆಗೆ ಸಂಪೂರ್ಣ ಫಲಿತಾಂಶ ಹೊರ ಬೀಳುವ ನಿರೀಕ್ಷೆ ಇದೆ.

ಮತ ಎಣಿಕೆ: ಎರಡು ಕ್ಷೇತ್ರದ ಮತ ಎಣಿಕಾ ಕಾರ್ಯ ಮಡಿಕೇರಿಯ ಸಂತ ಜೋಸೆಫರ ಕಾನ್ವೆಂಟ್‌ನ ಎರಡು ಬೇರೆ ಬೇರೆ ಮತ ಎಣಿಕಾ ಕೇಂದ್ರದಲ್ಲಿ ನಡೆಯಲಿದೆ. ಎಣಿಕಾ ಕೇಂದ್ರದಲ್ಲಿ 14 ಇವಿಎಂ ಎಣಿಕೆ ಟೇಬಲ್, 3 ಇಟಿಪಿಬಿಎಸ್ ಎಣಿಕೆ ಟೇಬಲ್ ಮತ್ತು 4 ಅಂಚೆ ಮತ ಪತ್ರಗಳ ಎಣಿಕೆ ಟೇಬಲ್‌ಗಳನ್ನು ಈಗಾಗಲೇ ಅಳವಡಿಸಲಾಗಿದೆ. ಪ್ರತಿ ಇವಿಎಂ ಎಣಿಕೆ ಟೇಬಲ್‌ಗೆ ಒಬ್ಬರು ಎಣಿಕೆ ಮೇಲ್ವಿಚಾರಕರು, ಒಬ್ಬರು ಎಣಿಕೆ ಸಹಾಯಕರು ಮತ್ತು ಒಬ್ಬರು ಮೈಕ್ರೋ ವೀಕ್ಷಕರು ಸ್ಥಳದಲ್ಲಿ ಹಾಜರಿರಲಿದ್ದಾರೆ.

ಅಂಚೆ ಮತ ಚಲಾವಣೆ: ಜಿಲ್ಲೆಯ ಎರಡು ಕ್ಷೇತ್ರಗಳಲ್ಲಿ ಒಟ್ಟು 3123 ಅಂಚೆ ಮತದಾನದ ಫಾರಂ ನಂ.12 ಅನ್ನು ವಿತರಿಸಿ, ಅಷ್ಟೇ ಸಂಖ್ಯೆಯ ಫಾರಂನ್ನು ಮರಳಿ ಪಡೆಯಲಾಗಿತ್ತು. ಇವುಗಳಲ್ಲಿ 1679 ಮಂದಿ ಮತ ದಾನ ಮಾಡಿದ್ದು, 80 ವರ್ಷ ಮೇಲ್ಪಟ್ಟ 1892 ಮಂದಿ ಮತ ಚಲಾವಣೆ ಮಾಡಿದ್ದಾರೆ. ಮೊದಲಿಗೆ ಅಂಚೆ ಮತಗಳ ಎಣಿಕೆ ಕಾರ್ಯ ನಡೆಯಲಿದ್ದು, ಬಳಿಕ ಇವಿಎಂ ಮತ ಪೆಟ್ಟಿಗೆಗಳ ಎಣಿಕೆ ಆರಂಭವಾಗಲಿದೆ.

ಮಸ್ಟರಿಂಗ್–ಡಿ.ಮಸ್ಟರಿಂಗ್: ಮಡಿಕೇರಿ ಕ್ಷೇತ್ರದ ಮಡಿಕೇರಿಯ ಸಂತ ಜೋಸೆಫರ ಕಾನ್ವೆಂಟ್ ಹಾಗೂ ವಿರಾಜಪೇಟೆ ಕ್ಷೇತ್ರದ ವಿರಾಜಪೇಟೆಯ ಸರ್ಕಾರಿ ಜೂನಿಯರ್ ಕಾಲೇಜಿನಲ್ಲಿ ಈಗಾಗಲೇ ಮೇ 9ರಂದು ಮಸ್ಟರಿಂಗ್ ಮತ್ತು ಮೇ.10ರಂದು ಡಿಮಸ್ಟರಿಂಗ್ ಮಾಡಲಾಗಿದೆ. ವಿರಾಜಪೇಟೆ ಕ್ಷೇತ್ರದ ಡಿ ಮಸ್ಟರಿಂಗ್ ಬಳಿಕ ಅಲ್ಲಿನ ಮತ ಯಂತ್ರಗಳು ಮತ್ತು ದಾಖಲೆ ಪತ್ರಗಳನ್ನು ಮಡಿಕೇರಿ ಸಂತ ಜೋಸೆಫರ ಕಾನ್ವೆಂಟ್‌ನ ಭದ್ರತಾ ಕೊಠಡಿಯಲ್ಲಿ ಇಡಲಾಗಿದೆ. ಮತ ಪೆಟ್ಟಿಗೆಗಳಿರುವ ಸಂತ ಜೋಸೆಫರ ಶಾಲೆಯ ಸುತ್ತ ಶಸ್ತ್ರ ಸಜ್ಜಿತ ಪ್ಯಾರಾ ಮಿಲಿಟರಿ ಪಡೆಗಳು ಮತ್ತು ಕೊಡಗು ಪೊಲೀಸರನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದ್ದು, ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಸೆಕ್ಷನ್ 144 ಜಾರಿಗೊಳಿಸಲಾಗಿದೆ.

ಮತ ಎಣಿಕಾ ಕೇಂದ್ರಕ್ಕೆ ವೀಕ್ಷಕರ ಭೇಟಿ



ಮಡಿಕೇರಿ, ಮೇ 12– ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಮತ ಎಣಿಕೆ ವೀಕ್ಷಕರಾಗಿ ನೇಮಕಗೊಂಡಿರುವ ಜಿ.ಪ್ರಸನ್ನ ರಾಮಸ್ವಾಮಿ ಅವರು ನಗರದ ಸಂತ ಜೋಸೆಫರ ಶಾಲೆಗೆ ಶುಕ್ರವಾರ ಭೇಟಿ ನೀಡಿ ಮತ ಎಣಿಕೆ ಸಿದ್ಧತೆ ಬಗ್ಗೆ ಪರಿಶೀಲಿಸಿದರು.

ಈ ಸಂಬಂಧ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಬಿ.ಸಿ.ಸತೀಶ ಅವರ ಜೊತೆ ಸಮಾಲೋಚನೆ ನಡೆಸಿದರು. ಹಾಗೆಯೇ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಶಬನಾ ಎಂ.ಶೇಕ್ ಅವರಿಂದ ಮತ ಎಣಿಕೆಗೆ ಕೈಗೊಳ್ಳಲಾಗಿರುವ ಸಿದ್ಧತೆ ಬಗ್ಗೆ ಮಾಹಿತಿ ಪಡೆದರು.

ಈಗಾಗಲೇ ಚುನಾವಣಾ ಸಾಮಾನ್ಯ ವೀಕ್ಷಕರಾಗಿ ನೇಮಕವಾಗಿರುವ ವಿಕ್ರಮ ಸಿಂಗ್ ಮಲ್ಲಿಕ್ ಅವರು ಮಡಿಕೇರಿ ವಿಧಾನ ಸಭಾ ಕ್ಷೇತ್ರಕ್ಕೆ ಮತ ಎಣಿಕೆ ವೀಕ್ಷಕರಾಗಿ ಕಾರ್ಯನಿರ್ವಹಿಸಲಿದ್ದಾರೆ.

ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರು ಮತ ಎಣಿಕೆ ಸಂಬಂಧಿಸಿದಂತೆ ಅಂತಿಮ ಸಿದ್ಧತೆಯನ್ನು ಪರಿಶೀಲಿಸಿದರು. ಹಾಗೆಯೇ ಅಂಚೆ ಮತಪತ್ರ ಎಣಿಕೆ ಹಾಗೂ ವಿದ್ಯುನ್ಮಾನ ಮತಯಂತ್ರದ ಮತ ಎಣಿಕೆ ಸಂಬಂಧಿಸಿ ದಂತೆ ಅಧಿಕಾರಿಗಳ ಜೊತೆ ಸಮಾಲೋಚಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ನಂಜುಂಡೇಗೌಡ, ಮಡಿಕೇರಿ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಯತೀಶ್ ಉಳ್ಳಾಲ್, ಸಹಾಯಕ ಚುನಾವಣಾಧಿಕಾರಿಗಳಾದ ಎಸ್.ಎನ್. ನರಗುಂದ, ಕಿರಣ್ ಗೌರಯ್ಯ, ಪ್ರಮೋದ್, ರಾಮಚಂದ್ರ, ವೀಕ್ಷಕರ ಸಂಪರ್ಕ ಅಧಿಕಾರಿಗಳಾದ ಪ್ರಮೋದ್, ಬಾಲ ಸುಬ್ರಮಣ್ಯ, ಮತ ಎಣಿಕೆ ಅಧಿಕಾರಿಗಳು ಇದ್ದರು.

ಜಿಲ್ಲೆಯಲ್ಲಿ ರಾತ್ರಿಯಿಂದಲೇ ನಿಷೇಧಾಜ್ಞೆ ಜಾರಿ

ಪಟಾಕಿ ಸಿಡಿಸುವುದು, ವಿಜಯೋತ್ಸವ, ಮೆರವಣಿಗೆ ನಿಷೇಧ

ಮಡಿಕೇರಿ, ಮೇ 12– ವಿಧಾನಸಭಾ ಚುನಾವಣೆ ಸಂಬಂಧ ಮತ ಎಣಿಕೆ ನಡೆಯುವ ದಿನದಂದು ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮೇ 12ರ ಮಧ್ಯರಾತ್ರಿ 12 ಗಂಟೆಯಿಂದ ಮೇ 13 ರ ಮಧ್ಯರಾತ್ರಿ 12 ಗಂಟೆವರೆಗೆ ಜಿಲ್ಲೆಯಾದ್ಯಂತ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಬಿ.ಸಿ.ಸತೀಶ ಆದೇಶ ಹೊರಡಿಸಿದ್ದಾರೆ.

ಈ ಅವಧಿಯಲ್ಲಿ ಕೊಡಗು ಜಿಲ್ಲೆಯಾದ್ಯಂತ ಪಟಾಕಿ ಸಿಡಿಸುವುದು, ವಿಜಯೋತ್ಸವ, ಮೆರವಣಿಗೆ, ರಾಜಕೀಯ ಸಭೆ–ಸಮಾರಂಭ, ವಾಹನ ಜಾಥ, ರ್‍ಯಾಲಿ ಮುಂತಾದ ಯಾವುದೇ ಚಟುವಟಿಕೆ ನಡೆಸುವುದು, ಸ್ಫೋಟಕ, ದಹನ ವಸ್ತುಗಳು, ಮಾರಕ ಆಯುಧಗಳನ್ನು ಹೊಂದಿರುವುದು ಅಥವಾ ಹಿಡಿದು ಓಡಾಡುವುದು ಮುಂತಾದವುಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಮತ ಎಣಿಕಾ ಕೇಂದ್ರವಾದ ಮಡಿಕೇರಿಯ ಸೆಂಟ್ ಜೋಸೆಫ್ ಕಾನ್ವೆಂಟ್‌ನ ಸುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವು ಸಂಪೂರ್ಣ ನಿರ್ಬಂಧಿತ ಪ್ರದೇಶವಾಗಿರುತ್ತದೆ. ಈ ಪ್ರದೇಶದಲ್ಲಿ ಖಾಸಗಿ ವಾಹನಗಳ ತಂಗುವಿಕೆ ಮತ್ತು ಧ್ವನಿವರ್ಧಕ ಬಳಕೆಯನ್ನು ಸಹ ನಿಷೇಧಿಸಿದೆ.

ಈ ಆದೇಶವು ಸರ್ಕಾರಿ ಕರ್ತವ್ಯದ ನಿಮಿತ್ತ, ಬ್ಯಾಂಕ್. ಎಟಿಎಂ ಭದ್ರತಾ ಸಿಬ್ಬಂದಿಗಳು ಹಾಗೂ ಮತ ಎಣಿಕಾ ಕೇಂದ್ರದ ಭದ್ರತಾ ವ್ಯವಸ್ಥೆಗಾಗಿ ನಿಯೋಜಿಸಲ್ಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳು ಆಯುಧ, ಬಂದೂಕುಗಳನ್ನು ಹೊಂದಿರುವುದಕ್ಕೆ ಅಥವಾ ಬಳಸುವುದಕ್ಕೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಬಿ.ಸಿ.ಸತೀಶ ಅವರು ತಿಳಿಸಿದ್ದಾರೆ.

ಸತೀಶ್ ದೇವಯ್ಯ ನಿಧನ



ನಾಪೋಕ್ಲು, ಮೇ 12– ಸಮೀಪದ ಬೇತು ಗ್ರಾಮದ ನಿವಾಸಿ ಪಳಂಗಂಡ ಸತೀಶ್ ದೇವಯ್ಯ (72) ಹೃದಯಾಘಾತದಿಂದ ಶುಕ್ರವಾರ ನಿಧನರಾಗಿದ್ದಾರೆ. ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ.ಮೃತರ ಅಂತ್ಯಕ್ರಿಯೆ ಶನಿವಾರ ಸ್ವಗ್ರಾಮದಲ್ಲಿ ನಡೆಯಲಿದೆ. ಇವರು ನಾಪೋಕ್ಲುವಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು.

ಶಿವಾಜಿ ಯೂತ್ ಕ್ಲಬ್ ನ80 – 90ರ ದಶಕದಲ್ಲಿ ಹಲವಾರು ಪ್ರಶಸ್ತಿಗಳು ಗಳಿಸುವಲ್ಲಿ ಯಶಸ್ವಿ ವ್ಯವಸ್ಥಾಪಕರಾಗಿ ಕಾರ್ಯ ನಿರ್ವಹಿಸಿದ ಪಳಂಗಂಡ ಸತೀಶ್ ದೇವಯ್ಯ ರವರಿಗೆ ಕ್ಲಬ್ ಪದಾಧಿಕಾರಿಗಳು ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದ್ದಾರೆ.

ಮೇ 22ರಿಂದ ಕೊಡವ ಕುಟುಂಬಗಳ ಫುಟ್ಬಾಲ್ ಪಂದ್ಯಾವಳಿ



ವಿರಾಜಪೇಟೆ, ಮೇ 12– ಕೊಡವ ಯುವಜನತೆ ಹಾಕಿ, ಕ್ರಿಕೆಟ್ ಹಾಗೂ ಫುಟ್ಬಾಲ್‌ಗಳಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಿರುವುದರಿಂದ ಕೊಡವ ಕುಟುಂಬಗಳ ನಡುವೆ ಪ್ರಥಮವಾಗಿ ಕೌಟುಂಬಿಕ ಫೈವ್–ಎ–ಸೈಡ್ ಫುಟ್ಬಾಲ್ ಪಂದ್ಯಾವಳಿಯನ್ನು ವಿರಾಜಪೇಟೆ ಬಳಿಯ ದೇವಣಗೇರಿ ಮೂಕೊಂಡ ಕುಟುಂಬದವರು ಮೇ 22ರಿಂದ 24 ರವರೆಗೆ ದೇವಣಗೇರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಆಯೋಜಿಸಿದ್ದಾರೆ ಎಂದು ಕುಟುಂಬದ ಅಧ್ಯಕ್ಷ ರಾಜ ಬೋಪಣ್ಣ ತಿಳಿಸಿದರು.

ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವಿವಿಧ ಸಂಘ ಸಂಸ್ಥೆಗಳು ಫುಟ್ಬಾಲ್ ಪಂದ್ಯಾಟಗಳನ್ನು ನಡೆಸುತ್ತಿದ್ದಾರೆ. ಆದರೆ ಕೊಡವ ಕುಟುಂಬಗಳ ನಡುವೆ ಇದೇ ಮೊದಲ ಬಾರಿಗೆ ಈ ಪಂದ್ಯಾವಳಿ ನಡೆಯುತ್ತಿದೆ. ಇದು ಕೊಡವರಿಗೆ ಮಾತ್ರ ಸೀಮಿತವಾಗಿರುತ್ತದೆ ಎಂದು ಹೇಳಿದರು. ಮೂಕೊಂಡ ಶಶಿ ಸುಬ್ರಮಣಿ ಅವರು ಮಾತನಾಡಿ, ಪಂದ್ಯಾವಳಿಯಲ್ಲಿ ಭಾಗವಹಿಸುವ ಪ್ರತಿ ಕುಟುಂಬವು ಏಳು ಆಟಗಾರರನ್ನು ಹೊಂದಿರಬೇಕು. ಅದರಲ್ಲಿ ಎರಡು ಕೊಡವ ಅತಿಥಿ ಆಟಗಾರ ರಿಗೆ ಆಡಲು ಅವಕಾಶ ಇರುತ್ತದೆ. ಪಂದ್ಯಾಟದಲ್ಲಿ ಕುಟುಂಬದ ಹೆಸರು ನೋಂದಾಯಿಸಲು ಮೇ 15 ಕೊನೆಯ ದಿನಾಂಕವಾಗಿದೆ. ಮೊದಲು ನೋಂದಾಯಿಸುವ 32 ತಂಡಗಳಿಗೆ ಅವಕಾಶ ನೀಡಲಾಗುವುದು ಎಂದರು.

ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ನೀಡಲಾಗುವುದು. ಅಂತಿಮ ಪಂದ್ಯ 24 ರಂದು ನಡೆಯಲಿದ್ದು, ವಿಜೇತರಿಗೆ ನಗದು ಬಹುಮಾನ ಹಾಗೂ ಆಕರ್ಷಕ ಟ್ರೋಫಿ ನೀಡಲಾಗುವುದು. ಪಂದ್ಯಾಟದಲ್ಲಿ ಉತ್ತಮ ಗೋಲ್‌ಕೀಪರ್, ಉತ್ತಮ ಮುನ್ನಡೆ ಆಟಗಾರ, ಅತಿ ಹೆಚ್ಚು ಗೋಲ್ ಗಳಿಸಿದ ಆಟಗಾರ ರಿಗೆ ಟ್ರೋಫಿ ನೀಡಲಾಗುವುದು ಎಂದರು. ಹೆಚ್ಚಿನ ಮಾಹಿತಿಗಾಗಿ 8277627853 ಮಿತೇಶ್, 9663753555 ಭೌಶಿಕ್ ಇವರುಗಳಲ್ಲಿ ತಂಡದ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಗೋಷ್ಠಿಯಲ್ಲಿ ಕಾರ್ಯದರ್ಶಿ ಮೂಕೊಂಡ ಮಂಜು, ಖಜಾಂಚಿ ಮೂಕೊಂಡ ಉಮೇಶ್ ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ವಿರಾಜಪೇಟೆ, ಮೇ 12– ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತದೆ. ಅದರಂತೆ ಈ ಬಾರಿಯು ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ವಿರಾಜಪೇಟೆ ತಾಲೂಕು ಅಧ್ಯಕ್ಷ ಬಿ.ಎಸ್ ಗುರುರಾಜ್ ತಿಳಿಸಿದರು.

ಸರ್ಕಾರಿ ನೌಕರರ ಸಂಘದ ವತಿಯಿಂದ ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 2023ನೇ ಸಾಲಿನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಹಾಗೂ ಪಿ.ಯು.ಸಿಯಲ್ಲಿ ಶೇ, 90 ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಮಕ್ಕಳ ಆನ್‌ಲೈನ್ ಅರ್ಜಿಯನ್ನು ಪುರಸ್ಕರಿಸಲಾಗುವುದು. ಅಗತ್ಯ ದಾಖಲೆಗಳೊಂದಿಗೆ ಮೇ 31ರೊಳ ಗಾಗಿ ಅರ್ಜಿ ಸಲ್ಲಿಸಬಹುದು. ಮಾಹಿತಿಗಾಗಿ ದೂ. 9902135813 ಸಂಪರ್ಕಿಸಬಹುದು. ಗೋಷ್ಠಿಯಲ್ಲಿ ಕಾರ್ಯದರ್ಶಿ ಬಿ.ಎ.ದೇವರಾಜ್, ಖಜಾಂಚಿ ಎ.ಬಿ.ಲಲಿತಾ, ರಾಜ್ಯ ಪರಿಷತ್ ಸದಸ್ಯ ಈ ಸುರೇಂದ್ರ ಉಪಸ್ಥಿತರಿದ್ದರು.

ವಿಧಾನಸಭಾ ಚುನಾವಣೆ: ಇಂದು ಮತ ಎಣಿಕೆ

ಚಾಮರಾಜನಗರ ಜಿಲ್ಲೆಯ ನಾಲ್ವರು ಶಾಸಕರು ಯಾರು?


ಸೋಮಣ್ಣ ಪುಟ್ಟರಂಗಶೆಟ್ಟಿ ಎ.ಆರ್.ಕೃಷ್ಣಮೂರ್ತಿ ಎನ್. ಮಹೇಶ್


ಗಣೇಶ್‌ಪ್ರಸಾದ್ ನಿರಂಜನ್‌ಕುಮಾರ್ ಆರ್.ನರೇಂದ್ರ ಪ್ರೀತನ್ ನಾಗಪ್ಪ ಮಂಜುನಾಥ್

ಈ ಒಂಭತ್ತು ಮಂದಿಯಲ್ಲಿ ಪೈಪೋಟಿ; ಇನ್ನೂ ಕೆಲವೇ ಗಂಟೆಯಲ್ಲಿ ಉತ್ತರ

ಚಾಮರಾಜನಗರ, ಮೇ 12– ಜಿಲ್ಲೆಯ ನಾಲ್ಕು ವಿಧಾನ ಸಭಾ ಕ್ಷೇತ್ರಗಳಿಗೆ ಬುಧವಾರ ನಡೆದ ಮತದಾನದ ಮತ ಎಣಿಕಾ ಕಾರ್ಯಕ್ಕೆ ಕ್ಷಣಗಣನೆ ಆರಂಭವಾಗಿದೆ.

ಜಿಲ್ಲೆಯ ನಾಲ್ವರು ಶಾಸಕರಾಗಿ ಯಾರು ಆಯ್ಕೆ ಆಗುತ್ತಾರೆ ಎಂಬುದು ತೀವ್ರ ಕುತೂಹಲ ಕೆರಳಿಸಿದೆ. ಇದಕ್ಕೆ ಇನ್ನೂ ಕೇವಲವೇ ಗಂಟೆಗಳಲ್ಲಿ ಉತ್ತರ ದೊರೆಯಲಿದೆ.

ನಗರದ ಬೇಡರಪುರ ಬಳಿ ಇರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್‌ನಲ್ಲಿ ಜಿಲ್ಲೆಯ ಎಲ್ಲಾ ನಾಲ್ಕು ವಿಧಾನಸಭಾ ಕ್ಷೇತ್ರಗಳ ಮತ ಎಣಿಕಾ ಕಾರ್ಯ ಬೆಳಗ್ಗೆ 8ಗಂಟೆಗೆ ಆರಂಭವಾಗಲಿದೆ. ಅಂಚೆ ಮತಗಳ ಎಣಿಕಾ ಕಾರ್ಯದ ಜೊತೆಗೆ ವಿದ್ಯುನ್ಮಾನ ಮತಯಂತ್ರಗಳ ಮತ ಎಣಿಕಾ ಕಾರ್ಯವೂ ಸಹ ಆರಂಭವಾಗಲಿದೆ. ಮತ ಎಣಿಕೆ ಆರಂಭವಾದ ಎರಡು ಗಂಟೆಗೆ ಅಂದರೆ 10ಗಂಟೆ ವೇಳೆಗೆ ಕ್ಷೇತ್ರದ ಶಾಸಕರು ಯಾರಾಗಬಹುದು ಎಂಬ ಸೂಚನೆ ದೊರೆಯಲಿದೆ.

ನಂತರದ ಇನ್ನೊಂದು ಗಂಟೆಯಲ್ಲಿ ಅಂದರೆ 11 ಗಂಟೆ ಸುಮಾರಿಗೆ ಪೂರ್ಣ ಫಲಿತಾಂಶ ಹೊರಬೀಳಲಿದೆ ಎಂದು ಅಂದಾಜಿಸಲಾಗಿದೆ. ಮಧ್ಯಾಹ್ನ 12ಗಂಟೆ ವೇಳೆಗೆ ಎಣಿಕಾ ಕಾರ್ಯ ಪೂರ್ಣಗೊಂಡ ಫಲಿತಾಂಶವನ್ನು ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಹೇಳಲಾಗುತ್ತಿದೆ.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಿಂದ ಆಯ್ಕೆ ಬಯಸಿ ಒಟ್ಟು 61 ಅಭ್ಯರ್ಥಿಗಳು ಸ್ಪರ್ಧಿಸಿದ್ದು, ಇವರೆಲ್ಲರ ರಾಜಕೀಯ ಭವಿಷ್ಯ ಏನಾಗಲಿದೆ ಎಂಬುದು ಇಂದು ಮಧ್ಯಾಹ್ನದ ವೇಳೆಗೆ ಬಹಿರಂಗವಾಗಲಿದೆ.

ಈ ಒಂಭತ್ತು ಮಂದಿಯುಲ್ಲಿ ನಾಲ್ವರು ಯಾರು?: ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಬೇಕು ಎಂದು ಒಟ್ಟು 15 ಮಂದಿ ಸ್ಪರ್ಧಿಸಿದ್ದು, ಇವರಲ್ಲಿ ಗೆಲುವಿಗಾಗಿ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಸಿ. ಪುಟ್ಟರಂಗಶೆಟ್ಟಿ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಕ್ಷೇತ್ರದ ಮತದಾರರು ಸಚಿವ ಸೋಮಣ್ಣರ ಕಮಲ ಅರಳಿಸುತ್ತಾರೋ ಅಥವಾ ಶಾಸಕ ಪುಟ್ಟರಂಗಶೆಟ್ಟಿಯ 'ಕೈ'ಯನ್ನು ಹಿಡಿಯುತ್ತಾರೋ ಎಂಬುದು ಇನ್ನೂ ಸ್ವಲ್ಪ ಸಮಯದಲ್ಲಿ ತಿಳಿಯಲಿದೆ. ಉಳಿದ ಅಭ್ಯರ್ಥಿಗಳು ಎಷ್ಟು ಮತಗಳನ್ನು ಗಳಿಸುತ್ತಾರೆ ಎಂಬುದು ಕುತೂಹಲಕ್ಕೆ ಎಡೆ ಮಾಡಿಕೊಟ್ಟಿದೆ.

ಕೊಳ್ಳೇಗಾಲ ಮೀಸಲು ಕ್ಷೇತ್ರದಿಂದ ಆಯ್ಕೆ ಬಯಸಿ ಒಟ್ಟು 13 ಮಂದಿ ಸ್ಪರ್ಧಿಸಿದ್ದರು. ಇವರಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಾಜಿ ಶಾಸಕ ಎ.ಆರ್. ಕೃಷ್ಣಮೂರ್ತಿ ಹಾಗೂ ಬಿಜೆಪಿ ಅಭ್ಯರ್ಥಿ ಹಾಲಿ ಶಾಸಕ ಎನ್. ಮಹೇಶ್ ನಡುವೆ ಗೆಲುವಿಗಾಗಿ ತೀವ್ರ ಹಣಾಹಣಿ ಏರ್ಪಟ್ಟಿದೆ. ಕ್ಷೇತ್ರದ ಮತದಾರರು ಮಾಜಿ ಶಾಸಕರ ಅನುಕಂಪಕ್ಕೆ ಮುನ್ನಡೆ ನೀಡುತ್ತಾರೋ ಅಥವಾ ಹಾಲಿ ಶಾಸಕರನ್ನು ಮತ್ತೊಮ್ಮೆ ಆಯ್ಕೆ ಮಾಡುತ್ತಾರೋ ಕಾದು ನೋಡಬೇಕಾಗಿದೆ.

ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಬೇಕು ಎಂದು 15 ಮಂದಿ ಸ್ಪರ್ಧಿಸಿದ್ದರು. ಇವರ ಪೈಕಿ ಗೆಲುವಿಗಾಗಿ ಬಿಜೆಪಿ ಅಭ್ಯರ್ಥಿ ಸಿ.ಎಸ್. ನಿರಂಜನಕುಮಾರ್ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಗಣೇಶಪ್ರಸಾದ್ ಅವರ ನಡುವೆ ತೀವ್ರ ಪೈಪೋಟಿ ನಡೆದಿತ್ತು. ಇವರಿಬ್ಬರಲ್ಲಿ ಯಾರು ಜಯಗಳಿಸುತ್ತಾರೋ ಎಂಬುದನ್ನು ತಿಳಿಯಲು ಆಗದ ಪರಿಸ್ಥಿತಿ ಕ್ಷೇತ್ರದಲ್ಲಿ ನಿರ್ಮಾಣ ಆಗುತ್ತು. ಕ್ಷೇತ್ರದ ಮತದಾರರು ಮತ್ತೊಮ್ಮೆ ಕಮಲವನ್ನು ಅರಳಿಸಿದ್ದಾರೋ ಅಥವಾ 'ಕೈ'ಯನ್ನು ಮತ್ತೆ ಹಿಡಿದಿದ್ದಾರೋ ಎಂಬುದು ಇನ್ನೂ ಕೆಲವೇ ಗಂಟೆಗಳಲ್ಲಿ ಬಹಿರಂಗವಾಗಲಿದೆ.

ಹನೂರು ಕ್ಷೇತ್ರದಿಂದ ಆಯ್ಕೆ ಬಯಸಿ ಒಟ್ಟು 18ಮಂದಿ ಸ್ಪರ್ಧಿಸಿದ್ದರು. ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳ ಪೈಕಿ ಅತಿ ಹೆಚ್ಚು ಜನರು ಸ್ಪರ್ಧಿಸಿರುವ ಕ್ಷೇತ್ರ ಇದಾಗಿದೆ. ಮತದಾನಕ್ಕೆ ಎರಡು ಮತಯಂತ್ರಗಳನ್ನು ಬಳಸಲಾಗಿರುವುದ ರಿಂದ ಫಲಿತಾಂಶ ಹೊರಬೀಳಲು ಸ್ವಲ್ಪ ವಿಳಂಬವಾಗಬಹುದು. ಈ ಕ್ಷೇತ್ರದಿಂದ ಗೆಲುವಿಗಾಗಿ ಕಾಂಗ್ರೆಸ್ ಅಭ್ಯರ್ಥಿ, ಹಾಲಿ ಶಾಸಕ ಆರ್. ನರೇಂದ್ರ, ಬಿಜೆಪಿ ಅಭ್ಯರ್ಥಿ ಪ್ರೀತನ್ ನಾಗಪ್ಪ ಹಾಗೂ ಜೆಡಿಎಸ್ ಅಭ್ಯರ್ಥಿ ಮಂಜುನಾಥ್ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. ಕ್ಷೇತ್ರದ ಮತದಾರರು ಮತ್ತೊಮ್ಮೆ 'ಕೈ'ಯನ್ನು ಹಿಡಿಯಲಿದಾರೋ ಅಥವಾ ಕಮಲವನ್ನು ಅರಳಿಸಲಿದ್ದಾರೋ ಅಥವಾ ತೆನೆಹೊತ್ತ ಮಹಿಳೆಯನ್ನು ಬೆಂಬಲಿಸುತ್ತಾರೋ ಕಾದು ನೋಡಬೇಕಿದೆ.

ಮತ ಎಣಿಕೆ ಕೇಂದ್ರಕ್ಕೆ ಡಿಸಿ, ಎಸ್ಪಿ ಭೇಟಿ, ಸಿದ್ಧತಾ ವ್ಯವಸ್ಥೆ ಪರಿಶೀಲನೆ


ಚಾಮರಾಜನಗರದಲ್ಲಿರುವ ಎಣಿಕಾ ಕೇಂದ್ರಕ್ಕೆ ಜಿಲ್ಲಾಧಿಕಾರಿ ಮತ್ತು ಎಸ್ಪಿ ಭೇಟಿ ನೀಡಿರುವುದು.

ಚಾಮರಾಜನಗರ, ಮೇ 12– ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳ ಚುನಾವಣಾ ಮತ ಎಣಿಕೆ ಕೇಂದ್ರವಾದ ಬೇಡರಪುರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿಗೆ ಜಿಲ್ಲಾಧಿಕಾರಿ ಡಿ.ಎಸ್.ರಮೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಕಾತ್ಯಾಯಿನಿ ದೇವಿ ಅವರು ಇಂದು ಭೇಟಿ ನೀಡಿ ಸಿದ್ಧತೆ ಪರಿಶೀಲಿಸಿದರು.

ವಿಧಾನಸಭಾ ಕ್ಷೇತ್ರವಾರು ಮಾಡಲಾಗಿರುವ ಎಣಿಕೆ ಟೇಬಲ್‌ಗಳು ಇತರೆ ವ್ಯವಸ್ಥೆಗಳನ್ನು ವೀಕ್ಷಣೆ ಮಾಡಿದರು. ಮತ ಎಣಿಕೆ ಕೇಂದ್ರದ ಹೊರ ಆವರಣದಲ್ಲಿ ಅಳವಡಿಸಿರುವ ಬ್ಯಾರಿಕೇಡ್, ವಾಹನ ನಿಲುಗಡೆ, ಅಭ್ಯರ್ಥಿಗಳು, ಏಜೆಂಟರು, ಮತ ಎಣಿಕೆ ಅಧಿಕಾರಿ ಸಿಬ್ಬಂದಿ ಮತ ಎಣಿಕೆ ಕೇಂದ್ರ ಪ್ರವೇಶಿಸಲು ನಿರ್ಮಾಣ ಮಾಡಲಾಗಿರುವ ಪ್ರತ್ಯೇಕ ಪ್ರವೇಶದ್ವಾರ, ಮಾಧ್ಯಮ ಕೇಂದ್ರ ಇತರೆ ಸಿದ್ದತೆ ಪರಿಶೀಲಿಸಿದರು.

ಮತ ಎಣಿಕೆ ಕೇಂದ್ರದಲ್ಲಿ ಅಧಿಕಾರಿ ಸಿಬ್ಬಂದಿಗೆ ತಯಾರಿಸಲಾಗುತ್ತಿರುವ ಉಪಹಾರ, ಕುಡಿಯುವ ನೀರು ಇನ್ನಿತರ ವ್ಯವಸ್ಥೆ ಬಗ್ಗೆ ಜಿಲ್ಲಾಧಿಕಾರಿಯವರು ಪರಿಶೀಲಿಸಿ ಮಾಹಿತಿ ಪಡೆದರು.

ಇದೇ ವೇಳೆ ಮತ ಎಣಿಕೆ ಕೇಂದ್ರಕ್ಕೆ ನಿಯೋಜಿತರಾಗಿರುವ ಪೊಲೀಸ್ ಅಧಿಕಾರಿ ಸಿಬ್ಬಂದಿಯವರ ಕರ್ತವ್ಯ ನಿರ್ವಹಣೆ ಬಗ್ಗೆ ಜಿಲ್ಲಾಧಿಕಾರಿ ಡಿ.ಎಸ್.ರಮೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರು ಅಗತ್ಯ ಸೂಚನೆಗಳನ್ನು ನೀಡಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದೇಶ, ಡಿವೈಎಸ್ಪಿ ಪ್ರಿಯದರ್ಶಿನಿ ಸಾಣೆಕೊಪ್ಪ, ಸೋಮಣ್ಣ ಗೌಡ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಆರ್.ಸಿ.ಕೆಂಪರಾಜು ಇತರರು ಇದ್ದರು.

ಮತದಾನ ಮುಗಿಯಿತು, ಈಗ ಬೆಟ್ಟಿಂಗ್ ಭರಾಟೆ ಜೋರು

ಚಾಮರಾಜನಗರ, ಮೇ 12– ವಿಧಾನಸಭಾ ಚುನಾವಣೆಯ ಮತದಾನ ಬುಧವಾರ ಮುಕ್ತಾಯವಾಗಿದೆ. ಮೇ 13ರ ಶನಿವಾರ ಚುನಾವಣೆ ಫಲಿತಾಂಶ ಹೊರಬೀಳಲಿದ್ದು, ಇದಕ್ಕೂ ಮೊದಲು ಜಿಲ್ಲೆಯ ವಿವಿಧೆಡೆ ಸದ್ದಿಲ್ಲದೇ ಬೆಟ್ಟಿಂಗ್ ಭರಾಟೆ ನಡೆಯುತ್ತಿದೆ.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ನಡುವೆ ನೇರ ಹಣಾಹಣಿ ಇದ್ದು, ಈ ಬಾರಿಯ ಚುನಾವಣೆಯು ಸಾಕಷ್ಟು ಕುತೂಹಲ ಉಂಟು ಮಾಡಿತ್ತು. ಆದ್ದರಿಂದ ಸೋಲು–ಗೆಲುವಿನ ಬಗ್ಗೆ ಹೆಚ್ಚು ಚರ್ಚೆ ನಡೆಯುತ್ತಿದೆ. ಇದೇ ಚರ್ಚೆ ಈಗ ಬೆಟ್ಟಿಂಗ್‌ಗೆ ಎಡೆ ಮಾಡಿಕೊಟ್ಟಿದೆ.

ಚಾಮರಾಜನನಗರದಲ್ಲಿ ಈ ಬಾರಿ ಹಾಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ ಹಾಗೂ ಜಿಲ್ಲೆಯ ಹಾಲಿ ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ನಡುವೆ ಸ್ಪರ್ಧೆ ಏರ್ಪಟ್ಟಿದ್ದು, ಈ ಬಾರಿ ಹಣಾಹಣಿ ಜೋರಾಗಿದೆ ಎಂಬ ಅಭಿಪ್ರಾಯವನ್ನು ಆಧರಿಸಿ ಬೆಟ್ಟಿಂಗ್‌ನಲ್ಲಿ ಹಣ ಕಟ್ಟುತ್ತಿದ್ದಾರೆ.

ಬೆಟ್ಟಿಂಗ್‌ಗೆ ಕೊಳ್ಳೇಗಾಲ ಹಾಗೂ ಹನೂರು ಕ್ಷೇತ್ರವೂ ಹಿಂದೆ ಬಿದ್ದಿಲ್ಲ. ಎರಡು ಕ್ಷೇತ್ರದಲ್ಲಿ ಮತದಾರರ ಒಲವು ಯಾರ ಕಡೆಗೆ ಇದೆ ಎನ್ನುವುದಕ್ಕಿಂತಲೂ ಜಿಲ್ಲೆಯ ರಾಜಕಾರಣದಲ್ಲಿ ಹೆಚ್ಚು ಸದ್ದು ಮಾಡಿದೆ ಎಂಬ ಕಾರಣಕ್ಕೆ ಬೆಟ್ಟಿಂಗ್ ಜೋರಾಗಿ ನಡೆಯುತ್ತಿದೆ. ಎರಡು ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ಹೆಚ್ಚಿನ ಪ್ರಮಾಣದಲ್ಲಿ ಬೆಟ್ಟಿಂಗ್ ನಡೆಯುತ್ತಿದೆ ಎಂದು ಹೇಳಲಾಗುತ್ತಿದೆ. ಜಿಲ್ಲೆಯ ವಿವಿಧೆಡೆಗಳಲ್ಲಿ ಬೆಟ್ಟಿಂಗ್ ಕುರಿತು ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಇದರಲ್ಲಿ ಭಾಗವಹಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ತಿಳಿಸಿದ್ದಾರೆ.

ನರ್ಸ್‌ಗಳು ಆಸ್ಪತ್ರೆಯ ಆಧಾರಸ್ತಂಭಗಳು: ಡಾ.ವಿಶ್ವೇಶ್ವರಯ್ಯ ಮೆಚ್ಚುಗೆ



ಚಾಮರಾಜನಗರ, ಮೇ 12– ಆರೋಗ್ಯ ಕ್ಷೇತ್ರದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ನರ್ಸ್‌ಗಳು ಅಸ್ಪತ್ರೆಯ ಆಧಾರಸ್ತಂಭಗಳಿದ್ದಂತೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ವಿಶ್ವೇಶ್ವರಯ್ಯ ಅಭಿಪ್ರಾಯಪಟ್ಟರು.

ನಗರದಲ್ಲಿ ಜೆಎಸ್‌ಎಸ್ ಮಹಾ ವಿದ್ಯಾಪೀಠ ಹಾಗೂ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ವಿಶ್ವ ದಾದಿಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದಾದಿಯರ ಸೇವೆ ಅನನ್ಯ. ತಾಳ್ಮೆ, ಸಹನೆ ಬಹಳ ಮುಖ್ಯವಾಗಿರುತ್ತದೆ ಎಂದರು.

ಜೆಎಸ್‌ಎಸ್ ಆಸ್ಪತ್ರೆಯು ಜಿಲ್ಲೆಯಲ್ಲಿ ಉತ್ತಮ ಆರೋಗ್ಯ ಸೇವೆ ನೀಡುತ್ತಿದೆ. ಸುಸಜ್ಜಿತ ಲ್ಯಾಬ್ ಹಾಗೂ ಸ್ಕ್ಯಾನಿಂಗ್ ಘಟಕ ಇದೆ. ತಜ್ಞ ವೈದ್ಯರ ತಂಡದೊಂದಿಗೆ ದಾದಿಯರ ಸೇವೆಯ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.

ಜೆಎಸ್‌ಎಸ್ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್.ಎಂ.ಸ್ವಾಮಿ, ಮಾತನಾಡಿ ಉತ್ತಮ ಸೇವೆ ಸಲ್ಲಿಸಿದ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮದಿನವನ್ನೆ ಶುಶ್ರೂಷಕ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ನೈಟಿಂಗೇಲ್ ಹಾಗೂ ಮದರಾ ತೇರೆಸಾ ಅವರ ಸೇವೆ ಮತ್ತು ಹಾದಿಯಲ್ಲಿ ನಡೆಯುವ ಮೂಲಕ ಮಹಾ ಪುರುಷರ ಸೇವೆಯನ್ನು ಸ್ಮರಿಸಿಕೊಳ್ಳುವ ದಿನವಾಗಿದೆ. ಅವರ ಸೇವೆ ಸಮಾಜಕ್ಕೆ ಅಪಾರ ಮತ್ತು ಅವರ ಜೀವನವನ್ನೆ ಸಮಾಜದ ಸೇವೆಗೆ ಮುಡುಪಾಗಿಟ್ಟಿದ್ದರು. ನಾವು ಈ ಆಚರಣೆಗಳನ್ನು ಮಾಡುವುದರ ಜೊತೆ ಅವರ ಆದರ್ಶಗಳನ್ನು ಪಾಲಿಸಬೇಕು ಮತ್ತು ಆತ್ಮವಿಶ್ವಾಸ, ಗೌರವ ಮತ್ತು ಹೆಮ್ಮೆಯಿಂದ ನಿಮ್ಮ ಶುಶ್ರೂಷ ವೃತ್ತಿ ಜೀವನವನ್ನು ಪೂರೈಸಬೇಕು. ಆಸ್ಪತ್ರೆಯಲ್ಲಿ ಶುಶ್ರೂಷಕರ ಸೇವೆ ಇಲ್ಲದೇ ಯಾವುದೇ ಚಿಕಿತ್ಸೆಯು ಪೂರ್ಣಗೊಳ್ಳುವುದಿಲ್ಲ. ಚಿಕಿತ್ಸೆ ನೀಡುವುದರ ಜೊತೆಗೆ ರೋಗಿಗಳ ವೈಯಕ್ತಿಕ ಸ್ವಚತೆ ಬಗ್ಗೆಯು ಗಮನ ಹರಿಸಬೇಕೆಂದು ಸಲಹೆ ನೀಡಿದರು.

ಜೆಎಸ್‌ಎಸ್ ಅಸ್ಪತ್ರೆಯ ಅಧೀಕ್ಷಕ ಡಾ. ಗೋವಿಂದಶೆಟ್ಟಿ ಮಾತನಾಡಿ ನರ್ಸಿಂಗ್ ವೃತ್ತಿಯ ಘನತೆಯನ್ನು ಕಾಪಾಡಲು ಶುಶ್ರೂಷಕರು ಮುಂದಾಗಬೇಕು. ನರ್ಸಿಂಗ್ ವೃತ್ತಿಯು ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದರು.

ದಾದಿಯರು ಎಂಬ ಪದದಲ್ಲೇ ಒಂದು ವಿಶೇಷತೆ ಇದೆ ಮತ್ತು ಶುಶ್ರೂಷಕ ವೃತ್ತಿ ಒಂದು ಹೆಮ್ಮೆಯ ವೃತ್ತಿಯಾಗಿದೆ. ವೈದ್ಯಕೀಯ ಕ್ಷೇತ್ರದಲ್ಲಿ ದಾದಿಯರ ಪಾತ್ರ ಅಪಾರವಾದದ್ದು ಮತ್ತು ನಮ್ಮ ಸಮಾಜಕ್ಕೆ ಇವರು ಆಸ್ತಿ ಎಂದು ಹೇಳಿದರು.

ಆಸ್ಪತ್ರೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ಇಬ್ಬರು ದಾದಿಯಾರಾದ ಬಿ. ಯೋಗಿ, ಮಹದೇವಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಮೇಲ್ವಿಚಾರಕ ರವಿ, ದಾದಿಯರಾದ ಶಂಕರ್, ಡಾ. ಲಿಖಿತ್ ಮೊದಲಾದವರು ಇದ್ದರು.

ಭಾರೀ ಮಳೆ, ಬಾಳೆ ಫಸಲು ನಾಶ



ಯಳಂದೂರು, ಮೇ 12– ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಹೊಂಡರಬಾಳು ಗ್ರಾಮದಲ್ಲಿರುವ ಎರಡೂವರೆಯ ಎಕರೆಯಲ್ಲಿ ಬೆಳೆದಿದ್ದ ಮಧುವನಹಳ್ಳಿ ಎಸ್ ರಮೇಶ್ ಎಂಬ ರೈತನಿಗೆ ಸೇರಿದ್ದ ನೇಂದ್ರ ಬಾಳೆ ಫಸಲು ನಿನ್ನೆ ರಾತ್ರಿ ಬಿದ್ದ ಭಾರೀ ಬಿರುಗಾಳಿ ಸಹಿತ ಮಳೆಗೆ ನೆಲಕಚ್ಚಿದ್ದು, ಸರಿಸುಮಾರು ಐದು ಲಕ್ಷ ರೂ.ಗಳ ನಷ್ಟ ಸಂಭವಿಸಿದೆ.

ರೈತ ರಮೇಶ್ ಮಾತನಾಡಿ, ಭಾರೀ ಬಿರುಗಾಳಿ ಮಳೆಗೆ ಬಾಳೆ ಬೆಳೆಯು ಸಂಪೂರ್ಣ ನಾಶವಾಗಿದ್ದು, ಅಪಾರ ಪ್ರಮಾಣದ ನಷ್ಟವುಂಟಾಗಿದೆ ಸ್ಥಳಕ್ಕೆ ಕಂದಾಯ ಹಾಗೂ ತೋಟಗಾರಿಕಾ ಇಲಾಖೆ ಅಧಿಕಾರಿಗಳು ಆಗಮಿಸಿ ಸ್ಥಳ ಮಹಜರು ಮಾಡಿ ಮನವಿ ಪತ್ರ ಸ್ವೀಕರಿಸಿ ಪರಿಹಾರಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ ಎಂದರು.

ಒಂದನೇ ಪುಟದಿಂದ

ಭವಿಷ್ಯ ಇಂದೇ ನಿರ್ಧಾರ

ಪೂರ್ಣಗೊಂಡ ನಂತರ ಮೊಹರಾದ ವಿದ್ಯುನ್ಮಾನ ಮತಯಂತ್ರಗಳು ಹಾಗೂ ದಾಖಲಾತಿಗಳನ್ನು ಮಹಾರಾಣಿ ಮಹಿಳಾ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ಮತಗಟ್ಟೆ ಕೇಂದ್ರದ ಭದ್ರತಾ ಕೊಠಡಿ (ಸ್ಟ್ರಾಂಗ್ ರೂಂ)ಗಳಲ್ಲಿ ಇರಿಸಲಾಗಿದ್ದು, ಸಿಪಿಎಸ್ಎಫ್, ಕೆಎಸ್ಆರ್‌ಪಿ, ಸಿಟಿ ಸಿವಿಲ್ ಪೊಲೀಸರನ್ನು ನಿಯೋಜಿಸಿ, ಭಾರೀ ಭದ್ರತೆ ಒದಗಿಸಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ.ಮುತ್ತುರಾಜ್ ಮೇಲ್ವಿಚಾರಣೆಯಲ್ಲಿ ಮತ ಎಣಿಕೆಗೆ ಸಿಎಪಿಎಸ್ಎಫ್ ತುಕಡಿ, ಸಿಎಆರ್, ಕೆ.ಎಸ್ಆರ್‌ಪಿ, ಕಮಾಂಡೋ ಪಡೆ, ಅಶ್ವಾರೋಹಿ ದಳದ ಪೊಲೀಸ್ ಸಿಬ್ಬಂದಿ ಸೇರಿದಂತೆ 400ಕ್ಕೂ ಹೆಚ್ಚು ಮಂದಿಯನ್ನು ನಿಯೋಜಿಸಿ, ಕಟ್ಟೆಚ್ಚರ ವಹಿಸಲಾಗಿದೆ.

3,478 ಬ್ಯಾಲೆಟ್ ಯೂನಿಟ್, 2,938 ಕಂಟ್ರೋಲ್ ಯೂನಿಟ್ ಹಾಗೂ 3,022 ವಿವಿ ಪ್ಯಾಟ್‌ಗಳಲ್ಲಿ ದಾಖಲಾಗಿರುವ ಮತ ಎಣಿಕೆಗೆ ಮಹಾರಾಣಿ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜು ಕೇಂದ್ರದಲ್ಲಿ ಪ್ರತೀ ವಿಧಾನಸಭಾ ಕ್ಷೇತ್ರಕ್ಕೆ 14 ಎಣಿಕೆ ಟೇಬಲ್‌ಗಳನ್ನು ಅಳವಡಿಸಲಾಗಿದೆ. ಪ್ರತೀ ಟೇಬಲ್‌ಗೆ ಒಂದು ಕೌಂಟಿಂಗ್ ಮೈಕ್ರೋ ಅಬ್ಸರ್ವರ್, ಒಬ್ಬರು ಕೌಂಟಿಂಗ್ ಸೂಪರ್‌ವೈಸರ್, ಒಬ್ಬರು ಕೌಂಟಿಂಗ್ ಅಸಿಸ್ಟೆಂಟ್, ಪ್ರತೀ ಕೊಠಡಿಗೆ ಇಬ್ಬರು ಕೌಂಟಿಂಗ್ ಮೈಕ್ರೋ ಅಬ್ಸರ್ವರ್‌ಗಳನ್ನು ನೇಮಿಸಲಾಗಿದೆ.

ಅಂಚೆ ಮತಪತ್ರ ಎಣಿಕೆಗೆ 4 ಟೇಬಲ್‌ಗಳನ್ನು ಅಳವಡಿಸಲಾಗಿದ್ದು, ವಿದ್ಯುನ್ಮಾನ ಮತಯಂತ್ರಗಳ ಮತ ಎಣಿಕೆಗೆ ಮೊದಲೇ ಅಂಚೆ ಮತಗಳನ್ನು ಎಣಿಕೆ ಮಾಡಲಾಗುವುದು. ಮತ ಎಣಿಕೆ ಪ್ರಕ್ರಿಯೆಗೆ ಒಟ್ಟು 725 ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಮಧ್ಯಾಹ್ನದ ವೇಳೆಗೆ ಬಹುತೇಕ ಪೂರ್ಣ ಪ್ರಮಾಣದ ಫಲಿತಾಂಶ ಹೊರ ಬೀಳಲಿದ್ದು, ಅಭ್ಯರ್ಥಿಗಳ ಭವಿಷ್ಯ ಅನಾವರಣಗೊಳ್ಳಲಿದೆ.

ನಿಷೇಧಾಜ್ಞೆ: ಮತ ಎಣಿಕೆ ಕೇಂದ್ರದ ಸುತ್ತ 200 ಮೀ. ವ್ಯಾಪ್ತಿಯಲ್ಲಿ ಶನಿವಾರ ಬೆಳಗ್ಗೆ 6 ರಿಂದ ಸಂಜೆ 6 ಗಂಟೆವರೆಗೆ ಭಾರತ ದಂಡ ಸಂಹಿತೆ 1973ರ ಕಲಂ 144 ರೀತ್ಯಾ ನಿಷೇಧಾಜ್ಞೆ ಜಾರಿ ಮಾಡಲಾಗಿದ್ದು, 5ಕ್ಕಿಂತ ಹೆಚ್ಚು ಮಂದಿ ಗುಂಪು ಸೇರುವುದು, ಮೆರವಣಿಗೆ, ಸಭೆ-ಸಮಾರಂಭಗಳನ್ನು ನಿಷೇಧಿಸಲಾಗಿದೆ. ಸ್ಫೋಟಕ ವಸ್ತು, ಮಾರಕಾಸ್ತ್ರಗಳನ್ನು ಒಯ್ಯುವುದು, ಪ್ರಚೋದನಕಾರಿ ಭಾಷಣ ಮಾಡುವುದು, ಬೈಕ್ ರ್‍ಯಾಲಿ ನಡೆಸುವುದನ್ನು ನಿರ್ಬಂಧಿಸಲಾಗಿದೆ. ಜಯ ಗಳಿಸಿದ ಅಭ್ಯರ್ಥಿ ವಿಜಯೋತ್ಸವ ನಡೆಸುವಂತಿಲ್ಲ. ಮತ ಎಣಿಕೆ ಕಾರ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು, ಸಿಬ್ಬಂದಿ, ಅಭ್ಯರ್ಥಿ, ಚುನಾವಣಾ ಏಜೆಂಟರು, ಎಣಿಕೆ ಏಜೆಂಟ್‌ಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಮತ ಎಣಿಕಾ ಕೇಂದ್ರಕ್ಕೆ ಪ್ರವೇಶಿಸುವಂತಿಲ್ಲ.

ಮೈಸೂರು ಜಿಲ್ಲೆಯಲ್ಲಿ 80 ವರ್ಷ ಮೇಲ್ಪಟ್ಟವರು, ಅಂಗವಿಕಲರು, ಚುನಾವಣಾ ಕರ್ತವ್ಯದಲ್ಲಿ ನಿರತರಾಗಿದ್ದ ಸರ್ವಿಸ್ ವೋಟರ್ ಸೇರಿ ಒಟ್ಟು 14,573 ಮಂದಿ ಅಂಚೆ ಮತದಾನ ಮಾಡಿದ್ದಾರೆ. ಎಲ್ಲಾ 11 ವಿಧಾನಸಭಾ ಕ್ಷೇತ್ರಗಳಲ್ಲಿದ್ದ 26,55,984 ಮತದಾರರ ಪೈಕಿ 9,95,188 ಮಹಿಳೆಯರು, 49 ಇತರರು ಸೇರಿ ಒಟ್ಟು 19,95,101 ಮಂದಿ ಮೇ 10ರಂದು ಮತ ಚಲಾಯಿಸಿದ್ದು, ಜಿಲ್ಲೆಯಲ್ಲಿ ಶೇ.75.12ರಷ್ಟು ಮತದಾನವಾಗಿದೆ.

ಅಭ್ಯರ್ಥಿಗಳಲ್ಲಿ ಕಳವಳ: ಮತ ಎಣಿಕೆಗೆ ಕ್ಷಣ ಗಣನೆ ಆರಂಭವಾಗಿದ್ದು, ಅಭ್ಯರ್ಥಿಗಳಲ್ಲಿ ಆತಂಕ ಮನೆ ಮಾಡಿದೆ. ಗುರುವಾರ ವಿಶ್ರಾಂತಿಗೆ ಜಾರಿದ್ದ ಅಭ್ಯರ್ಥಿಗಳ ಪೈಕಿ ಕೆಲವರು ಕುಟುಂಬ ಸಮೇತ ದೇವಸ್ಥಾನಗಳಿಗೆ ತೆರಳಿದರೆ, ಮತ್ತೆ ಕೆಲವರು, ಮಠ-ಮಾನ್ಯಗಳಿಗೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದಿದ್ದಾರೆ. ಈ ನಡುವೆ ತಮ್ಮ ಅಭ್ಯರ್ಥಿಗಳು ಗೆಲ್ಲುತ್ತಾರೆಂಬ ಅತೀವ ವಿಶ್ವಾಸದಿಂದ ಅಭಿಮಾನಿಗಳು, ಬೆಂಬಲಿಗರು ಭಾರೀ ಬೆಟ್ಟಿಂಗ್‌ನಲ್ಲಿ ನಿರತರಾಗಿದ್ದಾರೆ. ಮಹಾರಾಣಿ ಕಾಲೇಜು ಮತ ಎಣಿಕೆ ಕೇಂದ್ರದ ಎಲ್ಲಾ ಮಹಡಿಗಳಲ್ಲೂ ಸಿಸಿ ಕ್ಯಾಮರಾ ಅಳವಡಿಸಲಾಗಿದೆಯಲ್ಲದೆ, ಪ್ರಕ್ರಿಯೆಯನ್ನು ವೀಡಿಯೋ ರೆಕಾರ್ಡಿಂಗ್ ಮಾಡಲಾಗುವುದು, ಪ್ರತೀ ಹಂತದ ಫಲಿತಾಂಶ ಪ್ರಕಟಿಸಲು ಕೇಂದ್ರದ ಆವರಣದಲ್ಲಿ ಸ್ಕ್ರೀನ್ ಅಳವಡಿಸಲಾಗಿದೆಯಲ್ಲದೆ, ಮಾಧ್ಯಮ ಕೊಠಡಿಯಲ್ಲೂ ಪ್ರಸಾರಕ್ಕೆ ವ್ಯವಸ್ಥೆ ಮಾಡಲಾಗಿದೆ.

ಅಧಿಕಾರಿಗಳು, ಸಿಬ್ಬಂದಿಗಳಿಗೆ ಕಾಲೇಜು ಆವರಣದಲ್ಲಿ ತಿಂಡಿ-ಊಟದ ವ್ಯವಸ್ಥೆ, ಶೌಚಾಲಯ, ಕುಡಿಯುವ ನೀರಿನ ಸೌಲಭ್ಯ ಒದಗಿಸಲಾಗಿದ್ದು, ಮಾಧ್ಯಮ ಪ್ರತಿನಿಧಿಗಳಿಗೆ ಮತ ಎಣಿಕೆ, ಫಲಿತಾಂಶದ ಕ್ಷಣ ಕ್ಷಣದ ಮಾಹಿತಿ ನೀಡಲು ಕ್ರಮ ವಹಿಸಿ ಸ್ಥಳದಲ್ಲಿ ವೈ-ಫೈ ಸೌಲಭ್ಯ ಒದಗಿಸಲಾಗಿದೆ. ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಅವರು ಮತ ಎಣಿಕಾ ಕೇಂದ್ರದಲ್ಲಿ ಉಪಸ್ಥಿತರಿದ್ದು ಪ್ರಕ್ರಿಯೆ, ಬಂದೋಬಸ್ತ್ ಮೇಲ್ವಿಚಾರಣೆ ನಡೆಸಲಿದ್ದಾರೆ.

ಚಾಮರಾಜನಗರ: ಚಾಮರಾಜನಗರ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ಶನಿವಾರ ಬೆಳಗ್ಗೆ 8 ಗಂಟೆಯಿಂದ ನಗರದ ಬೇಡರಪುರ ಬಳಿಯಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದೆ. ಚಾಮರಾಜನಗರ, ಕೊಳ್ಳೇಗಾಲ (ಮೀಸಲು), ಗುಂಡ್ಲುಪೇಟೆ ಮತ್ತು ಹನೂರು ವಿಧಾನಸಭಾ ಕ್ಷೇತ್ರಗಳ 61 ಅಭ್ಯರ್ಥಿಗಳ ಭವಿಷ್ಯ ನಿರ್ಧಾರವಾಗಲಿದೆ. ಹಾಲಿ ಶಾಸಕ ಕಾಂಗ್ರೆಸ್ ಅಭ್ಯರ್ಥಿ ಪುಟ್ಟರಂಗಶೆಟ್ಟಿ, ಸಚಿವರಾದ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ, ಹಾಲಿ ಶಾಸಕರಾದ ಎನ್. ಮಹೇಶ್, ನಿರಂಜನಕುಮಾರ್, ಮಾಜಿ ಶಾಸಕ ಎ.ಆರ್. ಕೃಷ್ಣಮೂರ್ತಿ ಮತ್ತು ಮಾಜಿ ಸಚಿವ ದಿವಂಗತ ಹೆಚ್.ಎಸ್. ಮಹದೇವಪ್ರಸಾದ್ ಅವರ ಪುತ್ರ ಗಣೇಶ್‌ಪ್ರಸಾದ್ ಪ್ರಮುಖ ಅಭ್ಯರ್ಥಿಗಳಾಗಿದ್ದಾರೆ.

ಕೊಡಗು: ಕೊಡಗು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳಾದ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದ ಮತ ಎಣಿಕೆ ಮಡಿಕೇರಿಯ ಸಂತ ಜೋಸೆಫರ ಕಾನ್ವೆಂಟ್‌ನಲ್ಲಿ ಶನಿವಾರ ಬೆಳಗ್ಗೆ 8 ಗಂಟೆಯಿಂದ ಆರಂಭವಾಗಲಿದೆ. ಮಡಿಕೇರಿ ಕ್ಷೇತ್ರದಿಂದ ಹಾಲಿ ಶಾಸಕ, ಬಿಜೆಪಿ ಅಭ್ಯರ್ಥಿ ಅಪ್ಪಚ್ಚುರಂಜನ್ ಮತ್ತು ಕಾಂಗ್ರೆಸ್ ಅಭ್ಯರ್ಥಿ ಡಾ. ಮಂಥರ್‌ಗೌಡ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ, ಬಿಜೆಪಿ ಅಭ್ಯರ್ಥಿ ಕೆ.ಜಿ. ಬೋಪಯ್ಯ ಮತ್ತು ಕಾಂಗ್ರೆಸ್ ಅಭ್ಯರ್ಥಿ ಎ.ಎಸ್. ಪೊನ್ನಣ್ಣ ಸೇರಿದಂತೆ ಹಲವರು ಕಣದಲ್ಲಿದ್ದು, ಇವರ ಭವಿಷ್ಯ ಕುತೂಹಲ ಕೆರಳಿಸಿದೆ.

ಮಂಡ್ಯ: ಮಂಡ್ಯ ವಿಶ್ವವಿದ್ಯಾನಿಲಯ ಕಟ್ಟಡದಲ್ಲಿ ನಾಳೆ ಬೆಳಗ್ಗೆ 8 ಗಂಟೆಗೆ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ನಡೆಯಲಿದೆ.

ವಾಹನ ಸಂಚಾರ ನಿರ್ಬಂಧ

ರಸ್ತೆವರೆಗೆ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. **ಬದಲಿ ಮಾರ್ಗ:** ಮೆಟ್ರೋಪೋಲ್ ಸರ್ಕಲ್‌ನಿಂದ ಹುಣಸೂರು ಕಡೆಗೆ ಹೋಗುವ ವಾಹನಗಳು ಡಿಸಿ ಕಚೇರಿ ಹಿಂಭಾಗದ ಆರ್ಚ್‌ಗೇಟ್‌ನಲ್ಲಿ ಎಡಕ್ಕೆ ತಿರುಗಿ ಕೌಟಿಲ್ಯ ವೃತ್ತದಲ್ಲಿ ಬಲ ಭಾಗದ ಬೋಗಾದಿ ರಸ್ತೆಯಲ್ಲಿ ಮುಂದೆ ಸಾಗಬೇಕು. ಹುಣಸೂರು ಕಡೆಯಿಂದ ಬರುವ ವಾಹನಗಳು ಸೆಂಟ್ ಜೋಸೆಫ್ ಕಾಲೇಜು ಬಳಿ ಎಡಕ್ಕೆ ತಿರುಗಿ ಟೆಂಪಲ್ ರಸ್ತೆಯಲ್ಲಿ ಬಿ.ಸಿ.ಲಿಂಗಯ್ಯ ಜಂಕ್ಷನ್ ಮೂಲಕ ಕೆಆರ್‌ಎಸ್ ರಸ್ತೆಯಲ್ಲಿ ಮುಂದೆ ಸಾಗುವಂತೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ತಿಳಿಸಿದ್ದಾರೆ.

ಅಭ್ಯರ್ಥಿಗಳ ಪರ ಬೆಟ್ಟಿಂಗ್ ಭರಾಟೆ

ಪೇಪರ್‌ನಲ್ಲಿ ಮಾಡಿಕೊಂಡಿದ್ದಾರೆ. ಇಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು" ಎಂದು ಬರೆದಿದ್ದಾರೆ.

ವಿವರ: ಹೆಚ್.ಡಿ.ಕೋಟೆ ತಾಲೂಕು ಬೆಳ್ತೂರು ಎ ಕಾಲೋನಿಯ ಲೇಟ್ ವೆಂಕಟನಾಯಕ ಎಂಬುವರ ಪುತ್ರ ಜಯರಾಮ ನಾಯಕ ಅವರಿಗೆ ಅಂತರಸಂತೆ ಹೋಬಳಿ ಗುಂಡತ್ತೂರು ಗ್ರಾಮದ ಕರೀಗೌಡ ಎಂಬುವರ ಪುತ್ರ ಪ್ರಕಾಶ್ ಮತ್ತು ಬೆಳಗನಹಳ್ಳಿ ಗ್ರಾಮದ ಡಿ. ಕುಂಟೇಗೌಡ ಎಂಬುವರ ಪುತ್ರ ಬಿ.ಕೆ. ಶಿವರಾಜು ಎಂಬುವರು ಬೆಟ್ಟಿಂಗ್ ಸಂಬಂಧ ಮೇ 11ರಂದು ಬಾಂಡ್ ಪೇಪರ್ ಬರೆದುಕೊಟ್ಟಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಕೆ.ಮಹದೇವ್ ಪರವಾಗಿ ಶಿವರಾಜು ಮತ್ತು ಪ್ರಕಾಶ್ 5 ಲಕ್ಷ ರೂ. ಹಾಗೂ ಜಯರಾಮ ನಾಯಕ ಕಾಂಗ್ರೆಸ್ ಅಭ್ಯರ್ಥಿ ಕೆ. ವೆಂಕಟೇಶ್ ಪರವಾಗಿ 5 ಲಕ್ಷ ರೂ. ಬೆಟ್ಟಿಂಗ್ ಕಟ್ಟಿಕೊಂಡಿದ್ದಾರೆ. ಎರಡೂ ಕಡೆಯಿಂದ ಸೇರಿ ಒಟ್ಟು 10 ಲಕ್ಷ ರೂ.ಗಳನ್ನು ಈ ಮೂವರು ಹೆಚ್.ಡಿ.ಕೋಟೆಯ ಪೂಜಾ ಎಲೆಕ್ಟ್ರಿಕಲ್ಸ್ ಅಂಡ್ ಹಾರ್ಡ್‌ವೇರ್ ಮಾಲೀಕ ನೇಮಿಚಂದ್ ಅವರಿಗೆ ನೀಡಿದ್ದು, ಮೇ 13ರಂದು ಫಲಿತಾಂಶ ಬಂದಾಗ ಗೆದ್ದ ವ್ಯಕ್ತಿಗಳು ಈ ಹಣವನ್ನು ನೇಮಿಚಂದ್ ಅವರಿಂದ ಪಡೆಯುವುದು. ಒಂದು ವೇಳೆ ಬಿಜೆಪಿ ಗೆಲುವು ಸಾಧಿಸಿದರೆ ಅವರವರು ನೀಡಿರುವ ಹಣವನ್ನು ನೇಮಿಚಂದ್ ಅವರಿಂದ ಪಡೆಯುವುದು ಎಂದು ಬಾಂಡ್ ಪೇಪರ್‌ನಲ್ಲಿ ಉಲ್ಲೇಖಿಸಲಾಗಿದೆ. ಅಲ್ಲದೇ ಈ ವಿಷಯವನ್ನು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಡಲಾಗಿದೆ. ಇದನ್ನು ಗಮನಿಸಿದ ಪೊಲೀಸರು, 5 ಲಕ್ಷ ರೂ.ಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಗುಂಡ್ಲುಪೇಟೆ ವರದಿ: ಇಲ್ಲಿನ ಪುರಸಭಾ ಸದಸ್ಯ ಕಿರಣ್ ಎಂಬಾತ ತಾನು ಬಿಜೆಪಿ ಅಭ್ಯರ್ಥಿ ನಿರಂಜನಕುಮಾರ್ ಪರವಾಗಿ ಒಂದು ಕೋಟಿ ರೂ. ಬೆಟ್ಟಿಂಗ್ ಕಟ್ಟಲು ಸಿದ್ಧವಿರುವುದಾಗಿಯೂ ಆಸಕ್ತಿಯುಳ್ಳವರು ತಮ್ಮ ಬಳಿ ಬಂದು ಬೆಟ್ಟಿಂಗ್ ಕಟ್ಟಬಹುದು ಎಂದು ಕಂತೆ ಕಂತೆ ಹಣದೊಂದಿಗೆ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು. ಅದೇ ರೀತಿ ಗುಂಡ್ಲುಪೇಟೆ ತಾಲೂಕಿನ ಮಲ್ಲುಪುರ ಗ್ರಾಮದ ಮುದ್ದುರಾಮೇಗೌಡ ಎಂಬುವರು ತಾನು ಕಾಂಗ್ರೆಸ್ ಅಭ್ಯರ್ಥಿ ಗಣೇಶ್‌ಪ್ರಸಾದ್ ಪರವಾಗಿ ಮೂರು ಎಕರೆ ಜಮೀನು, 75 ಲಕ್ಷ ನಗದು ಬೆಟ್ಟಿಂಗ್ ಕಟ್ಟುವುದಾಗಿಯೂ, ತಾನು ಬೆಟ್ಟಿಂಗ್‌ನಲ್ಲಿ ಸೋತರೆ ಗೆದ್ದವರಿಗೆ ಪಣಕ್ಕಿಟ್ಟಿರುವ ಜಮೀನು ಮತ್ತು ಹಣದೊಂದಿಗೆ ಸ್ಕೂಟಿ ಹಾಗೂ ಇನ್ನೋವಾ ಕಾರನ್ನು ಬಹುಮಾನವಾಗಿ ನೀಡುವುದಾಗಿಯೂ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು. ಈ ವಿಷಯ ತಿಳಿಯುತ್ತಿದ್ದಂತೆಯೇ ಗುಂಡ್ಲುಪೇಟೆ ಚುನಾವಣಾ ಶಾಖೆಯ ಅಧಿಕಾರಿ ಕೆಂಪಲಿಂಗಣ್ಣ ಅವರು ಗುಂಡ್ಲುಪೇಟೆ ಪೊಲೀಸರೊಂದಿಗೆ ಪುರಸಭಾ ಸದಸ್ಯ ಕಿರಣ್ ಮನೆ ಮೇಲೆ ದಾಳಿ ನಡೆಸಿದ್ದು, 1.20 ಲಕ್ಷ ರೂ. ವಶಪಡಿಸಿಕೊಂಡಿದ್ದಾರೆ. ಕಿರಣ್ ತಲೆಮರೆಸಿಕೊಂಡಿದ್ದು, ಆತನ ವಿರುದ್ಧ ದೂರು ದಾಖಲಾಗಿದೆ. ಅದೇ ರೀತಿ ಮಲ್ಲಯ್ಯನಪುರದ ಮುದ್ದು ರಾಮೇಗೌಡ ವಿರುದ್ಧವೂ ದೂರು ದಾಖಲಿಸಲಾಗುವುದು. ಜಿಲ್ಲಾ ಎಸ್ಪಿ ಪದ್ಮಿನಿ ಸಾಹು ಅವರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಪಕ್ಷಾತೀತವಾಗಿ ಬೆಟ್ಟಿಂಗ್: ಕೊಳ್ಳೇಗಾಲದ ಬಸ್ತಿಪುರ ಗ್ರಾಮದ ತರಕಾರಿ ವ್ಯಾಪಾರಿಯೋರ್ವ ಪಕ್ಷಾತೀತವಾಗಿ 8 ಲಕ್ಷ ರೂ.ಗಳ ಬೆಟ್ಟಿಂಗ್‌ಗೆ ಆಹ್ವಾನ ನೀಡಿ ವಿಡಿಯೋ ವೈರಲ್ ಮಾಡಿದ್ದು, ಆತನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ತರಕಾರಿ ವ್ಯಾಪಾರಿ ಮಲ್ಲೇಶ್ ಎಂಬಾತ ದುಡ್ಡಿನ ಕಂತೆಯನ್ನಿಟ್ಟುಕೊಂಡು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ 3 ಲಕ್ಷ ರೂ., ಕೊಳ್ಳೇಗಾಲ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎ.ಆರ್. ಕೃಷ್ಣಮೂರ್ತಿ ಪರ 2 ಲಕ್ಷ ಮತ್ತು ಹನೂರು ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಮಂಜುನಾಥ್ ಪರ 3 ಲಕ್ಷ ರೂ.ಗಳನ್ನು ತಾನು ಬೆಟ್ಟಿಂಗ್ ಕಟ್ಟುವುದಾಗಿ ವಿಡಿಯೋದಲ್ಲಿ ಘೋಷಿಸಿದ್ದಾನೆ. ಬೆಟ್ಟಿಂಗ್‌ಗೆ ಆಹ್ವಾನ ನೀಡಿದ ಮಲ್ಲೇಶ್ ಮತ್ತು ಅದನ್ನು ವಿಡಿಯೋ ಮಾಡಿದ ರಾಜು ಎಂಬಾತನ ವಿರುದ್ಧ ಕೊಳ್ಳೇಗಾಲ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಮೈಸೂರಲ್ಲಿ ಸುಂದರ ಬಸ್ ಪ್ರಯಾಣಿಕರ ತಂಗುದಾಣ

ಮೈಸೂರು, ಮೇ 12(ಜಿಎ)-ಮೈಸೂರಿನ ಹಲವೆಡೆ ಹೊಸದಾಗಿ ಬಸ್ ಪ್ರಯಾಣಿಕರ ತಂಗುದಾಣಗಳು ನಿರ್ಮಾಣವಾಗುತ್ತಿವೆ. ಹಳೆಯ ಮತ್ತು ಶಿಥಿಲಗೊಂಡಿರುವ ಬಸ್ ಪ್ರಯಾಣಿಕರ ತಂಗುದಾಣಗಳಿಗೆ ಮುಕ್ತಿ ಕಾಣಿಸುವ ಸಮಯವೂ ಒದಗಿ ಬಂದಿದೆ.





ಈಗಾಗಲೇ ನಗರದ ಐದು ಕಡೆ ಬಸ್ ಪ್ರಯಾಣಿಕರ ತಂಗುದಾಣಗಳನ್ನು ವಿಶಿಷ್ಟ ರೀತಿಯಲ್ಲಿ ನಿರ್ಮಾಣ ಮಾಡುತ್ತಿದ್ದೇವೆ. ಅವುಗಳಿಗೆ ಸಾರ್ವಜನಿಕರ ಪ್ರತಿಕ್ರಿಯೆ ನೋಡಿಕೊಂಡು ಮುಂದಿನ ದಿನಗಳಲ್ಲಿ ಮತ್ತಷ್ಟು ತಂಗುದಾಣಗಳನ್ನು ನಿರ್ಮಾಣ ಮಾಡುತ್ತೇವೆ.
- **ಎಸ್.ಟಿ.ತಿಪ್ಪಾರೆಡ್ಡಿ,** ಎಇಇ, ಕೆಆರ್‌ಐಡಿಎಲ್

ನಗರದ ವಿವಿಧೆಡೆ ಹಲವು ವರ್ಷದ ಹಿಂದೆಯೇ ಬಸ್ ಪ್ರಯಾಣಿಕರ ತಂಗುದಾಣಗಳು ನಿರ್ಮಾಣಗೊಂಡು, ಅವುಗಳಲ್ಲಿ ಕೆಲವು ಶಿಥಿಲಾವಸ್ಥೆ ತಲುಪಿ, ಸಾರ್ವಜನಿಕರ ಬಳಕೆಗೆ ಯೋಗ್ಯವಿರಲಿಲ್ಲ. ಇಂತಹ ಕೆಲವು ತಂಗುದಾಣಗಳನ್ನು ಕೆಡವಿ ಹೊಸದಾಗಿ ನಿರ್ಮಾಣ ಯೋಗ ಒದಗಿ ಬಂದಿದ್ದು, ಈಗಾಗಲೇ ಕೆಲವೆಡೆ ಸುಮಾರು 10 ಲಕ್ಷ ರೂ. ವೆಚ್ಚದಲ್ಲಿ ನೂತನ ಬಸ್ ಪ್ರಯಾಣಿಕರ ತಂಗುದಾಣಗಳು ನಿರ್ಮಾಣವಾಗುತ್ತಿವೆ.

ಈ ಹಿಂದೆ ನಗರದಲ್ಲಿ ನಿರ್ಮಾಣಗೊಂಡಿದ್ದ ಸುಸಜ್ಜಿತ ತಂಗುದಾಣಗಳನ್ನು ಕಿಡಿಗೇಡಿಗಳು ಹಾಳು ಮಾಡಿದ್ದರು. ಹಲವು ಸಾರ್ವಜನಿಕರ ಬಳಕೆಗೆ ಸೂಕ್ತವಾಗಿರಲಿಲ್ಲ. ಹಾಗೇ ತಂಗುದಾಣದಲ್ಲಿ ಬಸ್ ಆಗಮನ ಮತ್ತು ನಿರ್ಗಮನ ಸಮಯ ಸೂಚಿಸುವ ಡಿಜಿಟಲ್ ಪ್ಯಾನಲ್‌ಗಳನ್ನು ಕಿತ್ತು ಹಾಕಿ ಹಾಳು ಮಾಡಿದ್ದರು. ಇದರಿಂದ ಜನರಿಗೆ ಬಸ್‌ಗಳ ಮಾಹಿತಿ ದೊರೆಯುತ್ತಿರಲಿಲ್ಲ. ಈ ಬಗ್ಗೆ 'ಮೈಸೂರು ಮಿತ್ರ'ನಲ್ಲಿಯೂ ವರದಿ ಪ್ರಕಟವಾಗಿತ್ತು.

ಮೈಸೂರು ಮಹಾನಗರ ಪಾಲಿಕೆ, ಎಲ್ಲಿ ತಂಗುದಾಣಗಳ ಅಗತ್ಯವಿದೆ, ಜೊತೆಗೆ ಈಗ ಇರುವಂತಹ ಶಿಥಿಲಗೊಂಡಿರುವ ತಂಗುದಾಣಗಳ ಪಟ್ಟಿ ಮಾಡಿತ್ತು. ಇಂತಹ ಸ್ಥಳಗಳಲ್ಲಿ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತವು (ಕೆಆರ್‌ಐಡಿಎಲ್) ತಂಗುದಾಣಗಳನ್ನು ನಿರ್ಮಾಣ ಮಾಡುತ್ತಿದ್ದು, ಈಗಾಗಲೇ ನಗರದ ಕೆಲವೆಡೆ ತಂಗುದಾಣಗಳು ನಿರ್ಮಾಣವಾಗುತ್ತಿವೆ.

ನಗರ ಮತ್ತು ಗ್ರಾಮಾಂತರ ಬಸ್ ನಿಲ್ದಾಣ ಹೊರತುಪಡಿಸಿ ನಗರದ ಜಯ ಚಾಮರಾಜೇಂದ್ರ ವೃತ್ತದಲ್ಲಿ (ಹಾರ್ಡಿಂಜ್ ವೃತ್ತ) ನಗರ ಮತ್ತು ಗ್ರಾಮಾಂತರ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ದಿನ ಪೂರ್ತಿ ಸರ್ಕಾರಿ ಮತ್ತು ಖಾಸಗಿ ಬಸ್‌ಗಳಿಗೆ ಕಾಯುವುದು ಮಾಮೂಲಾಗಿದೆ. ಆದರೆ, ಈ ಸ್ಥಳದಲ್ಲಿ ಯಾವುದೇ ಬಸ್ ತಂಗುದಾಣವಿಲ್ಲ. ಇಲ್ಲಿ ಈಗಾಗಲೇ ಬಸ್ ತಂಗುದಾಣವನ್ನು ಕೆಆರ್‌ಐಡಿಎಲ್ ನಿರ್ಮಾಣ ಮಾಡುತ್ತಿದ್ದು, ಇದು ಜನತೆಗೆ ಸಾಕಷ್ಟು ಅನುಕೂಲವಾಗಲಿದೆ.

ಕೆಆರ್‌ಐಡಿಎಲ್ ಸಂಸ್ಥೆಯೂ ವಿಭಿನ್ನ ಮಾದರಿಯಲ್ಲಿ ಬಸ್ ತಂಗುದಾಣವನ್ನು ನಿರ್ಮಿಸಲು ಆಲೋಚನೆ ಮಾಡಿದ್ದು, ಅದರಂತೆ ನಗರದ ಕೆಆರ್‌ಎಸ್ ರಸ್ತೆಯ ಗೋಕುಲಂನ ಹಸು-ಕರು ವೃತ್ತದ ಬಳಿ ಸಂಪೂರ್ಣ ಫ್ರೇಮ್‌ಗಳನ್ನು ಬಳಸಿ ಆಕರ್ಷಕ ಹಾಗೂ ಅಂದದ ತಂಗುದಾಣ ನಿರ್ಮಾಣ ಮಾಡಿದ್ದು, ಸಾರ್ವಜನಿಕರ ಆಕರ್ಷಿಸುತ್ತಿದೆ. ಮತ್ತೊಂದೆಡೆ ಸಿದ್ದಪ್ಪ ವೃತ್ತದ ಬಳಿ ಸಿಮೆಂಟ್, ಇಟ್ಟಿಗೆ ಹಾಗೂ ಕಾಂಕ್ರೀಟ್ ಬಳಸಿ ಪ್ರಾಯೋಗಿಕವಾಗಿ ನಿರ್ಮಾಣವಾಗುತ್ತಿರುವ ತಂಗುದಾಣಗಳಿಗೆ ಜನರಿಂದ ಯಾವ ರೀತಿ ಪ್ರತಿಕ್ರಿಯೆ ಬರುತ್ತದೆ ಎಂದು ನೋಡಿಕೊಂಡು ಮುಂದಿನ ದಿನಗಳಲ್ಲಿ ಮತ್ತಷ್ಟು ನೂತನ ಬಸ್ ಪ್ರಯಾಣಿಕರ ತಂಗುದಾಣಗಳು ನಗರದಲ್ಲಿ ತಲೆ ಎತ್ತಲಿವೆ.

ಪಾಲಿಕೆಯು ನಿರ್ಧರಿಸಿದ ಸ್ಥಳದಲ್ಲಿ ಕೆಆರ್‌ಐಡಿಎಲ್ ಸಂಸ್ಥೆಯೂ ಸ್ಥಳೀಯ ಶಾಸಕರ 10 ಲಕ್ಷ ರೂ. ಅನುದಾನದಲ್ಲಿ ಬಸ್ ತಂಗುದಾಣವನ್ನು ನಿರ್ಮಾಣ ಮಾಡುತ್ತಿದ್ದಾರೆ. ನಗರದಲ್ಲಿ ಐದು ಸ್ಥಳದಲ್ಲಿ ತಂಗುದಾಣ ನಿರ್ಮಾಣ ಕಾರ್ಯ ಈಗ ನಡೆಯುತ್ತಿದ್ದು, ಚುನಾವಣೆ ನೀತಿ ಸಂಹಿತೆ ಅಂತ್ಯಗೊಂಡ ನಂತರ ಮತ್ತಷ್ಟು ಕಡೆ ನಿರ್ಮಾಣ ಮಾಡುವ ಚಿಂತನೆ ನಡೆಸಿದ್ದಾರೆ.

ಕೆಆರ್‌ಐಡಿಎಲ್ ಸಂಸ್ಥೆಯು ತಂಗುದಾಣ ನಿರ್ಮಾಣ ಕಾರ್ಯ ಮುಕ್ತಾಯಗೊಳಿಸಿ, ಅದನ್ನು ಪಾಲಿಕೆಗೆ ಹಸ್ತಾಂತರಿಸುತ್ತದೆ. ನಂತರ ಪಾಲಿಕೆ ವತಿಯಿಂದ ತಂಗುದಾಣದ ಒಳಗೆ ಬಸ್ ಆಗಮನ ಮತ್ತು ನಿರ್ಗಮನದ ಸಮಯ ಪ್ರದರ್ಶಿಸುವ ಡಿಜಿಟಲ್ ಪ್ಯಾನಲ್ ಹಾಗೂ ಸರ್ಕಾರಿ ಯೋಜನೆಗಳನ್ನು ಜನತೆಗೆ ತಿಳಿಸುವ ಸಲುವಾಗಿ ಜಾಹಿರಾತುಗಳನ್ನು ಅಳವಡಿಸಿ, ಮತ್ತಷ್ಟು ಉನ್ನತೀಕರಣಗೊಳಿಸಲಿದ್ದಾರೆ. ಇಷ್ಟು ಸುಸಜ್ಜಿತವಾಗಿ ನಿರ್ಮಾಣಗೊಳ್ಳುತ್ತಿರುವ ತಂಗುದಾಣವನ್ನು ಬಳಸುವುದರ ಜೊತೆಗೆ ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.



ಶಿಬಿರಾರ್ಥಿಗಳಿಗೆ ಉಚಿತ ಶಾಲಾಬ್ಯಾಗ್ ವಿತರಣೆ



ಮೈಸೂರು, ಮೇ 12(ಸಿಎನ್)-ಇತ್ತೀಚೆಗೆ ಮೊಬೈಲ್‌ಗಳು ಮಕ್ಕಳ ಭವಿಷ್ಯಕ್ಕೆ ಮಾರಕವಾಗಿ ಪರಿಣಮಿಸುತ್ತಿವೆ. ಆದಷ್ಟೂ ಮೊಬೈಲ್‌ಗಳಿಂದ ಮಕ್ಕಳನ್ನು ದೂರವಿಟ್ಟು, ಸಾಂಸ್ಕೃತಿಕ ಚಟುವಟಿಕೆಗಳತ್ತ ಗಮನ ಕೇಂದ್ರೀಕರಿಸುವತ್ತ ಪೋಷಕರು ಪ್ರೋತ್ಸಾಹಿಸಬೇಕು ಎಂದು ಹಿರಿಯ ರಂಗಕರ್ಮಿ ಬಸವಲಿಂಗಯ್ಯ ಸಲಹೆ ನೀಡಿದರು.

ನಗರದ ವಿದ್ಯಾರಣ್ಯಪುರಂನ ನೂತನ ಸಮುದಾಯ ಭವನದಲ್ಲಿ ಜನಚೈತನ್ಯ ಫೌಂಡೇಷನ್‌ನಿಂದ ಆಯೋಜಿಸಿದ್ದ ಮಕ್ಕಳ ಚೈತನ್ಯ ಬೇಸಿಗೆ ಶಿಬಿರ' ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಮನಸ್ಸು ಜ್ಞಾನದಿಂದ ಬೆಳಕಿಗಿಂತ ವೇಗವಾಗಿ ಚಲಿಸುತ್ತದೆ ಎಂಬುದನ್ನು ಕಂಡು ಹಿಡಿದಿದ್ದೇ ವಿಶ್ವಗುರು ಬುದ್ಧ. ಅದಲ್ಲದೇ ಅಂಗುಲಿಮಾಲ ಎಂಬ ರಕ್ಕಸನನ್ನ ತನ್ನ ಸೌಮ್ಯ ಸ್ವಭಾವದಿಂದ ಸಾಧುವಾಗಿಸಿದ ಮಹಾಶಕ್ತಿ ನಮ್ಮ ಬುದ್ಧ. ಹಾಗಾಗಿ ಬುದ್ಧನ ಮಾರ್ಗದಲ್ಲಿ ಮಕ್ಕಳನ್ನ ಬೆಳೆಸುವ ಅಗತ್ಯವಿದೆ ಎಂದರು.

ಸಂಗೀತ, ನೃತ್ಯ, ನಾಟಕ, ಚಿತ್ರಕಲೆ, ಯೋಗ ಎಂಬ ವಿವಿಧ ಕಲೆಗಳನ್ನು ಬೇಸಿಗೆ ರಜಾದಿನದಲ್ಲಿ ಉಚಿತವಾಗಿ ಕಲಿಸುವ ಮೂಲಕ ಜನ ಚೈತನ್ಯ ಸಂಸ್ಥೆಯೂ, ಭವಿಷ್ಯದಲ್ಲಿ ಮಕ್ಕಳ ವ್ಯಕ್ತಿ ವಿಕಸನಕ್ಕೆ ಸಹಕಾರಿಯಾಗಲಿದೆ. ಈ ರೀತಿಯ ಶಿಬಿರಗಳಲ್ಲಿ ಮಕ್ಕಳು ಹೆಚ್ಚು ತೊಡಗಿಕೊಳ್ಳುವ ಮೂಲಕ ಆಟ-ಪಾಠದ ಜೊತೆಗೆ ಜ್ಞಾನಾರ್ಜನೆ ಆಗಲಿದೆ ಎಂದರು.

ಹಿರಿಯ ರಂಗಕರ್ಮಿ ಬಸವಲಿಂಗಯ್ಯ, ಮಾಜಿ ಮೇಯರ್ ನಾರಾಯಣ್, ಕೃಷಿ ಇಲಾಖೆ ನಿ.ಜಂಟಿ ನಿರ್ದೇಶಕ ಶ್ರೀರಂಗ, ಹಿರಿಯ ವಕೀಲ ಡಿ.ಬಿ.ರಾಜಶೇಖರಮೂರ್ತಿ, ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞೆ ಡಾ.ರೇಖಾ ಅರುಣ್, ಜನ ಚೈತನ್ಯ ಫೌಂಡೇಷನ್ ಅಧ್ಯಕ್ಷ ಆರ್.ಲಕ್ಷ್ಮಣ್, ಗುರುಸ್ವಾಮಿ, ಕೆ.ಪಿ. ಪ್ರೇಮಕುಮಾರಿ, ಡಿ.ಪಿ.ರೇಣುಕ, ಎಸ್.ರಶ್ಮಿ, ಜಿ.ಶ್ರೀನಿವಾಸ್, ಎನ್.ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

ಅಭ್ಯರ್ಥಿಯ ವರ್ಚಸ್ಸನ್ನು ಒರೆಗಚ್ಚಲಿರುವ ಠೇವಣಿ!

ಮೈಸೂರು, ಮೇ 12(ಎಸ್‌ಬಿಡಿ)- ಚುನಾವಣೆ ಬಗ್ಗೆ ಚರ್ಚಿಸುವಾಗ ಅಭ್ಯರ್ಥಿಗಳ ಠೇವಣಿ ವಿಚಾರ ಪ್ರಸ್ತಾಪವಾಗುತ್ತದೆ. ಅವರು ಠೇವಣಿಯನ್ನೂ ಉಳಿಸಿಕೊಳ್ಳುವುದಿಲ್ಲ ಎಂಬ ಮಾತನ್ನು ಸಹಜವಾಗಿ ಕೇಳುತ್ತಿರುತ್ತೇವೆ. ಚುನಾವಣೆಗಳಲ್ಲಿ ಗೆದ್ದವರು, ಸೋತವರ ಜೊತೆಗೆ ಠೇವಣಿ ಕಳೆದುಕೊಂಡವರೂ ಇರುತ್ತಾರೆ. ಆದರೆ ಈ ಬಗ್ಗೆ ಹಲವರಿಗೆ ಸ್ಪಷ್ಟತೆ ಇರುವುದಿಲ್ಲ. ವಿಧಾನಸಭಾ ಸಾರ್ವತ್ರಿಕ ಚುನಾವಣೆ ಫಲಿತಾಂಶ ಶನಿವಾರ ಪ್ರಕಟವಾಗುತ್ತಿರುವ ಹಿನ್ನೆಲೆಯಲ್ಲಿ ಠೇವಣಿ ಕುರಿತ ಸಂಕ್ಷಿಪ್ತ ಮಾಹಿತಿ ಇಲ್ಲಿದೆ. 1951ರ ಪ್ರಜಾಪ್ರತಿನಿಧಿ ಕಾಯ್ದೆಯ ಸೆಕ್ಷನ್ 158ರ ಪ್ರಕಾರ ಒಂದು ವಿಧಾನಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಬೇಕಾದರೆ ಸಾಮಾನ್ಯ ಅಭ್ಯರ್ಥಿ 10 ಸಾವಿರ ರೂ., ಪರಿಶಿಷ್ಟ ಜಾತಿ ಅಥವಾ ಪಂಗಡದ ಅಭ್ಯರ್ಥಿ 5 ಸಾವಿರ ರೂ.ಗಳನ್ನು ಚುನಾವಣಾ ಆಯೋಗಕ್ಕೆ ಭದ್ರತಾ ಠೇವಣಿಯಾಗಿ ಪಾವತಿಸಿರುತ್ತಾರೆ.

ಚುನಾವಣೆಯಲ್ಲಿ ಚಲಾವಣೆಯಾದ ಒಟ್ಟು ಮತಗಳಲ್ಲಿ ಆರನೇ ಒಂದು ಭಾಗದ(1/6) ಮತ ಪಡೆದ ಅಭ್ಯರ್ಥಿಗಳಿಗೆ ಭದ್ರತಾ ಠೇವಣಿಯನ್ನು ಹಿಂದಿರುಗಿಸಲಾಗುತ್ತದೆ. ಇದಕ್ಕಿಂತ ಕಡಿಮೆ ಮತಗಳನ್ನು ಪಡೆದ ಅಭ್ಯರ್ಥಿಗಳ ಠೇವಣಿಯನ್ನು ಚುನಾವಣಾ ಆಯೋಗ ಮುಟ್ಟುಗೋಲು ಹಾಕಿಕೊಳ್ಳುತ್ತದೆ. ಅಂತಹವರನ್ನು ಠೇವಣಿ ಕಳೆದುಕೊಂಡ ಅಭ್ಯರ್ಥಿಗಳೆಂದು ಗುರುತಿಸಲಾಗುತ್ತದೆ. ನಿಖರವಾಗಿ ಆರನೇ ಒಂದು ಭಾಗ ಮತ ಪಡೆದವರ ಠೇವಣಿಯನ್ನೂ ಹಿಂದಿರುಗಿಸುವುದಿಲ್ಲ. ಹೀಗೆ ಮುಟ್ಟುಗೋಲು ಹಾಕಿಕೊಳ್ಳುವ ಠೇವಣಿ ಹಣ ಸರ್ಕಾರದ ಖಜಾನೆ ಸೇರುತ್ತದೆ. ಇಲ್ಲಿ ಹಣದ ವಿಷಯ ಪ್ರಾಮುಖ್ಯತೆ ಪಡೆಯುವುದಿಲ್ಲ. ಆದರೆ ಅತೀ ಕಡಿಮೆ ಮತ ಪಡೆದು ಠೇವಣಿ ಕಳೆದುಕೊಂಡ ಎಂದು ಪರಿಗಣನೆ ಆಗುವುದರೊಂದಿಗೆ ಅಂತಹ ಅಭ್ಯರ್ಥಿಯ ವರ್ಚಸ್ಸನ್ನು ಒರೆಗಚ್ಚಲಾಗುತ್ತದೆ.

ಮೇ.16 ರಂದು ಕಾರ್ಯಕ್ರಮ ನಿರೂಪಣೆ, ವೇದಿಕೆ ಪ್ರಸ್ತುತಿ ಕಾರ್ಯಾಗಾರ

ಮೈಸೂರು,ಮೇ 12- ಮೈಸೂರಿನ ಅಮೃತ ವಿಶ್ವವಿದ್ಯಾಪೀಠಂ ಕ್ಯಾಂಪಸ್‌ನ ದೃಶ್ಯ ಸಂವಹನ ವಿಭಾಗವು ಮೀಡಿಯಾ ಕ್ಲಬ್ ಸಹಯೋಗದೊಂದಿಗೆ ಕಾರ್ಯಕ್ರಮ ನಿರೂಪಣೆ ಹಾಗೂ ವೇದಿಕೆ ಪ್ರಸ್ತುತಿ ಕುರಿತು ಮೇ 16ರಂದು ಒಂದು ದಿನದ ಕಾರ್ಯಾಗಾರ (One Day Workshop on Event Anchoring and Presentation Skills) ವನ್ನು ಆಯೋಜಿಸಿದೆ.

ಅಂದು ಕಾರ್ಯಾಗಾರವು ಬೋಗಾದಿ ಎರಡನೇ ಹಂತದಲ್ಲಿರುವ ಅಮೃತ ವಿಶ್ವವಿದ್ಯಾಪೀಠಂನ ಆವರಣದಲ್ಲಿರುವ ಸುಧಾಮಣಿ ಹಾಲ್‌ನಲ್ಲಿ ನಡೆಯಲಿದ್ದು, ಬೆಂಗಳೂರಿನ ಖ್ಯಾತ ಸೆಲೆಬ್ರಿಟಿ ಇವೆಂಟ್ ಹೋಸ್ಟ್ ಶಮೀರಾ ಬೆಳ್ವಾಯಿ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ, ಕಾರ್ಯಾಗಾರದಲ್ಲಿ ನಿರೂಪಣೆ, ವಿವಿಧ ಬಗೆಯ ನಿರೂಪಣಾ ಶೈಲಿಗಳು, ನಿರೂಪಣೆಗೆ ಬೇಕಾದ ಅಗತ್ಯ ಸಿದ್ಧತೆ, ಸಂದರ್ಶನ ಕಲೆ, ಹಿನ್ನೆಲೆ ಧ್ವನಿ ಕ್ಷೇತ್ರ ಹಾಗೂ ಈ ಕ್ಷೇತ್ರಗಳಲ್ಲಿರುವ ವಿಫುಲ ಅವಕಾಶಗಳ ಬಗ್ಗೆ ಪ್ರಾಯೋಗಿಕ ಮಾಹಿತಿ ನೀಡಲಿದ್ದಾರೆ.

ವಿದ್ಯಾರ್ಥಿಗಳು, ಪ್ರೊಫೆಷನಲ್ಸ್ ಹಾಗೂ ಸಾರ್ವಜನಿಕರಿಗೆ ಕಾರ್ಯಾಗಾರದಲ್ಲಿ ಭಾಗವಹಿಸಲು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ 9590248222, 9164461193 ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮನೆ ಬಾಗಿಲು ಮುರಿದು 5.5 ಲಕ್ಷ ರೂ. ಮೌಲ್ಯದ ಚಿನ್ನ-ಬೆಳ್ಳಿ ಆಭರಣ ಕಳವು

ಮೈಸೂರಿನ ವಿಜಯನಗರ 3ನೇ ಹಂತದಲ್ಲಿ ಘಟನೆ

ಮೈಸೂರು, ಮೇ 12(ಆರ್‌ಕೆ)-ಮನೆ ಬಾಗಿಲು ಮುರಿದು 5.5 ಲಕ್ಷ ರೂ. ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣ ಕಳವು ಮಾಡಿರುವ ಘಟನೆ ಮೈಸೂರಿನ ವಿಜಯನಗರದಲ್ಲಿ ನಡೆದಿದೆ.

ವಿಜಯನಗರ 3ನೇ ಹಂತ, 1ನೇ ಮುಖ್ಯ ರಸ್ತೆ, 16ನೇ ಕ್ರಾಸ್, A-1 ಬ್ಲಾಕ್ ನಿವಾಸಿ ಶ್ರೀನಿವಾಸ, ಚಿನ್ನ-ಬೆಳ್ಳಿ ಆಭರಣ ಕಳೆದುಕೊಂಡವರು. ತಮ್ಮ ಸಂಬಂಧಿಕರ ಮಗಳ ಮದುವೆಗೆಂದು ಪತ್ನಿ, ಪುತ್ರನೊಂದಿಗೆ ಬೆಂಗಳೂರಿಗೆ ತೆರಳಿದ್ದ ಅವರು, ಮೇ 7ರಂದು ವಾಪಸ್ ಬಂದಾಗ ಮನೆ ಬಾಗಿಲು ತೆರೆದಿತ್ತು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ಪ್ರದೀಪ್ ಹಾಗೂ ಸಿಬ್ಬಂದಿ, ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡರು. ಮುಂಬಾಗಿಲು ಮೀಟಿ ಒಳಗೆ ಪ್ರವೇಶಿಸಿರುವ ಖದೀಮರು, ಅಲ್ಮೇರಾದಲ್ಲಿದ್ದ 70 ಗ್ರಾಂ ಚಿನ್ನಾಭರಣ ಹಾಗೂ ಎರಡೂವರೆ ಕೆ.ಜಿ. ಬೆಳ್ಳಿ ಪದಾರ್ಥಗಳನ್ನು ಹೊತ್ತೊಯ್ದಿದ್ದಾರೆ. ಆದರೆ, ಮನೆಯ ದೇವರ ಕೋಣೆಯಲ್ಲಿದ್ದ ಬೆಳ್ಳಿ ಪದಾರ್ಥಗಳನ್ನು ಮುಟ್ಟಿಲ್ಲ ಎಂಬುದು ಮಹಜರು ವೇಳೆ ತಿಳಿಯಿತು.

ಪ್ರಕರಣ ದಾಖಲಿಸಿಕೊಂಡಿರುವ ವಿಜಯನಗರ ಠಾಣೆ ಪೊಲೀಸರು, ಸಿಸಿ ಕ್ಯಾಮರಾ ಫುಟೇಜ್‌ಗಳನ್ನು ಪಡೆದು ಆರೋಪಿಗಳ ಪತ್ತೆಗೆ ತನಿಖೆ ನಡೆಸುತ್ತಿದ್ದಾರೆ. ಶ್ವಾನ ದಳ, ನಗರ ಬೆರಳಚ್ಚು ಮುದ್ರೆ ಘಟಕದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲಿಸಿದರು. ವಿಜಯನಗರ ಉಪ ವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ಅವರು ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದರು.

ಇಮ್ರಾನ್ ಖಾನ್‌ಗೆ 2 ವಾರಗಳ ಜಾಮೀನು

ನವದೆಹಲಿ: ಇಸ್ಲಾಮಾಬಾದ್ ಹೈಕೋರ್ಟ್ ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ 2 ವಾರಗಳ ಜಾಮೀನು ಮಂಜೂರು ಮಾಡಿದೆ. ಭ್ರಷ್ಟಾಚಾರಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಇಮ್ರಾನ್ ಖಾನ್ ಶುಕ್ರವಾರದಂದು ಇಸ್ಲಾಮಾಬಾದ್ ಹೈಕೋರ್ಟ್ ಎದುರು ಹಾಜರಾಗಿದ್ದರು.

ಅಲ್ ಖೈದಾ ಟ್ರಸ್ಟ್ ಪ್ರಕರಣದಲ್ಲಿ ಎನ್ಎಬಿ ಅಧಿಕಾರಿಗಳು, ಇಮ್ರಾನ್ ಖಾನ್ ಅವರನ್ನು ಮಂಗಳವಾರ ಬಂಧನಕ್ಕೊಳಪಡಿಸಿದ್ದರು. IHC ಅವರ ಬಂಧನವನ್ನು ಎತ್ತಿಹಿಡಿದಿದೆ ಆದರೆ ನ್ಯಾಯಾಲಯದ ಒಳಗಿನಿಂದ ಯಾರನ್ನೂ ಬಂಧಿಸಲಾಗುವುದಿಲ್ಲ ಎಂದು ಘೋಷಿಸಿದ ಸುಪ್ರೀಂ ಕೋರ್ಟ್ ಗುರುವಾರ ಅವರ ಜೈಲುವಾಸವನ್ನು ಅಸಿಂಧುಗೊಳಿಸಿತು ಮತ್ತು ಅವರನ್ನು ಬೆಳಿಗ್ಗೆ 11 ಗಂಟೆಗೆ ಅವರನ್ನು ಹೈಕೋರ್ಟ್‌ಗೆ ಹಾಜರುಪಡಿಸುವಂತೆ ಪೊಲೀಸರಿಗೆ ಸೂಚಿಸಿದ್ದರಿಂದ ಅವರನ್ನು ಬಿಡುಗಡೆ ಮಾಡಲು ಆದೇಶಿಸಿತ್ತು.

ಟಿ.ಯು.ಪ್ರಿಯಾಂಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು,ಮೇ 12- ನಗರದ ಸೇಂಟ್ ಥಾಮಸ್ ಶಾಲೆಯ ವಿದ್ಯಾರ್ಥಿನಿ ಟಿ.ಯು.ಪ್ರಿಯಾಂಕ ಎಸ್‌ಎಸ್‌ಎಲ್‌ಸಿ (ಸಿಬಿಎಸ್‌ಸಿ) ಪರೀಕ್ಷೆಯಲ್ಲಿ 518 (ಶೇ.86.33) ಅಂಕ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ಇಂಗ್ಲಿಷ್ 86, ಕನ್ನಡ 95, ಗಣಿತ 64, ವಿಜ್ಞಾನ 90, ಸಮಾಜ ವಿಜ್ಞಾನ 84, ಇನ್‌ಫರ್ಮೇಸನ್ ಅಂಡ್ ಟೆಕ್ನಾಲಜಿಯಲ್ಲಿ 99 ಅಂಕಗಳನ್ನು ಪಡೆದಿದ್ದಾರೆ.

ಮೈಸೂರು ಜಿಲ್ಲೆಯ 143 ಅಭ್ಯರ್ಥಿಗಳ ಭವಿಷ್ಯ ಇಂದು ಬಯಲು

● ಲೆಕ್ಕಾಚಾರದಂತೆ ಕೆಲವರು ದಡ ಸೇರುವ ವಿಶ್ವಾಸ ● ಅಭ್ಯರ್ಥಿಗಳ ಅದೃಷ್ಟ ಪರೀಕ್ಷೆ

ಮೈಸೂರು, ಮೇ 12(ಎಸ್‌ಬಿಡಿ)- ಮೈಸೂರು ಜಿಲ್ಲೆಯ 143 ಅಭ್ಯರ್ಥಿಗಳ ಭವಿಷ್ಯ ತಿಳಿಯಲು ಜನ ಕಾತುರರಾಗಿದ್ದಾರೆ.

ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 143 ಅಭ್ಯರ್ಥಿಗಳ ಭವಿಷ್ಯ ಮತಯಂತ್ರಗಳಲ್ಲಿ ಸುಪ್ತವಾಗಿದೆ. ಶನಿವಾರ ಬೆಳಗ್ಗೆಯಿಂದಲೇ ಮತ ಎಣಿಕೆ ನಡೆಯಲಿದ್ದು, ಮಧ್ಯಾಹ್ನದ ವೇಳೆಗೆ ಫಲಿತಾಂಶ ಪ್ರಕಟವಾಗುವ ಸಾಧ್ಯತೆ ಇದೆ. ಒಂದೊಂದು ಕ್ಷೇತ್ರದಲ್ಲೂ 8ರಿಂದ 17 ಮಂದಿ ಸ್ಪರ್ಧಿಸಿದ್ದು ಅಂತಿಮವಾಗಿ ಗೆಲ್ಲುವವರು ಯಾರು, ಸಮೀಪ ಪ್ರತಿಸ್ಪರ್ಧಿ, 3ನೇ ಸ್ಥಾನ ಯಾರಿಗೆ, ಠೇವಣಿ ಕಳೆದುಕೊಂಡವರೆಷ್ಟು ಎಲ್ಲವೂ ಸ್ಪಷ್ಟವಾಗಲಿದೆ.

ಜಿಲ್ಲೆಯ ಬಹುತೇಕ ವಿಧಾನಸಭಾ ಕ್ಷೇತ್ರಗಳಲ್ಲಿ ಜಿದ್ದಾ ಜಿದ್ದಿನ ಹೋರಾಟ ನಡೆದಿದೆ. ಎಲ್ಲಾ ಅಭ್ಯರ್ಥಿಗಳು ಗೆಲ್ಲಲ್ಲು ಸರ್ವ ಪ್ರಯತ್ನ ನಡೆಸಿದ್ದಾರೆ. ಬೃಹತ್ ಸಮಾವೇಶ, ರ್‍ಯಾಲಿ ಜೊತೆಗೆ ಮನೆ ಮನೆಗೆ ತೆರಳಿ ಮತ ಯಾಚಿಸಿದ್ದಾರೆ. ಅಭ್ಯರ್ಥಿಗಳ ಕುಟುಂಬದವರು ಕ್ಷೇತ್ರದೆಲ್ಲೆಡೆ ಪ್ರವಾಸ ನಡೆಸಿ ಪ್ರಚಾರ ನಡೆಸಿದ್ದಾರೆ. ಮತದಾನ ನಂತರ ಹಲವು ಸಮೀಕ್ಷಾ ವರದಿಗಳು ಪ್ರಕಟವಾಗಿವೆ. ಈ ಹಿನ್ನೆಲೆಯಲ್ಲಿ ಚುನಾವಣಾ ಫಲಿತಾಂಶ ತೀವ್ರ ಕುತೂಹಲ ಸೃಷ್ಟಿಸಿದೆ.

ಹೈವೋಲ್ಟೇಜ್ ವರುಣ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಸಿದ್ದರಾಮಯ್ಯ, ಬಿಜೆಪಿಯ ವಿ.ಸೋಮಣ್ಣ, ಜೆಡಿಎಸ್‌ನ ಡಾ.ಎನ್.ಎಲ್.ಭಾರತಿ ಶಂಕರ್, ಬಿಎಸ್‌ಪಿಯ ಎಂ.ಕೃಷ್ಣಮೂರ್ತಿ, ಆಮ್ ಆದ್ಮಿ ಪಕ್ಷದ ರಾಜೇಶ್ ಸೇರಿದಂತೆ ಒಟ್ಟು 15



ಅಭ್ಯರ್ಥಿಗಳಿದ್ದು, ಇವರಲ್ಲಿ ಯಾರು ಎಷ್ಟು ಮತಗಳಿಸಲಿದ್ದಾರೆ ಅಂತಿಮವಾಗಿ ಯಾರು ಜಯಶೀಲರಾಗುತ್ತಾರೆ ಎಂಬುದು ಕೌತುಕವಾಗಿದೆ.

ಕೆ.ಆರ್.ನಗರದಲ್ಲೂ ಹಾಲಿ ಶಾಸಕ, ಜೆಡಿಎಸ್‌ನ ಸಾ.ರಾ.ಮಹೇಶ್, ಕಾಂಗ್ರೆಸ್‌ನ ಡಿ.ರವಿಶಂಕರ್, ಬಿಜೆಪಿಯ ಹೊಸಹಳ್ಳಿ ವೆಂಕಟೇಶ್, ಬಿಎಸ್‌ಪಿಯ ಭರತ್‌ಕುಮಾರ್, ಆಮ್ ಆದ್ಮಿ ಪಾರ್ಟಿಯ ಮುರುಗೇಶ್ ಸೇರಿ 8 ಮಂದಿ ಭವಿಷ್ಯ ತಿಳಿಯಬೇಕಿದೆ. ನರಸಿಂಹರಾಜದಲ್ಲಿ ಕಾಂಗ್ರೆಸ್‌ನ ತನ್ವೀರ್ ಸೇಠ್, ಬಿಜೆಪಿಯ ಎಸ್.ಸತೀಶ್ ಸಂದೇಶ್ ಸ್ವಾಮಿ, ಜೆಡಿಎಸ್‌ನ ಅಬ್ದುಲ್ ಖಾದರ್, ಆಮ್ ಆದ್ಮಿ ಪಾರ್ಟಿಯ ಧರ್ಮಶ್ರೀ, ಎಸ್‌ಡಿಪಿಐನ ಕೆ.ಹೆಚ್.ಅಬ್ದುಲ್ ಮಜೀದ್ ಸೇರಿ ಒಟ್ಟು 17 ಮಂದಿ ಸ್ಪರ್ಧಿಸಿದ್ದು, ಇವರಲ್ಲಿ ಆಯ್ಕೆಯಾಗುವವರು ಯಾರು ಎಂಬುದಕ್ಕೆ ಉತ್ತರ ಸಿಗಲಿದೆ.

ತಿ.ನರಸೀಪುರ ಕ್ಷೇತ್ರದಲ್ಲಿ ಜೆಡಿಎಸ್ ಎಂ.ಅಶ್ವಿನ್ ಕುಮಾರ್, ಕಾಂಗ್ರೆಸ್‌ನ ಡಾ.ಹೆಚ್.ಸಿ.ಮಹದೇವಪ್ಪ, ಬಿಜೆಪಿ ಡಾ.ಎಂ.ರೇವಣ್ಣ, ಬಿಎಸ್‌ಪಿ ಬಿ.ಆರ್. ಪುಟ್ಟಸ್ವಾಮಿ, ಆಮ್ ಆದ್ಮಿ ಪಾರ್ಟಿಯ ಎಂ.ಸಿದ್ದರಾಜು ಸೇರಿ 12 ಮಂದಿ, ಚಾಮರಾಜ ಕ್ಷೇತ್ರದಲ್ಲಿ ಬಿಜೆಪಿಯ ಎಲ್.ನಾಗೇಂದ್ರ, ಕಾಂಗ್ರೆಸ್‌ನ ಕೆ.ಹರೀಶ್‌ಗೌಡ, ಜೆಡಿಎಸ್‌ನ ಹೆಚ್.ಕೆ.ರಮೇಶ್(ರವಿ), ಆಮ್ ಆದ್ಮಿ ಪಾರ್ಟಿಯ ಮಾಲವಿಕ ಗುಬ್ಬಿವಾಣಿ, ಬಿಎಸ್‌ಪಿ ಚಂದ್ರಶೇಖರ ಸೇರಿ 14 ಮಂದಿ, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಜೆಡಿಎಸ್‌ನ ಜಿ.ಟಿ.ದೇವೇಗೌಡ, ಕಾಂಗ್ರೆಸ್‌ನ ಎಸ್.ಸಿದ್ದೇಗೌಡ, ಬಿಜೆಪಿಯ ವಿ.ಕವೀಶ್ ಗೌಡ, ಬಿಎಸ್‌ಪಿಯ ಜೆ.ಜಯಶಂಕರ(ಶ್ಯಾಮ್), ಆಮ್ ಆದ್ಮಿ ಪಾರ್ಟಿಯ ಕಿರಣ್ ನಾಗೇಶ್ ಕಲ್ಯಾಣಿ ಸೇರಿ ಒಟ್ಟು 14 ಅಭ್ಯರ್ಥಿಗಳಿದ್ದು, ಇವರಲ್ಲಿ ಯಾರ್‍ಯಾರು ಶಾಸಕರಾಗಿ ಆಯ್ಕೆಯಾಗುತ್ತಾರೋ ಕಾದು ನೋಡಬೇಕಿದೆ.

ಹುಣಸೂರು ಕ್ಷೇತ್ರದಲ್ಲಿ ಜೆಡಿಎಸ್ ಜಿ.ಡಿ.ಹರೀಶ್‌ಗೌಡ, ಕಾಂಗ್ರೆಸ್‌ನ ಹೆಚ್.ಪಿ.ಮಂಜುನಾಥ್, ಬಿಜೆಪಿಯ ಸೋಮಶೇಖರ್, ಬಿಎಸ್‌ಪಿ ಪ್ರಸನ್ನಕುಮಾರ್, ಆಮ್ ಆದ್ಮಿ ಪಾರ್ಟಿಯ ಜಿ.ರವಿಕುಮಾರ್ ಸೇರಿ ಒಟ್ಟು 12 ಮಂದಿ, ಪಿರಿಯಾಪಟ್ಟಣದಲ್ಲಿ ಜೆಡಿಎಸ್‌ನ ಕೆ.ಮಹದೇವ, ಕಾಂಗ್ರೆಸ್‌ನ ಕೆ.ವೆಂಕಟೇಶ್, ಬಿಜೆಪಿಯ ಸಿ.ಹೆಚ್.ವಿಜಯಶಂಕರ್, ಬಿಎಸ್‌ಪಿಯ ಸಿ.ಎಸ್.ಪ್ರದೀಪ, ಆಮ್ ಆದ್ಮಿ ಪಕ್ಷದ ರಾಜಶೇಖರ್ ದೊಡ್ಡಣ್ಣ ಸೇರಿ ಒಟ್ಟು 10 ಮಂದಿ, ಕೃಷ್ಣರಾಜ ಕ್ಷೇತ್ರದಲ್ಲಿ ಬಿಜೆಪಿಯ ಟಿ.ಎಸ್.ಶ್ರೀವತ್ಸ, ಕಾಂಗ್ರೆಸ್‌ನ ಎಂ.ಕೆ.ಸೋಮಶೇಖರ್, ಜೆಡಿಎಸ್‌ನ ಕೆ.ವಿ.ಮಲ್ಲೇಶ್, ಆಮ್ ಆದ್ಮಿ ಪಕ್ಷದ ವೈ.ಜಯಶ್ರೀ, ಬಿಎಸ್‌ಪಿಯ ಸಿ.ಶ್ರೀನಿವಾಸ ಪ್ರಸಾದ್ ಸೇರಿ ಒಟ್ಟು 17 ಮಂದಿ, ಹೆಚ್.ಡಿ.ಕೋಟೆಯಲ್ಲಿ ಕಾಂಗ್ರೆಸ್‌ನ ಅನಿಲ್ ಚಿಕ್ಕಮಾದು, ಬಿಜೆಪಿ ಕೆ.ಎಂ.ಕೃಷ್ಣನಾಯಕ, ಜೆಡಿಎಸ್ ಜಯಪ್ರಕಾಶ ಚಿಕ್ಕಣ್ಣ, ಬಿಎಸ್‌ಪಿಯ ಹೋಟೆಲ್ ಶಿವಣ್ಣ, ಉತ್ತಮ ಪ್ರಜಾಕೀಯ ಪಾರ್ಟಿಯ ಹೆಚ್.ಎಂ.ನಾಗೇಶ ಸೇರಿ ಒಟ್ಟು 12 ಮಂದಿ ಹಾಗೂ ನಂಜನಗೂಡು ಕ್ಷೇತ್ರದಲ್ಲಿ ಕಾಂಗ್ರೆಸ್ ದರ್ಶನ್ ಧ್ರುವನಾರಾಯಣ್, ಬಿಜೆಪಿ ಬಿ.ಹರ್ಷವರ್ಧನ್, ಬಿಎಸ್‌ಪಿಯ ಶ್ರೀಕಂಠ, ಆಮ್ ಆದ್ಮಿ ಪಾರ್ಟಿಯ ಹೆಚ್.ಹನುಮಯ್ಯ, ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಆರ್.ಮಾದೇಶನ್ ಸೇರಿ ಒಟ್ಟು 12 ಅಭ್ಯರ್ಥಿಗಳು ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಇವರಲ್ಲಿ ಮತದಾರನ ಒಲವು ಯಾರ ಮೇಲಿದೆ, ಯಾರು ಗೆಲುವು ಸಾಧಿಸಿ ವಿಧಾನಸಭೆ ಪ್ರವೇಶಿಸಲಿದ್ದಾರೆ ಎನ್ನುವುದು ಕೆಲವೇ ಗಂಟೆಗಳಲ್ಲಿ ತಿಳಿಯಲಿದೆ.

ಯಾವ ಕ್ಷೇತ್ರದಲ್ಲಿ ಎಷ್ಟು ಮಂದಿ: ಕೃಷ್ಣರಾಜ ಹಾಗೂ ನರಸಿಂಹರಾಜ ಕ್ಷೇತ್ರದಲ್ಲಿ ತಲಾ 17 ಮಂದಿ, ವರುಣ 15, ಚಾಮುಂಡೇಶ್ವರಿ ಹಾಗೂ ಚಾಮರಾಜ ತಲಾ 14, ಹುಣಸೂರು, ಹೆಚ್.ಡಿ.ಕೋಟೆ, ನಂಜನಗೂಡು ಹಾಗೂ ತಿ.ನರಸೀಪುರದಲ್ಲಿ ತಲಾ 12, ಪಿರಿಯಾಪಟ್ಟಣ 10 ಮತ್ತು ಕೆ.ಆರ್.ನಗರದಲ್ಲಿ 8 ಮಂದಿ ಸ್ಪರ್ಧಿಸಿದ್ದು, ಫಲಿತಾಂಶಕ್ಕಾಗಿ ಕಾದಿದ್ದಾರೆ.

ಬೆಟ್ಟದಪುರದಲ್ಲಿ ವಿಶ್ವ ದಾದಿಯರ ದಿನ ಆಚರಣೆ

ಬೆಟ್ಟದಪುರ, ಮೇ 12– ಹಗಲಿರುಳು ಮಳೆ–ಚಳಿಯೆನ್ನದೆ ಕಾರ್ಯ ನಿರ್ವಹಿಸುವ ದಾದಿಯರ ಸೇವೆ ಶ್ರೇಷ್ಠವಾದುದು ಎಂದು ಬೆಟ್ಟದಪುರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪೂಜಾ ತಿಳಿಸಿದರು.

ಅಮೋಘ ವರ್ಷ ಅಮೃತ ವರ್ಷಿಣಿ ಸೇವಾ ಪ್ರತಿಷ್ಠಾನದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ದಾದಿಯರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಗರ್ಭಿಣಿ, ಮಕ್ಕಳು, ವೃದ್ಧರು ಮುಂತಾದವರ ಸೇವೆಯನ್ನು ಪ್ರತಿಫಲಾಪೇಕ್ಷೆ ಇಲ್ಲದೆ ಮಾಡುತ್ತಾ ಕಾಯಕದಲ್ಲೇ ದೇವರನ್ನು ಕಾಣುವ, ರೋಗಿಗಳ ಅಂತರಂಗದಲ್ಲಿ ಚೈತನ್ಯ ತುಂಬಿಸುವ ದಿವ್ಯ ಶಕ್ತಿ ದಾದಿಯರಿಗಿದೆ. ಕೊರೋನಾ ಸಂದರ್ಭದಲ್ಲಿ 150ಕ್ಕೂ ಹೆಚ್ಚು ದಾದಿಯರು ಕೊರೊನ ಪೀಡಿತರಿಗೆ ಸೇವೆ ಮಾಡುತ್ತಾ ವೃತ್ತಿಯ ಸಾರ್ಥಕತೆ ಮೆರೆದರು. ದಾದಿ ಎಂಬ ವಿಶ್ವ ಮಾತೆಯರ ಕೈಗಳಲ್ಲಿ ಸಮಾಜ ಹಸನಾಗಿದೆ ಎಂದರು.

ಪ್ರತಿಷ್ಠಾನ ಅಧ್ಯಕ್ಷ ಗೊರಳ್ಳಿ ಜಗದೀಶ್ ಮಾತನಾಡಿ, ವಿಶ್ವಮಾತೆ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮದಿನವನ್ನು ದಾದಿಯರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಕ್ರಿಮಿಯಾ ಯುದ್ಧದಲ್ಲಿ ಗಾಯಗೊಂಡ ಸೈನಿಕರು, ರಕ್ತಸಿಕ್ತ ಕೀವು ತುಂಬಿದ ದೇಹಗಳ ಶುಶ್ರೂಷೆ ಮಾಡುತ್ತಾ ಸೇವೆಯಲ್ಲಿ ಸಾರ್ಥಕತೆ ಮೆರೆದ ಮಾತೃಹೃದಯಿ ಅವರ ಸೇವೆ ಅನುಕರಣೀಯ ಎಂದರು.

ಸನ್ಮಾನ : ಕಾರ್ಯಕ್ರಮದಲ್ಲಿ ಪ್ರಾಥಮಿಕ ಕೇಂದ್ರ ಬೆಟ್ಟದಪುರದ ದಾದಿಯರಾದ ದೇವಕಿ, ಗೀತಾ, ಕುಸುಮ, ಸಂಗರಶೆಟ್ಟಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಉಷಾ, ಭುವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಶಶಿ, ಚಿಕ್ಕಹೊಸೂರು ಆಸ್ಪತ್ರೆಯ ಮಹೇಂದ್ರ, ಹಬಟೂರು ಆಸ್ಪತ್ರೆಯ ಗಿಡ್ಡೆಗೌಡರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಚೆಸ್ಕಾಂ ಬೆಟ್ಟದಪುರದ ಸುರೇಶ್, ಸಮಾಜ ಸೇವಕ ಮಲ್ಲೇಶ್, ಮಾಗಳಿ ರಾಮೇಗೌಡರು, ಸಿಬ್ಬಂದಿ ಹಾಜರಿದ್ದರು.



ಅಮೋಘ ವರ್ಷ ಅಮೃತವರ್ಷಿಣಿ ಸೇವಾ ಪ್ರತಿಷ್ಠಾನದ ವತಿಯಿಂದ ಬೆಟ್ಟದಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ವಿಶ್ವ ದಾದಿಯರ ದಿನಾಚರಣೆ ಸಮಾರಂಭದಲ್ಲಿ ಅನನ್ಯ ಸೇವೆ ಸಲ್ಲಿಸಿದ ದಾದಿಯರನ್ನು ಸನ್ಮಾನಿಸಲಾಯಿತು.

ಮುಂಗಾರು ಮಳೆ ಪ್ರಾರಂಭ ಬಿತ್ತನೆ ಕಾರ್ಯ ಚುರುಕು



ಸುತ್ತೂರು, ಮೇ 12– ಕಳೆದ ಎರಡು ಮೂರು ದಿನಗಳಿಂದ ಮುಂಗಾರು ಮಳೆ ಪ್ರಾರಂಭಗೊಂಡಿರುವ ಹಿನ್ನೆಲೆಯಲ್ಲಿ ರೈತರು ಕೃಷಿ ಚಟುವಟಿಕೆಯಲ್ಲಿ ಪಾಲ್ಗೊಂಡು ಬಿತ್ತನೆ ಬೀಜ ಬಿತ್ತುತ್ತಿರುವುದು ಕಂಡು ಬರುತ್ತಿದೆ. ಬಿಸಿಲ ಬೇಗೆಯಿಂದ ಹೈರಾಣಾಗಿದ್ದ ರೈತಾಪಿ ವರ್ಗ ಈಗ ಹದವಾಗಿ ಆರಂಭಗೊಂಡಿರುವ ಮಳೆಯನ್ನು ನಂಬಿ ಕೃಷಿ ಚಟುವಟಿಕೆಯಲ್ಲಿ ನಿರತವಾಗಿದೆ.

ನಂಜನಗೂಡು ತಾಲೂಕಿನ ಸುತ್ತೂರು, ಬಿಳಿಗೆರೆ, ಕುಪ್ಪರವಳ್ಳಿ, ತಾಯೂರು, ಈಶ್ವರಗೌಡನಹಳ್ಳಿ ಸೇರಿದಂತೆ ಮುಂತಾದ ಗ್ರಾಮಗಳಲ್ಲಿ ರೈತರು ಕಾಳು ಕಡ್ಡಿಗಳ ಬಿತ್ತನೆಯಲ್ಲಿ ತೊಡಗಿರುವುದು ಕಂಡು ಬಂದಿದೆ. ಕಳೆದ ಒಂದು ತಿಂಗಳಿಂದಲೂ ವಿಧಾನಸಭಾ ಚುನಾವಣೆಯ ಕಡೆ ಓಡಾಡುತ್ತಿದ್ದ ಜನತೆ ಮತದಾನ ಮುಗಿದ ಹಿನ್ನೆಲೆಯಲ್ಲಿ ಕೃಷಿಯಲ್ಲಿ ಸಕ್ರಿಯವಾಗಿದ್ದರು.

ಸರಗೂರಲ್ಲಿ ಶ್ರದ್ಧಾಭಕ್ತಿಯಿಂದ ಶ್ರೀ ಚೌಡೇಶ್ವರಿ ಅಮ್ಮನವರ ವರ್ಧಂತಿ ಮಹೋತ್ಸವ ಆಚರಣೆ

ಸರಗೂರು, ಮೇ 12– ಪಟ್ಟಣದಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರ 83ನೇ ವರ್ಧಂತಿ ಜ್ಯೋತಿ ಮಹೋತ್ಸವವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು,

ವಿಧಾನಸಭಾ ಚುನಾವಣೆ ನೀತಿ ಸಂಹಿತೆ ಇರುವ ಕಾರಣ ಭಕ್ತರು ಪೂಜಾ ಕೈಂಕರ್ಯವನ್ನು ಸರಳವಾಗಿ ನೆರವೇರಿಸಿದರು. ದೇವಾಲಯದಲ್ಲಿ ಮುಂಜಾನೆಯಿಂದ ಹೋಮ ಹವನ ನಡೆಸಿ ಗಣಪತಿ ಹೋಮ, ಪುಣ್ಯಾಹ, ಕಳಸ ಪ್ರತಿಷ್ಠಾಪನೆ, ದುರ್ಗಹೋಮ, ಕುಂಕುಮಾರ್ಚನೆ ಪೂಜಾ ವಿಶೇಷ ಪೂಜೆ ನಡೆಸಿ ಮಹಾ ಮಂಗಳಾರತಿ ಮಾಡಿ ಪ್ರಸಾದ ವಿನಿಯೋಗ ಮಾಡಲಾಯಿತು.

ಪಟ್ಟಣದ ತೊಗಟವೀರ ಕ್ಷತ್ರಿಯ ಸಮಾಜ ವತಿಯಿಂದ ಈ ಪೂಜಾ ಕೈಂಕರ್ಯ ನಡೆಸಲಾಯಿತು, ಎಲ್ಲಾ ಭಕ್ತಾದಿಗಳಿಗೂ ತೀರ್ಥ ಪ್ರಸಾದ ನೀಡಲಾಯಿತು, ಪೂಜಾ ಕೈಂಕರ್ಯವನ್ನು ಆರ್ಚಕರಾದ ಗೋಪಿ, ಹರೀಶ್ ನೆರವೇರಿಸಿದರು,



ಪ್ರತಿ ವರ್ಷವು ಶ್ರೀ ಚೌಡೇಶ್ವರಿ ಅಮ್ಮನವರ ವರ್ಧಂತಿ ಪೂಜಾ ಕಾರ್ಯಕ್ರಮವನ್ನು ವಿಜೃಂಭಣೆಯಾಗಿ ನಡೆಸಿಕೊಂಡು ಬರುತ್ತಿದ್ದೆವು. ಚುನಾವಣೆ ಹಿನ್ನೆಲೆ ನೀತಿ ಸಂಹಿತೆ ಇರುವ ಕಾರಣ ಸಾಂಕೇತಿಕವಾಗಿ ಭಕ್ತರಿಗೆ ಪೂಜೆ ನಡೆಸಿ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಮೇ 24 ಬುಧವಾರ ಶ್ರೀ ಚೌಡೇಶ್ವರಿ ಅಮ್ಮನವರ ವರ್ಧಂತಿ ಪೂಜಾ ಮೆರವಣಿಗೆ ಎಂದಿನಂತೆ ನಡೆಯಲಿದೆ ಎಂದು ತೊಗಟವೀರ ನೇಕಾರ ಕ್ಷತ್ರೀಯ ಸಮಾಜದ ಯಜಮಾನರು, ಅಧ್ಯಕ್ಷರು ತಿಳಿಸಿದ್ದಾರೆ.

ಮೇ 16 ರಂದು ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ

ಮೈಸೂರು ಮೇ 12– ಡೆಂಗ್ಯೂ (Dengue) ರೋಗದಿಂದ ಆಗುವ ಅಪಾಯಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಡೆಂಗ್ಯೂ ದಿನವನ್ನು ಆಚರಿಸಲಾಗುತ್ತಿದೆ. ಪ್ರತಿ ವರ್ಷವೂ ಮೇ 16 ರಂದು ರಾಷ್ಟ್ರೀಯ ಡೆಂಗ್ಯೂ ದಿನ (National Dengue Day)ವನ್ನಾಗಿ ಆಚರಣೆ ಮಾಡಲಾಗುತ್ತಿದೆ.

ಡೆಂಗ್ಯೂ ಈಡೀಸ್ ಈಜಿಪ್ಟಿ ಎಂಬ ಸೊಳ್ಳೆಯ ಮೂಲಕ ಹರಡುತ್ತದೆ. ಡೆಂಗ್ಯೂ ಸೋಂಕಿತ ನಾಲ್ಕು ಜನರಲ್ಲಿ ಒಬ್ಬರು ಅನಾರೋಗ್ಯಕ್ಕೆ ಒಳಗಾಗುವ ಸಾಧ್ಯತೆಯಿದೆ. ಅಂತವರಿಗೆ ಲಕ್ಷಣಗಳು ತೀವ್ರ ಅಥವಾ ಸೌಮ್ಯವಾಗಿ ಕಾಡಬಹುದು.

ಸೊಳ್ಳೆ ಕಚ್ಚಿದ 3–14 ದಿನಗಳ ಒಳಗೆ ಡೆಂಗ್ಯೂ ಲಕ್ಷಣಗಳು ಸಾಮಾನ್ಯವಾಗಿ ಕಾಣಿಸಿಕೊಳ್ಳುತ್ತವೆ. ಮೊದಲಿಗೆ ತೀವ್ರ ಜ್ವರದೊಂದಿಗೆ ಆರಂಭಗೊಳ್ಳುವ ಸಮಸ್ಯೆ ನಂತರ ಬೇರೆ ಬೇರೆ ಲಕ್ಷಣಗಳಿಂದ ರೋಗ ಉಲ್ಬಣಗೊಳ್ಳುತ್ತದೆ. ಮಳೆಗಾಲದಲ್ಲಿ ಹೆಚ್ಚು ಸೊಳ್ಳೆಗಳು ಉತ್ಪತ್ತಿ ಆಗುವುದರಿಂದ ಯಾವುದೇ ರೀತಿಯ ಜ್ವರ ಕಂಡುಬಂದಲ್ಲಿ ರಕ್ತ ಪರೀಕ್ಷೆಯನ್ನು ಮಾಡಿಸಿಕೊಳ್ಳಬೇಕು.

ಡೆಂಗ್ಯೂ ರೋಗದ ಲಕ್ಷಣಗಳು – ಹೆಚ್ಚಿನ ಜ್ವರ–ತೀವ್ರ ತಲೆನೋವು–ಕಣ್ಣುಗಳ ಹಿಂದೆ ನೋವು–ವಾಂತಿ ಮತ್ತು ವಾಕರಿಕೆಯ ಭಾವನೆ–ಸ್ನಾಯುಗಳು ಮತ್ತು ಕೀಲುಗಳಲ್ಲಿ ನೋವು.



ಮುನ್ನೆಚ್ಚರಿಕೆಗಳು: ಕೂಲರ್‌ಗಳು ಮತ್ತು ಇತರ ಸಣ್ಣ ಕಂಟೇನರ್‌ಗಳಿಂದ (ಪ್ಲಾಸ್ಟಿಕ್ ಕಂಟೇನರ್‌ಗಳು, ಬಕೆಟ್‌ಗಳು, ಬಳಸಿದ ಆಟೋಮೊಬೈಲ್ ಟೈರ್‌ಗಳು, ವಾಟರ್ ಕೂಲರ್‌ಗಳು, ಪೆಟ್ ವಾಟರ್ ಕಂಟೇನರ್‌ಗಳು ಮತ್ತು ಹೂವಿನ ಕುಂಡಗಳಲ್ಲಿ ಮತ್ತು ತೆಂಗಿನ ಚಿಪ್ಪುಗಳಲ್ಲಿ, ಮನೆಯಲ್ಲಿನ ನೀರಿನ ತೊಟ್ಟಿ ಹಾಗೂ ಡ್ರಮ್) ನೀರನ್ನು ವಾರಕ್ಕೊಮ್ಮೆಯಾದರೂ ಖಾಲಿ ಮಾಡಬೇಕು. ನೀರು ಶೇಖರಣಾ ಪಾತ್ರೆಗಳನ್ನು ಮುಚ್ಚಳದಿಂದ ಮುಚ್ಚಿಡಬೇಕು. ಸೊಳ್ಳೆಗಳ ಕಡಿತವನ್ನು ತಡೆಯಲು ಹಗಲಿನಲ್ಲಿ ಏರೋಸಾಲ್ ಅನ್ನು ಬಳಸಬಹುದು. ಪ್ರಸರಣ ಕಾಲದಲ್ಲಿ (ಮಳೆಗಾಲದಲ್ಲಿ) ಜನರು ತಮ್ಮ ಕೈಕಾಲುಗಳನ್ನು ಮುಚ್ಚುವ ಬಟ್ಟೆಗಳನ್ನು ಧರಿಸಬೇಕು. ಹಗಲಿನಲ್ಲಿ ಮಲಗುವಾಗ ಸೊಳ್ಳೆ ಪರದೆಗಳು ಅಥವಾ ಸೊಳ್ಳೆ ನಿವಾರಕಗಳನ್ನು ಬಳಸಬಹುದು.

ಡೆಂಗ್ಯೂ ರೋಗಕ್ಕೆ ಚಿಕಿತ್ಸೆಗಳು ಡೆಂಗ್ಯೂ ಕಾಯಿಲೆಯಿಂದ ಬಳಲುತ್ತಿರುವ ಜನರು ವಿಶ್ರಾಂತಿ ಪಡೆಯುವುದು ಮೊದಲ ಆದ್ಯತೆ ಆಗಿದೆ. ಹೆಚ್ಚಿನ ಪ್ರಮಾಣದಲ್ಲಿ ನೀರು ಹಾಗೂ ಜ್ಯೂಸ್ ಕುಡಿಯಬೇಕು. ಅವರು ಜ್ವರ ಮತ್ತು ದೇಹದ ನೋವಿಗೆ ಮಾತ್ರೆ ತೆಗೆದುಕೊಳ್ಳಬಹುದು ಮೇಲ್ಕಂಡ ರೋಗಲಕ್ಷಣಗಳು ತೀವ್ರವಾಗಿದ್ದರೆ ಹತ್ತಿರದ ಆಸ್ಪತ್ರೆಯಲ್ಲಿ ತಪಾಸಣೆ ಮಾಡಿಸಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಪಿಯು ವಿಜ್ಞಾನ ಕೋರ್ಸ್‌ಗಳಿಗೆ ಅರ್ಜಿ ಅಹ್ವಾನ

ಮೈಸೂರು, ಮೇ 12– ಜಿಲ್ಲೆಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಕಾರ್ಯ ನಿರ್ವಹಿಸುತ್ತಿರುವ ಮೈಸೂರು ಜಿಲ್ಲೆಯ ಮೊರಾರ್ಜಿ ದೇಸಾಯಿ, ಅಟಲ್ ಬಿಹಾರಿ ವಾಜಪೇಯಿ ಪದವಿ ಪೂರ್ವ ವಿಜ್ಞಾನ ವಸತಿ ಕಾಲೇಜು, ಏಕಲವ್ಯ ಮಾದರಿ ಪದವಿ ಪೂರ್ವ ಕಾಲೇಜುಗಳಿಗೆ ಪ್ರಸಕ್ತ 2023–24 ನೇ ಸಾಲಿಗೆ ಪ್ರಥಮ ಪದವಿ ಪೂರ್ವ ವಿಜ್ಞಾನ ಕೋರ್ಸ್‌ಗಳಿಗೆ ಪ್ರವೇಶ ಆರಂಭಗೊಂಡಿದ್ದು ಎಸ್‌ಎಸ್‌ಎಲ್‌ಸಿ ಉತೀರ್ಣರಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸದರಿ ವಸತಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ ಸಮವಸ್ತ್ರ ಪಠ್ಯಪುಸ್ತಕ, ಲೇಖನ ಸಾಮಗ್ರಿ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡುವುದರ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತದೆ. ಈ ಕಾಲೇಜುಗಳಲ್ಲಿ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಅಂದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶ ಲಭ್ಯವಿದೆ. ಪೋಷಕರ ಆದಾಯದ ಮಿತಿಯು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಪ್ರವರ್ಗ–1ರ ವಿದ್ಯಾರ್ಥಿಗಳಿಗೆ ರೂ.2,50,000/– ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.100.000/– ಇರುತ್ತದೆ.

ವಿದ್ಯಾರ್ಥಿಗಳು ಅರ್ಜಿಗಳನ್ನು ಜಿಲ್ಲೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಎಲ್ಲಾ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ಶ್ರೀಮತಿ ಇಂದಿರಾ ಗಾಂಧಿ, ಡಾ.ಬಿ.ಆರ್. ಅಂಬೇಡ್ಕರ್, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಂದ ಉಚಿತವಾಗಿ ಪಡೆದು ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಹಾಲ್ ಟಿಕೆಟ್, ತಾತ್ಕಾಲಿಕ ಅಂಕ ಪಟ್ಟಿ, ಜಾತಿ ಆದಾಯ ಪ್ರಮಾಣ ಪತ್ರ ಇತ್ತೀಚಿನ ಒಂದು ಪಾಸ್‌ಪೋರ್ಟ್ ಅಳತೆ ಭಾವಚಿತ್ರ ಮತ್ತು ಇತರೆ ಮೀಸಲಾತಿಗೆ ಸಂಬಂಧಿಸಿದ ದಾಖಲೆಗಳೊಂದಿಗೆ 17.05.2023ರ ಒಳಗಾಗಿ ಹತ್ತಿರದಲ್ಲಿರುವ ವಸತಿ ಶಾಲೆಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಪ್ರಾಂಶುಪಾಲರು ಮೊಬೈಲ್ ಸಂಖ್ಯೆ: 8277670628, 9008283837, 9880801686, 8105657451 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಚಲಿಸುತ್ತಿದ್ದ ಕಾರಿನಲ್ಲಿ ವಿದ್ಯಾರ್ಥಿನಿ ಮೇಲೆ ಸಾಮೂಹಿಕ ಅತ್ಯಾಚಾರ; ಮೂವರ ಬಂಧನ

ತ್ರಿಪುರಾ: ಪಶ್ಚಿಮ ತ್ರಿಪುರಾ ಜಿಲ್ಲೆಯಲ್ಲಿ ಚಲಿಸುತ್ತಿದ್ದ ಕಾರಿನಲ್ಲಿ ಕಾಲೇಜು ವಿದ್ಯಾರ್ಥಿನಿಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ ಆರೋಪದ ಮೇಲೆ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆ ಬೆಳಕಿಗೆ ಬಂದ ಕೂಡಲೇ ಪ್ರಮುಖ ಆರೋಪಿ ಗೌತಮ್ ಶರ್ಮಾ ಮತ್ತು ಅಪರಾಧ ಮಾಡಿದ ವಾಹನದ ಚಾಲಕ ಮತ್ತು ಸಹ ಆರೋಪಿ ಸುದೀಪ್ ಚೆಟ್ರಿ(31) ಅವರನ್ನು ಬಂಧಿಸಲಾಯಿತು. ನಂತರ ಮೂರನೇ ಆರೋಪಿ ಪ್ರಸೇನಜಿತ್ ಪಾಲ್‌ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯೊಬ್ಬನ ಮನೆಯಿಂದ 90 ಲಕ್ಷ ರೂ. ಹಣವನ್ನು ಸಹ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಮೂರನೇ ಆರೋಪಿಯಿಂದ ಲ್ಯಾಪ್‌ಟಾಪ್ ಮತ್ತು ಎಟಿಎಂ ಕಾರ್ಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಜೂಜಾಟ ಮತ್ತು ಅಕ್ರಮ ಹಣ ವರ್ಗಾವಣೆ ಕಾಯ್ದೆಯಡಿ ಪ್ರತ್ಯೇಕ ಪ್ರಕರಣ ದಾಖಲಿಸಲಾಗಿದೆ. ಅತ್ಯಾಚಾರ ಪ್ರಕರಣದಲ್ಲಿ ಪ್ರಸೇನ್‌ಜಿತ್ ಪಾಲ್ ಕೈವಾಡವಿರುವುದನ್ನು ಪ್ರಾಥಮಿಕ ಸಾಕ್ಷ್ಯಗಳಿಂದ ತಿಳಿದುಬಂದಿದೆ ಎಂದು ಪಶ್ಚಿಮ ತ್ರಿಪುರಾ ಎಸ್‌ಪಿ ಕಿರಣ್ ಕುಮಾರ್ ತಿಳಿಸಿದ್ದಾರೆ. ಈ ಮಧ್ಯೆ ಜಿಬಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಂತ್ರಸ್ತೆಯ ಪರಿಸ್ಥಿತಿ ಚಿಂತಾಜನಕವಾಗಿದೆ ಎಂದು ಹೇಳಲಾಗಿದೆ. ಈ ಘಟನೆ ಕುರಿತು ಮಾಧ್ಯಮದ ವರೊಂದಿಗೆ ಪ್ರತಿಕ್ರಿಯಿಸಿದ ಸಿಎಂ ಮಣಿಕ್ ಸಹಾ, ಮಾಹಿತಿ ತಿಳಿಯುತ್ತಿದ್ದಂತೆಯೇ ಎಸ್‌ಪಿಗೆ ಕರೆ ಮಾಡಿ ಆರೋಪಿಗಳ ಬಂಧಿಸುವಂತೆ ಹೇಳಲಾಗಿತ್ತು.

ಸಿಪಿಸಿ ಪಾಲಿಟೆಕ್ನಿಕ್‌ನಲ್ಲಿ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 12– 2022–23ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ನಂತರ ಪ್ರಥಮ ವರ್ಷದ ಡಿಪ್ಲೊಮಾ ಪ್ರವೇಶ ಬಯಸುವ ಅಭ್ಯರ್ಥಿಗಳಿಗೆ ಆಟೋಮೊಬೈಲ್ ಇಂಜಿನಿಯರಿಂಗ್ ಮತ್ತು ಕಮರ್ಷಿಯಲ್ ಪ್ರಾಕ್ಟೀಸ್ ಕನ್ನಡ ಮತ್ತು ಕಮರ್ಷಿಯಲ್ಸ್ ಪ್ರಾಕ್ಟೀಸ್ ಇಂಗ್ಲಿಷ್ ಈ ಮೂರು ವಿಭಾಗಗಳಿಗೆ ಖುದ್ದಾಗಿ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು ಸಂಸ್ಥೆಯಲ್ಲಿ 9–5–2023ರಿಂದ 31–5–2023ರ ಸಂಜೆ 5.30ರ ತನಕ ಮೊದಲು ಅರ್ಜಿ ಸಲ್ಲಿಸಿದವರಿಗೆ ಮೊದಲ ಆದ್ಯತೆ ಮೇಲೆ ಪ್ರವೇಶವನ್ನು ನೀಡಲಾಗುವುದು.

ಸಿವಿಲ್ (ಸಿಇ) ವಿಭಾಗ, ಗಣಕಯಂತ್ರ (ಸಿಎಸ್) ವಿಭಾಗ, ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್ (ಇ ಅಂಡ್ ಸಿ) ವಿಭಾಗ, ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ (ಇ ಅಂಡ್ ಇ) ವಿಭಾಗ, ಮೆಕ್ಯಾನಿಕಲ್ (ಎಂಇ) ವಿಭಾಗ ಮತ್ತು ಮೆಷಿನ್ ಟೂಲ್ ಟೆಕ್ನಾಲಜಿ (ಎಂಟಿಟಿ) ವಿಭಾಗಗಳಿಗೆ ಮೆರಿಟ್ ಆಧಾರದ ಮೇಲೆ ಸೀಟು ನೀಡುವುದರಿಂದ 9–5–2023ರಿಂದ 18–5–2023ರ ಸಂಜೆ 5.30ರ ತನಕ ಖುದ್ದಾಗಿ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು ಅಥವಾ ಸಮೀಪದ ಯಾವುದೇ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಅರ್ಜಿ ಸಲ್ಲಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ dtek.karnataka.gov.in ಈ ವೆಬ್‌ಸೈಟ್‌ಗಳನ್ನು ವೀಕ್ಷಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಪ್ರತಿಭೆ ಹೊರತರಲು ಬೇಸಿಗೆ ಶಿಬಿರ ಸಹಕಾರಿ



ಪಿರಿಯಾಪಟ್ಟಣ, ಮೇ 12– ಮಕ್ಕಳ ಪ್ರತಿಭೆ ಹೊರತರಲು ಬೇಸಿಗೆ ಶಿಬಿರಗಳು ಸಹಕಾರಿಯಾಗಲಿವೆ ಎಂದು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬೆಕ್ಕರೆ ಸತೀಶ್ ಆರಾಧ್ಯ ತಿಳಿಸಿದರು.

ಪಟ್ಟಣದ ನಕ್ಷತ್ರ ಡ್ಯಾನ್ಸ್ ಸ್ಕೂಲ್ ವತಿಯಿಂದ ನಡೆದ ಬೇಸಿಗೆ ಶಿಬಿರ ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೋಷಕರು ತಮ್ಮ ಮಕ್ಕಳ ಶೈಕ್ಷಣಿಕ ಚಟುವಟಿಕೆ ಜತೆ ಪಠ್ಯೇತರ ಚಟುವಟಿಕೆಗಳ ಬಗ್ಗೆ ಗಮನ ಹರಿಸಿದಾಗ ಅವರಲ್ಲಿನ ಪ್ರತಿಭೆ ಹೊರತರಲು ಸಹಕಾರಿಯಾಗುತ್ತದೆ ಎಂದರು.

ಶಿಕ್ಷಕರ ವಿದ್ಯಾರ್ಥಿ ಜೀವನ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ, ಅವರಲ್ಲಿನ ವಿಶೇಷ ಪ್ರತಿಭೆಗಳಾದ ಚಿತ್ರಕಲೆ, ನೃತ್ಯ, ಕ್ರೀಡಾ ಚಟುವಟಿಕೆಗಳನ್ನು ಪೋಷಕರು ಗಮನಿಸಿ ಹೆಚ್ಚಿನ ಪ್ರೋತ್ಸಾಹ ನೀಡಿದಾಗ ಯಶಸ್ಸು ಗಳಿಸಲು ಸಾಧ್ಯ, ಈ ನಿಟ್ಟಿನಲ್ಲಿ ಮಕ್ಕಳ ಪ್ರತಿಭೆ ಹೊರತಂದು ಪ್ರೋತ್ಸಾಹಿಸುತ್ತಿರುವ ನಕ್ಷತ್ರ ಡ್ಯಾನ್ಸ್ ಶಾಲೆ ಕಾರ್ಯ ಶ್ಲಾಘನೀಯ ಎಂದರು.

ಮುಖಂಡ ಕೃಷ್ಣಪ್ಪ ಮಾತನಾಡಿ, ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವ ಜತೆಗೆ ಬೇಸಿಗೆ ಶಿಬಿರಗಳಲ್ಲಿ ಪಾಲ್ಗೊಳ್ಳುವ ಮೂಲಕ ಪಠ್ಯೇತರ ಚಟುವಟಿಕೆ ವಿಕಸನಕ್ಕೆ ಸಹಕರಿಸಬೇಕು ಎಂದರು.

ನಕ್ಷತ್ರ ಡ್ಯಾನ್ಸ್ ಸಂಸ್ಥೆ ಅಧ್ಯಕ್ಷೆ ಭವ್ಯ ಮಂಜುನಾಥ್ ಮಾತನಾಡಿ, ಬೇಸಿಗೆ ಶಿಬಿರಗಳು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಲಿದ್ದು ಸಂಸ್ಥೆ ವತಿಯಿಂದ ಈಗಾಗಲೇ ಬೇಸಿಗೆ ರಜೆ ಅವಧಿಯಲ್ಲಿ ಮೊದಲ ಬ್ಯಾಚ್ ಶಿಬಿರ ಮುಗಿದಿದ್ದು ಮೇ ತಿಂಗಳಲ್ಲಿ ಎರಡನೇ ಬ್ಯಾಚ್ ಆರಂಭವಾಗಿದ್ದು ಪೋಷಕರು ಸದ್ಬಳಕೆ ಮಾಡಿಕೊಳ್ಳುವಂತೆ ಕೋರಿದರು.

ಈ ವೇಳೆ ಗಣಿತ ಮತ್ತು ವಿಜ್ಞಾನ ವಸ್ತುಪ್ರದರ್ಶನದಲ್ಲಿ ರಾಷ್ಟ್ರಮಟ್ಟದಲ್ಲಿ ಬೆಳಕು ಮತ್ತು ಅನ್ವಯಗಳು ಎಂಬ ಮಾದರಿ ಪ್ರದರ್ಶಿಸಿ ಪ್ರಶಸ್ತಿ ಪಡೆದ ಕುಮಾರಿ ಮೋನಿಷಾ ಅವರನ್ನು ಸನ್ಮಾನಿಸಿ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಲಾಯಿತು. ಶಿಬಿರದಲ್ಲಿ ನೃತ್ಯ ಸಂಯೋಜಕ ಪ್ರಸನ್ನ, ಚಿತ್ರಕಲೆ ಶಿಕ್ಷಕ ಪವನ್, ಕರಾಟೆ ಶಿಕ್ಷಕ ಈಶ್ವರ್, ಸ್ಪೋಕನ್ ಇಂಗ್ಲಿಷ್ ಬಗ್ಗೆ ಶಿಕ್ಷಕ ಮಣಿ ಕುಮಾರ್, ಹಾಡುಗಳ ಬಗ್ಗೆ ಶಿಕ್ಷಕ ಸತೀಶ್, ಯೋಗ ಬಗ್ಗೆ ಶಿಕ್ಷಕರಾದ ರಾಣಿ ಮತ್ತು ಕಿಶೋರ್ ಅವರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಭಾರೀ ಬಿರುಗಾಳಿ–ಮಳೆಗೆ ಬಾಳೆ ಫಸಲು ನಾಶ

15 ಲಕ್ಷ ರೂ. ನಷ್ಟ, ರೈತ ಕುಟುಂಬ ಕಂಗಾಲು

ತಿ.ನರಸೀಪುರ, ಮೇ 12– ಬಿರುಗಾಳಿ ಸಹಿತ ಬಿದ್ದ ಮಳೆಯ ರಭಸಕ್ಕೆ ರೈತ ಕಷ್ಟಪಟ್ಟು ಬೆಳೆದಿದ್ದ ಬಾಳೆ ತೋಟ ನಾಶವಾಗಿರುವ ಘಟನೆ ಸಮೀಪದ ಸುಜ್ಜಲೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಾಗಮ್ಮ ಲೇಟ್ ಮರಿಮಲ್ಲಪ್ಪ ಎಂಬುವರ ಸರ್ವೆ ನಂ.160/1, 160/4 ಹಾಗೂ 162/4ರಲ್ಲಿ 4 ಎಕರೆ 20 ಗುಂಟೆ ತೋಟದಲ್ಲಿ ಸಾಲ ಸೋಲ ಮಾಡಿ ಬೆಳೆಯಲಾಗಿದ್ದ ಸುಮಾರು 5500ಕ್ಕೂ ಹೆಚ್ಚು ಬಾಳೆಗಿಡಗಳು ಬಿರುಗಾಳಿಯಿಂದ ನಾಶವಾಗಿ 15 ಲಕ್ಷ ರೂ.ಗಳಿಗೂ ಹೆಚ್ಚು ನಷ್ಟವಾಗಿದೆ ಎಂದು ತೋಟದ ಮಾಲೀಕರು ತಿಳಿಸಿದ್ದಾರೆ.

ಬಿರುಗಾಳಿಯಿಂದ ನೇಂದ್ರ ಬಾಳೆ ಗಿಡಗಳು ನೆಲಕ್ಕುರುಳಿ ನಷ್ಟ ಅನುಭವಿಸಿ ಕಂಗಾಲಾಗಿರುವ ನಾಗಮ್ಮನವರ ಪುತ್ರ ಪರಶಿವಪ್ಪ ಮಾತನಾಡಿ, ಕೈಯಲ್ಲಿ ಹಣ ಇಲ್ಲದೆ ಬೇರೆ ಕಡೆಯಿಂದ ಕೈ ಸಾಲ ಹಾಗೂ ಬ್ಯಾಂಕ್‌ಗಳಲ್ಲಿ ಸಾಲ ಮಾಡಿ, 6 ತಿಂಗಳ ಹಿಂದೆ ಬಾಳೆ ತೋಟ ಮಾಡಲಾಗಿತ್ತು. ಒಂದೂವರೆ ತಿಂಗಳಲ್ಲಿ ಫಸಲು ಕೈ ಸೇರುವ ನಿರೀಕ್ಷೆ ಇತ್ತು. ನಿನ್ನೆ ವಿಪರೀತ ಗಾಳಿ ಮಳೆಯಿಂದ ಕೈಗೆ ಬಂದಿದ್ದ ಬೆಳೆ ನಾಶವಾಗಿದೆ. ಬಾಳೆ ಬೆಳೆ ಫಸಲಿಗೆ ಬಂದಿದ್ದು 30 ದಿನಗಳಲ್ಲಿ ಬಾಳೆಗೊನೆ ಕಟಾವು ಮಾಡಬೇಕಿತ್ತು. ಇದರಿಂದ ಕೆಲವರ ಸಾಲ ತೀರಿಸಬಹುದು ಎಂದು ಕೊಂಡಿದ್ದೆ. ಮಳೆ ಬಿರುಗಾಳಿಯಿಂದ ಬಾಳೆ ತೋಟ ನೆಲಕ್ಕೆ ಉರುಳಿರುವುದರಿಂದ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಎಂದರು.


ಪ್ರಕೃತಿ ವಿಕೋಪದಿಂದ ಆದ ನಷ್ಟ ನಮಗೆ ದಿಕ್ಕೇ ತೋಚದಂತೆ ಮಾಡಿದೆ.ಸದ್ಯದ ಪರಿಸ್ಥಿತಿಯಲ್ಲಿ ಫಸಲು ಮಾರಾಟವಾಗುತ್ತದೆಂಬ ನಂಬಿಕೆ ಸಹ ನಮಗಿಲ್ಲ ಹಾಗಾಗಿ ಸರ್ಕಾರ ನಮಗೆ ಸಹಾಯ ಮಾಡಬೇಕಿದೆ ಎಂದು ಮನವಿ ಮಾಡಿದರು.

ತೋಟಗಾರಿಕೆ ಮತ್ತು ಕಂದಾಯ ಇಲಾಖೆಗಳ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸರ್ಕಾರದಿಂದ ಪರಿಹಾರದ ಹಣವನ್ನು ಕೊಡಿಸುವಂತೆ ಅವರು ಮನವಿ ಮಾಡಿದ್ದಾರೆ.



ತಿ.ನರಸೀಪುರ ಸಮೀಪದ ಸುಜ್ಜಲೂರು ಗ್ರಾಮದಲ್ಲಿ ಗುರುವಾರ ರಾತ್ರಿ ಬಿರುಗಾಳಿ ಸಮೇತ ಬಿದ್ದ ಮಳಗೆ ಬಾಳೆ ಗಿಡಗಳು ನೆಲಕ್ಕುರುಳಿವೆ. ಮಾಲೀಕರಿಗೆ ನಷ್ಟ ಉಂಟಾಗಿದೆ.

ಹೆಚ್.ವಿ.ದಾಸಪ್ಪಶೆಟ್ಟಿ ನಿಧನ



ಭೇರ್ಯ, ಮೇ 12– ಹೊಸ ಅಗ್ರಹಾರ ರೇಲ್ವೆ ಸ್ಟೇಷನ್ ನಿವಾಸಿ ಹಾಗೂ ಭೇರ್ಯ ಗ್ರಾಮದ ಇಂಡಿಯನ್ ಗ್ಯಾಸ್ ಏಜೆನ್ಸಿ ಮಾಲೀಕರಾದ ಹೆಚ್.ವಿ.ದಾಸಪ್ಪಶೆಟ್ಟಿ(84) ನಿಧನರಾದರು.

ದಿವಂಗತರು ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯು ಹೊಸ ಅಗ್ರಹಾರ ರೇಲ್ವೆ ಸ್ಟೇಷನ್ ಬಳಿ ಇರುವ ಜಮೀನಿನಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಹುಲ್‌ಗೆ ಶಿಕ್ಷೆ ವಿಧಿಸಿದ್ದ ನ್ಯಾಯಾಧೀಶರೂ ಸೇರಿ 68 ಮಂದಿಯ ಪದೋನ್ನತಿಗೆ ತಡೆ

ನವದೆಹಲಿ: ಮಾನನಷ್ಟ ಮೊಕದ್ದಮೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ದೋಷಿ ಎಂದು ಘೋಷಿಸಿದ್ದ ಸೂರತ್ ಚೀಫ್ ಜ್ಯುಡಿಷಿಯಲ್ ಮ್ಯಾಜಿಸ್ಟ್ರೇಟ್ ಹರೀಶ್ ಹಸ್ಮುಖ್ ಭಾಯಿ ವರ್ಮಾ ಸೇರಿದಂತೆ ಗುಜರಾತ್‌ನ 68 ಮಂದಿ ಕೆಳ ಹಂತದ ನ್ಯಾಯಾಂಗ ಅಧಿಕಾರಿಗಳ ಪದೋನ್ನತಿಯನ್ನು ಸುಪ್ರೀಂಕೋರ್ಟ್ ಶುಕ್ರವಾರ ತಡೆಹಿಡಿದಿದೆ.

ನ್ಯಾಯಾಂಗ ಅಧಿಕಾರಿಗಳ ಬಡ್ತಿಯು ಗುಜರಾತ್ ರಾಜ್ಯ ನ್ಯಾಯಾಂಗ ಸೇವಾ ನಿಯಮಗಳು 2005ರ ಉಲ್ಲಂಘನೆಯಾಗಿದೆ. ಅರ್ಹತೆ, ಸೇವಾ ಹಿರಿತನ ಮತ್ತು ಸೂಕ್ತ ಪರೀಕ್ಷಾ ಉತ್ತೀರ್ಣತೆಯ ಆಧಾರದ ಮೇಲೆ ಬಡ್ತಿಗಳನ್ನು ನೀಡಬೇಕು ಎಂದು ನ್ಯಾಯಮೂರ್ತಿಗಳಾದ ಎಂ.ಆರ್.ಷಾ ಮತ್ತು ಸಿ.ಟಿ. ರವಿಕುಮಾರ್ ಅವರನ್ನೊಳಗೊಂಡ ಪೀಠ ಹೇಳಿತು.

ನ್ಯಾಯಾಂಗ ಅಧಿಕಾರಿಗಳಿಗೆ ಪದೋನ್ನತಿ ನೀಡಿ ರಾಜ್ಯ ಸರ್ಕಾರ ಹೊರಡಿಸಿದ ಆದೇಶವು ಕಾನೂನುಬಾಹಿರ ಮತ್ತು ಈ ನ್ಯಾಯಾಲಯದ ತೀರ್ಪಿಗೆ ವಿರುದ್ಧವಾಗಿದೆ. ಆದ್ದರಿಂದ, ಇದು ಸಮರ್ಥನೀಯವಲ್ಲ ಎಂದು ಪೀಠ ಹೇಳಿತು.

ನಾವು ಬಡ್ತಿ ಪಟ್ಟಿಯ ಅನುಷ್ಠಾನವನ್ನು ತಡೆಹಿಡಿಯುತ್ತೇವೆ. ಬಡ್ತಿ ಹೊಂದಿದವರನ್ನು ಮೂಲ ಹುದ್ದೆಗೆ ಕಳುಹಿಸಲಾಗುತ್ತಿದೆ' ಎಂದು ಸುಪ್ರೀಂ ಕೋರ್ಟ್ ಹೇಳಿತು. ಬಡ್ತಿಗಳಿಗೆ ತಡೆ ನೀಡಿ ಮಧ್ಯಂತರ ಆದೇಶವನ್ನು ಕೋರ್ಟ್ ನೀಡಿತು. ಅಲ್ಲದೆ, ಮೇ 15 ರಂದು ನ್ಯಾಯಮೂರ್ತಿ ಷಾ ನಿವೃತ್ತಿಯಾಗುತ್ತಿರುವ ಕಾರಣ ಈ ಪ್ರಕರಣವನ್ನು ಸೂಕ್ತ ಪೀಠದಿಂದ ವಿಚಾರಣೆ ನಡೆಸುವಂತೆ ಸೂಚಿಸಿತು. 68 ನ್ಯಾಯಾಂಗ ಅಧಿಕಾರಿಗಳನ್ನು ಜಿಲ್ಲಾ ನ್ಯಾಯಾಧೀಶರ ಉನ್ನತ ಶ್ರೇಣಿಗೆ ಆಯ್ಕೆ ಮಾಡಿರುವುದನ್ನು ಪ್ರಶ್ನಿಸಿ ಹಿರಿಯ ಸಿವಿಲ್ ನ್ಯಾಯಾಧೀಶ ಕೇಡರ್ ಅಧಿಕಾರಿಗಳಾದ ರವಿಕುಮಾರ್ ಮಾಹೇತಾ ಮತ್ತು ಸಚಿನ್ ಪ್ರತಾಪ್ ರಾಯ್ ಮೆಹ್ತಾ ಅವರು ಸಲ್ಲಿಸಿದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ.

ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ಕಾಂಗ್ರೆಸ್ ನಾಯಕರ ಸಭೆ, ಸಿಎಂ ಸೀಟ್‌ನತ್ತ ಡಿಕೆಶಿ ಚಿತ್ತ

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣಾ ಫಲಿತಾಂಶ ಹೊರಬೀಳಲು ಕೇವಲ ಒಂದೇ ದಿನ ಬಾಕಿ ಇದೆ. ಈ ನಡುವಲ್ಲೇ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಈ ಬಾರಿ ಬಹುಮತದ ಮೂಲಕ ಸರ್ಕಾರ ರಚನೆ ಮಾಡುವುದು ಖಚಿತ ಎಂದು ಕಾಂಗ್ರೆಸ್ ನಾಯಕರು ವಿಶ್ವಾಸ ವ್ಯಕ್ತಪಡಿಸಿದ್ದು, ನಗರದಲ್ಲಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ಮಹತ್ವದ ಸಭೆ ನಡೆಸುತ್ತಿದ್ದಾರೆಂದು ತಿಳಿದುಬಂದಿದೆ.

ಸಭೆ ಹಿನ್ನೆಲೆಯಲ್ಲಿ ಖರ್ಗೆಯವರ ನಿವಾಸಕ್ಕೆ ಡಿಕೆ.ಶಿವಕುಮಾರ್ ಅವರು ಭೇಟಿ ನೀಡಿದ್ದಾರೆ. ಭೇಟಿಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಪಕ್ಷಕ್ಕಾಗಿ ದುಡಿದಿದ್ದೇನೆ. ಅಧ್ಯಕ್ಷನಾಗಿ ನಿದ್ದೆ ಮಾಡಿಲ್ಲ, ನಿದ್ದೆ ಮಾಡಲು ಬಿಟ್ಟಿಲ್ಲ ಎಂದು ಹೇಳಿದರು.

ನನಗೆ ಎಕ್ಸಿಟ್ ಪೋಲ್ ಮೇಲೆ ನಂಬಿಕೆ ಇಲ್ಲ. ನನ್ನ ಸಂಖ್ಯೆ 141. ಎಕ್ಸಿಟ್ ಪೋಲ್‌ನ ಸಂಖ್ಯೆ ಬಹಳ ಕಡಿಮೆ ಇದೆ. ನಮ್ಮ ಎಕ್ಸಿಟ್ ಪೋಲ್ ಸ್ಯಾಂಪಲ್ಸ್ ಹೆಚ್ಚಿದೆ. ಕಾಂಗ್ರೆಸ್ ಪರವಾಗಿ ದೊಡ್ಡ ಅಲೆ ಇದೆ. ಮೊದಲು ಹೆಚ್ಚು ತೋರಿಸಿದವರು 20 ಸೀಟ್ ಆಮೇಲೆ ಕಡಿಮೆ ತೋರಿಸಿದರು ಎಂದು ತಿಳಿಸಿದರು.

ಯಾವ ಕಾರಣಕ್ಕೂ ಸಂಖ್ಯೆ ಕಡಿಮೆಯಾಗುವುದಿಲ್ಲ. ನಿಚ್ಚಳವಾದ ಬಹುಮತ ಕಾಂಗ್ರೆಸ್ ಪಕ್ಷಕ್ಕೆ ಬರುತ್ತದೆ. ಬ್ಯಾಲೆಟ್ ಇಸ್ ಸ್ಟ್ರಾಂಗರ್ ದೆನ್ ದಿ ಬುಲೆಟ್. ಈ ದೇಶಕ್ಕೆ ಸ್ವಾತಂತ್ರ್ಯ ಕೊಡಿಸುವಾಗ ಜನ ಹೇಗೆ ಬುಲೆಟ್‌ಗೆ ಹೆದರಲಿಲ್ಲವೋ, ಹಾಗೆ ಜನ ಈ ಬಾರಿ ಆಸೆ ಆಮಿಷಗಳಿಗೆ ಮನ್ನಣೆ ನೀಡಿಲ್ಲ. ನಾಳೆ ಒಂದು ಗಂಟೆ ಅಷ್ಟೊತ್ತಿಗೆ ಎಲ್ಲ ತೀರ್ಪು ಹೊರಬರಲಿದೆ ಎಂದರು.

ನಾನು ಜೆಡಿಎಸ್ ಪಕ್ಷದ ಜೊತೆಗಿನ ಮೈತ್ರಿಯ ಬಗ್ಗೆ ಮಾತನಾಡಿ, ಹೆಚ್‌ಡಿಕೆ ಏನು ಹೇಳುತ್ತಾರೆ, ಮಾಡುತ್ತಾರೆಂಬುದು ಗೊತ್ತಿಲ್ಲ. ಕುಮಾರಣ್ಣನ ಕಾರ್ಯಕರ್ತರಿಗೆ ಧೈರ್ಯ ತುಂಬಬೇಕು, ಹಾಗಾಗಿ ಮಾತನಾಡುತ್ತಾರೆ. ನಾನಂತೂ ಹೋರಾಟ ಮಾಡುವವನು, ಈಗಲೇ ರಿಟೈರ್ ಆಗುವವನಲ್ಲ. ಕೊನೆ ಉಸಿರು ಇರುವವರೆಗೂ ಹೋರಾಟ ಮಾಡುವವನು. ಬಂದು ನನ್ನ ಸೇರಿಕೊಳ್ಳಿ ಎಂದು ಜೆಡಿಎಸ್ ನಾಯಕರು, ಕಾರ್ಯಕರ್ತರಿಗೆ ಹೇಳುತ್ತೇನೆಂದು ಹೇಳಿದರು.

ರೆಸಾರ್ಟ್ ರಾಜಕಾರಣ ಕುರಿತು ಪ್ರತಿಕ್ರಿಯಿಸಿ, ಎಷ್ಟೇ ನಂಬರ್ ಬಂದರೂ ಸರ್ಕಾರ ಮಾಡುತ್ತೇವೆಂದು ಹೇಳುತ್ತಾರಲ್ಲ, ಎಲ್ಲಾ ಪಕ್ಷದವರು ಅವರವರ ಶಾಸಕರನ್ನು ಹಿಡಿದಿಟ್ಟುಕೊಳುತ್ತಾರೆ. ಯಾವ ಅಧಿಕಾರ ಹಂಚಿಕೆಯ ಮಾತೂ ಇಲ್ಲ. ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಏನು ಹೇಳುತ್ತಾರೋ ಹಾಗೆ ಕೇಳುತ್ತೇವೆ ಎಂದು ತಿಳಿಸಿದರು. ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಮಾತ ನಾಡಿ, ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿದ ಕರ್ನಾಟಕದ 6.5 ಕೋಟಿ ಜನರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ. ಫಲಿತಾಂಶ ಹೊರಬೀಳುವವರೆಗೆ ನಾಳೆಯವರೆಗೆ ಕಾಯೋಣ. ಈಗಾಗಲೇ ಬಿಜೆಪಿ ಸೋಲನ್ನು ಒಪ್ಪಿಕೊಂಡಿದೆ. ಕಾಂಗ್ರೆಸ್ ಪಕ್ಷ ಸರ್ಕಾರ ರಚಿಸುತ್ತದೆ. ನಾವು ಕರ್ನಾಟಕದ ಜನರ ಸೇವೆ ಮಾಡುತ್ತೇವೆಂದು ಹೇಳಿದರು.

ವಿಜಯೋತ್ಸವ, ಮೆರವಣಿಗೆಗೆ ನಿರ್ಬಂಧ



ಮೈಸೂರು, ಮೇ 12– ಗೆಲುವು ಸಾಧಿಸಿದ ಅಭ್ಯರ್ಥಿಗಳ ವಿಜಯೋತ್ಸವ ಮೆರವಣಿಗೆಯನ್ನು ನಿಷೇಧಿಸಲಾಗಿದೆ. ಯಾವುದೇ ರೀತಿಯ ಮೆರವಣಿಗೆ, ಪ್ರಚೋದನಕಾರಿ ಭಾಷಣ ಮಾಡುವಂತಿಲ್ಲ. ಧ್ವನಿವರ್ಧಕ, ಡಿಜೆ ಬಳಕೆ, ಬೈಕ್ ರ್‍ಯಾಲಿ ನಡೆಸುವಂತಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದ್ದಾರೆ.

44 ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತು ದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು